


ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | 46 | ಏಪ್ರಿಲ್ 22 ಮಂಗಳವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 46 | ಸಂಚಿಕೆ: 7 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com
₹4



ಕ್ರಿಶ್ಚಿಯನ್ ಪರಮೋಚ್ಚ ಧರ್ಮಗುರು ಪೋಪ್ ಫ್ರಾನ್ಸಿಸ್ ವಿಧಿವಶ


ವ್ಯಾಟಿಕನ್ ಸಿಟಿ: ಕ್ರಿಶ್ಚಿಯನ್ ಜಾಗತಿಕ ಧರ್ಮಗುರು 88 ವರ್ಷದ ಪೋಪ್ ಫ್ರಾನ್ಸಿಸ್ ಇಂದು (ಏ.21–ಸೋಮವಾರ) ದೀರ್ಘಕಾಲದ ಅನಾರೋಗ್ಯದಿಂದ ನಿಧನರಾಗಿದ್ದಾರೆ ಎಂದು ವ್ಯಾಟಿಕನ್ ಸಿಟಿ ಮೂಲಗಳು ಖಚಿತಪಡಿಸಿವೆ.

ನ್ಯುಮೋನಿಯಾದಿಂದ ಬಳಲುತ್ತಿದ್ದ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಇಂದು ಬೆಳಗ್ಗೆ 7:35 ಕ್ಕೆ ಫ್ರಾನ್ಸಿಸ್ ಇಹಲೋಕ ತ್ಯಜಿಸಿದರು ಎಂದು ವ್ಯಾಟಿಕನ್ ಪ್ರಕಟಣೆ ತಿಳಿಸಿದೆ, ಪೋಪ್ ಫ್ರಾನ್ಸಿಸ್ ಅವರು ಈಸ್ಟರ್ ಸೋಮವಾರವಾಗಿರುವ ಇಂದು ವ್ಯಾಟಿಕನ್‌ನ ಕಾಸಾ ಸಾಂತಾ ಮಾರ್ಟಾದಲ್ಲಿರುವ ತಮ್ಮ ನಿವಾಸದಲ್ಲಿ ನಿಧನರಾಗಿದ್ದಾರೆ.

ಪೋಪ್ ಫ್ರಾನ್ಸಿಸ್ ಸೋಮವಾರ ಬೆಳಿಗ್ಗೆ ನಿಧನರಾದರು ಎಂದು ವ್ಯಾಟಿಕನ್ ಕ್ಯಾಮೆರ್ಲೆಂಗೊ ಕಾರ್ಡಿನಲ್ ಕೆವಿನ್ ಫೆರೆಲ್ ಘೋಷಿಸಿದ್ದಾರೆ. ಅವರ ಇಡೀ ಜೀವನವು ಭಗವಂತನ ಮತ್ತು ಅವರ ಚರ್ಚ್ ಸೇವೆಗೆ ಸಮರ್ಪಿತವಾಗಿತ್ತು ಎಂದು ಫಾರೆಲ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕರ್ತನಾದ ಯೇಸುವಿನ ನಿಜವಾದ ಶಿಷ್ಯನಾಗಿ ಅವರ ಮಾದರಿಗೆ ಅಪಾರ ಕೃತಜ್ಞತೆಯೊಂದಿಗೆ, ಪೋಪ್ ಫ್ರಾನ್ಸಿಸ್ ಅವರ ಆತ್ಮವನ್ನು ದೇವರ ಅನಂತ, ಕರುಣಾಮಯಿ ಪ್ರೀತಿಗೆ, ಏಕ ಮತ್ತು ತ್ರಿಯೇಕ ದೇವರಿಗೆ ಅರ್ಪಿಸುತ್ತೇವೆ.

ವ್ಯಾಟಿಕನ್ ನ್ಯೂಸ್ ಟ್ವಿಟ್ಟರ್ ಪೇಜ್ ಈ ವಿಚಾರವನ್ನು ಖಚಿತಪಡಿಸಿದೆ. ಪೋಪ್ ಫ್ರಾನ್ಸಿಸ್ ಅವರು ಈಸ್ಟರ್ ಸೋಮವಾರ, ಏಪ್ರಿಲ್ 21, 2025 ರಂದು ತಮ್ಮ 88 ನೇ ವಯಸ್ಸಿನಲ್ಲಿ ವ್ಯಾಟಿಕನ್‌ನ ಕಾಸಾ ಸಾಂತಾ ಮಾರ್ಟಾದಲ್ಲಿರುವ ತಮ್ಮ ನಿವಾಸದಲ್ಲಿ ನಿಧನರಾಗಿದ್ದಾರೆ ಎಂದು ತಿಳಿಸಿದೆ. ವ್ಯಾಟಿಕನ್‌ನ ಕ್ಯಾಮೆರ್ಲೆಂಗೊ ಕಾರ್ಡಿನಲ್ ಕೆವಿನ್ ಫಾರೆಲ್ ಅವರು ಪೋಪ್ ನಿಧಾನದ ಸುದ್ದಿಯನ್ನು ಘೋಷಣೆ ಮಾಡಿದ್ದಾರೆ. ಪೋಪ್ ಅವರ ನಿಧನದಿಂದ ಜಗತ್ತಿನೆಲ್ಲೆಡೆ ಇರುವ ಕ್ರೈಸ್ತ ಸಮುದಾಯದಲ್ಲಿ ಶೋಕ ಮಡುಗಟ್ಟಿದೆ.

■ 6ನೇ ಪುಟಕ್ಕೆ



ಪೋಪ್ ಫ್ರಾನ್ಸಿಸ್ [17.12.1936 - 21.04.2025]

ಪೋಪ್ ಫ್ರಾನ್ಸಿಸ್ ಕೊನೆಯ ಸಂದೇಶ

ವಾಷಿಂಗ್ಟನ್, ಏ.21– ಇಂದು ವಿಧಿವಶರಾದ ಪೋಪ್ ಫ್ರಾನ್ಸಿಸ್ ಅವರು ಈಸ್ಟರ್ ಭಾನುವಾರದ ಪ್ರಯುಕ್ತ ನಿನ್ನೆ (ಏ.20) ಸೈಂಟ್ ಪೀಟರ್ ಬೆಸಿಲಿಕದಲ್ಲಿ ಗಾಲಿ ಕುರ್ಚಿಯಲ್ಲಿಯೇ ಕುಳಿತು ಅನುಯಾಯಿಗಳಿಗೆ ದರ್ಶನ ನೀಡಿದ್ದರು. ಈ ವೇಳೆ ಪೋಪ್ ಫ್ರಾನ್ಸಿಸ್ ಅವರ ಪರವಾಗಿ ಮತ್ತೊಬ್ಬರು ಈಸ್ಟರ್ ಭಾಷಣವನ್ನು ಓದಿದ್ದರು.

ತಮ್ಮ ಕೊನೆಯ ಸಂದೇಶದಲ್ಲಿ, ನಾವು ಸಾವಿಗಾಗಿ ಅಲ್ಲ, ಬದುಕುವುದಕ್ಕಾಗಿ ಇಲ್ಲಿ ಇದ್ದೇವೆ. ಧಾರ್ಮಿಕ ಸ್ವಾತಂತ್ರ್ಯ ಮತ್ತು ಇತರರ ಅಭಿಪ್ರಾಯಗಳನ್ನು ಗೌರವಿಸದ ಹೊರತು ಜಗತ್ತಿನಲ್ಲಿ ಶಾಂತಿ ಸ್ಥಾಪಿಸಲು ಸಾಧ್ಯವಿಲ್ಲ ಎಂದೂ ಹೇಳಿದ್ದರು.

ಉಕ್ರೇನ್‌ನಲ್ಲಿ ಯುದ್ಧ ನಿಲ್ಲಿಸಲು ಕರೆ: ಯುದ್ಧದಿಂದ ನಲುಗಿರುವ ಉಕ್ರೇನ್‌ಗೆ ಈಸ್ಟರ್ ಉಡುಗೊರೆಯಾಗಿ ಆ ದೇವರು ಶಾಂತಿಯನ್ನು ದಯಪಾಲಿಸಲಿ. ಶಾಶ್ವತ ಶಾಂತಿಗಾಗಿ ನಡೆಯುತ್ತಿರುವ ಎಲ್ಲ ಪ್ರಯತ್ನಗಳು ಸಫಲವಾಗಲಿ ಎಂದು ಪ್ರಾರ್ಥಿಸಿದ್ದಾರೆ. ಯುದ್ಧದ ಬಗ್ಗೆ ತೀವ್ರ ಬೇಸರ ವ್ಯಕ್ತಪಡಿಸಿರುವ ಅವರು, ಯುದ್ಧ ನಿಲ್ಲಿಸುವಂತೆ ಜಾಗತಿಕ ನಾಯಕರಿಗೆ ಕರೆ ನೀಡಿದ್ದಾರೆ.

ಸುಡಾನ್ ಮತ್ತು ಮ್ಯಾನ್ಮಾರ್ ಪರವಾಗಿ ಪ್ರಾರ್ಥನೆ: ತಮ್ಮ ಕೊನೆಯ ಭಾಷಣದಲ್ಲಿ ಮಿಲಿಟರಿ ಸಂಘರ್ಷ ಮತ್ತು ಭೂಕಂಪದಿಂದ ಬಳಲುತ್ತಿರುವ ಮ್ಯಾನ್ಮಾರ್ ಜನರಿಗಾಗಿ ಪೋಪ್ ಪ್ರಾರ್ಥಿಸಿದ್ದಾರೆ. ಸಂಘರ್ಷ ಅಂತ್ಯ ಕಂಡು ಶಾಂತಿ ನೆಲೆಸಲಿ ಎಂದು ಹಾರೈಸಿದ್ದಾರೆ. ಅಲ್ಲದೇ ಭೂಕಂಪದಿಂದ ಕುಟುಂಬ ಸದಸ್ಯರನ್ನು ಕಳೆದುಕೊಂಡವರಿಗೆ ಸಾಂತ್ವನ ಹೇಳಿರುವ ಅವರು, ಈ ಸಮಯದಲ್ಲಿ ಸಹಾಯಹಸ್ತ ಚಾಚಿದ ಎಲ್ಲರಿಗೂ ಧನ್ಯವಾದ ಹೇಳಿದ್ದಾರೆ. ಹಿಂಸಾಚಾರ, ಸಂಘರ್ಷಕ್ಕೆ ಬಲಿಯಾಗಿರುವ ಆಫ್ರಿಕಾದ ಜನರಿಗೆ ಅದರಲ್ಲಿಯೂ ವಿಶೇಷವಾಗಿ ಕಾಂಗೋ ಗಣರಾಜ್ಯ, ಸುಡಾನ್ ಮತ್ತು ದಕ್ಷಿಣ ಸುಡಾನ್ ಜನರಿಗಾಗಿ ಪೋಪ್ ಮಿಡಿದಿದ್ದಾರೆ. ಹಿಂಸಾಚಾರ ನಿಂತು ಶಾಂತಿ ನೆಲೆಸಲಿ ಎಂದು ಪ್ರಾರ್ಥಿಸಿದ್ದಾರೆ.

ಗಾಜಾದ ಪರಿಸ್ಥಿತಿ ಬಗ್ಗೆ ಕಳವಳ: ಗಾಜಾದ ಜನರು ಮತ್ತು ಅದರ ಕ್ರಿಶ್ಚಿಯನ್ ಸಮುದಾಯದ ಬಗ್ಗೆ ನಾನು ಚಿಂತಾಕ್ರಾಂತನಾಗಿದ್ದೇನೆ. ಭೀಕರ ಸಂಘರ್ಷವು ಸಾವು ಮತ್ತು ವಿನಾಶಕ್ಕೆ ಕಾರಣವಾಗುತ್ತಿದೆ. ಶೋಚನೀಯ ಅಮಾನವೀಯ ಪರಿಸ್ಥಿತಿಯನ್ನು ಸೃಷ್ಟಿಸುತ್ತಿದೆ ಎಂದು ಹೇಳಿದ್ದರು. ಅಲ್ಲದೆ ಮತ್ತೊಮ್ಮೆ ಕದನ ವಿರಾಮಕ್ಕೆ ಕರೆ ನೀಡಿದ್ದಾರೆ.



ಜನಿವಾರ ತೆಗೆಸಿದ್ದವರ ಮೇಲೆ ಶಿಸ್ತು ಕ್ರಮ

ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ

ಬೆಂಗಳೂರು: ವಿದ್ಯಾರ್ಥಿಗಳು ಜನಿವಾರ ತೆಗೆಯದ್ದಕ್ಕೆ ಸಿಇಟಿ ಪರೀಕ್ಷೆ ಬರೆಯಲು ಅವಕಾಶ ನೀಡದ ಸಿಬ್ಬಂದಿ ಮತ್ತು ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ತೆಗೆದುಕೊಳ್ಳಲಾಗುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ವಿಧಾನಸೌಧದ ಬಳಿ ಸುದ್ದಿಗಾರರ ಜತೆ ಮಾತನಾಡಿದ ಅವರು, ಈ ಘಟನೆಗಳ ಬಗ್ಗೆ ಮಾಹಿತಿ ಪಡೆದುಕೊಂಡಿದ್ದೇನೆ ವಿದ್ಯಾರ್ಥಿಗಳ ಜನಿವಾರ ತೆಗೆಸಿರುವ ಕ್ರಮ ನಿಯಮ ಬಾಹಿರವಾದುದ್ದು. ಪರೀಕ್ಷೆಯಲ್ಲಿ ಅಕ್ರಮ ನಡೆಸಬಹುದಾದ ಸಾಧ್ಯತೆಗಳನ್ನು ಪರಿಗಣಿಸಿ ಮಾತ್ರವೇ ಕ್ರಮ ಕೈಗೊಳ್ಳಬೇಕು, ವಿನಃ ಹೀಗೆ ಅನವಶ್ಯಕವಾಗಿ ಇತರರ ಧಾರ್ಮಿಕ ನಂಬಿಕೆಗಳಿಗೆ ವಿರುದ್ಧವಾದ ನಿಯಮ ಹೇರಿಕೆ ಮಾಡಬಾರದು. ಇಂಥದ್ದನ್ನು ನಾವು ಸಹಿಸುವುದಿಲ್ಲ ಎಂದರು.

ತಾಳಿ, ಓಲೆ, ಜನಿವಾರ ಮುಟ್ಟಬಾರದು: ಪರೀಕ್ಷೆಗೆ ಬಂದಿದ್ದ ವಿದ್ಯಾರ್ಥಿಯ ಜನಿವಾರ ತೆಗೆಸಿದ್ದು ತಪ್ಪು. ತಾಳಿ, ಓಲೆ, ಜನಿವಾರಗಳನ್ನು ಯಾರೂ ಮುಟ್ಟಬಾರದು ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದು ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದರು.

ನಮ್ಮಲ್ಲಿ ಕೆಲವು ಮಂದಿ ಲಿಂಗ ಧರಿಸುತ್ತಾರೆ. ಒಂದಷ್ಟು ಮಂದಿ ಉಡುದಾರ ಕಟ್ಟುತ್ತಾರೆ. ಕೆಲವರು ಜನಿವಾರ ತೊಡುತ್ತಾರೆ. ಇವೆಲ್ಲಾ ಧಾರ್ಮಿಕ ನಂಬಿಕೆಯ ವಿಚಾರಗಳು. ಅವುಗಳನ್ನು ತೆಗೆಸುವ ವಿಚಾರ ಮಾಡಬಾರದು. ನಮ್ಮ ಸರ್ಕಾರ ಇಂಥದ್ದಕ್ಕೆ ಅವಕಾಶ ಕೊಡುವುದಿಲ್ಲ ಎಂದರು.

ಸ್ಪರ್ಧಾತ್ಮಕ ಪರೀಕ್ಷೆ ವೇಳೆ ಬ್ಲೂಟೂತ್ ಉಪಕರಣ ಸೇರಿ ಒಂದಷ್ಟು ಸಾಧನಗಳನ್ನು ಬಳಸಿಕೊಂಡು ನಕಲು ಮಾಡಿದ್ದ ಘಟನೆಗಳು ಈ ಹಿಂದೆ ನಡೆದಿತ್ತು. ಇದನ್ನು ತಪ್ಪಿಸಲು ಕ್ರಮ ತೆಗೆದುಕೊಳ್ಳಲಾಗಿತ್ತು. ಪೊಲೀಸ್ ಹುದ್ದೆಗಳಿಗೆ ನೇಮಕಾತಿ ನಡೆಸುವಾಗ ಇವುಗಳನ್ನು ತೆಗೆಸುವ ಪದ್ಧತಿ ಇದೆ. ಆದರೆ, ವಿದ್ಯಾರ್ಥಿಗಳು ಪರೀಕ್ಷೆ ಬರೆಯಲು ಬಂದಾಗ ಹೀಗೆ ಮಾಡುವುದು ಸರಿಯಲ್ಲ ಎಂದರು. ಬೀದರ್ ಮತ್ತು ಶಿವಮೊಗ್ಗ ಜಿಲ್ಲೆಯಲ್ಲಿ ಸಿಇಟಿಗೆ ಹಾಜರಾಗಿದ್ದ ವಿದ್ಯಾರ್ಥಿಗಳ ಜನಿವಾರ ತೆಗೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಅಧಿಕಾರಿ ಹಾಗೂ ಸಿಬ್ಬಂದಿ ಸೇರಿದಂತೆ ಒಟ್ಟು ನಾಲ್ವರನ್ನು ಅಮಾನತುಗೊಳಿಸಲಾಗಿದೆ. ಮತ್ತೊಬ್ಬ ಅಧಿಕಾರಿಗೆ ಶೋಕಾಸ್ ನೋಟಿಸ್ ನೀಡಲಾಗಿದೆ.

ಶೂದ್ರ ಹೆಣ್ಣು ಮಗಳ ತಾಳಿ ತೆಗೆಸಿದ್ದು ಲೆಕ್ಕಕ್ಕೇ ಇಲ್ಲ!

ಚಿಕ್ಕಮಗಳೂರು: ಜನಿವಾರ ತೆಗೆಸಿದ್ದನ್ನು ನಾನು ಒಪ್ಪುವುದಿಲ್ಲ. ಈ ಘಟನೆಯನ್ನು ನಾನು ಖಂಡಿಸುತ್ತೇನೆ ಆದರೆ ಒಂದು ಶೂದ್ರ ಹೆಣ್ಣು ಮಗಳ ತಾಳಿಯನ್ನು ತೆಗೆಸಿದ್ರಲ್ವಾ ಅದು ಯಾಕೆ ಸುದ್ದಿಯಾಗಲಿಲ್ಲ ಎಂದು ಸಹಕಾರ ಸಚಿವ ಕೆ.ಎನ್.ರಾಜಣ್ಣ ಸೋಮವಾರ ಮಾಧ್ಯಮಗಳ ವಿರುದ್ಧ ಗರಂ ಆಗಿದ್ದಾರೆ.



ಇಂದು ಚಿಕ್ಕಮಗಳೂರಿನಲ್ಲಿ ಸಿಇಟಿ ಪರೀಕ್ಷಾ ಕೊಠಡಿಗೆ ತೆರಳುವ ಮುನ್ನ ವಿದ್ಯಾರ್ಥಿಯ ಜನಿವಾರ ತೆಗೆಸಿದ ವಿಚಾರಕ್ಕೆ ಪ್ರತಿಕ್ರಿಯಿಸಿದ ರಾಜಣ್ಣ, ಜನಿವಾರಕ್ಕೆ ಎಷ್ಟು ಮಹತ್ವ ಇದೆಯೋ ಅಷ್ಟೇ ಮಹತ್ವ ತಾಳಿಗೂ ಇದೆ. ಆದರೆ ತಾಳಿ ತೆಗೆಸಿದಾಗ ವಿವಾದ ಆಗಲಿಲ್ಲ ಎಂದರು.

ಹೆಣ್ಣು ಮಗಳ ತಾಳಿ ತೆಗೆಸಿದ್ದು ಮಾಧ್ಯಮಗಳಿಗೆ ಲೆಕ್ಕಕ್ಕೇ ಇಲ್ಲ. ಏಕೆಂದರೆ ಆಕೆ ಶೂದ್ರ ಹೆಣ್ಣು ಮಗಳು. ಅವರ ತಾಳಿ ಬೇಕಿದ್ದರೆ ತೆಗೆಸಬಹುದು. ಜನಿವಾರ ತೆಗೆಸಿದ್ದೇ ದೊಡ್ಡ ವಿವಾದ ಆಗಿದೆ. ಆದರೆ ಶೋಷಿತರ ಮೇಲೆ ದಬ್ಬಾಳಿಕೆ ನಡೆದರೆ ಯಾವುದೇ ಮಾಧ್ಯಮಗಳು, ರಾಜಕೀಯ ವ್ಯಕ್ತಿಗಳು ಪ್ರಸ್ತಾಪ ಮಾಡುವುದಿಲ್ಲ ಎಂದು ಸಚಿವ ರಾಜಣ್ಣ ಬೇಸರ ವ್ಯಕ್ತಪಡಿಸಿದರು.

ಉನ್ನತ ಶಿಕ್ಷಣದಲ್ಲಿ ಶೋಷಿತ ಸಮುದಾಯದ ವಿದ್ಯಾರ್ಥಿಗಳ ಹಿತ ಕಾಯಲು ರೋಹಿತ್ ವೇಮುಲಾ ಕಾಯಿದೆ ರಾಜ್ಯದಲ್ಲೂ ಜಾರಿ

- ಮುಖ್ಯಮಂತ್ರಿ ಸಿದ್ದರಾಮಯ್ಯ ಇಂಗಿತ
- ಈ ಸಮುದಾಯದ ವಿದ್ಯಾರ್ಥಿಗಳು ಜಾತಿ ವೈಷಮ್ಯಕ್ಕೆ ಬಲಿಯಾಗುವುದ ತಡೆಯುವ ಉದ್ದೇಶ
- ರಾಹುಲ್ ಗಾಂಧಿ ಪತ್ರದ ಹಿನ್ನೆಲೆಯಲ್ಲಿ ತೆಲಂಗಾಣ ಮಾದರಿ ಅನುಸರಿಸಲು ಸಿಎಂ ನಿರ್ಧಾರ

ಬೆಂಗಳೂರು, ಏ. 21(ಕೆಎಂಶಿ)– ಉನ್ನತ ಶಿಕ್ಷಣದಲ್ಲಿ ಶೋಷಿತ ಸಮುದಾಯದ ವಿದ್ಯಾರ್ಥಿಗಳು ಜಾತಿ ವೈಷಮ್ಯಕ್ಕೆ ಒಳಗಾಗದಂತೆ ತಡೆಗಟ್ಟಲು ರೋಹಿತ್ ವೇಮುಲಾ ಕಾಯಿದೆಯನ್ನು ರಾಜ್ಯದಲ್ಲೂ ಜಾರಿಗೆ ತರುವ ಇಂಗಿತವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ವ್ಯಕ್ತಪಡಿಸಿದ್ದಾರೆ.

ವೇಮುಲಾ ಕಾಯಿದೆಯ ಕರಡು ಸಿದ್ಧಪಡಿಸುವಂತೆ ಕಾನೂನು ಇಲಾಖೆಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದ್ದಾರೆ. ನೆರೆಯ ತೆಲಂಗಾಣದಲ್ಲಿ ಜಾರಿಗೊಳಿಸಿರುವಂತೆ ಕರ್ನಾಟಕದಲ್ಲೂ ಅನುಷ್ಠಾನಗೊಳಿಸುವಂತೆ ಕಾಂಗ್ರೆಸ್ ಅಧಿನಾಯಕ ರಾಹುಲ್ ಗಾಂಧಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದು, ಸಲಹೆ ಮಾಡಿದ್ದರು. ರಾಹುಲ್ ಗಾಂಧಿ ಪತ್ರದ ಹಿನ್ನೆಲೆಯಲ್ಲಿ ಕಾನೂನು ತಜ್ಞರೊಂದಿಗೆ ಸಮಾಲೋಚನೆ ನಡೆಸಿದ ಮುಖ್ಯಮಂತ್ರಿ ತೆಲಂಗಾಣ ಮಾದರಿ, ಇಲ್ಲವೇ ಅದಕ್ಕೂ ವಿಭಿನ್ನವಾಗಿ ಉನ್ನತ ಶಿಕ್ಷಣ ಪಡೆಯುವ ಶೋಷಿತ ವರ್ಗಗಳ ವಿದ್ಯಾರ್ಥಿಗಳ ರಕ್ಷಣೆಗೆ ಅಗತ್ಯ ಕಾನೂನು ರೂಪಿಸಿ ಎಂದು ಇಲಾಖೆಗೆ ಸೂಚನೆ ನೀಡಿದ್ದಾರೆ.

ಕಾನೂನು ತಜ್ಞರೊಂದಿಗಿನ ಸಮಾಲೋಚನೆ ನಂತರ ರಾಹುಲ್ ಗಾಂಧಿಗೆ ಪತ್ರ ಬರೆದಿರುವ ಮುಖ್ಯಮಂತ್ರಿ, ನಿಮ್ಮ ಸಲಹೆಯಂತೆ ರೋಹಿತ್ ವೇಮುಲಾ ಕಾಯಿದೆ ತರಲು ಸರ್ಕಾರ ಪ್ರಯತ್ನ ಮಾಡುತ್ತಿದೆ.

ಈಗಾಗಲೇ ಕಾನೂನು ಇಲಾಖೆಗೆ ಕೆಲವು ಸೂಚನೆಗಳನ್ನು ನೀಡಿ ಕಾಯಿದೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸೂಚಿಸಿರುವುದಾಗಿ ತಿಳಿಸಿದ್ದಾರೆ. ಹೈದರಾಬಾದ್‌ನ ದಲಿತ ವಿಶ್ವವಿದ್ಯಾಲಯದ ಸಂಶೋಧನಾ ವಿಭಾಗದ ವಿದ್ಯಾರ್ಥಿ ರೋಹಿತ್ ವೇಮುಲಾ ಜಾತಿ ತಾರತಮ್ಯದ ಹಿನ್ನೆಲೆಯಲ್ಲಿ ಡೆತ್ ನೋಟ್ ಬರೆದಿಟ್ಟು ಮೃತಪಟ್ಟ ಘಟನೆಗೆ ಸಂಬಂಧಿಸಿದಂತೆ ಇನ್ನು ಮುಂದೆ ಇಂತಹ ದೌರ್ಜನ್ಯಗಳಿಗೆ ದಲಿತ, ಆದಿವಾಸಿ ಹಾಗೂ ಅತಿ ಹಿಂದುಳಿದ ವಿದ್ಯಾರ್ಥಿಗಳು ಒಳಗಾಗದಂತೆ ರಕ್ಷಿಸಲು ತೆಲಂಗಾಣದಲ್ಲಿ ಕಾನೂನು ತರಲಾಗಿದೆ.

ಲಕ್ಷದ ಗಡಿಯಲ್ಲಿ ಚಿನ್ನ!

ನವದೆಹಲಿ: ದೇಶದ ಆರ್ಥಿಕ ರಾಜಧಾನಿ ಮುಂಬೈನ ಜವೇರಿ ಬಜಾರ್‌ನಲ್ಲಿ ಚಿನ್ನದ ಬೆಲೆ ಸಾರ್ವಕಾಲಿಕ ಗರಿಷ್ಠ ಮಟ್ಟವನ್ನು ತಲುಪಿದೆ. 24 ಕ್ಯಾರೆಟ್ ಶುದ್ಧ 10 ಗ್ರಾಂ ಚಿನ್ನದ ಬೆಲೆ 1 ಲಕ್ಷ ರೂ. ಆಸುಪಾಸಿನಲ್ಲಿದ್ದು, ಇದು ಭಾರತೀಯ ಮಾರುಕಟ್ಟೆಯಲ್ಲಿ ಇದುವರೆಗಿನ ಚಿನ್ನದ ಬೆಲೆಯಲ್ಲಿನ ಅತಿದೊಡ್ಡ ಜಿಗಿತ ಎಂದು ಪರಿಗಣಿಸಲಾಗಿದೆ.



ಭಾರತದಲ್ಲಿ ಚಿನ್ನದ ಬೆಲೆ ಇಂದು ಹೊಸ ಸಾರ್ವಕಾಲಿಕ ಗರಿಷ್ಠ ಮಟ್ಟದಲ್ಲಿದೆ. 24 ಕ್ಯಾರೆಟ್ ಚಿನ್ನವು ಪ್ರತಿ 10 ಗ್ರಾಂಗೆ ಐತಿಹಾಸಿಕ ರೂ. 1,00,000 ಮಾರ್ಕ್

■ 6ನೇ ಪುಟಕ್ಕೆ

ವಿಸ್ತೃತ ಪೀಠಕ್ಕೆ ಬಿಎಸ್‌ವೈ ಡಿ ನೋಟಿಫಿಕೇಷನ್ ಪ್ರಕರಣ

ನವದೆಹಲಿ: ಕರ್ನಾಟಕದ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ವಿರುದ್ಧದ ಡಿನೋಟಿಫಿಕೇಷನ್ ಪ್ರಕರಣದಲ್ಲಿ ತೀರ್ಪು ಪ್ರಕಟಿಸುವುದರಿಂದ ಸುಪ್ರೀಂ ಕೋರ್ಟ್‌ನ ದ್ವಿಸದಸ್ಯ ಪೀಠವು ಸೋಮವಾರ ಹಿಂದೆ ಸರಿದಿದೆ.



2018ರ ಜುಲೈನಲ್ಲಿ ಭ್ರಷ್ಟಾಚಾರ ನಿಗ್ರಹ ಕಾಯ್ದೆಗೆ ತಿದ್ದುಪಡಿ ತಂದು ಸೆಕ್ಷನ್ 17ಎ ಸೇರಿಸಲಾಗಿದೆ. ಸಾರ್ವಜನಿಕ ಸೇವಕನ ವಿರುದ್ಧ ಈ ಕಾಯ್ದೆಯ ಅಡಿಯಲ್ಲಿ ವಿಚಾರಣೆ, ತನಿಖೆ ಆರಂಭಿಸಲು ಪೊಲೀಸ್ ಅಧಿಕಾರಿಯು ಸಕ್ಷಮ ಪ್ರಾಧಿಕಾರದಿಂದ ಒಪ್ಪಿಗೆ ಪಡೆಯುವುದು ಕಡ್ಡಾಯ ಎಂದು

■ 6ನೇ ಪುಟಕ್ಕೆ

ಸ್ಮಾರ್ಟ್ ಮೀಟರ್ ವಿರುದ್ಧ ಲೋಕಾಯುಕ್ತಕ್ಕೆ ಬಿಜೆಪಿ ದೂರು

ಬೆಂಗಳೂರು, ಏ.21(ಕೆಎಂಶಿ)– ಸ್ಮಾರ್ಟ್ ಮೀಟರ್ ಅಳವಡಿಕೆಯಲ್ಲಿ ಕೋಟ್ಯಾಂತರ ರೂ. ಭ್ರಷ್ಟಾಚಾರ ನಡೆದಿದ್ದು, ಈ ಬಗ್ಗೆ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ರಾಜ್ಯ ಬಿಜೆಪಿ ಲೋಕಾಯುಕ್ತರಿಗೆ ದೂರು ನೀಡಿದೆ.

ಮಾಜಿ ಡಿಸಿಎಂ ಡಾ.ಸಿ.ಎನ್. ಅಶ್ವತ್ಥ ನಾರಾಯಣ ನೇತೃತ್ವದ ನಿಯೋಗ ಲೋಕಾಯುಕ್ತರನ್ನು ಭೇಟಿ ಮಾಡಿ ಹಗರಣಕ್ಕೆ ಸಂಬಂಧಿಸಿದ ಮಾಹಿತಿ ಒಳಗೊಂಡ ದೂರು ನೀಡಿದರು. ದೂರಿನ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅಶ್ವತ್ಥ ನಾರಾಯಣ ಮತ್ತಿತರರು, ಭ್ರಷ್ಟಾಚಾರ ಹಗರಣ ಕುರಿತು ಲೋಕಾಯುಕ್ತ ಎಸ್‌ಪಿ ಅವರಿಗೆ ದೂರು ನೀಡಿ ಸವಿಸ್ತಾರವಾಗಿ ವಿವರಿಸಿದ್ದೇವೆ, ಪ್ರಕರಣವನ್ನು ತಾರ್ಕಿಕ ಅಂತ್ಯಕ್ಕೆ

■ 6ನೇ ಪುಟಕ್ಕೆ



ಅಶ್ವತ್ಥ ನಾರಾಯಣ



ಕೆ.ಜೆ. ಜಾರ್ಜ್



ಬೇಕಾಗಿದ್ದಾರೆ

ಮೈಸೂರಿನ ಕುವೆಂಪುನಗರದಲ್ಲಿರುವ ಖಾಸಗಿ ಕಂಪನಿಗೆ ಅಡಿಗೆ ಮಾಡಲು ಮಹಿಳೆಯರು & ಡ್ರೈವಿಂಗ್ ಕೆಲಸ ಮಾಡಲು ಪುರುಷರು ಬೇಕಾಗಿದ್ದಾರೆ

9164258888



ನಿವೃತ್ತ ಡಿಜಿಪಿ ಓಂ ಪ್ರಕಾಶ್ ಹತ್ಯೆ ಪ್ರಕರಣ

ಪುತ್ರ ಕಾರ್ತಿಕೇಶ್ ದೂರು ಆಧರಿಸಿ ತಾಯಿ ಬಂಧನ; ತಂಗಿ ಪೊಲೀಸ್ ವಶಕ್ಕೆ


ಸಕಲ ಸರ್ಕಾರಿ ಗೌರವದೊಂದಿಗೆ ಓಂಪ್ರಕಾಶ್ ಅಂತ್ಯಕ್ರಿಯೆ

ಬೆಂಗಳೂರು, ಏ.21– ನಿವೃತ್ತ ಪೊಲೀಸ್ ಮಹಾನಿರ್ದೇಶಕ ಓಂ ಪ್ರಕಾಶ್ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಅವರ ಪತ್ನಿ ಮತ್ತು ಪುತ್ರಿಯ ಮೇಲೆ ಎಫ್‌ಐಆರ್ ದಾಖಲಾಗಿದ್ದು, ಪೊಲೀಸರು ಪತ್ನಿ ಪಲ್ಲವಿ ಅವರನ್ನು ಬಂಧಿಸಿದ್ದಾರೆ.

ಓಂ ಪ್ರಕಾಶ್ ಅವರ ಪುತ್ರ ಕಾರ್ತಿಕೇಶ್ ನೀಡಿದ ದೂರಿನ ಮೇರೆಗೆ ತಾಯಿ ಪಲ್ಲವಿ, ಸಹೋದರಿ ಕೃತಿ ವಿರುದ್ಧ ಹೆಚ್‌ಎಸ್‌ಆರ್ ಲೇಔಟ್ ಠಾಣೆಯಲ್ಲಿ ಬಿಎನ್‌ಎಸ್ ಸೆಕ್ಷನ್ 103(ಕೊಲೆ) ಅಡಿಯಲ್ಲಿ ಪ್ರಕರಣ ದಾಖಲಾಗಿದೆ. ಕಳೆದ ಒಂದು ವಾರದಿಂದ ತಾಯಿ ಪಲ್ಲವಿ, ತಂದೆಯನ್ನು ಹತ್ಯೆ ಮಾಡುವುದಾಗಿ ಬೆದರಿಕೆ ಹಾಕುತ್ತಿದ್ದರು. ಹಾಗಾಗಿ ದಾಂಡೇಲಿಯಲ್ಲಿರುವ ಅವರ ಸಹೋದರಿ ಸರಿತಾ ಗುಪ್ತಾ ಮನೆಗೆ ತಂದೆ ಹೋಗಿದ್ದರು. ಎರಡು ದಿನಗಳ ಬಳಿಕ ತಾಯಿ ಹಾಗೂ ತಂಗಿ ಇಬ್ಬರೂ ಅಲ್ಲಿಗೆ ಹೋಗಿ, ಪೀಡಿಸಿ ಅವರನ್ನು ಬೆಂಗಳೂರಿಗೆ ಕರೆತಂದಿದ್ದರು.

ಏ.20ರ ಸಂಜೆ 5 ಗಂಟೆಯ ವೇಳೆಗೆ ನಾನು ದೊಮ್ಮಲೂರಿನ ಗಾಲ್ಫ್ ಅಸೋಸಿಯೇಷನ್‌ನಲ್ಲಿದ್ದಾಗ ನಮ್ಮ ಮನೆಯ ಪಕ್ಕದ ಮನೆಯವರು ಕರೆ ಮಾಡಿ ನಿಮ್ಮ ತಂದೆಯ ದೇಹ ನೆಲದ ಮೇಲೆ ಬಿದ್ದಿದೆ ಎಂದು ತಿಳಿಸಿದರು. ಕೂಡಲೇ ಅಲ್ಲಿಂದ ಹೊರಟು ಸಂಜೆ 5.45ಕ್ಕೆ ಮನೆಗೆ ಆಗಮಿಸಿದೆ. ಈ ವೇಳೆ ಸ್ಥಳದಲ್ಲಿ ಪೊಲೀಸರು ಮತ್ತು ಸಾರ್ವಜನಿಕರು ಇದ್ದರು. ತಂದೆಯ ತಲೆಯಿಂದ ರಕ್ತ ಬರುತ್ತಿತ್ತು. ದೇಹದ ಪಕ್ಕದಲ್ಲಿ ಬಾಟಲ್ ಮತ್ತು ಚಾಕು ಇತ್ತು. ನನ್ನ ತಾಯಿ ಪಲ್ಲವಿ ಮತ್ತು ತಂಗಿ ಕೃತಿ

■ 6ನೇ ಪುಟಕ್ಕೆ



ನಿವೃತ್ತ ಪೊಲೀಸ್ ಮಹಾನಿರ್ದೇಶಕ ಓಂ ಪ್ರಕಾಶ್ ಅವರ ಪಾರ್ಥಿವ ಶರೀರಕ್ಕೆ, ಹಾಲಿ ಡಿಜಿ, ಐಜಿಪಿ ಡಾ. ಅಲೋಕ್ ಮೋಹನ್ ಅಂತಿಮ ನಮನ ಸಲ್ಲಿಸಿದರು. ಈ ವೇಳೆ ಬೆಂಗಳೂರು ನಗರ ಪೊಲೀಸ್ ಆಯುಕ್ತ ದಯಾನಂದ ಇನ್ನಿತರರಿದ್ದರು.

ಪಲ್ಲವಿಗೆ 14 ದಿನ ನ್ಯಾಯಾಂಗ ಬಂಧನ

ಬೆಂಗಳೂರು: ರಾಜ್ಯದ ನಿವೃತ್ತ ಡಿಜಿಪಿ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪತ್ನಿ ಪಲ್ಲವಿಗೆ 14 ದಿನಗಳ ನ್ಯಾಯಾಂಗ ಬಂಧನ ವಿಧಿಸಿ ಕೋರ್ಟ್ ಆದೇಶ ಹೊರಡಿಸಿದೆ. ಕೊಲೆ ಆರೋಪಿ ಪಲ್ಲವಿ ಅವರನ್ನು ಸೋಮವಾರ ನ್ಯಾಯಾಧೀಶರ ಮುಂದೆ ಪೊಲೀಸರು ಹಾಜರುಪಡಿಸಿದ್ದರು. ನ್ಯಾಯಾಧೀಶರಾದ ಜಿ.ಎ.ಲತಾದೇವಿ ಅವರು ನ್ಯಾಯಾಂಗ ಬಂಧನ ವಿಧಿಸಿ ಆದೇಶಿಸಿದ್ದಾರೆ. ಪೊಲೀಸರು ಆರೋಪಿ ಪಲ್ಲವಿ ಅವರನ್ನು ಪರಪ್ಪನ ಅಗ್ರಹಾರ ಜೈಲಿಗೆ ಸ್ಥಳಾಂತರಿಸಿದ್ದಾರೆ.

ಸದ್ಯಕ್ಕೆ ಏನನ್ನೂ ಹೇಳಲಾಗದು

ಹತ್ಯೆಗೆ ಇಂತಹದ್ದೇ ಕಾರಣ ಎಂದು ನಿರ್ಧರಿಸಲಾಗದು

ಬೆಂಗಳೂರು, ಏ. 21(ಕೆಎಂಶಿ)– ನಿವೃತ್ತ ಪೊಲೀಸ್ ಮಹಾನಿರ್ದೇಶಕ (ಡಿಜಿಪಿ) ಓಂ ಪ್ರಕಾಶ್ ಹತ್ಯೆ ಪ್ರಕರಣದ ಸಮಗ್ರ ತನಿಖೆ ಮುಗಿಯುವವರೆಗೆ ಏನನ್ನೂ ಹೇಳಲು ಸಾಧ್ಯವಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಇಂದಿಲ್ಲಿ ಪ್ರತಿಕ್ರಿಯಿಸಿದ್ದಾರೆ.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಓಂ ಪ್ರಕಾಶ್ ಹತ್ಯೆ ಪ್ರಕರಣದ ತನಿಖೆ ನಡೆಯುತ್ತಿದೆ, ಇದರಲ್ಲಿ ದೊರೆಯುವ ಮಾಹಿತಿ ಪರಿಶೀಲಿಸಬೇಕಿದೆ, ಒಳ್ಳೆಯ ಅಧಿಕಾರಿ, ಒಳ್ಳೆ ವ್ಯಕ್ತಿ, ಈ ರೀತಿ ಆಗಬಾರದಿತ್ತು ಎಂದರು. ಘಟನೆಗೆ ಇಂತಹುದೇ ಕಾರಣ ಎಂದು ಹೇಳಲಾಗದು, ಕೌಟುಂಬಿಕ ಸಮಸ್ಯೆ ಬಗ್ಗೆ ಈ ಹಿಂದೆ ದೂರು ಕೊಟ್ಟಿರುವುದನ್ನೂ ತನಿಖೆ ವೇಳೆ ಪರಿಶೀಲಿಸಲಾಗುತ್ತದೆ.

ಸಮಗ್ರ ತನಿಖೆ ಆಗುವವರೆಗೂ ಏನನ್ನೂ ಹೇಳಲು ಸಾಧ್ಯವಿಲ್ಲ, ಓಂ ಪ್ರಕಾಶ್ ಪತ್ನಿಯನ್ನು ವಶಕ್ಕೆ ಪಡೆದು ವಿಚಾರಣೆಗೊಳಪಡಿಸಲಾಗಿದೆ, ಪತ್ನಿಯ ಕಾಯಿಲೆ ಕುರಿತು ಈಗಲೇ ಹೇಳಲಾಗದು ಎಂದು ಹೇಳಿದ್ದಾರೆ.

ಚೂರಿ ಇರಿತಕ್ಕೂ ಮುನ್ನ ಕಣ್ಣಿಗೆ ಖಾರದ ಪುಡಿ ಎರಚಿದ್ದ ಪತ್ನಿ; 10ಕ್ಕೂ ಹೆಚ್ಚು ಬಾರಿ ಇರಿದು ಕೊಲೆ

ಬೆಂಗಳೂರು, ಏ.21– ರಾಜ್ಯದ ನಿವೃತ್ತ ಡಿಜಿ, ಐಜಿಪಿ ಓಂ ಪ್ರಕಾಶ್ ಕೊಲೆ ಪ್ರಕರಣ ಸಂಬಂಧ ಪೊಲೀಸರ ವಿಚಾರಣೆ ವೇಳೆ ಓಂ ಪ್ರಕಾಶ್ ಅವರ ಪತ್ನಿ ಪಲ್ಲವಿ ಅವರೇ ಕೊಲೆ ರಹಸ್ಯವನ್ನು ಎಳೆಎಳೆಯಾಗಿ ಬಿಚ್ಚಿಟ್ಟಿದ್ದಾರೆ.



ಪಲ್ಲವಿ

ಕಳೆದ ಒಂದು ವಾರದಿಂದ ಮನೆಯಲ್ಲಿ ಜಗಳ ನಡೆಯುತ್ತಿತ್ತು. ಪದೇ ಪದೆ ಗನ್ ತಂದು ನನಗೆ ಮತ್ತು ನನ್ನ ಮಗಳಿಗೆ ಶೂಟ್ ಮಾಡುವುದಾಗಿ ಬೆದರಿಕೆ ಹಾಕುತ್ತಿದ್ದರು. ಇದರಿಂದ ಮನೆಯಲ್ಲಿ ನೆಮ್ಮದಿಯೇ ಇಲ್ಲದಂತಾಗಿತ್ತು. ನಾನು ಮತ್ತು ಮಗಳು ಇವರ ಕಾಟದಿಂದ ತುಂಬಾ ಬೇಸತ್ತು ಹೋಗಿದ್ದೆವು. ಅದೇ ರೀತಿ ಇಂದು ಬೆಳಗ್ಗೆಯಿಂದಲೂ ಬೇರೆ ಬೇರೆ ವಿಚಾರಕ್ಕೆ ಮನೆಯಲ್ಲಿ ಜಗಳ ಶುರುವಾಗಿತ್ತು. ಮಧ್ಯಾಹ್ನ ಜಗಳ ವಿಕೋಪಕ್ಕೆ ಹೋದಾಗ ನಮ್ಮನ್ನೇ ಕೊಲೆ ಮಾಡಲು ಗಂಡ ಓಂ ಪ್ರಕಾಶ್ ಪ್ರಯತ್ನ ಮಾಡಿದರು. ಆಗ ಅವರಿಂದ ತಪ್ಪಿಸಿಕೊಳ್ಳಲು ತುಂಬಾ ಪರದಾಡಿದ್ದೆವು. ನಮ್ಮನ್ನು ಉಳಿಸಿಕೊಳ್ಳಲು ನಾವು ಹೋರಾಟ ಮಾಡಿದ್ದೀವಿ. ನಾವು ಬದುಕುಳಿಯಬೇಕೆಂದರೆ ಅವರನ್ನೇ ಕೊಲೆ ಮಾಡುವುದು ಉತ್ತಮ ಎಂಬ ತೀರ್ಮಾನಕ್ಕೆ ಬಂದೆವು. ನಂತರ ಓಂ ಪ್ರಕಾಶ್ ಮೇಲೆ ಖಾರದ ಪುಡಿ ಹಾಕಿ, ಅವರು ಓಡಾಡಲು ಆಗದಂತೆ ಕುದಿಯುವ ಅಡುಗೆ ಎಣ್ಣೆಯನ್ನು ಎರಚಲಾಗಿತ್ತು. ಬಳಿಕ ಕೈ–ಕಾಲು ಕಟ್ಟಿ ಅಡುಗೆ ಮನೆಯಲ್ಲಿದ್ದ ಚಾಕುವಿನಿಂದ ಚುಚ್ಚಿ ಕೊಲ್ಲಲಾಯಿತು ಎಂದು ಪಲ್ಲವಿ ಒಪ್ಪಿಕೊಂಡಿದ್ದಾರೆಂದು

■ 6ನೇ ಪುಟಕ್ಕೆ

ಮೈಸೂರು ಮಿತ್ರ

ಹೋಟೆಲ್, ಬೇಕರಿ, ಫಾಸ್ಟ್‌ಫುಡ್‌ಗಳಲ್ಲಿ ಗುಣಮಟ್ಟ, ಶುಚಿತ್ವ ಕಾಯ್ದುಕೊಳ್ಳಲು ಸೂಚನೆ




ಕಡಕೊಳ ವ್ಯಾಪ್ತಿಯ ಹೋಟೆಲ್‌ಗಳು, ಬೇಕರಿ, ಫಾಸ್ಟ್‌ಫುಡ್ ಅಂಗಡಿಗಳಿಗೆ ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿ ಹೆಚ್.ಆರ್.ದೀಪಾ ದಿಢೀರ್ ಭೇಟಿ ನೀಡಿ, ಪರಿಶೀಲಿಸಿದರು.

ಮೈಸೂರು,ಏ.21–ಮೈಸೂರು ತಾಲೂಕು ಕಡಕೊಳ ಗ್ರಾಮ ವ್ಯಾಪ್ತಿಯ ಹೋಟೆಲ್‌ಗಳು, ಬೇಕರಿ, ಫಾಸ್ಟ್‌ಫುಡ್ ಅಂಗಡಿಗಳಿಗೆ ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿ ಹೆಚ್.ಆರ್.ದೀಪಾ ದಿಢೀರ್ ಭೇಟಿ ನೀಡಿ ಸ್ವಚ್ಛತೆ ನಿರ್ವಹಣೆ, ಗ್ರಾಹಕರಿಗೆ ನೀಡುತ್ತಿರುವ ಆಹಾರ ಗುಣಮಟ್ಟ ಹಾಗೂ ಇನ್ನಿತರ ಕಾರ್ಯವೈಖರಿ ಬಗ್ಗೆ ಪರಿಶೀಲನೆ ನಡೆಸಿದರು.

ಈ ವೇಳೆ ಮಾತನಾಡಿದ ಹೆಚ್.ಆರ್.ದೀಪಾ, ಈಗಾಗಲೇ ಬೇಸಿಗೆ ಪ್ರಾರಂಭವಾಗಿದೆ. ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆಯಿದ್ದು, ಹೋಟೆಲ್ ಮಾಲೀಕರು ಗ್ರಾಹಕರಿಗೆ ಶುದ್ಧವಾದ ಆಹಾರ, ಬಿಸಿನೀರು ನೀಡುವುದರ ಜೊತೆಗೆ ಶುಚಿತ್ವದ ಬಗ್ಗೆ ಹೆಚ್ಚಿನ ಆದ್ಯತೆ ನೀಡಬೇಕು. ಸಸ್ಯಹಾರ ಹಾಗೂ ಮಾಂಸಹಾರ ಹೋಟೆಲ್‌ಗಳು ಮತ್ತು ಬೇಕರಿಗಳಲ್ಲಿ ಆಹಾರ ತಯಾರಿಸುವವರ ಆರೋಗ್ಯ ತಪಾಸಣೆ ಮಾಡಿಸಿ ಅದರ ಪ್ರಮಾಣ ಪತ್ರವನ್ನು ಹೋಟೆಲ್‌ಗಳಲ್ಲಿ ಇಟ್ಟಿರಬೇಕು. ಆಹಾರ ಪದಾರ್ಥಗಳು ಕೆಡದಂತೆ ಮುಂಜಾಗ್ರತಾ ಕ್ರಮ ವಹಿಸಿ ಸಾರ್ವಜನಿಕರಿಗೆ ಆರೋಗ್ಯದ ಮೇಲೆ ಯಾವುದೇ ಪರಿಣಾಮ ಬೀರದಂತೆ ಕಾರ್ಯನಿರ್ವಹಿಸಬೇಕೆಂದು ಸೂಚನೆ ನೀಡಿದರು.


ಪಟ್ಟಣ ಪಂಚಾಯತಿ ವ್ಯಾಪ್ತಿಯ ಹೆದ್ದಾರಿಯಲ್ಲಿರುವ ಹೋಟೆಲ್‌ಗಳಿಗೆ ಭೇಟಿ ನೀಡಿ ಅಂತರರಾಜ್ಯ ಮತ್ತು ಅಂತರ ಜಿಲ್ಲೆಗಳಿಂದ ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಭೇಟಿ ನೀಡುವುದರಿಂದ ಸ್ವಚ್ಛತೆ ಮತ್ತು ಪರಿಶುದ್ಧ ಆಹಾರಕ್ಕೆ ಆದ್ಯತೆ ನೀಡಿ, ಮೈಸೂರು ಘನತೆಗೆ ಧಕ್ಕೆ ತರದಂತೆ ಗುಣಮಟ್ಟ ಕಾಪಾಡಿಕೊಳ್ಳಬೇಕೆಂದು ಹೇಳಿದರು. ಪಟ್ಟಣ ಪಂಚಾಯತಿ ಆರೋಗ್ಯ ನಿರೀಕ್ಷಕ ಮಂಜುನಾಥ್, ಸ್ವಚ್ಛತಾ ಮೇಲ್ವಿಚಾರಕ ಆನಂದ್ ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

ಹೆಚ್‌ಸಿಎಂ ಹುಟ್ಟುಹಬ್ಬ ಆಚರಣೆ



ಸಚಿವ ಡಾ.ಎಚ್.ಸಿ.ಮಹದೇವಪ್ಪ ಅಭಿಮಾನಿ ಬಳಗದಿಂದ ಅವರ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ಸಸಿ ನೆಟ್ಟು, ಸಿಹಿ ವಿತರಿಸಲಾಯಿತು. ಪ್ರಧಾನ ಕಾರ್ಯದರ್ಶಿ ಎಸ್.ಪ್ರಕಾಶ್, ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್, ದಲಿತ ಪ್ಯಾಂಥರ್ ಕಿರಣ್‌ಕುಮಾರ್, ಕಾರ್ಮಿಕರ ಸಂಘದ ಅಧ್ಯಕ್ಷ ಲೋಕೇಶ್, ಕಾರ್ಮಿಕರ ಸಂಘದ ನಿರ್ದೇಶಕ ಸಿದ್ದರಾಜು, ಎಪಿಎಂಸಿಯ ರಾಮಚಂದ್ರು, ರಾಜೀವ್ ಗಾಂಧಿ ಪಂಚಾಯತ್ ಪ್ರಧಾನ ಕಾರ್ಯದರ್ಶಿ ಲೋಕೇಶ್, ಗಾಂಧಿನಗರದ ಮುಖಂಡರಾದ ಜ್ಯೋತಿಲಿಂಗ, ಸುರೇಶ್, ಸೇವಾದಳ ಮೋಹನ್, ನಿತೀಶ್‌ಗೌಡ, ನಗರಪಾಲಿಕೆ ಪೌರಕಾರ್ಮಿಕರು ಹಾಜರಿದ್ದರು.

ಶ್ರೀರಾಮ ಪಟ್ಟಾಭಿಷೇಕ...



ಮೈಸೂರಿನ ಅಗ್ರಹಾರದ ನಟರಾಜ ಕಾಲೇಜಿನಲ್ಲಿ ನಡೆದ ಶ್ರೀ ರಾಮನ ಪಟ್ಟಾಭಿಷೇಕ ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಎಂ.ಕೆ. ಸೋಮಶೇಖರ್, 'ಲಾ ಗೈಡ್' ಕಾನೂನು ಮಾಸಪತ್ರಿಕೆ ಸಂಸ್ಥಾಪಕ ಸಂಪಾದಕರಾದ ಹೆಚ್.ಎಸ್.ವೆಂಕಟೇಶ್, ಕಾಂಗ್ರೆಸ್ ಮುಖಂಡ ಶ್ರೀನಾಥ್ ಬಾಬು, ಗಣೇಶ್, ಕಾಳಿಂಗ, ರಮೇಶ್, ಪ್ರತಾಪ್, ರಾಕೇಶ್, ಯೋಗೇಶ್ ನಾಯ್ಡು, ಶ್ಯಾಮ್, ಹರೀಶ್ ನಾಯ್ಡು, ರಾಜಣ್ಣ ಮತ್ತಿತರರು ಪಾಲ್ಗೊಂಡಿದ್ದರು.

ನಿವೃತ್ತ ಶಿಕ್ಷಕರಿಗೆ ಸನ್ಮಾನ...



ಮೈಸೂರು ಜಿಲ್ಲಾ ಮುಖ್ಯ ಶಿಕ್ಷಕರ ಸಂಘದ ವತಿಯಿಂದ ನಿವೃತ್ತಿ ಹೊಂದಲಿರುವ ಶಿಕ್ಷಕರನ್ನು ಸನ್ಮಾನಿಸಲಾಯಿತು. ಉಪನಿರ್ದೇಶಕ ಜವರೇಗೌಡ, ವೈ.ಟಿ.ಕೃಷ್ಣೇಗೌಡ, ಮಂಜುನಾಥ, ರಾಜಯ್ಯ, ಜಿ.ಸಿ.ಶಂಕರ್, ಮಹದೇವಪ್ರಸಾದ್ ಉಪಸ್ಥಿತರಿದ್ದರು.


ನಾಳೆ ಮೈಸೂರಲ್ಲಿ ಬ್ರಹ್ಮ ರಥೋತ್ಸವ

ಮೈಸೂರು, ಏ.21(ಜಿಎ)–ಮೈಸೂರಿನ ವಿಜಯನಗರ 3ನೇ ಹಂತದ ವಿಜಯ ಮಹಾಗಣಪತಿ ದೇವಸ್ಥಾನದಲ್ಲಿ ಏ.23ರಂದು ಬೆಳಗ್ಗೆ 10.20ಕ್ಕೆ ಬ್ರಹ್ಮ ರಥೋತ್ಸವ ನಡೆಯಲಿದೆ ಎಂದು ಮಹಾಗಣಪತಿ ಸೇವಾ ಟ್ರಸ್ಟ್ ಅಧ್ಯಕ್ಷ ಸಿ.ಕೆ. ಮಂಜನಾಥ್ ಶಾಸ್ತ್ರಿ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ 7ರಿಂದ ಪೂಜಾ ಕಾರ್ಯಗಳು ಆರಂಭವಾಗಲಿವೆ. ಮಧ್ಯಾಹ್ನ 12.25ರಿಂದ ಚತುರ್‌ದ್ರವ್ಯ ಮಹಾಗಣಪತಿ ಹೋಮ ನಡೆಯಲಿದೆ. ಪೇಜಾವರ ಮಠದ ಪೀಠಾಧ್ಯಕ್ಷ ಶ್ರೀ ವಿಶ್ವಪ್ರಸನ್ನ ತೀರ್ಥ ಸ್ವಾಮೀಜಿ ರಥೋತ್ಸವಕ್ಕೆ ಚಾಲನೆ ನೀಡಲಿದ್ದಾರೆ. ನಂತರ ಅನ್ನಸಂತರ್ಪಣೆ ನೆರವೇರಿಸಲಾಗುವುದು. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕು ಎಂದು ಮನವಿ ಮಾಡಿದರು. ಗೋಷ್ಠಿಯಲ್ಲಿ ಆರ್.ಎಂ.ಶ್ರೀನಿವಾಸಮೂರ್ತಿ, ವೆಂಕಟರಾಮ ಉಪಸ್ಥಿತರಿದ್ದರು.

ನಿಧನ

ಮೊಹಮ್ಮದ್ ದಸ್ತಗೀರ್



ಮೈಸೂರು,ಏ.21–ಮೈಸೂರಿನ ಫೋರ್ಟ್ ಮೊಹಲ್ಲಾದ ನಿವಾಸಿ ಮೊಹಮ್ಮದ್ ದಸ್ತಗೀರ್ (70) ಭಾನುವಾರ ಹೃದಯಾಘಾತದಿಂದ ನಿಧನರಾದರು. ಮೃತರು ಪತ್ನಿ, 6 ಮಂದಿ ಪುತ್ರರು, ಮೂವರು ಪುತ್ರಿಯರು, ಮೊಮ್ಮಕ್ಕಳು, ಅಪಾರ ಬಂಧುವರ್ಗ ಅಗಲಿದ್ದಾರೆ. ಅಂತ್ಯಕ್ರಿಯೆ ಮೈಸೂರಿನ ಟಿಪ್ಪು ಸರ್ಕಲ್ ಹಿಂಭಾಗವಿರುವ ಮುಸ್ಲಿಮರ ರುದ್ರಭೂಮಿ ಗೇಟ್ ನಂ.8ರಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ನಿಧನ ಸುದ್ದಿ, ಈ ಸಂಬಂಧಿತ ಜಾಹೀರಾತು ನೀಡಲು ಸಂಪರ್ಕಿಸಿ: 90080–54444

ಬಿಜೆಪಿ ನಿಯೋಗದಿಂದ ಸ್ಪೀಕರ್ ಭೇಟಿ

18 ಶಾಸಕರ ಅಮಾನತು ರದ್ದುಗೊಳಿಸುವಂತೆ ಮನವಿ

ಬೆಂಗಳೂರು, ಏ.21– ರಾಜ್ಯ ಬಿಜೆಪಿ ನಿಯೋಗವು ಸೋಮವಾರ ಬೆಂಗಳೂರಿನ ವಿಧಾನಸೌಧದಲ್ಲಿ ಸ್ಪೀಕರ್ ಯು.ಟಿ. ಖಾದರ್ ಅವರನ್ನು ಭೇಟಿ ಮಾಡಿದ್ದು, 18 ಬಿಜೆಪಿ ಶಾಸಕರ ಅಮಾನತು ರದ್ದುಗೊಳಿಸುವಂತೆ ಮನವಿ ಸಲ್ಲಿಸಿದೆ.

ಮಾರ್ಚ್ 21 ರಂದು ನಡೆದ ಒಂದು ಪ್ರಮುಖ ಬೆಳವಣಿಗೆಯಲ್ಲಿ ಸ್ಪೀಕರ್ ಕುರ್ಚಿಗೆ ಅಗೌರವ ತೋರಿಸಿದ ಮತ್ತು ಮಸೂದೆಯ ಹರಿದ ಪ್ರತಿಗಳನ್ನು ಅವರ ಮೇಲೆ ಎಸೆದ ಆರೋಪದ ಮೇಲೆ 18 ಬಿಜೆಪಿ ಶಾಸಕರನ್ನು ವಿಧಾನಸಭೆಯಿಂದ ಆರು ತಿಂಗಳ ಕಾಲ ಅಮಾನತುಗೊಳಿಸಲಾಗಿತ್ತು.



ಅಶೋಕ್

ಸ್ಪೀಕರ್‌ಗೆ ಮನವಿ ಪತ್ರ ಸಲ್ಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ನಾವು ಸ್ಪೀಕರ್ ಅವರನ್ನು ಭೇಟಿ ಮಾಡಿ ನಮ್ಮ ಮನವಿ ಸಲ್ಲಿಸಿದ್ದೇವೆ. ಶಾಸಕರು ಕಮಿಟಿ ಸಭೆಗೆ ಹೋಗಲು ಸಾಧ್ಯವಾಗುತ್ತಿಲ್ಲ. ಬಿಜೆಪಿ ಶಾಸಕರನ್ನು ಆರು ತಿಂಗಳ ಕಾಲ ಅಮಾನತು ಗೊಳಿಸಿರುವುದು ನ್ಯಾಯಯುತ ಕ್ರಮವಲ್ಲ ಎಂದರು.

ಹಿಂದೆ ಇದೇ ರೀತಿಯ ನೂರಾರು ಘಟನೆಗಳು ನಡೆದಿವೆ. ಬಿಜೆಪಿ, ಸ್ಪೀಕರ್‌ಗೆ ಅವಮಾನಿಸುವ ಉದ್ದೇಶವನ್ನು ಹೊಂದಿರಲಿಲ್ಲ. ಸಿಡಿ ವಿಷಯದ ಬಗ್ಗೆ ನಾವು ಒಂದು ಪಕ್ಷವಾಗಿ ಪ್ರತಿಭಟನೆ ನಡೆಸುತ್ತಿದ್ದೆವು. ಪ್ರತಿಭಟನೆಯು ಪಕ್ಷದ ನಿಲುವು ಮತ್ತು ಸ್ಪೀಕರ್ ವಿರುದ್ಧ ಹೋಗುವ ಯಾವುದೇ ಉದ್ದೇಶ ಇರಲಿಲ್ಲ ಎಂದು ನಾವು ಸ್ಪಷ್ಟಪಡಿಸಿದ್ದೇವೆ ಎಂದು ಅಶೋಕ್ ಹೇಳಿದರು.

ಸ್ಪೀಕರ್ ನಮ್ಮ ಮನವಿಗೆ ಗೌರವಯುತವಾಗಿ ಪ್ರತಿಕ್ರಿಯಿಸಿದರು ಮತ್ತು ಈ ವಿಷಯವನ್ನು ಪರಿಶೀಲಿಸುವುದಾಗಿ ಹಾಗೂ ಕಾನೂನು ಸಚಿವರೊಂದಿಗೆ ಚರ್ಚಿಸಿದ ನಂತರ ತಮ್ಮ ಅಭಿಪ್ರಾಯ ತಿಳಿಸುವುದಾಗಿ ಹೇಳಿದರು ಎಂದರು.

ವಿಧಾನಸಭಾ ಅಧಿವೇಶನವು ಸುಗಮವಾಗಿ ನಡೆಯಬೇಕೆಂದು ಸ್ಪೀಕರ್ ಬಯಸುವುದಾಗಿ ಮತ್ತು ಅಂತಿಮ ನಿರ್ಧಾರ ತೆಗೆದುಕೊಳ್ಳುವ ಮೊದಲು ಸರ್ಕಾರದೊಂದಿಗೆ ಸಮಾಲೋಚಿಸುವುದಾಗಿ ಹೇಳಿದರು. ಅವರ ಪ್ರತಿಕ್ರಿಯೆ ಸಕಾರಾತ್ಮಕವಾಗಿತ್ತು ಎಂದು ಅಶೋಕ್ ತಿಳಿಸಿದರು.

ರಾಜ್ಯದ ನಾಲ್ವರು ಸೇರಿ ಏಳು ಹೈಕೋರ್ಟ್ ನ್ಯಾಯಮೂರ್ತಿಗಳ ವರ್ಗಾವಣೆ

ಬೆಂಗಳೂರು, ಏ.21– ನಾಲ್ವರು ಕರ್ನಾಟಕ ಹೈಕೋರ್ಟ್ ನ್ಯಾಯಮೂರ್ತಿಗಳು ಸೇರಿದಂತೆ ಒಟ್ಟು ಏಳು ಹೈಕೋರ್ಟ್ ನ್ಯಾಯಮೂರ್ತಿಗಳನ್ನು ವರ್ಗಾವಣೆ ಮಾಡಲಾಗಿದೆ. ಸುಪ್ರೀಂಕೋರ್ಟ್ ಕೊಲಿಜಿಯಂನಿಂದ ಕೇಂದ್ರ ಸರ್ಕಾರಕ್ಕೆ ಶಿಫಾರಸು ಹಿನ್ನಲೆ ವರ್ಗಾವಣೆ ಮಾಡಿ ಸೋಮವಾರ ಆದೇಶ ಹೊರಡಿಸಲಾಗಿದೆ. ಹೈಕೋರ್ಟ್ ಆಡಳಿತದ ಗುಣಮಟ್ಟವನ್ನು ಬಲಪಡಿಸುವ ಉದ್ದೇಶಕ್ಕೆ ವರ್ಗಾವಣೆ ಮಾಡಲಾಗಿದೆ ಎಂದು ವರದಿಯಾಗಿದೆ.

ಸುಪ್ರೀಂಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಅಧ್ಯಕ್ಷತೆಯಲ್ಲಿ ಏ.15 ಮತ್ತು 19 ರಂದು ನಡೆದ ಸಭೆಗಳಲ್ಲಿ ನ್ಯಾಯಾಲಯಗಳ ನ್ಯಾಯಾಧೀಶರ ವರ್ಗಾವಣೆಗೆ ಶಿಫಾರಸು ಮಾಡಲಾಗಿತ್ತು. ನ್ಯಾಯಮೂರ್ತಿ ಸಂಜೀವ್ ಖನ್ನಾ ಹೇಳಿಕೆ ಪ್ರಕಾರ, ಹೈಕೋರ್ಟ್ ಆಡಳಿತ ವ್ಯವಸ್ಥೆ ಗುಣಮಟ್ಟವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ವರ್ಗಾವಣೆ ಮಾಡಲಾಗಿದೆ ಎಂದು ತಿಳಿಸಲಾಗಿದೆ.

ಯಾರೆಲ್ಲಾ ವರ್ಗಾವಣೆ ಮತ್ತು ಎಲ್ಲಿಗೆ: ನ್ಯಾ. ಹೇಮಂತ್ ಚಂದನ ಗೌಡರ್ ಕರ್ನಾಟಕ ಹೈಕೋರ್ಟ್‌ನಿಂದ ಮದ್ರಾಸ್ ಹೈಕೋರ್ಟ್‌ಗೆ, ನ್ಯಾ.ಕೃಷ್ಣನ್ ನಟರಾಜನ ಕರ್ನಾಟಕ ಹೈಕೋರ್ಟ್‌ನಿಂದ ಕೇರಳ ಹೈಕೋರ್ಟ್‌ಗೆ, ನ್ಯಾ. ಎನ್. ಶ್ರೀನಿವಾಸ ಸಂಜಯ್ ಗೌಡ ಕರ್ನಾಟಕ ಹೈಕೋರ್ಟ್‌ನಿಂದ ಗುಜರಾತ್ ಹೈಕೋರ್ಟ್‌ಗೆ, ನ್ಯಾ. ಕೃಷ್ಣ ದೀಕ್ಷಿತ್ ಕರ್ನಾಟಕ ಹೈಕೋರ್ಟ್‌ನಿಂದ ಒಡಿಶಾ ಹೈಕೋರ್ಟ್‌ಗೆ, ನ್ಯಾ. ಪೆರುಗು ಶ್ರೀಸುಧ ತೆಲಂಗಾಣ ಹೈಕೋರ್ಟ್‌ನಿಂದ ಕರ್ನಾಟಕ ಹೈಕೋರ್ಟ್‌ಗೆ, ನ್ಯಾ. ಕೆ.ಸುರೇಂದರ್ ತೆಲಂಗಾಣ ಹೈಕೋರ್ಟ್‌ನಿಂದ ಮದ್ರಾಸ್ ಹೈಕೋರ್ಟ್‌ಗೆ, ನ್ಯಾ. ಡಾ.ಕೆ. ಮನ್ಮಥ ರಾವ್, ಆಂಧ್ರಪ್ರದೇಶ ಹೈಕೋರ್ಟ್‌ನಿಂದ ಕರ್ನಾಟಕ ಹೈಕೋರ್ಟ್‌ಗೆ ವರ್ಗಾವಣೆ ಮಾಡಲಾಗಿದೆ.

ಇತ್ತ ಸುಪ್ರೀಂಕೋರ್ಟ್ ಶಿಫಾರಸಿಗೆ ಬೆಂಗಳೂರು ವಕೀಲರ ಸಂಘ ಆಕ್ಷೇಪ ವ್ಯಕ್ತಪಡಿಸಿದೆ. ದಕ್ಷ ನ್ಯಾಯಮೂರ್ತಿಗಳನ್ನು ಬೇರೆ ರಾಜ್ಯಕ್ಕೆ ವರ್ಗಾಯಿಸದಂತೆ ಒತ್ತಾಯಿಸಿದೆ.

ಬಿಜೆಪಿಗೆ ನೇಮಕ



ಮೈಸೂರು, ಏ.21– ಮೈಸೂರಿನ ಸಿದ್ಧಾರ್ಥ ನಗರ ನಿವಾಸಿ ಆರ್.ಶಂಕರ್ ಅವರನ್ನು ಮೈಸೂರು ನಗರ (ಜಿಲ್ಲೆ) ಎಸ್‌ಸಿ ಮೋರ್ಚಾ ಖಜಾಂಚಿಯಾಗಿ ಅಧ್ಯಕ್ಷ ವಿ.ಶೈಲೇಂದ್ರ ನೇಮಕ ಮಾಡಿದ್ದಾರೆ.

ಅಂಬೇಡ್ಕರ್ ಅವಮಾನಿಸಿದವರ ವಿರುದ್ಧ ದೇಶದ್ರೋಹ ಪ್ರಕರಣ ದಾಖಲಿಸಲು ಆಗ್ರಹ

ಮೈಸೂರು, ಏ.21(ಜಿಎ)–ವರುಣ ವಿಧಾನಸಭಾ ಕ್ಷೇತ್ರದ ವಾಜಮಂಗಲ ಗ್ರಾಮದಲ್ಲಿ ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಮಾಡಲಾದ ಅವಮಾನವು ಇಡೀ ದೇಶಕ್ಕಾದ ಅವಮಾನ. ಕೂಡಲೇ ಆರೋಪಿಗಳ ವಿರುದ್ಧ ದೇಶದ್ರೋಹ ಪ್ರಕರಣ ದಾಖಲಿಸಿ ಕ್ರಮಕ್ಕೆ ಮುಂದಾಗಬೇಕು ಎಂದು ಬಹುಜನ ಸಮಾಜ ಪಾರ್ಟಿ(ಬಿಎಸ್‌ಪಿ) ರಾಜ್ಯಾಧ್ಯಕ್ಷ ಎಂ.ಕೃಷ್ಣಮೂರ್ತಿ ಆಗ್ರಹಿಸಿದ್ದಾರೆ.



ಕೃಷ್ಣಮೂರ್ತಿ

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪೊಲೀಸ್ ಇಲಾಖೆ ಘಟನೆಯನ್ನು ಗಂಭೀರವಾಗಿ ತೆಗೆದುಕೊಂಡಿಲ್ಲ. ಸಾಮಾನ್ಯ ಪ್ರಕರಣದಂತೆ ಎಫ್‌ಐಆರ್ ದಾಖಲಿಸಿದ್ದಾರೆ. ಎಂಟು ದಿನದೊಳಗೆ ಆರೋಪಿಗಳನ್ನು ಬಂಧಿಸಿ ಸೂಕ್ತ ಎಫ್‌ಐಆರ್ ದಾಖಲಿಸದಿದ್ದರೆ ಪ್ರತಿಭಟನೆಗೆ ಮುಂದಾಗುತ್ತೇವೆ ಎಂದು ಎಚ್ಚರಿಸಿದರು.

ಮುಖ್ಯಮಂತ್ರಿ ತವರು ಕ್ಷೇತ್ರದಲ್ಲಿಯೇ ಇಂಥ ಘಟನೆ ನಡೆದಿದ್ದರೂ ನಿರ್ಲಕ್ಷ್ಯ ತೋರಲಾಗುತ್ತಿದೆ. ಸಿದ್ದರಾಮಯ್ಯ ಅವರು ಹಾಗೂ ಗೃಹಮಂತ್ರಿ ಜಿ.ಪರಮೇಶ್ವರ್ ಅವರು ಸ್ಥಳಕ್ಕೆ ಭೇಟಿ ನೀಡಿ ಪೊಲೀಸ್ ಇಲಾಖೆಯಲ್ಲಿ ಸಂವೇದನೆ ಜಾಗೃತಗೊಳಿಸಬೇಕು. ಈವರೆಗೆ ಅಂಬೇಡ್ಕರ್ ಭಾವಚಿತ್ರ, ಪ್ರತಿಮೆಗಳ ಮೇಲೆ ನಡೆದ ಹಲ್ಲೆ, ವಿಕೃತಿಗಳ ಬಗ್ಗೆಯೂ ಶ್ವೇತಪತ್ರ ಹೊರಡಿಸಬೇಕು ಎಂದು ಆಗ್ರಹಿಸಿದರು. ಗೋಷ್ಠಿಯಲ್ಲಿ ಪಕ್ಷದ ಜಿಲ್ಲಾ ಘಟಕದ ಅಧ್ಯಕ್ಷ ಪಿ.ಚಂದ್ರಶೇಖರ್, ಪ್ರಧಾನ ಕಾರ್ಯದರ್ಶಿ ಎಚ್.ಗಂಗಾಧರ್, ಜಿಲ್ಲಾ ಉಸ್ತುವಾರಿ ಬಸವಣ್ಣ ದಂಡಿಕೆರೆ, ಜಿಲ್ಲಾ ಸಂಯೋಜಕ ಬಿ.ಮಹದೇವಸ್ವಾಮಿ, ಚಾಮುಂಡೇಶ್ವರಿ ಕ್ಷೇತ್ರ ಉಸ್ತುವಾರಿ ತಳೂರು ಬಸವರಾಜು ಉಪಸ್ಥಿತರಿದ್ದರು.

ಶ್ರೀ ಸ್ಥಾನಿಕವಾಸಿ ಜೈನ್ ಸಂಘಟನೆಯಿಂದ ಮಹಾವೀರ ಜಯಂತಿ ಆಚರಣೆ



ಮೈಸೂರಿನ ಶ್ರೀ ಸ್ಥಾನಿಕವಾಸಿ ಜೈನ್ ಸಂಘಟನೆ ವತಿಯಿಂದ ಭಗವಾನ್ ಮಹಾವೀರ ಜಯಂತಿ ಆಚರಿಸಲಾಯಿತು.

ಮೈಸೂರು,ಏ.21–ಮೈಸೂರಿನ ಶ್ರೀ ಸ್ಥಾನಿಕವಾಸಿ ಜೈನ್ ಸಂಘಟನೆ ವತಿಯಿಂದ ಮಹಾವೀರ ಜಯಂತಿಯನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು.

ಸಂಘಟನೆಯು ಡರ್ಲಾ ಕುಟುಂಬದ ಸಹಯೋಗದೊಂದಿಗೆ ಮೈಸೂರಿನ ಎಂಟು ಪ್ರಮುಖ ಪ್ರದೇಶಗಳಲ್ಲಿ ಅನ್ನ ಸಂತರ್ಪಣೆ ಏರ್ಪಡಿಸಲಾಗಿತ್ತು.

ಶ್ರೀ ಜಯದೇವ ಇನ್‌ಸ್ಟಿಟ್ಯೂಟ್ ಆಫ್ ಕಾರ್ಡಿಯೋವಾಸ್ಕುಲರ್ ಸೈನ್ಸಸ್ ಮತ್ತು ರಿಸರ್ಚ್ ಸೆಂಟರ್ ನಿರ್ದೇಶಕ ಡಾ.ಕೆ.ಎಸ್. ಸದಾನಂದ ಅನ್ನ ಸಂತರ್ಪಣೆಗೆ ಚಾಲನೆ ನೀಡಿದರು. ಶ್ರೀ ಸ್ಥಾನಿಕವಾಸಿ ಸಂಘಟನೆಯಿಂದ ಜಲ ಸೇವಾ ಯೋಜನೆಯಡಿ ನಗರದ ವಿವಿಧ ಪ್ರದೇಶಗಳಲ್ಲಿರುವ ಕುಡಿಯುವ ನೀರಿನ ಕೇಂದ್ರದಲ್ಲಿ ವರ್ಷವಿಡೀ ಕೋಲ್ಡ್ ಡ್ರಿಂಕಿಂಗ್ ವಾಟರ್ ಪೂರೈಕೆಗೆ ವ್ಯವಸ್ಥೆ ಮಾಡಲಾಯಿತು.

ಸಂಘಟನೆ ಅಧ್ಯಕ್ಷ ಸುಭಾಶ್‌ಚಂದಜಿ ದಾರ್ದಾ, ಕಾರ್ಯದರ್ಶಿ ಬುದ್‌ಮಲ್ ಬಾಗ್‌ಮಾರ್, ಮಾಜಿ ಅಧ್ಯಕ್ಷ ರಾಜನ್ ಬಾಗ್‌ಮಾರ್, ರಾಕೇಶ್ ಬಾಂಟಿಯಾ, ಅಧ್ಯಕ್ಷ ನವರತನ್ ಡರ್ಲಾ, ಉಪಾಧ್ಯಕ್ಷ ಕಿರಣ್ ಸಲೇಚಾ, ಕಾರ್ಯದರ್ಶಿ ರಾಜೇಂದ್ರ ದೇಸರಾಲ, ಖಜಾಂಚಿ ಆಶಿಸ್ ಪಟ್ವಾ, ಯೋಜನಾ ನಿರ್ದೇಶಕ ಪ್ರಮೋದ್ ಚೋಪ್ರಾ, ಸುರೇಶ್ ಸಲೇಚಾ, ಕೀರ್ತಿ ಚೌದರಿಮತ್ತಿತರರು ಉಪಸ್ಥಿತರಿದ್ದರು.

ಖಾಸಗಿ ಶಾಲೆಗಳ ಪ್ರವೇಶ ಮಾರ್ಗಸೂಚಿ ಸುತ್ತೋಲೆ ಬಿಡುಗಡೆ

ಬೆಂಗಳೂರು: 2025–26ನೇ ಶೈಕ್ಷಣಿಕ ವರ್ಷಕ್ಕೆ ರಾಜ್ಯದ ಎಲ್ಲಾ ಖಾಸಗಿ ಅನುದಾನಿತ ಮತ್ತು ಅನುದಾನರಹಿತ ಶಾಲೆಗಳಲ್ಲಿ ವಿದ್ಯಾರ್ಥಿಗಳ ಪ್ರವೇಶಕ್ಕಾಗಿ ಅನುಸರಿಸಬೇಕಾದ ಕಾರ್ಯವಿಧಾನಗಳನ್ನು ವಿವರಿಸುವ ಸುತ್ತೋಲೆಯನ್ನು ಶಾಲಾ ಶಿಕ್ಷಣ ಇಲಾಖೆ ಹೊರಡಿಸಿದೆ.

ಶಾಲೆಗಳು ಸ್ಪಷ್ಟ ಪ್ರವೇಶ ಅಧಿಸೂಚನೆಗಳನ್ನು ಹೊರಡಿಸಬೇಕು, ಮೀಸಲಾತಿ ನೀತಿಗಳನ್ನು ಅನುಸರಿಸಬೇಕು ಮತ್ತು ಶುಲ್ಕ ರಚನೆಗಳನ್ನು ಪಾರದರ್ಶಕವಾಗಿ ಪ್ರದರ್ಶಿಸಬೇಕು ಎಂದು ತಿಳಿಸಲಾಗಿದೆ. ಈ ಸಂಬಂಧ ಪೋಷಕರಿಗೆ ಮಾಹಿತಿ ನೀಡಬೇಕು ಹಾಗೂ ಜಿಲ್ಲೆಗಳಾದ್ಯಂತ ದೂರು ಪರಿಹಾರ ವ್ಯವಸ್ಥೆಗಳು ಜಾರಿಯಲ್ಲಿರಬೇಕು. ಎಲ್ಲಾ ಹಂತಗಳಲ್ಲಿನ ಅಧಿಕಾರಿಗಳು ಪ್ರವೇಶಗಳನ್ನು ಮೇಲ್ವಿಚಾರಣೆ ಮಾಡಲು ಕ್ರಮ ಕೈಗೊಳ್ಳಲು ನಿರ್ದೇಶಿಸಲಾಗಿದೆ.

ಎಲ್ಲಾ ಖಾಸಗಿ ಅನುದಾನಿತ ಮತ್ತು ಅನುದಾನರಹಿತ ಶಾಲೆಗಳು ಪ್ರವೇಶ ಪ್ರಕ್ರಿಯೆ ಕುರಿತು ಅಧಿಸೂಚನೆಯನ್ನು ಹೊರಡಿಸಬೇಕಾಗುತ್ತದೆ. ಇದರಲ್ಲಿ ವರ್ಗವಾರು ಸೀಟು ಲಭ್ಯತೆ, ಮೀಸಲಾತಿ ವಿವರಗಳು, ಪಠ್ಯಕ್ರಮ, ಬೋಧನಾ ಮಾಧ್ಯಮ ಮತ್ತು ಶುಲ್ಕ ರಚನೆಯನ್ನು ಒಳಗೊಂಡಿರಬೇಕು. ಸಂಸ್ಥೆಗಳ ಮುಖ್ಯಸ್ಥರು ಪ್ರವೇಶ ವೇಳಾಪಟ್ಟಿ ಮತ್ತು ಇತರ ಸಂಬಂಧಿತ ವಿವರಗಳನ್ನು ಶಾಲಾ ಸೂಚನಾ ಫಲಕದಲ್ಲಿ ಪ್ರಮುಖವಾಗಿ ಪ್ರದರ್ಶಿಸಬೇಕು.



ಶಾಲೆಗಳು ಅಧಿಕೃತವಾಗಿ ಅನುಮೋದಿಸಲಾದ ಶುಲ್ಕದ ಮೊತ್ತವನ್ನು ತಮ್ಮ ಸೂಚನಾ ಫಲಕಗಳು, ವೆಬ್‌ಸೈಟ್‌ಗಳು, SATS ಪೋರ್ಟಲ್ ಮತ್ತು ಮುದ್ರಿತ ಪ್ರಾಸ್ಪೆಕ್ಟಸ್‌ಗಳಲ್ಲಿ ಸ್ಪಷ್ಟವಾಗಿ ಪ್ರಕಟಿಸಬೇಕು. ಈ ಘೋಷಿತ ಮೊತ್ತವನ್ನು ಮೀರಿದ ಯಾವುದೇ ಶುಲ್ಕವನ್ನು ಸಂಗ್ರಹಿಸುವುದನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ. ಕ್ಷೇತ್ರ ಶಿಕ್ಷಣ ಅಧಿಕಾರಿಗಳು ಪೋಷಕರು ಮತ್ತು ಸಾರ್ವಜನಿಕರಿಂದ ಬರುವ ದೂರುಗಳನ್ನು ತ್ವರಿತವಾಗಿ ಪರಿಶೀಲಿಸಿ ಪರಿಹರಿಸಬೇಕು.

ಗಂಭೀರ ಪ್ರಕರಣಗಳನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗೆ ವರ್ಗಾಯಿಸಬೇಕು. ಪ್ರತಿ ಜಿಲ್ಲಾ ಉಪನಿರ್ದೇಶಕರ ಕಚೇರಿಯು ದೂರುಗಳನ್ನು ನಿರ್ವಹಿಸಲು ಗೊತ್ತುಪಡಿಸಿದ ನೋಡಲ್ ಅಧಿಕಾರಿ ಮತ್ತು ಸಿಬ್ಬಂದಿಯೊಂದಿಗೆ ಸಹಾಯವಾಣಿ ಸ್ಥಾಪಿಸಬೇಕು ಎಂದು ಸುತ್ತೋಲೆಯಲ್ಲಿ ತಿಳಿಸಲಾಗಿದೆ.

ಸಿಬಿಎಸ್‌ಇ–ಸಂಯೋಜಿತ ಶಾಲೆಗಳಿಗೆ, ಪ್ರವೇಶ ಪ್ರಕ್ರಿಯೆಯಲ್ಲಿ ಯಾವುದೇ ತಾರತಮ್ಯ ಮಾಡಬಾರದು ಮತ್ತು ಮೀಸಲಾತಿಗಳು ಯಾವುದಾದರೂ ಇದ್ದರೆ, ರಾಜ್ಯ ಸರ್ಕಾರದ ಅನ್ವಯವಾಗುವ ನಿಯಮಗಳಿಗೆ ಹೊಂದಿಕೆಯಾಗಬೇಕು. ಅರ್ಹ ಮಕ್ಕಳಿಗೆ ಉಚಿತ ಮತ್ತು ಕಡ್ಡಾಯ ಶಿಕ್ಷಣವನ್ನು ಒದಗಿಸುವ ಶಾಲೆಯ ಜವಾಬ್ದಾರಿ ಸೇರಿದಂತೆ ಆರ್‌ಟಿಇ ಕಾಯ್ದೆಯ ನಿಬಂಧನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಉಲ್ಲೇಖಿಸಲಾಗಿದೆ.

ಶಾಲಾ ಆಡಳಿತಕ್ಕೆ ಸಂಬಂಧಿಸಿದ ಮಾರ್ಗಸೂಚಿಗಳು ಮತ್ತು ನ್ಯಾಯಾಲಯದ ಆದೇಶಗಳು ಸೇರಿದಂತೆ ರಾಜ್ಯ ಮತ್ತು ಕೇಂದ್ರ ಕಾನೂನುಗಳನ್ನು ಪಾಲಿಸಲು ವಿಫಲವಾದರೆ 'ಸಂಬಂಧ'ವನ್ನು ಹಿಂತೆಗೆದುಕೊಳ್ಳಲು ಕಾರಣವಾಗಬಹುದು ಎಂದು ಐಸಿಎಸ್‌ಇ–ಸಂಯೋಜಿತ ಶಾಲೆಗಳಿಗೆ ಎಚ್ಚರಿಕೆ ನೀಡಲಾಗಿದೆ.

ನಾಳೆಯಿಂದ ಭಗಿನಿ ಸಂಗೀತೋತ್ಸವ

ಮೈಸೂರು, ಏ.21(ಜಿಎ)–ಮೈಸೂರಿನ ಕೃಷ್ಣಮೂರ್ತಿಪುರಂನ ಬಿಎಸ್‌ಎಸ್ ವಿದ್ಯೋದಯ ಶಾಲೆ ಸಭಾಂಗಣದಲ್ಲಿ ಏ.23ರಿಂದ 29ರವರೆಗೆ ಪ್ರತಿ ದಿನ ಸಂಜೆ 6ರಿಂದ ರಾತ್ರಿ 9ರವರೆಗೆ ಭಗಿನಿ ಸಂಗೀತೋತ್ಸವ ಆಯೋಜಿಸಲಾಗಿದೆ ಎಂದು ವಿದ್ಯೋದಯದ ಟ್ರಸ್ಟ್‌ನ ಕಾರ್ಯದರ್ಶಿ ವಾಸುದೇವ್ ಭಟ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಏ.23ರಂದು ಸಂಜೆ 5.30ಕ್ಕೆ ಪೇಜಾವರ ಮಠದ ವಿಶ್ವಪ್ರಸನ್ನ ತೀರ್ಥ ಸ್ವಾಮೀಜಿ ಕಾರ್ಯಕ್ರಮ ಉದ್ಘಾಟಿಸುವರು. ಶಾಲೆಯಲ್ಲಿ ನಿರ್ಮಿಸಲಾದ ಪದ್ಮಜಾ ಶ್ರೀನಿವಾಸ್ ಸಭಾಂಗಣ, ಗಣಿತ ಮತ್ತು ಕಂಪ್ಯೂಟರ್ ಪ್ರಯೋಗಾಲಯ, ವರ್ಡ್ಸ್ ವರ್ಲ್ಡ್ ಗ್ರಂಥಾಲಯ, ಚೆಸ್ ಕೊಠಡಿ, ಆನಂದ ಕಕ್ಷದ ಉದ್ಘಾಟನೆ ನೆರವೇರಲಿದೆ ಎಂದರು. 7 ದಿನಗಳ ಸಂಗೀತೋತ್ಸವದಲ್ಲಿ ವಿವಿಧ ಭಾಗದಿಂದ ಆಗಮಿಸುವ ವಿದ್ವಾಂಸರು ಕಾರ್ಯಕ್ರಮ ನಡೆಸಿಕೊಡಲಿದ್ದಾರೆ. ಸಾರ್ವಜನಿಕರಿಗೆ ಉಚಿತ ಪ್ರವೇಶ ಇರಲಿದೆ ಎಂದರು. ಗೋಷ್ಠಿಯಲ್ಲಿ ಶಾಲೆ ಟ್ರಸ್ಟಿ ಕೆ.ಎಸ್.ಗುರುರಾಜ್ ಉಪಸ್ಥಿತರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

22.04.2025 ಮಂಗಳವಾರ, ಮಳೆ ನಕ್ಷತ್ರ: ಅಶ್ವಿನಿ 13.04.2025 ರಿಂದ 26.04.2025
ವಿಶ್ವವಸು ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ಚೈತ್ರ ಮಾಸ, ಕೃಷ್ಣ ಪಕ್ಷ,
ತಿಥಿ: ನವಮಿ, ನಕ್ಷತ್ರ: ಶ್ರವಣ, ರಾಹುಕಾಲ: ಮಧ್ಯಾಹ್ನ 3 ರಿಂದ 4.30 ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಯಕೃತ್ತಿನ ಸಮಸ್ಯೆಗೆ ಚಿಕಿತ್ಸಾ ಶಿಬಿರ, ಕುತ್ತಿಗೆ ಮತ್ತು ಬೆನ್ನು ನೋವಿಗೆ ಆಕ್ಯೂಪಂಕ್ಚರ್ ಮತ್ತು ಯೋಗ ಶಿಬಿರ, ಬೊಜ್ಜು ನಿವಾರಣಾ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ ಆವರಣ, ಲಲಿತಾದ್ರಿ ರಸ್ತೆ, ಆಲನಹಳ್ಳಿ, ಬೆಳಗ್ಗೆ 9 ರಿಂದ

■ **ಕಾವೇರಿ ಆಯುರ್ವೇದ ಆಸ್ಪತ್ರೆ :** ಮಕ್ಕಳ ಆರೋಗ್ಯ ತಪಾಸಣೆ ಮತ್ತು ಚಿಕಿತ್ಸಾ ಶಿಬಿರ, ಚರ್ಮರೋಗ ಕುರಿತು ಚಿಕಿತ್ಸೆ ಹಾಗೂ ಪುನಶ್ಚೇತನ (ರೆಜುವಿನೇಷನ್) ಚಿಕಿತ್ಸಾ ಶಿಬಿರ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 10 ರಿಂದ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಆಸ್ಪತ್ರೆಯ ಶಾಲಾಕ್ಯತಂತ್ರ ಸ್ನಾತಕೋತ್ತರ ವಿಭಾಗದ ವತಿಯಿಂದ ನೇತ್ರ, ಕಿವಿ, ಮೂಗು, ಗಂಟಲು ಮತ್ತು ಶಿರೋರೋಗಗಳ ತಪಾಸಣೆ ಹಾಗೂ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಕಾನೂನು ಮಹಾವಿದ್ಯಾಲಯ, ಕುವೆಂಪುನಗರ, ಬೆಳಗ್ಗೆ 10 ರಿಂದ.

■ **ಸೇಂಟ್ ಫಿಲೋಮಿನಾ ಕಾಲೇಜು :** ಪದವೀಧರರ ದಿನಾಚರಣೆ, ಅಧ್ಯಕ್ಷತೆ : ಕಾಲೇಜು ಅಧ್ಯಕ್ಷ ರೆ. ಡಾ. ಬರ್ನಾಡ್ ಮೊರಾಸ್, ಮುಖ್ಯ ಅತಿಥಿಗಳು : ರೆ. ಡಾ. ಲೂರ್ದು ಪ್ರಸಾದ್ ಜೋಸೆಫ್, ಪ್ರಾದೇಶಿಕ ಜಂಟಿ ನಿರ್ದೇಶಕ ಡಾ. ಬಿ. ಚಂದ್ರಶೇಖರ, ಪ್ರಿನ್ಸಿಪಾಲ್ ಡಾ. ರವಿ ಜೆ.ಡಿ. ಸಲ್ಡಾನಾ, ಸ್ಥಳ: ಒಳಾಂಗಣ ಕ್ರೀಡಾಂಗಣ, ಕಾಲೇಜು ಆವರಣ, ಬೆಳಗ್ಗೆ 10ಕ್ಕೆ

■ **ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ, ಬೆಂಗಳೂರು :** ಲೆಕ್ಕ ಪರಿಶೋಧನಾ ವರದಿ ಸಿದ್ಧತೆ ಮತ್ತು ಪೂರ್ವ ಪ್ರಕ್ರಿಯೆಗಳು ಹಾಗೂ ಸಾಲ ವಸೂಲಾತಿ ಮತ್ತು ದಾವಾ ದಾಖಲಾತಿ ತರಬೇತಿ, ಉದ್ಘಾಟನೆ : ಸಹಕಾರ ಸಂಘಗಳ ಲೆಕ್ಕ ಪರಿಶೋಧನಾ ಜಂಟಿ ನಿರ್ದೇಶಕ ಎಂ. ರವಿ, ಅಧ್ಯಕ್ಷತೆ : ಮೈಸೂರು, ಮಂಡ್ಯ ಮತ್ತು ಕೊಡಗು ಜಿಲ್ಲಾ ಸೌಹಾರ್ದ ಸಹಕಾರಿಗಳ ಒಕ್ಕೂಟದ ಅಧ್ಯಕ್ಷ ಎಸ್.ಆರ್. ನಾರಾಯಣರಾವ್, ಮುಖ್ಯ ಅತಿಥಿಗಳು : ಬೀರೇಂದ್ರ, ಬಿ.ಟಿ. ಗುರುರಾಜ್, ಬಿ.ಎನ್. ಚಂದ್ರಶೇಖರ್, ಸ್ಥಳ: ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್, ಎಸ್.ಪಿ. ಭಟ್ ಹಾಲ್, ಜೆಎಲ್‌ಬಿ ರಸ್ತೆ, ಬೆಳಗ್ಗೆ 10.30ಕ್ಕೆ

■ **ಕಲಾ ಸೌರಭ :** ಕರ್ನಾಟಕ ಶಾಸ್ತ್ರೀಯ ಸಂಗೀತ ಅಧ್ಯಯನ ಶಿಬಿರ, ರಾಗಸೌರಭ, ವಿದ್ವಾನ್ ಎ. ಚಂದನ್‌ಕುಮಾರ್ ಅವರಿಂದ ಬೇಗಡೆ ರಾಗದ ರಚನೆ ಮತ್ತು ಮನೋಧರ್ಮ ಸಂಗೀತ, ಸ್ಥಳ: 298, 8ನೇ ಅಡ್ಡ ರಸ್ತೆ, ಇ ಅಂಡ್ ಎಫ್ ಬ್ಲಾಕ್, ರಾಮಕೃಷ್ಣನಗರ, ಸಂಜೆ 4ಕ್ಕೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತುಸಂಜೆ 6.10 ಶ್ರದ್ಧೆಯ ಶಿಲ್ಪ–ಕರ್ನಾಟಕದ ಪ್ರಾಚೀನ ದೇವಾಲಯಗಳ ಪರಿಚಯ ಮಾಲಿಕೆ, ಲೇಖನ ಮತ್ತು ಪ್ರಸ್ತುತಿ: ಟಿ.ಎಸ್. ಗೋಪಾಲ್, ಪ್ರಾಯೋಜಕರು: ಅದಮ್ಯ ಚೇತನ ಫೌಂಡೇಶನ್, ಬೆಂಗಳೂರು, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ – ಕೆ.ಬಿ. ಸುನೀತಾ ಆಚಾರ್ಯ, ಬಿ.ಶ್ರೀರಾಂ ಭಟ್, ಕೆ.ಬಿ.ರೇವತಿ, ವ್ಯಾಖ್ಯಾನ – ಡಾ. ಜಿ.ಆರ್. ತಿಪ್ಪೇಸ್ವಾಮಿ, 6.50 ರೈತರಿಗೆ ಸಲಹೆ, 7.15 ಕಾದಂಬರಿ ವಿಹಾರ:ಎಂ. ಆರ್. ಶ್ರೀನಿವಾಸಮೂರ್ತಿಯವರ ರಂಗಣ್ಣನ ಕನಸಿನ ದಿನಗಳು ಕಾದಂಬರಿಯ ಬಾನುಲಿ ಓದು.ಪ್ರಸ್ತುತಿ: ಉಮೇಶ್. ಎಸ್.ಎಸ್., 8.30 ಯೋಗ ಕುರಿತ ವಿಶೇಷ ಸರಣಿ ಮಹಾಯೋಗ, 8.35 ಕರೆಗೊಂದು ಗೀತೆ–ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ನೇರ ಫೋನ್ ಇನ್ ಕಾರ್ಯಕ್ರಮ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ :ಪ್ರೊ.ಆರ್. ವಿಶ್ವೇಶ್ವರನ್–ವೀಣಾ ವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ಕಥೆಯಲ್ಲಿದೆ ಉತ್ತರ, ಪ್ರಸ್ತುತಿ : ಪ್ರಭುಸ್ವಾಮಿ ಮಳಿಮಠ್ ಹಾಗೂ ಕಾರ್ತಿಕ್. ಎಂ. ಎಸ್

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಕನ್ನಡದಲ್ಲಿ ಭಾಷಣ, 1.00 ಪ್ರಗತಿ ಪಥ–ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು–ಮಾಲತಿಶರ್ಮ, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಮಧುರೈ ಟಿ. ಎನ್. ಶೇಷಗೋಪಾಲನ್ – ಹಾಡುಗಾರಿಕೆ, 4.00 ಕಥಾಕಾಲಕ್ಷೇಪ, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ – ಕಿಸಾನ್‌ವಾಣಿ–ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ. ಶುಂಠಿ ಬೇಸಾಯ ಈ ಕುರಿತು ನಂಜನಗೂಡು ತಾಲೂಕು ಬಸವನಪುರ ಗ್ರಾಮದ ಬಿ.ಎನ್. ಹೇಮಂತ್ ಕುಮಾರ್ ಅವರೊಂದಿಗೆ ಸಂದರ್ಶನ, ಸಂದರ್ಶಕರು: ಎನ್. ಕೇಶವಮೂರ್ತಿ, 7.45 ಮೈಸೂರು ಜಂಕ್ಷನ್–ಸಾಪ್ತಾಹಿಕ ಸಂಚಿಕೆ, ಪ್ರಸ್ತುತಿ : ಜಾಂಪಣ್ಣ ಆಶೀಹಾಳ್, 8.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ : ಹರಿಪ್ರಸಾದ್ ಚೌರಾಸಿಯಾ – ಕೊಳಲುವಾದನ, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ: ಆರ್. ವೇದವಲ್ಲಿ–ಹಾಡುಗಾರಿಕೆ, 10.00 ಚೈತ್ರವನ–ಲಕ್ಷ್ಮೀಶನ ಜೈಮಿನಿ ಭಾರತದ ಸಮಗ್ರ ವಾಚನ ಹಾಗೂ ವ್ಯಾಖ್ಯಾನ, ಪ್ರಸ್ತುತಿ : ಡಾ. ಎ. ಎಸ್. ಶಂಕರನಾರಾಯಣ, 10.30 ಸವಿನೆನಪು–ಹಳೆಯ ಕನ್ನಡ ಚಿತ್ರಗೀತೆಗಳು

■ **ಡಾ. ವಿ. ಲಕ್ಷ್ಮೀನಾರಾಯಣ ಚಿಂತನ ಮಂಥನ ವೇದಿಕೆ, ಪಿಯುಸಿಎಲ್ ಮೈಸೂರು – ಕರ್ನಾಟಕ ಮಹಿಳಾ ದೌರ್ಜನ್ಯ ವಿರೋಧಿ ಒಕ್ಕೂಟ :** ಡಾ. ವಿ. ಲಕ್ಷ್ಮೀನಾರಾಯಣ ಅವರ ಸಂಸ್ಮರಣಾ ದಿನ, ರಷ್ಯಾ ಕ್ರಾಂತಿಯ ನಾಯಕ ವ್ಲಾಡಿಮಿರ್ ಲೆನಿನ್ 155ನೇ ಜನ್ಮ ದಿನ, ಸಿಪಿಐ ಎಂಎಲ್ ಲಿಬರೇಷನ್ ಸಂಸ್ಥಾಪನಾ ದಿನ, ಅಧ್ಯಕ್ಷತೆ : ನಿವೃತ್ತ ಪ್ರಾಧ್ಯಾಪಕ ಪ್ರೊ. ಕಾಳಚನ್ನೇಗೌಡ, ನುಡಿನಮನ : ನಾ. ದಿವಾಕರ್, ಪ್ರಾಸ್ತಾವಿಕ ನುಡಿ : ಡಾ. ಇ. ರತಿರಾವ್, ಉಪಸ್ಥಿತರು : ರಂಗಕರ್ಮಿ ಕೆ.ಆರ್. ಸುಮತಿ, ಕೆ. ಸುಶೀಲ, ಕಾಂ. ಪಿ.ಆರ್.ಎಸ್. ಮಣಿ, ಬಿ.ಆರ್. ಮಂಜುನಾಥ್, ಕೆ.ವೆಂಕಟರಾಜು, ಸ್ಥಳ: ಶ್ಯಾಗಲೆ ಹೌಸ್, ಶಿವರುದ್ರಮ್ಮ ಟ್ರಸ್ಟ್, ಕಾಂಟೂರ್ ರಸ್ತೆ, ಗೋಕುಲಂ 3ನೇ ಹಂತ, ಸಂಜೆ 4 ರಿಂದ.

■ **ಅರಳಿಕಟ್ಟೆ ಶ್ರೀರಾಮ ದೇವಸ್ಥಾನ ಧಾರ್ಮಿಕ ಮತ್ತು ದಾನದತ್ತಿ :** ಶ್ರೀರಾಮಚಂದ್ರನಿಗೆ ಶಯನೋತ್ಸವ, ಜಯಲಕ್ಷ್ಮಿಪುರಂ ಸತ್ಯಧ್ಯಾನ ಭಜನಾ ಮಂಡಳಿಯಿಂದ ಭಜನೆ, ಸ್ಥಳ:ದೇವಸ್ಥಾನದ ಆವರಣ, ಸಂಜೆ

■ **ದಿವ್ಯ ಜೀವನ ಸಂಘ ಮಹಿಳಾ ಶಾಖೆ :** ಡಾ. ಕೆ.ಎಲ್. ಪ್ರಸನ್ನಾಕ್ಷಿ ಅವರಿಂದ ಕುಲಶೇಖರ ಆಳ್ವಾರ್ ವಿರಚಿತ ಮುಕುಂದ ಮಾಲಾ ಪ್ರವಚನ, ಸ್ಥಳ: ಶಿವಾನಂದ ಜ್ಞಾನಾಲಯ, ಜೆಎಲ್‌ಬಿ ರಸ್ತೆ, ಸಂಜೆ 6 ರಿಂದ.

ಮೈಸೂರಲ್ಲೂ ವ್ಯಾಪಕವಾಗಿದೆ ಬೆಟ್ಟಿಂಗ್ ದಂಧೆ

ಕ್ರಿಕೆಟ್ ಬೆಟ್ಟಿಂಗ್: ಆರು ಮಂದಿ ಬಂಧನ

ಮೈಸೂರು, ಏ.21(ಎಸ್‌ಬಿಡಿ)– ಮೈಸೂರಿನಲ್ಲಿ ಆನ್‌ಲೈನ್ ಕ್ರಿಕೆಟ್ ಬೆಟ್ಟಿಂಗ್ ವ್ಯಾಪಕವಾಗುತ್ತಿದ್ದು, ವಿದ್ಯಾರ್ಥಿಗಳು ಹಾಗೂ ಯುವಕರು ಬಲಿಯಾಗುತ್ತಿದ್ದಾರೆ.

ಕ್ರಿಕೆಟ್ ಅಭಿಮಾನಿಗಳು ಐಪಿಎಲ್ ಪಂದ್ಯಾವಳಿಯನ್ನು ಹಬ್ಬದ ರೀತಿ ಸಂಭ್ರಮಿಸುವುದರ ನಡುವೆ ಕಾನೂನು ಬಾಹಿರವಾಗಿ ಆ್ಯಪ್‌ಗಳ ಮೂಲಕ ಯುವ ಸಮುದಾಯವನ್ನು ಕ್ರಿಕೆಟ್ ಬೆಟ್ಟಿಂಗ್ ಖೆಡ್ಡಾಕ್ಕೆ ಬೀಳಿಸಲಾಗುತ್ತಿದೆ. ಎಲ್ಲೆಂದರಲ್ಲಿ ಮೊಬೈಲ್ ಹಿಡಿದು, ಬಾಲ್ ಟು ಬಾಲ್ ಬೆಟ್ಟಿಂಗ್ ಆಡುವ ಮೂಲಕ ಸಾಲದ ಸುಳಿಗೆ ಸಿಲುಕುತ್ತಿದ್ದಾರೆ. ಇದರಿಂದ ಯುವಕರ ಜೀವನ ಹಾಳಾಗುವುದರ ಜೊತೆಗೆ ಕೌಟುಂಬಿಕ ಕಲಹಗಳಾಗುತ್ತಿವೆ.

ಆರು ಮಂದಿ ಬಂಧನ: ನಜರ್‌ಬಾದ್ ಪೊಲೀಸ್ ಠಾಣಾ ವ್ಯಾಪ್ತಿಯ ಯರಗನಹಳ್ಳಿ ಮುಖ್ಯರಸ್ತೆ, ಎಸ್‌ಆರ್‌ಟಿ ಮಾಳದ ಎದುರಿಗಿರುವ ಗ್ಯಾಸ್ ಸ್ಟೌವ್ ರಿಪೇರಿ ಶಾಪ್‌ನಲ್ಲಿ ಆನ್‌ಲೈನ್‌ನಲ್ಲಿ ಕ್ರಿಕೆಟ್ ಬೆಟ್ಟಿಂಗ್ ಆಡುತ್ತಿದ್ದ ಯುವಕನನ್ನು ಸಿಸಿಬಿ ಪೊಲೀಸರು ಬಂಧಿಸಿ, ಮೊಬೈಲ್ ವಶಪಡಿಸಿಕೊಂಡಿದ್ದಾರೆ. ಆಲನಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯ ಕಾವೇರಿ ಎನ್‌ಕ್ಲೇವ್ ರಸ್ತೆಯಲ್ಲಿ ಕ್ರಿಕೆಟ್ ಬೆಟ್ಟಿಂಗ್‌ನಲ್ಲಿ ತಲ್ಲೀನರಾಗಿದ್ದ ಇಬ್ಬರನ್ನು ಆಲನಹಳ್ಳಿ ಪೊಲೀಸರು ಬಂಧಿಸಿ, ಮೊಬೈಲ್‌ಗಳನ್ನು ವಶಪಡಿಸಿಕೊಂಡಿದ್ದು, ಈ ಸಂಬಂಧ ಸಿಬ್ಬಂದಿ ಚೆನ್ನಬಸಪ್ಪ ನೀಡಿದ ದೂರಿನನ್ವಯ ಪ್ರಕರಣ ದಾಖಲಾಗಿದೆ. ಹೆಬ್ಬಾಳು ಕೈಗಾರಿಕಾ ಪ್ರದೇಶದ ಡಾಬಾವೊಂದರಲ್ಲಿ ಆನ್‌ಲೈನ್ ಕ್ರಿಕೆಟ್ ಬೆಟ್ಟಿಂಗ್‌ನಲ್ಲಿ ತೊಡಗಿದ್ದ ಮೂವರನ್ನು ಸಿಸಿಬಿ ಸಬ್‌ಇನ್ಸ್‌ಪೆಕ್ಟರ್ ರಾಜು ಕೋನಹೇರಿ ಹಾಗೂ ಸಿಬ್ಬಂದಿ ಬಂಧಿಸಿದ್ದಾರೆ.

ಹೋಟೆಲ್, ರೆಸ್ಟೋರೆಂಟ್, ಅಂಗಡಿಗಳ ಮುಂದೆ ದೀರ್ಘ ಸಮಯ ಕುಳಿತುಕೊಳ್ಳುವವರ ಮೇಲೆ ವ್ಯಾಪಾರಿಗಳು ನಿಗಾ ಇಡಬೇಕು. ಆನ್‌ಲೈನ್ ಕ್ರಿಕೆಟ್ ಬೆಟ್ಟಿಂಗ್ ಆಡುತ್ತಿರುವ ಬಗ್ಗೆ ತಿಳಿದರೆ ಅಥವಾ ಅನುಮಾನ ಬಂದರೆ ಕೂಡಲೇ ಪೊಲೀಸರಿಗೆ ಮಾಹಿತಿ ನೀಡಬೇಕು. ಆನ್‌ಲೈನ್ ಕ್ರಿಕೆಟ್ ಬೆಟ್ಟಿಂಗ್ ಕಾನೂನು ಬಾಹಿರ ಮಾತ್ರವಲ್ಲ ಸಮಾಜಕ್ಕೆ ಅಪಾಯಕಾರಿಯೂ ಹೌದು. ಯುವ ಸಮುದಾಯ ಈ ಬೆಟ್ಟಿಂಗ್ ಜಾಲಕ್ಕೆ ಸಿಲುಕದಂತೆ ಎಚ್ಚರವಹಿಸಬೇಕಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ವಂಚಕರ ಮಾತಿಗೆ ಮರುಳಾಗಿ ಆನ್‌ಲೈನ್‌ನಲ್ಲಿ 3 ಲಕ್ಷ ಕಳೆದುಕೊಂಡ ಗುತ್ತಿಗೆದಾರ

ಮೈಸೂರು, ಏ.21(ಎಸ್‌ಬಿಡಿ)– ಆನ್‌ಲೈನ್ ವಂಚಕರ ಮಾತು ನಂಬಿ ಗುತ್ತಿಗೆದಾರರೊಬ್ಬರು ಸುಮಾರು 3 ಲಕ್ಷ ರೂ. ಕಳೆದುಕೊಂಡಿದ್ದಾರೆ.

ಕ್ರೈಂ ಬಾಕ್ಸ್

ಮೈಸೂರಿನ ಕೆ.ಎನ್.ಪುರದ ಗುತ್ತಿಗೆದಾರರೊಬ್ಬರು ಷೇರು ಮಾರುಕಟ್ಟೆ ಬಗ್ಗೆ ಆಸಕ್ತಿ ಇದ್ದ ಕಾರಣ ಅಪರಿಚಿತ ಟೆಲಿಗ್ರಾಂ ಖಾತೆಯಿಂದ ಬಂದ ಲಿಂಕ್ ಮೇಲೆ ಕ್ಲಿಕ್ ಮಾಡಿದ್ದಾರೆ. ಬಳಿಕ ಷೇರು ಮಾರುಕಟ್ಟೆ ಬಗ್ಗೆ ಯಥೇಚ್ಛ ಮಾಹಿತಿ ದೊರೆತಿದೆ. ಇವರ ಆಸಕ್ತಿ ಗಮನಿಸಿದ ವಂಚಕರು ವಾಟ್ಸಾಪ್ ಮೂಲಕ ಸಂಪರ್ಕಕ್ಕೆ ಬಂದಿದ್ದಾರೆ.

ವಾಟ್ಸಾಪ್‌ನಲ್ಲೂ ಷೇರು ಮಾರುಕಟ್ಟೆಯಲ್ಲಿ ಹೂಡಿಕೆ ಮಾಡುವುದರ ಬಗ್ಗೆ ಮಾಹಿತಿ ನೀಡಲಾಗಿದೆ. ಅಲ್ಲದೆ ಆಲ್ ವೈ ವರ್ಲ್ಡ್ ಟ್ರೇಡಿಂಗ್ ಸೆಂಟರ್‌ನಲ್ಲಿ ಹಣ ಹೂಡಿಕೆ ಮಾಡಿದರೆ ಹೆಚ್ಚು ಲಾಭ ಸಿಗುವುದಾಗಿ ನಂಬಿಸಿದ್ದಾರೆ. ವಂಚಕರ ಮಾತು ನಂಬಿದ ಗುತ್ತಿಗೆದಾರ 3.05 ಲಕ್ಷ ರೂ.ಗಳನ್ನು ಎಯು ಸ್ಮಾಲ್ ಫೈನಾನ್ಸ್ ಬ್ಯಾಂಕ್‌ನ ಖಾತೆಗೆ ವರ್ಗಾವಣೆ ಮಾಡಿದ್ದಾರೆ. ನಂತರ ವಂಚಕರು ಸಂಪರ್ಕ ಕಳೆದುಕೊಂಡಿದ್ದಾರೆ. ಬಳಿಕ ಮೋಸ ಹೋಗಿರುವುದು ಗುತ್ತಿಗೆದಾರನಿಗೆ ಮನವರಿಕೆಯಾಗಿ, ಸೆನ್ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಈ ಸಂಬಂಧ ಪ್ರಕರಣ ದಾಖಲಾಗಿದೆ.

ಮಾರಕಾಸ್ತ್ರ ಹಿಡಿದು ರೀಲ್ಸ್ ಮಾಡಿದ ವ್ಯಕ್ತಿ ವಿರುದ್ಧ ಪ್ರಕರಣ ದಾಖಲು

ಮೈಸೂರು, ಏ.21(ಎಸ್‌ಬಿಡಿ)– ಮಾರಕಾಸ್ತ್ರ ಹಿಡಿದು ರೀಲ್ಸ್ ಮಾಡಿದ್ದ ವ್ಯಕ್ತಿ ವಿರುದ್ಧ ಮೈಸೂರಿನ ಉದಯಗಿರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಉದಯಗಿರಿ ನಿವಾಸಿ ತೌಸೀಫ್ ಅಲಿಯಾಸ್ ದಾದು ವಿರುದ್ಧ ಪ್ರಕರಣ ದಾಖಲಾಗಿದ್ದು, ಈತ ಚಾಕು ಮಾದರಿಯ ಮಾರಕಾಸ್ತ್ರ ಹಿಡಿದುಕೊಂಡು ರೀಲ್ಸ್ ಮಾಡಿ, ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದ. ಈ ಬಗ್ಗೆ ಬಾತ್ಮೀದಾರರಿಂದ ತಿಳಿದ ಉದಯಗಿರಿ ಠಾಣೆ ಸಿಬ್ಬಂದಿ ರಾಜೇಸಾಬ್, ಪರಿಶೀಲನೆ ನಡೆಸಿದ್ದರು. ಇವರಿಗೆ ಸಾಮಾಜಿಕ ಮಾಧ್ಯಮ ಮೇಲ್ವಿಚಾರಣೆ ಜವಾಬ್ದಾರಿ ವಹಿಸಿರುವುದರಿಂದ ತೌಸೀಫ್ ರೀಲ್ಸ್ ಬಗ್ಗೆ ಹೆಚ್ಚಿನ ಮಾಹಿತಿ ಕಲೆ ಹಾಕಿದ ನಂತರ ಠಾಣೆಗೆ ದೂರು ನೀಡಿದ್ದಾರೆ.

ಮಾರಕಾಸ್ತ್ರಗಳನ್ನು ಸಾರ್ವಜನಿಕ ಸ್ಥಳದಲ್ಲಿ ಹಿಡಿದು ಓಡಾಡುವುದು, ಸಾಗಿಸುವುದು ಮಾತ್ರವಲ್ಲದೆ ಸಾಮಾಜಿಕ ಮಾಧ್ಯಮಗಳಲ್ಲಿ ಪ್ರದರ್ಶಿಸುವುದೂ ಕಾನೂನುಬಾಹಿರ. ಇದರಿಂದ ಸಾರ್ವಜನಿಕರಲ್ಲಿ ಆತಂಕ ಸೃಷ್ಟಿಯಾಗುವ ಸಾಧ್ಯತೆ ಇದೆ. ಕೆಲ ವಿಡಿಯೋಗಳು ಶಾಂತಿ–ಸೌಹಾರ್ದತೆ ಕದಡುವ ಸಾಧ್ಯತೆಯೂ ಇರುತ್ತದೆ. ಈ ಹಿನ್ನೆಲೆಯಲ್ಲಿ ಪೊಲೀಸರು ಸಾಮಾಜಿಕ ಜಾಲತಾಣಗಳ ಮೇಲೆ ಸದಾ ನಿಗಾ ಇರಿಸಿರುತ್ತಾರೆ.

ಸಂಸತ್ ಭವನದಲ್ಲಿ ಇದೇ ಮೊದಲ ಬಾರಿಗೆ ಬಸವ ಜಯಂತಿ

ನವದೆಹಲಿ, ಏ. 21– ವಿಶ್ವಕ್ಕೆ ಸಂಸತ್ ಪರಿಚಯಿಸಿದ ಬಸವೇಶ್ವರರ ಜಯಂತಿಯನ್ನು ಮೊದಲ ಬಾರಿಗೆ ನೂತನ ಸಂಸತ್ ಭವನದ ಆವರಣದಲ್ಲಿ ಆಚರಿಸಲು ನಿರ್ಧರಿಸ ಲಾಗಿದೆ. ಈ ಸಂಬಂಧ ಕೇಂದ್ರ ಸಚಿವ ವಿ.ಸೋಮಣ್ಣ ಅವರು ಸಂಸತ್ ಅಧಿಕಾರಿಗಳ ಜೊತೆ ಪೂರ್ವಭಾವಿ ಸಭೆ ನಡೆಸಿದ್ದಾರೆ.



ಈ ವಿಚಾರವಾಗಿ ಮಾತನಾಡಿದ ಸಚಿವ ವಿ.ಸೋಮಣ್ಣನವರು, ಸಂಸತ್ ಆವರಣದಲ್ಲಿ ಬಸವ ಜಯಂತಿ ಆಚರಣೆಗೆ ಅವಕಾಶ ಸಿಕ್ಕಿದೆ. ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಅವರು ಒಪ್ಪಿಗೆ ಕೊಟ್ಟಿದ್ದಾರೆ. ಬಸವ ಜಯಂತಿ ಕಾರ್ಯಕ್ರಮಕ್ಕೆ ಗಣ್ಯಾತಿಗಣ್ಯರು ಬರಲಿದ್ದಾರೆ. ಏ.30ರಂದು ಬಸವ ಜಯಂತಿ ಆಯೋಜಿಸಲಾಗಿದೆ. ಕರ್ನಾಟಕದ ಬಸವ ಅಭಿಮಾನಿಗಳು, ಮಠಾಧಿಪತಿಗಳು ಬರಲಿದ್ದಾರೆ. ಕಾರ್ಯಕ್ರಮದಲ್ಲಿ ಭಾಗವಹಿಸುವವರು ಏ.25ರ ಒಳಗಾಗಿ ಮಾಹಿತಿ ನೀಡಬೇಕು. ಕಡ್ಡಾಯವಾಗಿ ಆಧಾರ್ ಕಾರ್ಡ್ ನೀಡಬೇಕು ಎಂದು ಹೇಳಿದರು.

ಸಂಸತ್ ಭವನದೊಳಗೆ ಬಸವಣ್ಣರ ವಚನ: 2023ರಲ್ಲಿ ಲೋಕಾರ್ಪಣೆಗೊಂಡ ನೂತನ ಸಂಸತ್ ಭವನ ವೈಭವೋಪೇತವಾಗಿದೆ. ಈ ಸಂಸತ್ ಭವನ ಹಲವು ವಿಶೇಷತೆಗಳಿಂದ ಕೂಡಿದೆ. ಸಂಸತ್ ಭವನದಲ್ಲಿ ಅಖಂಡ ಭಾರತದ ನಕ್ಷೆಯೊಂದಿಗೆ ಭಾರತೀಯ ಪರಂಪರೆ ಸಂಸ್ಕೃತಿಯ ಅನಾವರಣಗೊಂಡಿದ್ದು, ಕನ್ನಡ ಕಂಪು ಪಸರಿಸಿದೆ. ಸಂಸತ್ ಭವನದ ಗೋಡೆಯ ಮೇಲೆ ಹಂಪಿಯ ಕಲ್ಲಿನ ರಥವನ್ನು ಕೆತ್ತಲಾಗಿದೆ. ಇದರ ಪಕ್ಕದಲ್ಲೇ ಗೋಡೆಯ 'ಕಳಬೇಡ ಕೊಲಬೇಡ ಹುಸಿಯ ನುಡಿಯಲು ಬೇಡ ಮುನಿಯ ಬೇಡ ಅನ್ಯರಿಗೆ ಅಸಹ್ಯಪಡಬೇಡ ತನ್ನ ಬಣ್ಣಿಸಬೇಡ ಇದಿರ ಹಳಿಯಲು ಬೇಡ. ಇದೇ ಅಂತರಂಗಶುದ್ಧಿ ಇದೇ ಬಹಿರಂಗಶುದ್ಧಿ ಇದೇ ನಮ್ಮ ಕೂಡಲಸಂಗಮ ದೇವರನೊಲಿಸುವ ಪರಿ' ಬಸವಣ್ಣನವರ ವಚನ ಬರೆಯಲಾಗಿದೆ.

ನಿವೃತ್ತ ಡಿಜಿಪಿ ಓಂಪ್ರಕಾಶ್ ಅವರಿಗೆ 'ಲಾ ಗೈಡ್' ಬಳಗದಿಂದ ಶ್ರದ್ಧಾಂಜಲಿ

ಮಾನವೀಯ ಗುಣ ಹೊಂದಿದ್ದ ಶ್ರೀಯುತರ ಅಗಲಿಕೆಗೆ ಗಣ್ಯರ ಕಂಬನಿ



ಮೈಸೂರಿನ ಏರ್‌ಲೈನ್ಸ್ ಹೋಟೆಲ್‌ನಲ್ಲಿ ಸೋಮವಾರ 'ಲಾ ಗೈಡ್' ಕಾನೂನು ಮಾಸ ಪತ್ರಿಕೆ ವತಿಯಿಂದ ರಾಜ್ಯ ನಿವೃತ್ತ ಪೊಲೀಸ್ ಮಹಾ ನಿರ್ದೇಶಕ ಓಂಪ್ರಕಾಶ್ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಮೈಸೂರು, ಏ.21(ಬಿಎಲ್‌ಯು)– ಬೆಂಗಳೂರಿನಲ್ಲಿ ನಿನ್ನೆ ಹತ್ಯೆಯಾದ ರಾಜ್ಯ ನಿವೃತ್ತ ಪೊಲೀಸ್ ಮಹಾ ನಿರ್ದೇಶಕ ಓಂಪ್ರಕಾಶ್ ಅವರಿಗೆ ಮೈಸೂರಿನ 'ಲಾ ಗೈಡ್' ಕಾನೂನು ಮಾಸ ಪತ್ರಿಕೆ ಬಳಗ ಇಂದು ಶ್ರದ್ಧಾಂಜಲಿ ಸಲ್ಲಿಸಿತು.

ನಗರದ ಏರ್‌ಲೈನ್ಸ್ ಹೋಟೆಲ್‌ನಲ್ಲಿ ಇಂದು ನಡೆದ ಶ್ರದ್ಧಾಂಜಲಿ ಸಭೆಯಲ್ಲಿ ಮಾತನಾಡಿದ ನಿವೃತ್ತ ಪೊಲೀಸ್ ವರಿಷ್ಠಾಧಿಕಾರಿ ರಾಜೇಂದ್ರ ಪ್ರಸಾದ್, ಓಂಪ್ರಕಾಶ್ ಅವರು ಹತ್ಯೆಯಾಗಿರುವ ವಿಷಯ ನಂಬಲು ಸಾಧ್ಯವಾಗುತ್ತಿಲ್ಲ. ಕಿರಿಯರಿಗೆ ಮಾರ್ಗದರ್ಶಕರಾಗಿದ್ದ ಅವರು ಪೊಲೀಸ್ ಇಲಾಖೆಯಲ್ಲಿ ಸಲ್ಲಿಸಿರುವ ಸೇವೆ ಸ್ಮರಣೀಯ ಎಂದರು.

ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವಲ್ಲಿ ಪರಿಣತಿ ಹೊಂದಿದ್ದ ಓಂಪ್ರಕಾಶ್ ಅವರು ಮೈಸೂರಿನ ಕರ್ನಾಟಕ ಪೊಲೀಸ್ ಅಕಾಡೆಮಿಯಲ್ಲಿ ಪೊಲೀಸ್ ಅಧಿಕಾರಿಗಳಿಗೆ ಉತ್ತಮ ತರಬೇತಿ ನೀಡಿ ದಕ್ಷತೆಯಿಂದ ಸೇವೆ ಸಲ್ಲಿಸಲು ತಯಾರು ಮಾಡುತ್ತಿದ್ದರು. ಇದರಿಂದ ಓಂಪ್ರಕಾಶ್ ಅವರಿಗೆ ದೊಡ್ಡ ಶಿಷ್ಯ ಪಡೆ ಇದೆ ಎಂದರು.

ತಮ್ಮ ಕೈ ಕೆಳಗೆ ಕೆಲಸ ಮಾಡುವ ಅಧಿಕಾರಿ ಹಾಗೂ ಸಿಬ್ಬಂದಿಗಳನ್ನು ಬಹಳ ಪ್ರೀತಿಯಿಂದ ನೋಡಿಕೊಳ್ಳುತ್ತಿದ್ದರು. ಪೊಲೀಸ್ ಇಲಾಖೆಯಲ್ಲಿ ಎಂತಹ ಪರಿಸ್ಥಿತಿ ಬಂದರೂ ಅದನ್ನು ಸಮರ್ಥವಾಗಿ ಎದುರಿಸುವ ತಾಳ್ಮೆ ಸ್ವಭಾವ ಅವರಲ್ಲಿತ್ತು ಎಂದು ಹೇಳಿದರು.

ಇತ್ತೀಚೆಗೆ ಪೊಲೀಸ್ ಅಧಿಕಾರಿಗಳ ಕುಟುಂಬದ ವಾಟ್ಸ್‌ಆ್ಯಪ್‌ನಲ್ಲಿ ಅವರ ಪತ್ನಿ ಕೆಟ್ಟದಾದ ಮೆಸೇಜ್ ಹಾಕುತ್ತಿದ್ದರು. ಈ ಹಿನ್ನೆಲೆಯಲ್ಲಿ ಗ್ರೂಪ್‌ನಲ್ಲಿ ಅವರ ನಂಬರ್ ಅನ್ನು ಬ್ಲ್ಯಾಕ್ ಮಾಡಲಾಗಿತ್ತು ಎಂದರು.

ಮಾನವೀಯ ಗುಣ ಹೊಂದಿದ್ದ ಮೇರು ವ್ಯಕ್ತಿತ್ವದ ಓಂಪ್ರಕಾಶ್ ಅವರು ಹೃದಯವಂತ ಅಧಿಕಾರಿಯಾಗಿ ಎಲ್ಲರ ಪ್ರೀತಿಗೆ ಪಾತ್ರರಾಗಿದ್ದರು. ಇಂದು ಅವರ ನಿಧನ ಎಲ್ಲರಿಗೂ ಬೇಸರ ತರಿಸಿದೆ ಎಂದು ಕಂಬನಿ ಮಿಡಿದರು.

ಈ ವೇಳೆ ಮಾತನಾಡಿದ ನಿವೃತ್ತ ಡಿವೈಎಸ್ಪಿ ಆರ್.ಗಿರಿಜೇಶ್, ಓಂಪ್ರಕಾಶ್ ಅವರು ಬಹಳ ತಾಳ್ಮೆ ಹಾಗೂ ಸೌಮ್ಯ ಸ್ವಭಾವದ ವ್ಯಕ್ತಿತ್ವ ಹೊಂದಿದ್ದರು. ಕಾನೂನು ಮತ್ತು ಸುವ್ಯವಸ್ಥೆಯಲ್ಲಿ ಹಲವು ಸವಾಲು ಬಂದಾಗ ಅದನ್ನು ದಿಟ್ಟತನದಿಂದ ಎದುರಿಸುತ್ತಿದ್ದರು ಎಂದು ಹೇಳಿದರು.

ನಿವೃತ್ತ ಪೊಲೀಸ್ ಅಧಿಕಾರಿಗಳ ಅಸೋಸಿಯೇಷನ್‌ನಲ್ಲಿ ಹಲವು ಕಾರ್ಯಕ್ರಮ ರೂಪಿಸಲು ಹಣದ ಅವಶ್ಯಕತೆ ಇತ್ತು. ಆ ವೇಳೆ ರಾಜ್ಯ ಪೊಲೀಸ್ ಮಹಾ ನಿರ್ದೇಶಕರಾಗಿದ್ದ ಓಂಪ್ರಕಾಶ್ ಅವರನ್ನು ಭೇಟಿ ಮಾಡಿ ಅಸೋಸಿಯೇಷನ್ ನಿಧಿಗೆ ಹೆಚ್ಚಿನ ಅನುದಾನ ದೊರಕಿಸಿಕೊಡಬೇಕು ಎಂದು ಮನವಿ ಮಾಡಿದ್ದೆವು. ನಮ್ಮ ಕೋರಿಕೆಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಓಂಪ್ರಕಾಶ್ ಅವರು ಸರ್ಕಾರದೊಂದಿಗೆ ಮಾತುಕತೆ ನಡೆಸಿ 10 ಕೋಟಿ ರೂಪಾಯಿ ನೆರವು ಒದಗಿಸಿಕೊಟ್ಟಿದ್ದರು ಎಂದು ಸ್ಮರಿಸಿದರು.

ಈ ಹಿನ್ನೆಲೆ ನಿವೃತ್ತ ಪೊಲೀಸ್ ಅಧಿಕಾರಿಗಳ ಅಸೋಸಿಯೇಷನ್‌ನಿಂದ ಓಂಪ್ರಕಾಶ್ ಅವರಿಗೆ ಅಭಿನಂದನೆ ಸಲ್ಲಿಸಲಾಯಿತು. ಆ ವೇಳೆ ಸಮಯೋಚಿತವಾಗಿ ಪೊಲೀಸರಿಗೆ ಸಲಹೆ ನೀಡಿದ ಅವರು, ಕರ್ತವ್ಯದ ಸಮಯದಲ್ಲಿ ನಿಮ್ಮ ಕುಟುಂಬದ ಜೊತೆ ಹೆಚ್ಚು ಕಾಲ ಕಳೆಯಲು ನಿಮಗೆ ಸಾಧ್ಯವಾಗುತ್ತಿಲ್ಲ. ಆದರೆ ಈಗ ನಿವೃತ್ತರಾಗಿದ್ದೀರಾ, ಈ ಸಂದರ್ಭದಲ್ಲಿ ನಿಮ್ಮ ಕುಟುಂಬದ ಜೊತೆ ಹೆಚ್ಚು ಸಮಯ ಕಳೆಯಿರಿ. ಈ ಮೂಲಕ ಕುಟುಂಬದ ಬಾಂಧವ್ಯವನ್ನು ಮತ್ತಷ್ಟು ಹೆಚ್ಚಿಸಿಕೊಳ್ಳಿ ಎಂದು ಕಿವಿಮಾತು ಹೇಳಿದ್ದರು ಎಂದು ಗಿರಿಜೇಶ್ ಸ್ಮರಿಸಿದರು. 'ಲಾ ಗೈಡ್' ಕಾನೂನು ಮಾಸ ಪತ್ರಿಕೆ ಸಂಸ್ಥಾಪಕ ಸಂಪಾದಕ ಹೆಚ್.ಎನ್.ವೆಂಕಟೇಶ್, ಮೈಸೂರು ವಕೀಲರ ಸಂಘದ ಅಧ್ಯಕ್ಷ ಆರ್.ಲೋಕೇಶ್, ಮಾಜಿ ಅಧ್ಯಕ್ಷ ರಾಮಮೂರ್ತಿ, ಉದ್ಯಮಿ ಅಭಿಷೇಕ್ ಹೆಗಡೆ, ವಕೀಲರಾದ ನಾಗರಾಜ್, ಜೈಶಂಕರ್, ಲಕ್ಷ್ಮಿಪುರಂ ಠಾಣೆ ಪೊಲೀಸ್ ಇನ್ಸ್‌ಪೆಕ್ಟರ್ ಪುರುಷೋತ್ತಮ್ ಇತರರು ಈ ವೇಳೆ ಉಪಸ್ಥಿತರಿದ್ದರು.

ಹಜ್ 553 ಯಾತ್ರಾರ್ಥಿಗಳಿಗೆ ಲಸಿಕೆ

ಈ ಬಾರಿ ಮೈಸೂರಿಂದ 331, ಕೊಡಗು 116, ಮಂಡ್ಯ 62, ಚಾ.ನಗರ 44 ಮಂದಿ ಪವಿತ್ರ ಯಾತ್ರೆಗೆ ಆಯ್ಕೆ



ಹಜ್ ಯಾತ್ರೆಗೆ 80 ಮಂದಿ ತಂಡದೊಂದಿಗೆ ತೆರಳುತ್ತಿರುವ ಉದ್ಯಮಿ ನದೀಮ್ ಮೊಹಮ್ಮದ್ ಖಾನ್ ಲಸಿಕೆ ಪಡೆದರು. ಜಿಲ್ಲಾ ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ ಅಧಿಕಾರಿ ಡಾ.ಮೊಹಮ್ಮದ್ ಸಿರಾಜ್ ಅಹಮದ್ ಮತ್ತಿತರರಿದ್ದರು.

ಮೈಸೂರು, ಏ.21(ಎಂಕೆ)– ಮೈಸೂರಿನ ಉದಯಗಿರಿಯಲ್ಲಿರುವ ಆರ್.ಕೆ.ಪ್ಯಾಲೇಸ್ ಫಂಕ್ಷನ್ ಹಾಲ್‌ನಲ್ಲಿ ಹಜ್ ಯಾತ್ರೆಗೆ ತೆರಳಿರುವ 553 ಮಂದಿ ಯಾತ್ರಾರ್ಥಿಗಳಿಗೆ ಸೋಮವಾರ ಲಸಿಕೆ ಹಾಕಲಾಯಿತು.

ಕರ್ನಾಟಕ ರಾಜ್ಯ ಹಜ್ ಕಮಿಟಿ ವೇಳಾಪಟ್ಟಿ ಅನ್ವಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ ವತಿಯಿಂದ ಮುಂಜಾಗ್ರತಾ ಕ್ರಮವಾಗಿ ಹಮ್ಮಿಕೊಂಡಿದ್ದ ಲಸಿಕೆ ಕಾರ್ಯಕ್ರಮದಲ್ಲಿ ಮೈಸೂರು, ಮಂಡ್ಯ, ಚಾಮರಾಜನಗರ ಹಾಗೂ ಕೊಡಗು ಜಿಲ್ಲೆಯ ಹಜ್ ಯಾತ್ರಾರ್ಥಿಗಳಿಗೆ ಲಸಿಕೆ ಹಾಕಲಾಯಿತು.

ಲಸಿಕೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಧಿಕಾರಿ ಡಾ.ಪಿ.ಸಿ.ಕುಮಾರಸ್ವಾಮಿ, ಮೈಸೂರು ಜಿಲ್ಲೆಯ 331 ಮಂದಿ, ಕೊಡಗು ಜಿಲ್ಲೆಯ 116, ಮಂಡ್ಯ ಜಿಲ್ಲೆಯ 62 ಹಾಗೂ ಚಾಮರಾಜನಗರ ಜಿಲ್ಲೆ 44 ಮಂದಿ ಸೇರಿದಂತೆ ಒಟ್ಟು 553 ಮಂದಿ ಹಜ್ ಯಾತ್ರಾರ್ಥಿಗಳಿಗೆ ಮುನ್ನೆಚ್ಚರಿಕೆ ಕ್ರಮವಾಗಿ ಆರೋಗ್ಯ ತಪಾಸಣೆ ಮತ್ತು ಲಸಿಕೆ ನೀಡಲಾಯಿತು ಎಂದು ಮಾಹಿತಿ ನೀಡಿದರು.

ಹಜ್ ಯಾತ್ರಾರ್ಥಿಗಳಿಗೆ ಮೆದುಳು ಜ್ವರ, ಇನ್ಫ್ಲುಯೆನ್ಸ್ ವೈರಸ್, ಪೋಲಿಯೋಗೆ ವ್ಯಾಕ್ಸಿನ್ ನೀಡಲಾಗಿದೆ. ಯಾವುದೇ ರೀತಿಯ ಅಡ್ಡ ಪರಿಣಾಮವಾಗದೆ ಲಸಿಕೆ ಕಾರ್ಯಕ್ರಮ ಯಶಸ್ವಿಯಾಗಿ ನಡೆದಿದೆ. ನಿಗದಿಪಡಿಸಿದ್ದ ಗುರಿಯನ್ನು ಬಹುತೇಕ ಪೂರ್ಣಗೊಳಿಸಿದ್ದೇವೆ. ಯಾವುದೇ ಗೊಂದಲಗಳಿಗೆ ಅವಕಾಶ ನೀಡದೆ ವ್ಯವಸ್ಥಿತವಾಗಿ ಲಸಿಕೆ ಕಾರ್ಯಕ್ರಮ ನಡೆದಿದೆ ಎಂದು 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಈ ವೇಳೆ ಜಿಲ್ಲಾ ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ ಅಧಿಕಾರಿ ಡಾ.ಮೊಹಮ್ಮದ್ ಸಿರಾಜ್ ಅಹಮದ್, ಆರೋಗ್ಯ ಕೇಂದ್ರಗಳ ವೈದ್ಯಾಧಿಕಾರಿಗಳು, ಆರೋಗ್ಯ ಸಿಬ್ಬಂದಿ ಹಾಗೂ ಜಿಲ್ಲಾ ಹಜ್ ಸಮಿತಿಯ ಪದಾಧಿಕಾರಿಗಳು ಭಾಗವಹಿಸಿದ್ದರು.

ದಾಖಲೆ ಹಸ್ತಾಂತರ



ಅಖಿಲ ಭಾರತ ವೀರಶೈವ ಮಹಾಸಭಾ ರಾಜ್ಯ ಘಟಕದ ಅಧ್ಯಕ್ಷ ಶಂಕರ ಬಿದರಿ ಸಮ್ಮುಖದಲ್ಲಿ ಮೈಸೂರು ಜಿಲ್ಲಾ ಘಟಕದ ಸಭೆ ನಡೆಯಿತು. ಈ ವೇಳೆ ಜಿಲ್ಲಾ ಘಟಕಕ್ಕೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ನೀಡಿರುವ ಸಿಎ ನಿವೇಶನದ ಮೂಲ ದಾಖಲೆಗಳನ್ನು ನಿಕಟಪೂರ್ವ ಅಧ್ಯಕ್ಷ ಕಾನ್ಯ ಶಿವಮೂರ್ತಿ ಅವರು ಜಿಲ್ಲಾ ನಿರ್ದೇಶಕರಾದ ಗೆಜ್ಜಗಳ್ಳಿ ಮಹೇಶ್ ಹಾಗೂ ಆಯರಳ್ಳಿ ಪಿ.ವಿರುಪಾಕ್ಷ ಅವರ ಮೂಲಕ ಹಾಲಿ ಅಧ್ಯಕ್ಷ ಬಸವರಾಜು ಅವರಿಗೆ ಹಸ್ತಾಂತರಿಸಿದರು.

ಸಾರ್ವಜನಿಕರ ಕೆಲಸಗಳನ್ನು ತ್ವರಿತವಾಗಿ ಮಾಡಿಕೊಡಿ

ಸರ್ಕಾರಿ ನೌಕರರಿಗೆ ಡಿಸಿಎಂ ಡಿಕೆಶಿ ಕಿವಿಮಾತು

ಬೆಂಗಳೂರು, ಏ.21– ಸರ್ಕಾರಿ ನೌಕರರು ಜನರನ್ನು ವಿನಾಕಾರಣ ಅಲೆದಾಡಿಸಬಾರದು. ನಿಮ್ಮಲ್ಲಿಗೆ ಬರುವ ಸಾರ್ವಜನಿಕರ ಕೆಲಸಗಳನ್ನು ತ್ವರಿತವಾಗಿ ಮಾಡಿಕೊಡಬೇಕು ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಕಿವಿಮಾತು ಹೇಳಿದರು.



ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಹಾಗೂ ರಾಜ್ಯ ಸರ್ಕಾರಿ ನೌಕರರ ಸಂಘವು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಸೋಮವಾರ ಆಯೋಜಿಸಿದ್ದ ರಾಜ್ಯ ಸರ್ಕಾರಿ ನೌಕರರ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ಕೆಲಸ ಹೇಗೆ ಆಗುತ್ತದೆ ಎಂಬ ಎಲ್ಲಾ ವಿವರ ಸರ್ಕಾರಿ ನೌಕರನಿಗೆ ಇರುತ್ತದೆ. ಆದರೂ ಆ ದಾಖಲೆ, ಈ ದಾಖಲೆ ತೆಗೆದುಕೊಂಡು ಬನ್ನಿ ಎಂದು ಸಾರ್ವಜನಿಕರನ್ನು ಅಲೆಸುತ್ತಾರೆ. ಸಾರ್ವಜನಿಕರು ತಮಗೆ ಸಲಾಂ ಹೊಡೆಯಬೇಕು, ಕಡಲೆಕಾಯಿ, ಹಣ್ಣು, ಕೋಳಿ ತಂದುಕೊಡಬೇಕು ಎನ್ನುವ ಧೋರಣೆ ಇತ್ತು. ನೀವ್ಯಾರೂ ಈ ರೀತಿ ಮಾಡಬಾರದು ಎಂದರು.

ನಾವು ರಾಜಕಾರಣಿಗಳು ಐದು ವರ್ಷದ ನಂತರ ಮನೆಗೆ ಹೋಗುತ್ತೇವೆ. ಸರ್ಕಾರಿ ನೌಕರರು 60 ವರ್ಷವಾಗುವವರೆಗೂ ಜನರ ಸೇವೆ ಮಾಡಬಹುದು. ಎಲ್ಲರಿಗೂ ಅಂತಹ ಅವಕಾಶ ಸಿಗುವುದಿಲ್ಲ. ನಿಮಗೆ ಸಿಕ್ಕಿರುವ ಈ ಅವಕಾಶವನ್ನು ಸದುಪಯೋಗ ಮಾಡಿಕೊಳ್ಳಬೇಕು. ಜನರು ನಿಮ್ಮನ್ನು ನೆನಪಿಸಿಕೊಳ್ಳುವಂತಹ ಕೆಲಸ ಮಾಡಬೇಕು ಎಂದು ತಿಳಿ ಹೇಳಿದರು.

ಇಂದಿರಾ ಗಾಂಧಿ ಅವರ ಹತ್ಯೆಯಾಗಿದ್ದ ಸಂದರ್ಭ ಪುಟ್ಟರಂಗಪ್ಪ ಎಂಬುವವರು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜಿಲ್ಲಾಧಿಕಾರಿ ಆಗಿದ್ದರು. ನಾನು ಚಿತ್ರಮಂದಿರ ಪರವಾನಗಿ ಪಡೆಯಲು ಹೋಗಿದ್ದೆ. ರಜೆ ಘೋಷಣೆ ಆಗಬಹುದು ಎಂದು ಒಂದೇ ದಿನದಲ್ಲಿ ಕೆಲಸ ಮಾಡಿಕೊಟ್ಟಿದ್ದರು. ಹೀಗೆ ಜನರಿಗೆ ಅನುಕೂಲವಾಗುವ ಹಾಗೆ ತ್ವರಿತವಾಗಿ ಕೆಲಸ ಮಾಡುವ ಎಲ್ಲ ಸಾಧ್ಯತೆಗಳು ಸರ್ಕಾರಿ ನೌಕರರಿಗೆ ಇದೆ. ಅದನ್ನು ನೀವು ಸರಿಯಾಗಿ ಬಳಸಿಕೊಳ್ಳಬೇಕು ಎಂದರು.

ಶಾಸಕಾಂಗ ತೀರ್ಮಾನ ಮಾಡಿದ್ದನ್ನು ಜಾರಿಗೆ ತರುವವರೇ ನೀವು ಅಂದರೆ (ಸರ್ಕಾರಿ ನೌಕರರು) ಕಾರ್ಯಾಂಗ. ನೀವು, ನಾವು ತಪ್ಪು ಮಾಡಿದರೆ ನಮ್ಮನ್ನು ತಿದ್ದುವುದು ನ್ಯಾಯಾಂಗ. ನಾವು ತಪ್ಪು ಮಾಡಿದರೆ ಎಚ್ಚರಿಸುವ ಕೆಲಸವನ್ನು ಮಾಧ್ಯಮಗಳು ಮಾಡುತ್ತವೆ. ನಮ್ಮ ತಪ್ಪಿನ ಬಗ್ಗೆ ಬರೆದಾಗ ಕೋಪಿಸಿಕೊಳ್ಳಬಾರದು. ಬದಲಿಗೆ ತಪ್ಪು ತಿದ್ದಿಕೊಳ್ಳಬೇಕು ಎಂದರು.

ಸಂವಿಧಾನವನ್ನು ಪಾಲಿಸಿ: ಸಂವಿಧಾನದ ಆಶಯವನ್ನು ಈಡೇರಿಸುವುದೇ ಪ್ರಜಾಪ್ರಭುತ್ವದ ನಾಲ್ಕು ಅಂಗಗಳಾದ ಕಾರ್ಯಾಂಗ, ಶಾಸಕಾಂಗ, ನ್ಯಾಯಾಂಗ ಮತ್ತು ಮಾಧ್ಯಮಗಳ ಕೆಲಸ. ಸಂವಿಧಾನದ ಆಶಯದಂತೆ ಜಾತ್ಯತೀತ ಸಮಾಜ ನಿರ್ಮಿಸಿ, ಜಾತಿ ಅಸಮಾನತೆಯನ್ನು ಅಳಿಸಬೇಕು. ಬುದ್ಧ, ಬಸವ, ಗಾಂಧಿ ಹೇಳಿದ್ದನ್ನೇ ಅಂಬೇಡ್ಕರ್ ಅವರು ಸಂವಿಧಾನದಲ್ಲಿ ಅಳವಡಿಸಿದ್ದಾರೆ. ಎಲ್ಲರೂ ಸಂವಿಧಾನ ಪಾಲಿಸಿ, ಕರ್ತವ್ಯ ನಿರ್ವಹಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಬಾಲಕಿ ಮೇಲೆ ಅತ್ಯಾಚಾರ, ಕೊಲೆ: ಅಪರಾಧಿಗೆ ಗಲ್ಲು ಶಿಕ್ಷೆ

ಕಲಬುರಗಿ, ಏ.21– ಬಾಲಕಿ ಮೇಲೆ ಅತ್ಯಾಚಾರ ಎಸಗಿ ಕೊಲೆ ಮಾಡಿ ಶವವನ್ನು ಬಾವಿಗೆ ಎಸೆದ ಪ್ರಕರಣಕ್ಕೆ ಸಂಬಂಧಿಸಿದಂತೆ ಕೃತ್ಯ ಎಸಗಿದ ಅಪರಾಧಿ ಆಳಂದ ತಾಲೂಕಿನ ದೇವಂತಗಿ ಗ್ರಾಮದ ಗುಂಡೇರಾವ ಚೋಪಡೆ (28) ಎಂಬಾತನಿಗೆ ಇಲ್ಲಿನ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ (ವಿಶೇಷ ಪೋಕ್ಸೊ) ನ್ಯಾಯಾಲಯವು ಸೋಮವಾರ ಗಲ್ಲು ಶಿಕ್ಷೆ ಹಾಗೂ 1 ಲಕ್ಷ ದಂಡ ವಿಧಿಸಿದೆ.

2023ರ ಜುಲೈ 15ರಂದು ವಚನ ಪುಸ್ತಕವೊಂದನ್ನು ತರಲು ಆಳಂದ ತಾಲೂಕಿನ ಗ್ರಾಮವೊಂದರಿಂದ ಮತ್ತೊಂದು ಗ್ರಾಮಕ್ಕೆ ನಡೆದುಕೊಂಡು ಹೋಗುತ್ತಿದ್ದ ಬಾಲಕಿಯನ್ನು ಕೃಷಿ ಕೆಲಸ ಮಾಡುತ್ತಿದ್ದ ಅಪರಾಧಿ ಗುಂಡೇರಾವ ಬಲವಂತವಾಗಿ ಕಬ್ಬಿನ ಗದ್ದೆಗೆ ಎಳೆದೊಯ್ದು ಬಾಯಿ ಒತ್ತಿ ಹಿಡಿದು ಅತ್ಯಾಚಾರ ಎಸಗಿದ್ದ. ನಂತರ ಉಸಿರುಗಟ್ಟಿಸಿ ಸಾಯಿಸಿ ಪಕ್ಕದ ಹೊಲದ ಬಾವಿಯಲ್ಲಿ ಶವವನ್ನು ಎತ್ತಿ ಹಾಕಿದ್ದ. ಯಾವುದೇ ನೇರ ಸಾಕ್ಷಿಗಳು ಇಲ್ಲದ್ದರಿಂದ ತನಿಖೆ ನಡೆಸುವುದು ಪೊಲೀಸರಿಗೂ ಸವಾಲಾಗಿತ್ತು.

ಪ್ರಕರಣ ದಾಖಲಿಸಿಕೊಂಡಿದ್ದ ತನಿಖಾಧಿಕಾರಿ ಭಾಸು ಚವ್ಹಾಣ ನೇತೃತ್ವದಲ್ಲಿ ನಿಂಬರ್ಗಾ ಠಾಣೆ ಪೊಲೀಸರು ತನಿಖೆ ನಡೆಸಿ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾಧೀಶ ಯಮನಪ್ಪ ಬಮ್ಮಣಗಿ ಅವರು ಅಪರಾಧಿಗೆ ಪೋಕ್ಸೊ ಕಾಯ್ದೆಯಡಿ ಗಲ್ಲು ಶಿಕ್ಷೆ ಹಾಗೂ 1 ಲಕ್ಷ ದಂಡ ವಿಧಿಸಿದರು. ಕಾನೂನು ಪ್ರಾಧಿಕಾರದ ವತಿಯಿಂದ 4 ಲಕ್ಷ ಪರಿಹಾರವನ್ನು ಮೃತ ಬಾಲಕಿಯ ತಾಯಿಗೆ ನೀಡಬೇಕು ಎಂದು ಆದೇಶದಲ್ಲಿ ತಿಳಿಸಿದ್ದಾರೆ. ಪೋಕ್ಸೊ ಪ್ರಕರಣದಲ್ಲಿ ಜಿಲ್ಲೆಯಲ್ಲಿ ಅಪರಾಧಿಗೆ ಗಲ್ಲು ಶಿಕ್ಷೆಯಾಗಿದ್ದು ಇದೇ ಮೊದಲ ಪ್ರಕರಣ ಎನ್ನಲಾಗುತ್ತಿದೆ. ಸರ್ಕಾರದ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕ ಶಾಂತವೀರ ಬಿ. ತುಪ್ಪದ ಅವರು ವಾದ ಮಂಡಿಸಿದ್ದರು.

ನಿನ್ನೆಯಷ್ಟೇ ಪೋಪ್ ಫ್ರಾನ್ಸಿಸ್ ಭೇಟಿ ಮಾಡಿದ್ದೆ; ಅಮೆರಿಕ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಕಂಬನಿ

ನವದೆಹಲಿ, ಏ.21– ವ್ಯಾಟಿಕನ್‌ನಿಂದ ಭಾರತಕ್ಕೆ ಆಗಮಿಸಿರುವ ಅಮೆರಿಕದ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಅವರು ಕ್ಯಾಥೋಲಿಕ್ ಚರ್ಚ್‌ನ ಮುಖ್ಯಸ್ಥ ಪೋಪ್ ಫ್ರಾನ್ಸಿಸ್ ಅವರ ನಿಧನಕ್ಕೆ ಕಂಬನಿ ಮಿಡಿದಿದ್ದಾರೆ.

ನಿನ್ನೆ ವ್ಯಾಟಿಕನ್‌ನಲ್ಲಿದ್ದ ಜೆಡಿ ವ್ಯಾನ್ಸ್ ಈಸ್ಟರ್ ಭಾನುವಾರದಂದು ಪೋಪ್ ಫ್ರಾನ್ಸಿಸ್ ಅವರನ್ನು ಭೇಟಿ ಮಾಡಿದ್ದು, ಒಂದು ದಿನದ ನಂತರ, ಸೋಮವಾರ



ಭಾರತಕ್ಕೆ ಆಗಮಿಸಿದ್ದಾರೆ.

ಪೋಪ್ ಫ್ರಾನ್ಸಿಸ್ ಅವರ ನಿಧನದ ಬಗ್ಗೆ ನನಗೆ ಈಗಷ್ಟೇ ತಿಳಿದುಬಂತು. ಅವರನ್ನು ಪ್ರೀತಿಸುತ್ತಿದ್ದ ಪ್ರಪಂಚದಾದ್ಯಂತದ ಲಕ್ಷಾಂತರ ಕ್ರೈಸ್ತರಿಗೆ ನನ್ನ ಹೃದಯ ಮಿಡಿಯುತ್ತದೆ ಅವರು ತುಂಬಾ ಅನಾರೋಗ್ಯದಿಂದ ಬಳಲುತ್ತಿದ್ದರು. ಆದರೂ ನನಗೆ ಅವರನ್ನು ಭೇಟಿಯಾಗುವ ಅದೃಷ್ಟ ಸಿಕ್ಕಿತು. ನಿನ್ನೆ ಅವರನ್ನು ನೋಡಿ ನನಗೆ ಸಂತೋಷವಾಯಿತು. ದೇವರು ಅವರ ಆತ್ಮಕ್ಕೆ ಶಾಂತಿ ನೀಡಲಿ ಎಂದು ವ್ಯಾನ್ಸ್ ಪೋಸ್ಟ್ ಮಾಡಿದ್ದಾರೆ.

ಶಾಲಾ ಶಿಕ್ಷಣ ಇಲಾಖೆ ವ್ಯಾಪ್ತಿಯ ವಸತಿ ಶಾಲೆಗಳ ಪ್ರವೇಶಾತಿಗೆ ಅರ್ಜಿ ಆಹ್ವಾನ

ಮೈಸೂರು,ಏ.21(ಪಿಎಂ)– ಮೈಸೂರು ಜಿಲ್ಲೆಯಲ್ಲಿರುವ ಶಾಲಾ ಶಿಕ್ಷಣ ಇಲಾಖೆ ವ್ಯಾಪ್ತಿಯ ವಸತಿ ಶಾಲೆಗಳಾದ ಕಸ್ತೂರ ಬಾ ಗಾಂಧಿ ಬಾಲಿಕಾ ವಿದ್ಯಾಲಯದ ಟೈಪ್ 1 ಮತ್ತು 4 (ಕೆಜಿಬಿವಿ), ನೇತಾಜಿ ಸುಭಾಷ್ ಚಂದ್ರ ಬೋಸ್ ಅವಾಸೀಯಾ ಶಾಲೆ, ಕರ್ನಾಟಕ ಕಸ್ತೂರಬಾ ಗಾಂಧಿ ಬಾಲಿಕಾ ವಿದ್ಯಾಲಯ (ಕೆಕೆಜಿಬಿವಿ)ಗಳಲ್ಲಿ 2025–26ನೇ ಸಾಲಿನ ಪ್ರವೇಶಕ್ಕೆ ಆನ್‌ಲೈನ್ ಮತ್ತು ಆಫ್‌ಲೈನ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

ಕೆಜಿಬಿವಿ (ಕಸ್ತೂರಬಾ ಗಾಂಧಿ ಬಾಲಿಕಾ ವಿದ್ಯಾಲಯ ಟೈಪ್ 1) ಸಂಬಂಧ ಸಮಗ್ರ ಶಿಕ್ಷಣ ಕರ್ನಾಟಕ ಕಾರ್ಯಕ್ರಮದಡಿ ಉಚಿತ ಪ್ರವೇಶ ಕಲ್ಪಿಸಲಾಗುತ್ತದೆ. 2025–26ನೇ ಸಾಲಿನ ಸಂಬಂಧ ಶಾಲೆಯಿಂದ ಹೊರಗುಳಿದ ಹೆಣ್ಣು ಮಕ್ಕಳಿಗೆ 6ರಿಂದ 8ನೇ ತರಗತಿಗೆ ದಾಖಲಾತಿ ನೀಡಲಾಗುತ್ತಿದೆ. ವಿದ್ಯಾಭ್ಯಾಸದ ಜೊತೆಗೆ ವೃತ್ತಿ ಕೌಶಲ ತರಬೇತಿ ಹಾಗೂ ಪಠ್ಯೇತರ ಚಟುವಟಿಕೆಗಳ ತರಬೇತಿ ಸಹ ದೊರೆಯಲಿದೆ ಮಕ್ಕಳಿಗೆ ಉಚಿತ ಊಟ, ವಸತಿ ಸೌಲಭ್ಯದ ಜೊತೆಗೆ ದಿನ ಬಳಕೆಯ ವಸ್ತುಗಳನ್ನು ನೀಡಲಾಗುತ್ತದೆ. ಟೈಪ್ 1ರಲ್ಲಿ 6ರಿಂದ 8ನೇ ತರಗತಿಯವರೆಗೆ ಶಾಲೆಯ ಜೊತೆಯಲ್ಲಿ ವಿದ್ಯಾರ್ಥಿನಿಲಯ ಇದ್ದು (ದಾಖಲಾತಿ ಪ್ರಮಾಣ 100), ಜಿಲ್ಲೆಯಲ್ಲಿ 5 ಶಾಲೆಯ ಜೊತೆಯಲ್ಲಿ ವಸತಿ ನಿಲಯಗಳು ಇವೆ (ಕೇರ್ಗಳ್ಳಿ, ರತ್ನಪುರಿ, ಬನ್ನೂರು, ನಂಜನಗೂಡು, ಕೆಆರ್ ನಗರ).

ಹೆಣ್ಣು ಮಕ್ಕಳ ಹಾಸ್ಟೆಲ್ (ಕೆಜಿಬಿವಿ–ಟೈಪ್ 4): 9ರಿಂದ 12ನೇ ತರಗತಿಯಲ್ಲಿ ವ್ಯಾಸಂಗ ಮಾಡುವ ಹೆಣ್ಣು ಮಕ್ಕಳಿಗೆ ಕೇಂದ್ರ ಪುರಸ್ಕೃತ ಯೋಜನೆಯಡಿ ಈ ಹಾಸ್ಟೆಲ್‌ನಲ್ಲಿ ಪ್ರವೇಶಾತಿ ದೊರೆಯಲಿದೆ. ಜಿಲ್ಲೆಯಲ್ಲಿ 6 ವಸತಿ ನಿಲಯಗಳು ಇವೆ (ಹೆಚ್‌ಡಿ ಕೋಟೆ, ಚಿಕ್ಕಹುಣಸೂರು, ಕೆಆರ್ ನಗರ, ವರಕೋಡು, ಟಿ.ನರಸೀಪುರ, ನಂಜನಗೂಡು/ದಾಖಲಾತಿ–100). ಆರ್ಥಿಕ, ಸಾಮಾಜಿಕ ಕಾರಣಗಳಿಂದ ಹೆಣ್ಣುಮಕ್ಕಳು ಪ್ರೌಢ'ಶಿಕ್ಷಣದಿಂದ ವಂಚಿತವಾಗಬಾರದು ಎಂಬುದು ಈ ಯೋಜನೆಯ ಉದ್ದೇಶವಾಗಿದೆ.

ನೇತಾಜಿ ಸುಭಾಷ್ ಚಂದ್ರ ಬೋಸ್ ಅವಾಸೀಯಾ ಶಾಲೆ: ನೇತಾಜಿ ಸುಭಾಷ್ ಚಂದ್ರ ಬೋಸ್ ಅವಾಸೀಯಾ ವಸತಿ ಶಾಲೆಗಳಲ್ಲಿ ಸಮಗ್ರ ಶಿಕ್ಷಣ ಕರ್ನಾಟಕ ಕಾರ್ಯಕ್ರಮದಡಿ ಉಚಿತ ಪ್ರವೇಶ ಕಲ್ಪಿಸಲಾಗುತ್ತದೆ. 2025–26ನೇ ಸಾಲಿನಲ್ಲಿ 6ರಿಂದ 8ನೇ ತರಗತಿಗೆ ದಾಖಲಾತಿ ಮಾಡಿಕೊಳ್ಳಲಾಗುತ್ತಿದೆ. ವಿದ್ಯಾಭ್ಯಾಸದ ಜೊತೆಗೆ ವೃತ್ತಿ ಕೌಶಲ ತರಬೇತಿ ಸಹ ದೊರೆಯಲಿದೆ. ಉಚಿತ ಊಟ, ವಸತಿ ಸೌಲಭ್ಯದ ಜೊತೆಗೆ ದಿನ ಬಳಕೆಯ ವಸ್ತುಗಳೂ ದೊರೆಯಲಿವೆ. ಪ್ರತಿ ತಿಂಗಳು ಸ್ಟೈಫಂಡ್ ಸಹ ಇರುತ್ತದೆ. ಹೆಣ್ಣು ಮಕ್ಕಳಿಗೆ ಮಾತ್ರ ಪ್ರವೇಶ ಇದೆ. ದಾಖಲಾತಿ ಪ್ರಮಾಣ 100 ಇದ್ದು, ಜಿಲ್ಲೆಯಲ್ಲಿ 1 ಶಾಲೆಯ ಜೊತೆಯಲ್ಲಿ ವಸತಿ ನಿಲಯಗಳು ಇವೆ (ಮೈಸೂರು ಉತ್ತರ ವಲಯ).

ಕೆಕೆಜಿಬಿವಿ (ಕರ್ನಾಟಕ ಕಸ್ತೂರಬಾ ಗಾಂಧಿ ಬಾಲಿಕಾ ವಿದ್ಯಾಲಯ): 6ರಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಹೆಣ್ಣು ಮಕ್ಕಳಿಗೆ ಈ ವಸತಿ ನಿಲಯದ ವ್ಯವಸ್ಥೆ ಕಲ್ಪಿಸಲಾಗಿದೆ. ಜಿಲ್ಲೆಯಲ್ಲಿ ಎರಡು ವಸತಿ ನಿಲಯಗಳು ಇವೆ (ಹುಣಸೂರು, ಹೆಚ್.ಡಿ.ಕೋಟೆ).

ಈ ಶಾಲೆಗಳಲ್ಲಿ ಬಡ ವಿದ್ಯಾರ್ಥಿಗಳಿಗೆ ಉಚಿತ ಶಿಕ್ಷಣ ಮತ್ತು ವಸತಿ ಸೌಲಭ್ಯ ದೊರೆಯಲಿದೆ. ಎಸ್‌ಸಿ, ಎಸ್‌ಟಿ ಮತ್ತು ಓಬಿಸಿ ಮತ್ತು ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಶೇ.75 ಹಾಗೂ ಬಿಪಿಎಲ್ ಕಾರ್ಡ್ ಹೊಂದಿದವರಿಗೆ ಶೇ.25ರಂತೆ ದಾಖಲಾತಿ ನೀಡಲಾಗುತ್ತದೆ ಎಂದು ಮೈಸೂರು ಜಿಲ್ಲೆಯ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು (ಆಡಳಿತ) ರವರ ಕಚೇರಿ ಪ್ರಕಟಣೆ ತಿಳಿಸಿದೆ.

ನೀರಜ್ ಚೋಪ್ರಾ ಕ್ಲಾಸಿಕ್ ಜಾವೆಲಿನ್ ಕೂಟ ಬೆಂಗಳೂರಿಗೆ ಸ್ಥಳಾಂತರ

ನವದೆಹಲಿ: ಪಂಚಕುಲದಲ್ಲಿ ಮೇ 24ರಂದು ನಿಗದಿಯಾಗಿದ್ದ ಬಹುನಿರೀಕ್ಷಿತ ನೀರಜ್ ಚೋಪ್ರಾ ಕ್ಲಾಸಿಕ್ ಜಾವೆಲಿನ್ ಥ್ರೋ ಸ್ಪರ್ಧೆಯನ್ನು ಬೆಂಗಳೂರಿನ ಕಂಠೀರವ ಕ್ರೀಡಾಂಗಣಕ್ಕೆ ಸ್ಥಳಾಂತರಿಸಲಾಗಿದೆ ಎಂದು ಜಾವೆಲಿನ್ ಥ್ರೋ ತಾರೆ, ಸಂಘಟಕ ನೀರಜ್ ಚೋಪ್ರಾ ತಿಳಿಸಿದರು.



ಚೊಚ್ಚಲ ಆವೃತ್ತಿಯ ಸ್ಪರ್ಧೆಯಲ್ಲಿ ಎರಡು ಬಾರಿಯ ವಿಶ್ವ ಚಾಂಪಿಯನ್ ಆ್ಯಂಡರ್ಸನ್ ಪೀಟರ್ಸ್ ಮತ್ತು 2016ರ ರಿಯೊ ಒಲಿಂಪಿಕ್ಸ್ ಚಾಂಪಿಯನ್ ಥಾಮಸ್ ರೋಹ್ಲರ್ ಸೇರಿದಂತೆ ಹಲವು ತಾರೆಯರು ಭಾಗವಹಿಸಲಿದ್ದಾರೆ. ಪಂಚಕುಲದ ತಾವೂ ದೇವಿಲಾಲ್ ಕ್ರೀಡಾಂಗಣದಲ್ಲಿ ನೇರಪ್ರಸಾರಕ್ಕೆ ಸಾಕಷ್ಟು ಬೆಳಕಿನ ವ್ಯವಸ್ಥೆ ಇಲ್ಲದ ಕಾರಣ ಸ್ಥಳಾಂತರಿಸಲಾಗಿದೆ. ಈ ಸ್ಪರ್ಧೆಗೆ ವಿಶ್ವ ಅಥ್ಲೆಟಿಕ್ಸ್‌ನಿಂದ 'ಎ' ಕೆಟಗರಿ ಸ್ಥಾನಮಾನ ದೊರಕಿದ್ದು, ತನ್ನ ಈವೆಂಟ್ ಕ್ಯಾಲೆಂಡರ್‌ನಲ್ಲಿಯೂ ಸ್ಥಳ ಬದಲಾವಣೆ ದಾಖಲಿಸಿದೆ.

ಪ್ಯಾರಿಸ್ ಒಲಿಂಪಿಕ್ಸ್ ಕಂಚು ವಿಜೇತ ಗ್ರೆನಾಡದ ಪೀಟರ್ಸ್, ಜರ್ಮನಿಯ ರೋಹ್ಲರ್, ರಿಯೊ ಒಲಿಂಪಿಕ್ಸ್ ಬೆಳ್ಳಿ ವಿಜೇತ ಕೀನ್ಯಾದ ಜೂಲಿಯಸ್ ಯೆಗೊ ಮತ್ತು ಅಮೆರಿಕದ ಕರ್ಟಿಸ್ ಥಾಂಪ್ಸನ್ ಅವರು ಕೂಟದಲ್ಲಿ ಪಾಲ್ಗೊಳ್ಳುವುದನ್ನು ಖಚಿತಪಡಿಸಿದ್ದಾರೆ ಪ್ಯಾರಿಸ್ ಒಲಿಂಪಿಕ್ಸ್ ಚಾಂಪಿಯನ್, ಪಾಕಿಸ್ತಾನದ ಅರ್ಷದ್ ನದೀಂ ಅವರನ್ನೂ ಆಹ್ವಾನಿಸಲಾಗಿದೆ. ತರಬೇತುದಾರರ ಜೊತೆ ಚರ್ಚಿಸಿದ ನಂತರ ಸಂಪರ್ಕಿಸುವುದಾಗಿ ಅವರು ಹೇಳಿದ್ದಾರೆ. ಈತನಕ ದೃಢಪಡಿಸಿಲ್ಲ ಎಂದು 27 ವರ್ಷ ವಯಸ್ಸಿನ ಚೋಪ್ರಾ ಮಾಹಿತಿ ನೀಡಿದರು.

ಪಂಚಕುಲದಲ್ಲಿ ಸ್ಪರ್ಧೆಯನ್ನು ಆಯೋಜಿಸಲು ಬಯಸಿದ್ದೆ. ಆದರೆ, ಅಲ್ಲಿನ ಕ್ರೀಡಾಂಗಣದಲ್ಲಿ ಫ್ಲಡ್‌ಲೈಟ್ ಸಮಸ್ಯೆಗಳಿವೆ. ವಿಶ್ವ ಅಥ್ಲೆಟಿಕ್ಸ್‌ನ ನೇರಪ್ರಸಾರಕ್ಕೆ ಬೇಕಾಗಿರುವ 600 ಲಕ್ಸ್ (ಬೆಳಕಿನ ತೀವ್ರತೆಯ ಅಳತೆ) ಪಂಚಕುಲದ ಕ್ರೀಡಾಂಗಣದಲ್ಲಿ ಇಲ್ಲ. ಅದನ್ನು ಅಳವಡಿಸಲು ಬಹಳಷ್ಟು ಸಮಯಾವಕಾಶ ಬೇಕಾಗುತ್ತದೆ ಎಂದು ಹೇಳಿದರು.

ಕಂಠೀರವ ಕ್ರೀಡಾಂಗಣದಲ್ಲಿ ಈ ಸ್ಪರ್ಧೆ ಆಯೋಜಿಸುವ ಸಂಬಂಧ ಕರ್ನಾಟಕದ ಮುಖ್ಯಮಂತ್ರಿಯೊಂದಿಗೆ ಮಾತುಕತೆ ನಡೆಸಿದ್ದೇನೆ. ಜೆಎಸ್‌ಡಬ್ಲ್ಯು ತಂಡವು ಕೂಟವನ್ನು ಯಶಸ್ವಿಯಾಗಿ ಆಯೋಜಿಸಲು ಸಜ್ಜಾಗಿದೆ. ಅಂತರರಾಷ್ಟ್ರೀಯ ಸ್ಪರ್ಧಿಗಳಿಗೆ ಅತ್ಯುತ್ತಮ ಆತಿಥ್ಯ ನೀಡುವುದು ಮತ್ತು ಕ್ರೀಡಾಭಿಮಾನಿಗಳಿಗೆ ಅತ್ಯುತ್ತಮ ಅನುಭವ ನೀಡುವುದು ನಮ್ಮ ಆದ್ಯತೆ ಎಂದರು.

ನಕ್ಕರೆ ಅದೇ ಸ್ವರ್ಗ

ಹೆಂಡ್ತಿ : ನೀವು ಹೀಂಗೇ ಆಡ್ತಾ ಇರಿ
ನರಕದಲ್ಲೂ ಜಾಗ ಸಿಗೋಲ್ಲ.

ಗಂಡ : ಪ್ರತಿಯೊಂದು ಜಾಗಕ್ಕೂ
ನಿನ್ನ ಜೊತೆ ಬರೋಕೆ ನನಗಿಷ್ಟ ಇಲ್ಲ.

ಮೈಸೂರು ಮಿತ್ರ

ಮಂಗಳವಾರ, 22 ಏಪ್ರಿಲ್ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ.........

ಅರ್ಜುನನು ಕೃಷ್ಣನಲ್ಲಿ ಕೇಳಿದ. ಪ್ರಭು ನಿನ್ನ (ಭಗವಂತ) ಪೂಜೆ ಯಾವ ರೀತಿ ಮಾಡಬೇಕು. ಆಗ ಶ್ರೀಕೃಷ್ಣ ಹೇಳಿದನು ನೀನು ಖುಷಿಯಾಗಿ ಇರು ಹಾಗೂ ಇತರರನ್ನು ಖುಷಿಯಾಗಿ ಇಡು ಅದೇ ನೀನು ನನಗೆ ಮಾಡುವ ಪೂಜೆ. – ಭಗವದ್ಗೀತೆ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಜಟ್ಟಿ ನೆಲಕ್ಕೆ ಬಿದ್ದರೂ ಮೀಸೆ ಮಣ್ಣಾಗಲಿಲ್ಲ

ನಿಮ್ಮ ಪತ್ರಗಳು

■ ನಾಡು, ಕಾಡಿನ ಅಧಿಕಾರಿಗಳ ಉದ್ಧಟತನ!

ಮಾನ್ಯರೆ,

ಮೈಸೂರಿನ ಹೈದರಾಲಿ ರಸ್ತೆಯಲ್ಲಿ ಮರಗಳನ್ನು ಕಡಿದಿರುವುದರಲ್ಲಿ ಕಾನೂನು ಚೌಕಟ್ಟು ಮೀರಿದ್ದರೆ ಯಾರು ಬೇಕಾದರೂ ಸರ್ಕಾರಕ್ಕೆ ನಮ್ಮ ವಿರುದ್ಧ ದೂರು ನೀಡಲಿ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ಸವಾಲು ಹಾಕಿದ್ದಾರೆ!

ರಸ್ತೆ ಅಗಲೀಕರಣ ಸೇರಿದಂತೆ ಯಾವುದಾದರೂ ಅಭಿವೃದ್ಧಿ ಕಾರ್ಯ ಮಾಡುವಾಗ ಸಾರ್ವಜನಿಕರಿಂದ ಇಂತಹ ವಿರೋಧ ಬರುವುದು ಸರ್ವೇ ಸಾಮಾನ್ಯ ಎಂದು ಪಾಲಿಕೆ ಅಧಿಕಾರಿಗಳು ತಮ್ಮ ನಿರ್ಧಾರವನ್ನು ಸಮರ್ಥಿಸಿಕೊಂಡಿದ್ದಾರೆ!! (ಮೈಸೂರು ಮಿತ್ರ 20.04.2025)

ಡಿಸಿಎಫ್ ಡಾ.ಬಸವರಾಜು ಮತ್ತು ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸಿಫ್ ಅವರು ಮೈಸೂರಿನ 'ಮರಮೇಧ'ವನ್ನು ಸಮರ್ಥಿಸಿಕೊಂಡಿರುವುದು ಉದ್ಧಟತನದ ಪರಮಾವಧಿ! ಈ ಇಬ್ಬರೂ ಅಧಿಕಾರಿಗಳಿಗೆ ಮರ-ಗಿಡಗಳ ಬೆಲೆ ಗೊತ್ತಿಲ್ಲ. ಪ್ರಕೃತಿಯ ಅರಿವಿಲ್ಲ. ಸದಾ ಹವಾನಿಯಂತ್ರಿತ ಐಷಾರಾಮಿ ಕೊಠಡಿಯಲ್ಲಿ ಕುಳಿತು ಅಧಿಕಾರ ಚಲಾಯಿಸುವ ಈ ಅಧಿಕಾರಿಗಳು ಓಡಾಡುವುದೂ ಕೂಡಾ ಹವಾನಿಯಂತ್ರಿತ ಐಷಾರಾಮಿ ಕಾರಿನಲ್ಲಿ! ಇವರು ವಾಸಿಸುವುದೂ ಕೂಡಾ ಹವಾನಿಯಂತ್ರಿತ ಐಷಾರಾಮಿ ಬಂಗಲೆಗಳಲ್ಲಿ!

ದಿನದ 24 ಗಂಟೆಯೂ ಹವಾನಿಯಂತ್ರಿತ ವಾತಾವರಣದಲ್ಲಿ ಜೀವಿಸುವ ಈ ಅಧಿಕಾರಿಗಳಿಗೆ ಮರ-ಗಿಡ,ಪ್ರಕೃತಿಯ ಬಗ್ಗೆ ಒಲವು ಮೂಡಲು ಹೇಗೆ ಸಾಧ್ಯ?

ರಸ್ತೆ ಅಗಲೀಕರಣದ ನೆಪದಲ್ಲಿ ನಗರದಾದ್ಯಂತ ಮರಮೇಧ ನಡೆಸುವ ಮರಹಂತಕರು ಸದಾ ಹವಾನಿಯಂತ್ರಿತ ಐಷಾರಾಮಿ ಕಾರುಗಳಲ್ಲಿ ಸಂಚರಿಸುವುದರಿಂದ ಇಂತಹ ಅಧಿಕಾರಿಗಳು ಮತ್ತು ಅವರ ಕುಟುಂಬದವರಿಗೆ ಏನೂ ತೊಂದರೆಯಿಲ್ಲ.ಆದರೆ ಈ ರಸ್ತೆಯಲ್ಲಿ ನಡೆದುಕೊಂಡು ಹೋಗುವ ಜನ ಸಾಮಾನ್ಯರಿಗೆ,ಪ್ರಾಣಿ ಪಕ್ಷಿಗಳಿಗೆ ಗಿಡಮರಗಳ ನೆರಳು ಬೇಡವೇ?

ಡಿಸಿಎಫ್ ಮತ್ತು ಪಾಲಿಕೆ ಆಯುಕ್ತರಿಗೆ ವಿವೇಚನಾಧಿಕಾರ ಇರಬಹುದು. ಆದರೆ ವಿವೇಚನೆಯಿಲ್ಲ. ಸಾರ್ವಜನಿಕರಿಗೆ ವಿವೇಚನಾಧಿಕಾರ ಇಲ್ಲದಿರಬಹುದು. ಆದರೆ ವಿವೇಚನೆ ಇದೆ! ನಾವು ಮಾಡಿದ್ದೇ ಸರಿ.ತಾಕತ್ತಿದ್ದರೆ ದೂರು ನೀಡಲಿ ಎಂದು ಸವಾಲು ಹಾಕುವ ಮೂಲಕ ಈ ಇಬ್ಬರೂ ಅಧಿಕಾರಿಗಳು ಮೈಸೂರಿನಲ್ಲಿ ಕರ್ತವ್ಯ ನಿರ್ವಹಿಸುವ ನೈತಿಕ ಅಧಿಕಾರವನ್ನೇ ಕಳೆದುಕೊಂಡಿದ್ದಾರೆ.

ಮರಮೇಧ ನಡೆಸುವುದರ ಜೊತೆಗೆ ಆ ದುಷ್ಕೃತ್ಯವನ್ನು ಸಮರ್ಥಿಸಿಕೊಂಡು ಉದ್ಧಟತನ ಪ್ರದರ್ಶಿಸಿದ ಈ ಇಬ್ಬರೂ ಅಧಿಕಾರಿಗಳನ್ನು ಆದಷ್ಟೂ ಬೇಗ ಸಾಂಸ್ಕೃತಿಕ ನಗರಿಯಿಂದ ಗಿಡಮರಗಳಿಲ್ಲದ ಜಾಗಕ್ಕೆ ವರ್ಗಾಯಿಸಬೇಕೆಂದು ಆಗ್ರಹಿಸುವ ಸನ್ನಿವೇಶವನ್ನು ಈ ಅಧಿಕಾರಿಗಳೇ ಸೃಷ್ಟಿಸಿಕೊಂಡಂತಾಗಿದೆ.

–ಪಿ.ಜೆ.ರಾಘವೇಂದ್ರ, ನ್ಯಾಯವಾದಿ ಮೈಸೂರು

■ ಪೋಷಕರಿಗೆ ನೆಮ್ಮದಿ ತಂದ ಒಂದನೇ ತರಗತಿಗೆ ವಯೋಮಿತಿ ಸಡಿಲಿಕೆ

ಮಾನ್ಯರೆ,

ಶಿಕ್ಷಣ ಮಂತ್ರಿ ಮಧು ಬಂಗಾರಪ್ಪ ಒಂದನೇ ತರಗತಿಗೆ ಐದು ವರ್ಷ ಐದು ತಿಂಗಳು ವಯೋಮಿತಿ ಸಡಿಲಿಕೆ ಮಾಡಿದ್ದರಿಂದ ಪೋಷಕರು ನಿಟ್ಟುಸಿರು ಬಿಡುವಂತಾಗಿದೆ. ಆದರೆ ಇದು ಈ ವರ್ಷಕ್ಕೆ ಮಾತ್ರ ಅನ್ವಯವಾಗುತ್ತದೆ ಎಂದು ಶಿಕ್ಷಣ ಮಂತ್ರಿಗಳು ತಿಳಿಸಿದ್ದಾರೆ. ಮುಂದಿನ ವರ್ಷ ಆರು ವರ್ಷ ಆಗಿರಲೇಬೇಕು ಎಂಬ ನೀತಿಯನ್ನು ಜಾರಿಗೆ ತರುವ ವಿಷಯ ತಿಳಿಸಿದ್ದಾರೆ. ಆದರೆ ಈ ಕ್ರಮ ಸರಿ ಇಲ್ಲ. ಮುಂದಿನ ವರ್ಷವೂ ಇದೇ ರೀತಿ ತೊಂದರೆಗೆ ಸಿಲುಕುತ್ತಾರೆ. ಆದ್ದರಿಂದ, ಮುಂದೆಯೂ ಐದು ವರ್ಷ ಐದು ತಿಂಗಳು ಮಕ್ಕಳ ವಯೋಮಿತಿಯನ್ನು ಒಂದನೇ ತರಗತಿ ಪ್ರವೇಶಕ್ಕೆ ಮುಂದುವರೆಸಿ ಇಲ್ಲದಿದ್ದರೆ ಮತ್ತೆ ಒಂದನೇ ತರಗತಿಗೆ ಸೇರಿಸುವಾಗ ಸಮಸ್ಯೆಗಳು ಎದುರಾಗುತ್ತವೆ. ಪೋಷಕರು ನೆಮ್ಮದಿಯಿಂದ ಇರಬೇಕಾದರೆ ಮುಂದೆಯೂ 5 ವರ್ಷ 5 ತಿಂಗಳು ಜಾರಿಗೆ ತರುವ ಪ್ರಯತ್ನ ಮಾಡಿ ಇಲ್ಲದೆ ಹೋದರೆ ಈ ವರ್ಷದಿಂದಲೇ ಪೋಷಕರು ಚಿಂತೆಗಿಡಾಗುತ್ತಾರೆ.

–ಎಂ.ಎಸ್. ಉಷಾ ಪ್ರಕಾಶ್, ಲೇಖಕಿ ಹಾಗೂ ಕವಯಿತ್ರಿ, ಮೈಸೂರು.

■ ರಾಜ್ಯದಲ್ಲಿ ವ್ಯಾಪಕ ಭ್ರಷ್ಟಾಚಾರದ ಮಾತು!

ಮಾನ್ಯರೆ,

ಮಾಯಕೊಂಡ ಕ್ಷೇತ್ರದ ಹಾಲಿ ಕಾಂಗ್ರೆಸ್ ಶಾಸಕರಾದ ಕೆ.ಎಸ್. ಬಸವಂತಪ್ಪ ಅಮು ರಾಜ್ಯ ಸರ್ಕಾರ, ನಗರ ಸ್ಥಳೀಯ ಸಂಸ್ಥೆಗಳಲ್ಲಿ ದಿನಗೂಲಿ ಆಧಾರದ ಮೇಲೆ ಕೆಲಸ ಮಾಡುತ್ತಿರುವ ಪೌರಕಾರ್ಮಿಕರನ್ನು ಖಾಯಂಗೊಳಿಸಲು ಕನಿಷ್ಠ ಮೂರರಿಂದ ಐದು ಲಕ್ಷ ರೂಪಾಯಿಗಳನ್ನು ಲಂಚವಾಗಿ ಪಡೆಯುತ್ತಿದೆ ಎಂದು ಇತ್ತೀಚೆಗೆ ನಡೆದ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಬಹಿರಂಗವಾಗಿ ಹೇಳಿದ್ದಾರೆ. ಪೌರ ಕಾರ್ಮಿಕರು ಈ ಹಣ ಹೊಂದಿಸಲು ಬಡ್ಡಿಗೆ ಸಾಲ ಪಡೆಯುತ್ತಿದ್ದಾರೆ. ಮಹಿಳಾ ಪೌರ ಕಾರ್ಮಿಕರು ತಮ್ಮ ತಾಳಿಯನ್ನೇ ಮಾರುತ್ತಿದ್ದಾರೆ ಎಂದು ತಮ್ಮ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಇದೇ ಮಾತನ್ನು ಯಾರಾದರೂ ವಿರೋಧ ಪಕ್ಷದವರು ಮಾತನಾಡಿದ್ದರೆ, ಅವರು ವಿರೋಧ ಪಕ್ಷದವರು ಅವರಿಗೆ ಮಾಡಲು ಇನ್ನೇನು ಕೆಲಸವಿಲ್ಲ. ಪೌರ ಕಾರ್ಮಿಕರನ್ನು ನಮ್ಮ ಪಕ್ಷ ಖಾಯಂ ಮಾಡಲು ಹೊರಟಿದೆ. ಇದನ್ನು ಸಹಿಸದೆ ವಿರೋಧ ಪಕ್ಷಗಳು ಈ ರೀತಿಯ ಅಪಪ್ರಚಾರ ಮಾಡುತ್ತಿದ್ದಾರೆ ಎಂದು ಗಂಟಲು ಹರಿಯುವಂತೆ ಕಿರುಚುತಿದ್ದರು.

ಇತ್ತೀಚೆಗೆ ಈ ಸರ್ಕಾರದ ವಿರುದ್ಧ ಅನೇಕ ಭ್ರಷ್ಟಾಚಾರದ ಆರೋಪಗಳು ಕೇಳಿ ಬರುತ್ತಿವೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ, ಭ್ರಷ್ಟಾಚಾರದಲ್ಲಿ, ದೇಶದಲ್ಲೇ ಕರ್ನಾಟಕ ನಂ 1 ಎಂದು ಬಹಿರಂಗವಾಗಿಯೇ ಹೇಳಿದ್ದಾರೆ. ಇನ್ನು ರಾಜ್ಯ ಗುತ್ತಿಗೆದಾರರ ಸಂಘವು, ನಮ್ಮ ಬಾಕಿ ಬಿಲ್ ಪಾವತಿಸಲು ಕೆಲವು ಸಚಿವರ ಆಪ್ತರು, ಅವರ ಮಕ್ಕಳು, ಸಂಬಂಧಿಗಳು ಶೇಕಡ 60 ರಷ್ಟು ಕಮಿಷನ್ ಕೇಳುತ್ತಿದ್ದಾರೆ ಎಂದು ಸರ್ಕಾರದ ವಿರುದ್ಧ ಆರೋಪ ಮಾಡುತ್ತಿದ್ದಾರೆ. ಇವೆಲ್ಲವನ್ನೂ ಕಂಡು ಕಾಣದಂತೆ ಸರ್ಕಾರ ನಿದ್ದೆ ಮಾಡುತ್ತಿದೆ. ಇವೆಲ್ಲ ಅವರ ವೈಯಕ್ತಿಕ ಅಭಿಪ್ರಾಯ ಎಂದು ಕೈ ತೊಳೆದುಕೊಳ್ಳುತ್ತಿದೆ. ಸರ್ಕಾರ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿಯೇ ಇಲ್ಲ.

–ಬೂಕನಕೆರೆ ವಿಜೇಂದ್ರ, ಕುವೆಂಪು ನಗರ. ಮೈಸೂರು



ಕಾರ್ಕಳ ಆನಂದ ಭಟ್
ಮೊ: 7676554198
ಫ್ಲಾಟ್ ನಂ. 204, ಮೂರನೇ ಮಹಡಿ, ಏಕದಂತ ಅಪಾರ್ಟ್‌ಮೆಂಟ್ಸ್, OPP

ದಿಕ್ಕುದೆಸೆ

ನೇಪಾಳದಲ್ಲಿ ರಾಜಪ್ರಭುತ್ವ ಮರಳುವುದೇ!?

> “ನೇಪಾಳದಲ್ಲಿ ಪ್ರತಿ ವರ್ಷ ಫೆಬ್ರವರಿ 19 ಅನ್ನು ಪ್ರಜಾಪ್ರಭುತ್ವ ದಿನವೆಂದು ಆಚರಿಸಲಾಗುತ್ತದೆ. ಆ ದಿನವೇ ನೀಡಲಾಗಿದೆ ಎಂಬ ವೀಡಿಯೋ ಸಂದೇಶದಲ್ಲಿ ಮಾಜಿ ದೊರೆ ಜ್ಞಾನೇಂದ್ರನು 'ತಾನು ರಾಷ್ಟ್ರ ಮತ್ತು ಜನಸಾಮಾನ್ಯರ ಹಿತದೃಷ್ಟಿಯಿಂದ ಅಧಿಕಾರ ತ್ಯಜಿಸಿದ್ದೇನೆ. ಇದು ನನ್ನ ದೌರ್ಬಲ್ಯವಲ್ಲ. ಪ್ರಸ್ತುತ ಪ್ರಜಾಸತ್ತೆ ಶಬ್ಧಗಳಲ್ಲಿ ಮಾತ್ರವಿದೆ ಆಚರಣೆಯಲ್ಲಿಲ್ಲ. ದೇಶವಿಂದು ಆರ್ಥಿಕ ಸಂಕಷ್ಟ, ಯುವಕರ ವಲಸೆ, ಮತ್ತಿತರ ಬಿಕ್ಕಟ್ಟುಗಳಿಂದ ಹೈರಾಣಾಗಿದೆ. ದೇಶದಲ್ಲಿ ಮತ್ತೆ ಏಕತೆ ಮೂಡಬೇಕು. ಹಿಂದಿನ ತಪ್ಪುಗಳನ್ನು ಸರಿಪಡಿಸಿ ಎಂದು ಕರೆ ನೀಡುತ್ತಾ, ತಾನು ದೇಶಕ್ಕಾಗಿ ಯಾವುದೇ ರೀತಿಯ ತ್ಯಾಗಕ್ಕೂ ಸಿದ್ಧ' ಎಂಬ ಹೇಳಿಕೆ ನೀಡಿದ್ದರು.

ಹಿಮಾಲಯದ ಮಡಿಲಲ್ಲಿರುವ ಪುಟ್ಟ ರಾಷ್ಟ್ರ ನೇಪಾಳ. ಅದ್ಭುತ ಪ್ರಾಕೃತಿಕ ಸೌಂದರ್ಯ ಹೊಂದಿರುವ ಈ ದೇಶ ಪ್ರತಿ ವರ್ಷ ಲಕ್ಷಾಂತರ ಪ್ರವಾಸಿಗರನ್ನು ಸೆಳೆಯುತ್ತದೆ. ಪ್ರವಾಸೋದ್ಯಮ ಈ ದೇಶದ ಪ್ರಮುಖ ಆದಾಯದ ಮೂಲವೂ ಆಗಿದೆ.



ಮಾಜಿ ದೊರೆ ಜ್ಞಾನೇಂದ್ರ

ಕೆಲವು ವರ್ಷಗಳಿಂದ ನೇಪಾಳವು ರಾಜಕೀಯ ಅಸ್ಥಿರತೆಯಿಂದ ಬಳಲುತ್ತಿದೆ. ದೇಶದಲ್ಲಿ ಆಗಾಗ್ಗೆ ಸರ್ಕಾರಗಳು ಬದಲಾಗುತ್ತಿರುವುದರಿಂದ ಅಭಿವೃದ್ಧಿ ಕಾರ್ಯಗಳು ಸ್ಥಗಿತಗೊಂಡಿವೆ. ಭ್ರಷ್ಟಾಚಾರ ವ್ಯಾಪಕವಾಗಿದೆ. ಉದ್ಯೋಗಾವಕಾಶಗಳಿಲ್ಲದೆ ಜನರ ಬದುಕು ದುಸ್ತರವಾಗಿದೆ. ದೇಶದಲ್ಲಿ ಅರಾಜಕತಾ ಪರಿಸ್ಥಿತಿ ನಿರ್ಮಾಣವಾಗಿದೆ.

240 ವರ್ಷಗಳಿಂದ ಆಡಳಿತ ನಡೆಸುತ್ತಿದ್ದ ನೇಪಾಳದ ರಾಜಪ್ರಭುತ್ವ ಹಾಗೂ ಆ ನಂತರ ಅಧಿಕಾರದಲ್ಲಿರುವ ರಾಜಕೀಯ ಪಕ್ಷಗಳ ಮೈತ್ರಿಕೂಟಗಳ ಆಡಳಿತದಲ್ಲಿ ನೇಪಾಳಿಗಳ ಜೀವನ ಮಟ್ಟದಲ್ಲಿ ಸ್ವಲ್ಪವೂ ಬದಲಾವಣೆಯಾಗಿಲ್ಲ. ದೇಶದಲ್ಲಿ ಬಡತನ ಈಗಲೂ ವ್ಯಾಪಕವಾಗಿದೆ. ರಾಜಕೀಯ ಪಕ್ಷಗಳ ವೈಫಲ್ಯದಿಂದ ಮತ್ತೆ ರಾಜಪ್ರಭುತ್ವಕ್ಕೆ ಮಣೆ ಹಾಕಬೇಕೆಂಬ ಚರ್ಚೆ ನೇಪಾಳದಲ್ಲಿ ಆರಂಭವಾಗಿದೆ. ಆದರೆ 2008 ರಲ್ಲಿ ಕೊನೆಯಾದ ರಾಜಪ್ರಭುತ್ವದ ಆಡಳಿತ ವೈಖರಿಯ ಬಗ್ಗೆಯೂ ನೇಪಾಳದಲ್ಲಿ ಆತಂಕವಿದೆ.

ಮಾವೋವಾದಿಗಳ ಹಿಂಸಾಚಾರ

1996 ರಿಂದ 2006ರವರೆಗೆ ನೇಪಾಳದಲ್ಲಿ ನಡೆದ ಅಂತರ್ಯುದ್ಧದಲ್ಲಿ ಭಾರಿ ಪ್ರಮಾಣದಲ್ಲಿ ಹಿಂಸಾಚಾರ ನಡೆದವು. ನೇಪಾಳಿ ಕಮ್ಯುನಿಸ್ಟ್ ಪಕ್ಷವು (ಮಾವೋವಾದಿ) 1996ರಲ್ಲಿ ರಾಜಪ್ರಭುತ್ವ ಕೊನೆಗಾಣಿಸಿ ಜನತಾ (ಕಮ್ಯುನಿಸ್ಟ್) ಗಣರಾಜ್ಯ ಸ್ಥಾಪಿಸಲು ಜನತಾ ಯುದ್ಧ ಆರಂಭಿಸಿತು. ಹತ್ತು ವರ್ಷಗಳ ಕಾಲ ಮಾವೋವಾದಿಗಳು ನಡೆಸಿದ ಗೆರಿಲ್ಲಾ ಯುದ್ಧದಲ್ಲಿ ನೇಪಾಳ ರಕ್ತಸಿಕ್ತವಾಯಿತು. ಜನರ ಬದುಕು ದುರ್ಭರವಾಯಿತು. ಮುಷ್ಕರಗಳು, ಭದ್ರತಾ ತಪಾಸಣೆಗಳು, ಬೆದರಿಕೆಗಳು, ನಿರ್ಬಂಧಗಳು ನಡೆದವು. ಹತ್ಯೆಗಳು, ಅಪಹರಣಗಳು, ಹಫ್ತಾ ವಸೂಲಿ ವ್ಯಾಪಕವಾದವು. ಹೆಣ್ಮಕ್ಕಳು ಅತೀ ಹೆಚ್ಚು ದೌರ್ಜನ್ಯಕ್ಕೊಳಗಾದರು. ಸಹಸ್ರಾರು ಯುವತಿಯರನ್ನು ನಗರದ ಹೋಟೆಲ್, ಬಾರ್, ಕ್ಲಬ್‌ಗಳಲ್ಲಿ ನರ್ತಕಿಯರು, ಪರಿಚಾರಕಿಯರು, ವೇಶ್ಯಾ ವೃತ್ತಿಗೆ ದೂಡಲಾಯಿತು. ಈ ಮಧ್ಯೆ ನೇಪಾಳದ ಇತಿಹಾಸದಲ್ಲಿ ಕರಾಳವೆನಿಸಿದ ರಾಜಮನೆತನದ ಹತ್ಯಾಕಾಂಡ ಎಂದು ಪ್ರಸಿದ್ಧವಾದ ದುರ್ಘಟನೆ 2001 ಜೂನ್ 1ರಂದು ಘಟಿಸಿತು. **ರಾಜಕುಮಾರ ದೀಪೇಂದ್ರ** ನಡೆಸಿದ ಎಂದು ಶಂಕಿಸಲಾದ ಈ ಹತ್ಯಾಕಾಂಡದಲ್ಲಿ ರಾಜ, ರಾಣಿ ಸಹಿತ ರಾಜ ಪರಿವಾರವೇ ಹತ್ಯೆಗೀಡಾಯಿತು. ಮೂರು ದಿನಗಳ ನಂತರ ದೀಪೇಂದ್ರನು ಮೃತನಾಗುತ್ತಾನೆ. ನಂತರ ರಾಜಕುಮಾರ ಜ್ಞಾನೇಂದ್ರ ಪಟ್ಟಾಭಿಷಿಕ್ತನಾಗುತ್ತಾನೆ.

ಪ್ರಬಲವಾಗಿದ್ದ ಮಾವೋವಾದಿಗಳು ದೇಶದ ಹೆಚ್ಚಿನ ಭಾಗಗಳ ಮೇಲೆ ನಿಯಂತ್ರಣ ಸಾಧಿಸಿದ್ದರು. ತಮ್ಮ ಪ್ರಾಬಲ್ಯದ ಪ್ರದೇಶಗಳಲ್ಲಿ ಕೆಲವು ಸುಧಾರಣೆಗಳನ್ನು ತಂದಿದ್ದರು. ಇದರಿಂದ ದೇಶದಲ್ಲಿ ರಾಜಪ್ರಭುತ್ವದ ಮೇಲಿನ ವಿಶ್ವಾಸ ಕುಸಿಯಲಾರಂಭಿಸಿತು. ಇದನ್ನು ಗಮನಿಸಿದ ರಾಜ ಜ್ಞಾನೇಂದ್ರ ದಿ.01-02-2005ರಲ್ಲಿ ಸರ್ಕಾರ ವಜಾಗೊಳಿಸಿ ಪೂರ್ಣ ಅಧಿಕಾರ ವಹಿಸಿಕೊಳ್ಳುತ್ತಾನೆ. ದೇಶದಲ್ಲಿ ತುರ್ತು ಸ್ಥಿತಿ ಘೋಷಿಸಿ ಸ್ವಾತಂತ್ರ ಕಸಿಯಲಾಗುತ್ತದೆ. ಆದರೆ 2006ರ ಏಪ್ರಿಲ್‌ನಲ್ಲಿ ಸಂಸತ್ತು ಪುನಃ ಸ್ಥಾಪನೆಗೆ ಒತ್ತಾಯಿಸುವ ಪ್ರದರ್ಶನಗಳಾದವು. ದಿ.28-05-2008ರಂದು ಮಾವೋ ಬಂಡುಕೋರರು, ಆಡಳಿತ ಪಕ್ಷ ಒಳಗೊಂಡ ಏಳು ಪಕ್ಷಗಳ ಕೂಟದಿಂದ ಹೊಸದಾಗಿ ಆಯ್ಕೆಯಾದ ಸಂವಿಧಾನ ಸಭೆಯು ನೇಪಾಳವನ್ನು ಫೆಡರಲ್ ಡೆಮಾಕ್ರಟಿಕ್ ಗಣರಾಜ್ಯವೆಂದು ಘೋಷಿಸಿತು. 564 ಸಂಸದರಲ್ಲಿ 560 ಸದಸ್ಯರು 540 ವರ್ಷಗಳಷ್ಟು ಹಳೆಯದಾದ ರಾಜಪ್ರಭುತ್ವವನ್ನು ಕೊನೆಗಾಣಿಸುವ ಪರ ಮತ ಚಲಾಯಿಸಿದರು. 11-06-2008ರಂದು ಪದಚ್ಯುತ ರಾಜ ಜ್ಞಾನೇಂದ್ರ ಅರಮನೆ ತೊರೆಯುತ್ತಾನೆ. ದಿ. 15-08-2008 ರಂದು ನೇಪಾಳದ ಏಕೀಕೃತ ಕಮ್ಯುನಿಸ್ಟ್ ಪಕ್ಷದ (ಮಾವೊವಾದಿ) ಪುಷ್ಪ ಕಮಲ್ ದಹಾಲ್ (ಪ್ರಚಂಡ) ನೇಪಾಳ ಗಣರಾಜ್ಯದ ಮೊದಲ ಪ್ರಧಾನಿಯಾಗಿ ಆಯ್ಕೆಯಾಗುವುದರೊಂದಿಗೆ ದೇಶದಲ್ಲಿ ಪ್ರಜಾಸತ್ತಾತ್ಮಕ ವ್ಯವಸ್ಥೆ ಅಸ್ತಿತ್ವಕ್ಕೆ ಬಂದಿತು.

ಹಿಂಸಾತ್ಮಕ ಹೋರಾಟದ ಪರಿಣಾಮಗಳು

ಪ್ರಜಾಸತ್ತಾತ್ಮಕ ವ್ಯವಸ್ಥೆಗಾಗಿ ಮಾವೋವಾದಿಗಳು ಹತ್ತು ವರ್ಷಗಳ ಕಾಲ ನಡೆಸಿದ ಹಿಂಸೆಗೆ ನೇಪಾಳ ಭಾರೀ ಬೆಲೆ ತೆತ್ತಿದೆ. ಭದ್ರತಾ ಪಡೆಗಳು, ಮಾವೋವಾದಿಗಳು, ನಾಗರಿಕರು ಒಟ್ಟಾಗಿ ಹದಿನೇಳು ಸಾವಿರಕ್ಕೂ ಹೆಚ್ಚು ಮಂದಿ ಸಾವಿಗೀಡಾದರು. ಐದು ಸಾವಿರಕ್ಕೂ ಹೆಚ್ಚು ಜನರು ಶಾಶ್ವತ ಅಂಗವಿಕಲರಾದರು. ಹದಿನೈದು ಸಾವಿರದಷ್ಟು ಜನರು ಕಣ್ಮರೆಯಾಗಿದ್ದಾರೆ. ಸಹಸ್ರಾರು ಸಂಖ್ಯೆಯಲ್ಲಿ ಮಹಿಳೆಯರು ವಿಧವೆಯಾಗಿದ್ದಾರೆ. ಮಕ್ಕಳು ಅನಾಥರಾಗಿದ್ದಾರೆ. ಸಂಘರ್ಷದ ಅವಧಿಯಲ್ಲಿ ಲಕ್ಷಾಂತರ ಜನರು ಸ್ಥಳಾಂತರಗೊಂಡರು. ಉದ್ಯೋಗಕ್ಕಾಗಿ, ಪ್ರಾಣ ರಕ್ಷಣೆಗಾಗಿ ವಿದೇಶಗಳಿಗೆ ಪಲಾಯನ ಮಾಡಿದರು. ಭಾರತಕ್ಕೆ ವಲಸೆ ಬಂದರು. ನೇಪಾಳಿಗಳ ಸಾಮಾಜಿಕ-ಪರಿವಾರಿಕ-ಆರ್ಥಿಕ ಪರಿಸ್ಥಿತಿ ನಾಶಗೊಂಡಿತ್ತು. ಆದರೆ ಹೊಸ ಪ್ರಜಾಪ್ರಭುತ್ವ ಆಡಳಿತ ವ್ಯವಸ್ಥೆ ದೇಶವನ್ನು ಚಿಂತಾಜನಕ ಪರಿಸ್ಥಿತಿಯಿಂದ ಮೇಲೆತ್ತಬಹುದು ಎಂಬ ವಿಶ್ವಾಸ ತಾಳಿದ್ದರು. ಹೊಸ ಆಡಳಿತ ವ್ಯವಸ್ಥೆಯಲ್ಲಿ ಜನಪ್ರತಿನಿಧಿಗಳು ದೇಶದಲ್ಲಿ ಸುಖ, ಶಾಂತಿ, ನೆಮ್ಮದಿ ತರುವುದೆಂಬ ವಿಶ್ವಾಸವನ್ನು ನೇಪಾಳಿಗಳು ಹೊಂದಿದ್ದರು. ಆದರೆ ಆಡಳಿತ ವ್ಯವಸ್ಥೆ ಮೇಲಿನ ವಿಶ್ವಾಸ ಕಳೆದುಕೊಂಡರು. ನೇಪಾಳಿಗಳು ಭ್ರಮನಿರಸಗೊಂಡರು. 2008ರಿಂದ 17 ವರ್ಷಗಳಲ್ಲಿ ನೇಪಾಳದ ಆಡಳಿತ ಯಂತ್ರ ಸಂಘರ್ಷ ಹಳಿ ತಪ್ಪಿದೆ. ನಿರಂತರ ಬದಲಾಗುತ್ತಿರುವ ಪ್ರಧಾನಿಗಳು ಸರ್ಕಾರಗಳಿಂದಾಗಿ ದೇಶದಲ್ಲಿ ಅಸ್ಥಿರತೆ, ಅರಾಜಕತೆ, ಅಶಾಂತಿ ಮುಂದುವರಿದಿದೆ. 17 ವರ್ಷಗಳಲ್ಲಿ ದೇಶದಲ್ಲಿ 15 ಬಾರಿ ಪ್ರಧಾನಿಗಳು ಬದಲಾಗಿದ್ದಾರೆ. ಭ್ರಷ್ಟಾಚಾರ, ಸ್ವಜನಪಕ್ಷಪಾತ ಮೇರೆ ಮೀರಿದೆ. ನಿರುದ್ಯೋಗ, ಬಡತನದಿಂದ ಜನರು ಹತಾಶೆಗೊಂಡಿದ್ದು, ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ರಾಜನ ನಿರಂಕುಶ ಆಡಳಿತದಲ್ಲಿ ಭಯವಿದ್ದರೂ ದೇಶದಲ್ಲಿ ಶಾಂತಿ, ಸುಸ್ಥಿರತೆ ಇತ್ತು. ಪ್ರಸ್ತುತ ದೇಶದಲ್ಲಿ ಶಾಂತಿ, ನೆಮ್ಮದಿಯೂ ಮಾಯವಾಗಿದೆ. ನೇಪಾಳಿಗಳಿಗೆ ಬಾಣಲೆಯಿಂದ ಬೆಂಕಿಗೆ ಬಿದ್ದಂತೆ ಅನಿಸತೊಡಗಿದೆ. ಇದರ ಪರಿಣಾಮ ಸ್ವರೂಪ ದೇಶದಲ್ಲಿ ಮತ್ತೆ ರಾಜಪ್ರಭುತ್ವದ ಪರವಾಗಿ ಧ್ವನಿ ಎತ್ತಿದ್ದಾರೆ.

ರಾಜಪ್ರಭುತ್ವ ಮತ್ತೆ ಬರುವುದೇ?

ಇತ್ತೀಚಿನ ವರ್ಷಗಳಲ್ಲಿ ನೇಪಾಳದಲ್ಲಿ ರಾಜಪ್ರಭುತ್ವವನ್ನು ಸಮರ್ಥಿಸುವ ಪ್ರದರ್ಶನಗಳು ಅನೇಕ ನಗರಗಳಲ್ಲಿ ನಡೆದಿವೆ. ಮಾಧ್ಯಮಗಳ ಭಾರೀ ಪ್ರಚಾರದಿಂದ ದೇಶಾದ್ಯಂತ ಸಹಸ್ರಾರು ನಾಗರಿಕರು ಬೀದಿಗಿಳಿದು, ರಾಜಪ್ರಭುತ್ವದ ಹಾಗೂ ಹಿಂದೂ ರಾಷ್ಟ್ರದ ಪುನಃ ಸ್ಥಾಪನೆಗೆ ಒತ್ತಾಯಿಸಿವೆ. ಇತ್ತೀಚೆಗೆ ನೇಪಾಳದ ಕೆಲವು ಪ್ರದೇಶಗಳಿಗೆ ಮಾಜಿ ದೊರೆ ಜ್ಞಾನೇಂದ್ರರು ಭೇಟಿ ನೀಡಿದ ಸಂದರ್ಭದಲ್ಲಿ ಭಾರೀ ಪ್ರಮಾಣದಲ್ಲಿ ಸಾರ್ವಜನಿಕರನ್ನು ಸೆಳೆಯುವಲ್ಲಿ ಯಶಸ್ವಿಯಾಗಿದ್ದರು. 2008ರ ನಂತರ ಅಸ್ತಿತ್ವಕ್ಕೆ ಬಂದ ಪ್ರಜಾಸತ್ತಾತ್ಮಕ ಆಡಳಿತ ವ್ಯವಸ್ಥೆಯಲ್ಲಿ ರಾಜಕಾರಣಿಗಳ ವೈಫಲ್ಯವು ದೇಶದಲ್ಲಿ ಪ್ರಜಾಪ್ರಭುತ್ವ ವಿಫಲಗೊಂಡಿದೆ ಎಂಬ ವಿಚಾರಕ್ಕೆ ಶಕ್ತಿ ನೀಡಿದೆ. ಈ ವೈಫಲ್ಯಗಳು ದೇಶದಲ್ಲಿ ರಾಷ್ಟ್ರೀಯ ಭಾವನೆಗಳನ್ನು ಜಾಗೃತಗೊಳಿಸಿದ್ದು, ರಾಜಪ್ರಭುತ್ವದ ಪುನರಾಗಮನಕ್ಕೆ ಅವಕಾಶ ಕಲ್ಪಿಸಿದೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ನೇಪಾಳದ ಸಾರ್ವಭೌಮತ್ವ ದುರ್ಬಲಗೊಂಡಿದೆ. ರಾಜನು ದೇಶದ ಏಕತೆ, ಸ್ವಾತಂತ್ರ್ಯ ಹಾಗೂ ಸಾರ್ವಭೌಮತ್ವದ ಸಂಕೇತವಾಗಿದ್ದರು. ರಾಜಸತ್ತೆ ಪುನರ್ ಸ್ಥಾಪನೆಯಿಂದ ದೇಶದ ಅಸ್ಮಿತೆ, ಗೌರವ ಮರಳಿ ಸ್ಥಾಪಿಸಬಹುದು ಎಂಬ ಭಾವನೆ ಭಾರೀ ಸಂಖ್ಯೆಯ ನೇಪಾಳಿಗಳಲ್ಲಿದೆ.

ನೇಪಾಳದಲ್ಲಿ ಪ್ರತಿ ವರ್ಷ ಫೆಬ್ರವರಿ 19 ಅನ್ನು ಪ್ರಜಾಪ್ರಭುತ್ವ ದಿನವೆಂದು ಆಚರಿಸಲಾಗುತ್ತದೆ. ಆ ದಿನವೇ ನೀಡಲಾಗಿದೆ ಎಂಬ ವೀಡಿಯೋ ಸಂದೇಶದಲ್ಲಿ ಮಾಜಿ ದೊರೆ ಜ್ಞಾನೇಂದ್ರನು 'ತಾನು ರಾಷ್ಟ್ರ ಮತ್ತು ಜನಸಾಮಾನ್ಯರ ಹಿತದೃಷ್ಟಿಯಿಂದ ಅಧಿಕಾರ ತ್ಯಜಿಸಿದ್ದೇನೆ. ಇದು ನನ್ನ ದೌರ್ಬಲ್ಯವಲ್ಲ. ಪ್ರಸ್ತುತ ಪ್ರಜಾಸತ್ತೆ ಶಬ್ಧಗಳಲ್ಲಿ ಮಾತ್ರವಿದೆ ಆಚರಣೆಯಲ್ಲಿಲ್ಲ. ದೇಶವಿಂದು ಆರ್ಥಿಕ ಸಂಕಷ್ಟ, ಯುವಕರ ವಲಸೆ, ಮತ್ತಿತರ ಬಿಕ್ಕಟ್ಟುಗಳಿಂದ ಹೈರಾಣಾಗಿದೆ. ದೇಶದಲ್ಲಿ ಮತ್ತೆ ಏಕತೆ ಮೂಡಬೇಕು. ಹಿಂದಿನ ತಪ್ಪುಗಳನ್ನು ಸರಿಪಡಿಸಿ ಎಂದು ಕರೆ ನೀಡುತ್ತಾ, ತಾನು ದೇಶಕ್ಕಾಗಿ ಯಾವುದೇ ರೀತಿಯ ತ್ಯಾಗಕ್ಕೂ ಸಿದ್ಧ' ಎಂಬ ಹೇಳಿಕೆ ನೀಡಿದ್ದರು.

ಮಾರ್ಚ್ 28ರಂದು ನೇಪಾಳಿ ಸಂಸತ್ತಿನ ಬಳಿ ಜಮಾಯಿಸಿದ ಸಾವಿರಾರು ರಾಜನ ಪರ ಪ್ರತಿಭಟನಾಕಾರರು 'ರಾಜ ಮತ್ತು ದೇಶವು ನಮಗೆ ಪ್ರಾಣಕ್ಕಿಂತ ಪ್ರಿಯ' ಎಂದು ಘೋಷಣೆ ಕೂಗುತ್ತಿದ್ದರು. ಆದರೆ ಈ ಪ್ರತಿಭಟನಾ ಸಭೆ ಹಿಂಸೆಗೆ ಹಿಂತಿರುಗಿತು. ಘರ್ಷಣೆಯಲ್ಲಿ ಇಬ್ಬರು ಸಾವಿಗೀಡಾಗಿ ಭಾರೀ ಪ್ರಮಾಣದಲ್ಲಿ ಸಾರ್ವಜನಿಕ ಸೊತ್ತುಗಳು ನಾಶವಾದವು. ಈ ಪ್ರತಿಭಟನೆಗಳ ಮಧ್ಯೆ ರಾಜಪ್ರಭುತ್ವದ ಪರವಾಗಿ 1990ರಲ್ಲಿ ಪ್ರಾರಂಭವಾದ ರಾಷ್ಟ್ರೀಯ ಪ್ರಜಾತಂತ್ರ ಪಾರ್ಟಿಯ (ಆರ್‌ಪಿಪಿ) ಕೇಂದ್ರ ಸಮಿತಿ ಸದಸ್ಯ ಸ್ವಾತಿ ಥಾಪಾರವರು 'ದೇಶದ ನಾಗರಿಕರು ರಾಜನನ್ನು ಮರಳಿ ಬಯಸುತ್ತಾರೆ ಮತ್ತು ದೇಶವನ್ನು ಪುನಃ ಹಿಂದೂ ರಾಷ್ಟ್ರವಾಗಬೇಕೆಂದು ಬಯಸುತ್ತಿದ್ದಾರೆ' ಎಂದು ಹೇಳಿದರು. ನೇಪಾಳದ ರಾಜಕೀಯದಲ್ಲಿ ಈ ಪಕ್ಷ ಏರಿಳಿತಗಳನ್ನು ಕಂಡರೂ ನಿರಂತರ ಶಕ್ತಿಯಾಗಿ ಉಳಿದಿದೆ. ಕೆಲವೊಮ್ಮೆ ಕಿಂಗ್ ಮೇಕರ್ ಆಗಿದೆ. 2022ರ ಚುನಾವಣೆಯಲ್ಲಿ 14 ಸ್ಥಾನಗಳನ್ನು ಪಡೆದು 2023 ಫೆಬ್ರವರಿವರೆಗೆ ಸರ್ಕಾರದ ಭಾಗವಾಗಿತ್ತು. ಪ್ರಸ್ತುತ ಈ ಪಕ್ಷವು ರಾಜನ ಪರವಾಗಿ ತನ್ನ ಹೋರಾಟವನ್ನು ತೀವ್ರಗೊಳಿಸಿದೆ. ಆಡಳಿತ ಮೈತ್ರಿಕೂಟ ರಾಜನ ಪುನರಾಗಮನದಿಂದ ಆತಂಕಗೊಂಡಿದೆ.

ಹಿಂಸಾತ್ಮಕ ಪ್ರದರ್ಶನದ ನಂತರ ಸಭೆ ಸೇರಿದ ಆಡಳಿತ ಮೈತ್ರಿಕೂಟದ ಜಂಟಿ ಸಭೆಯ ಬಳಿಕ ನೀಡಿದ ಹೇಳಿಕೆಯಲ್ಲಿ 'ಪ್ರಸ್ತುತ ಆಡಳಿತ ವ್ಯವಸ್ಥೆ ಸುದೀರ್ಘ ಹೋರಾಟದ ನಂತರ ಸಾಧಿಸಲಾಗಿದೆ. ದೇಶದಲ್ಲಿ ಸಂವಿಧಾನ ವಿರೋಧಿ ಚಟುವಟಿಕೆಗಳನ್ನು ಸರಿಪಡಿಸಲಾಗುವುದಿಲ್ಲ' ಎಂದು ಗೃಹ ಸಚಿವ ರಮೇಶ್ ಲೇಖಕ್ ಎಚ್ಚರಿಕೆ ನೀಡಿದರು. ಪ್ರಧಾನಿ ಕೆ.ಪಿ.ಶರ್ಮ ಓಲಿಯವರು 'ದೇಶದಲ್ಲಿ ಸರ್ಕಾರದ ವಿರುದ್ಧ ಈ ರೀತಿಯ ಚಟುವಟಿಕೆ ಸಹಿಸಲಾಗದು. ಸರ್ಕಾರ ಕಠಿಣ ಕ್ರಮ ಕೈಗೊಳ್ಳುವುದೆಂದು ಎಚ್ಚರಿಕೆ ನೀಡಿದರು. ಈ ಹೇಳಿಕೆಗಳ ನಂತರ ದೇಶದಲ್ಲಿ ನೂರಾರು ಜನರನ್ನು ಬಂಧಿಸಲಾಗಿದೆ.

ಕಠ್ಮಂಡು ಮಹಾನಗರಪಾಲಿಕೆ ಸಾರ್ವಜನಿಕ ಸೊತ್ತು ನಾಶಪಡಿಸಿದ್ದಕ್ಕಾಗಿ ಮಾಜಿ ದೊರೆ ಜ್ಞಾನೇಂದ್ರ ಷಾ ರವರಿಗೆ ನೇಪಾಳಿ ರೂ. 8 ಲಕ್ಷ (ಐಎನ್‌ಆರ್ 5 ಲಕ್ಷ) ದಂಡ ವಿಧಿಸಿದೆ. ಆದರೆ ಷಾ ಬೆಂಬಲಿಗರು ದಂಡ ಪಾವತಿಸಲು ಇದುವರೆಗೆ ಸಾರ್ವಜನಿಕರಿಂದ ನೇಪಾಳಿ ರೂ. 4.8 ಲಕ್ಷ (ಐಎನ್‌ಆರ್ 3 ಲಕ್ಷ) ವನ್ನು ಸಂಗ್ರಹಿಸಿದ್ದಾರೆ. ಇದು ದೇಶದಲ್ಲಿ ರಾಜನ ಹೆಚ್ಚುತ್ತಿರುವ ಜನಪ್ರಿಯತೆಯ ಸಂಕೇತವಾಗಿದೆ ಎಂದು ವಿಶ್ಲೇಷಿಸಲಾಗಿದೆ.

ರಾಜಪ್ರಭುತ್ವ ಮರುಸ್ಥಾಪನೆಗಿರುವ ಅಡ್ಡಿಗಳು

ರಾಜಕುಮಾರ ದಿಪೇಂದ್ರ ಸಾವಿನ ನಂತರ ದೊರೆಯಾದ ಜ್ಞಾನೇಂದ್ರರವರು ಚುನಾಯಿತ ಸರ್ಕಾರವನ್ನು ವಜಾಗೊಳಿಸಿದ್ದು, ಎಲ್ಲ ರೀತಿಯ ಸ್ವಾತಂತ್ರ್ಯಗಳ ಹರಣ ಮಾಡಿದ್ದು, ಭಾರತ ವಿರೋಧಿ ಚೀನಾ ಪರ ನೀತಿ ಮೊದಲಾದ ಅಪಸವ್ಯಗಳು ಮತ್ತೆ ರಾಜಪ್ರಭುತ್ವ ಸ್ಥಾಪನೆಗೆ ವಿರುದ್ಧವಾಗಿರುವ ಅಂಶಗಳಾಗಿವೆ. ಜತೆಗೆ ದೊರೆ ಜ್ಞಾನೇಂದ್ರರ ಪುತ್ರ ಪಾರಸ್ ಷಾನ ನಡವಳಿಕೆಗಳು ರಾಜಮನೆತನದ ಗೌರವಕ್ಕೆ ಚ್ಯುತಿ ತಂದಿದೆ. ರಾಜಸತ್ತೆ ಮರುಸ್ಥಾಪನೆಗೆ ಜಾಗತಿಕ ಮಟ್ಟದಲ್ಲಿಯೂ ಬೆಂಬಲ ವ್ಯಕ್ತವಾಗಿಲ್ಲ. ವಿಶೇಷವಾಗಿ ಭಾರತ, ಚೀನಾ, ಅಮೆರಿಕದಂತಹ ಬೃಹತ್ ದೇಶಗಳು ರಾಜಸತ್ತೆ ಪರವಾಗಿ ಯಾವುದೇ ಹೇಳಿಕೆ ಇದುವರೆಗೆ ನೀಡಿಲ್ಲ. ಪ್ರಜಾಸತ್ತೆ ಸ್ಥಾಪಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ ಭಾರತವು ರಾಜಸತ್ತೆಯ ಪುನರ್ ಸ್ಥಾಪನೆಯನ್ನು ಮತ್ತೆ ಬೆಂಬಲಿಸುವುದು ಅನುಮಾನಾಸ್ಪದವಾಗಿದೆ.

ಆಡಳಿತ ಯಾವ ರೀತಿ ಇರುವುದೆಂಬ ಬಗ್ಗೆ ಮಾಹಿತಿ ನೀಡುವಲ್ಲಿ ವಿಫಲವಾಗಿವೆ. ರಾಜಸತ್ತೆ ಬೆಂಬಲಿಗರಲ್ಲಿ ಒಂದು ಗುಂಪು ದೇಶದಲ್ಲಿ ರಾಜಸತ್ತೆಯ ಆಡಳಿತವಿರಬೇಕೆಂದು ಬಯಸುತ್ತಿದ್ದಾರೆ. ಇನ್ನೊಂದು ಗುಂಪು ದೇಶ ಮತ್ತೆ ಹಿಂದು ರಾಷ್ಟ್ರವಾಗಿ ಅದರ ಆಡಳಿತ ಹಾಗೂ ರಾಷ್ಟ್ರ ಪ್ರಮುಖನಾಗಿ ರಾಜನಿರಬೇಕೆಂದು ವಾದಿಸುತ್ತಿದೆ. ಆದರೆ ಜ್ಞಾನೇಂದ್ರ ಷಾ ಇದುವರೆಗೆ ಯಾವುದೇ ಪ್ರತಿಕ್ರಿಯೆ ನೀಡದಿರುವುದು ವಿಶೇಷವಾಗಿದೆ. ನೇಪಾಳಿಗಳು ಮಾತ್ರ ಮತ್ತೆ ರಾಜಪ್ರಭುತ್ವದ ಬಾಣಲೆಯಲ್ಲಿ ಬೇಯಿಸಿಕೊಳ್ಳಬೇಕೆ ಅಥವಾ ಪ್ರಜಾಪ್ರಭುತ್ವದ ಬೆಂಕಿಯಲ್ಲಿ ಸುಟ್ಟುಕೊಳ್ಳಬೇಕೆ ಎಂಬ ದ್ವಂದ್ವದಲ್ಲಿದ್ದಾರೆ.

ಕೇಂದ್ರ ಒಪ್ಪಿಗೆ ಕೊಟ್ಟರೆ ತಕ್ಷಣ ಮೇಕೆದಾಟು, ಮಹದಾಯಿ ಯೋಜನೆ ಜಾರಿ

ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ

ಬೆಳಗಾವಿ: ಮಹಾದಾಯಿ, ಮೇಕೆದಾಟು ಯೋಜನೆಗಳಿಗೆ ಕೇಂದ್ರ ಸರಕಾರ ಒಪ್ಪಿಗೆಯನ್ನೆ ಕೊಡುತ್ತಿಲ್ಲ. ಒಪ್ಪಿಗೆ ಕೊಟ್ಟಿದ್ದೇ ಆದರೆ, ಯೋಜನೆಗಳನ್ನು ಆರಂಭಿಸಲು ನಮ್ಮ ಸರ್ಕಾರ ಸಿದ್ಧವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ಘೋಷಿಸಿದರು.



ಬೆಳಗಾವಿಯ ಸುವರ್ಣ ಸೌಧದಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು.

ಬೆಳಗಾವಿಯ ಸುವರ್ಣ ವಿಧಾನ ಸೌಧದಲ್ಲಿ ಕೃಷಿ ಇಲಾಖೆ ಸಹಾಯಧನದ ಅಡಿಯಲ್ಲಿ ಸುಮಾರು ರೂ.400 ಕೋಟಿ ವೆಚ್ಚದ ಕೃಷಿ ಯಂತ್ರಗಳು ಮತ್ತು ಸಲಕರಣೆಗಳನ್ನು ರೈತರಿಗೆ ವಿತರಿಸಿ, ನಂತರ ಮಾತನಾಡಿದರು.

ಅರಣ್ಯ ಇಲಾಖೆ ಅನುಮತಿ ದೊರಕದಿರುವುದರಿಂದ ಮಹದಾಯಿ ಯೋಜನೆ ವಿಳಂಬವಾಗುತ್ತಿದೆ. ಕೇಂದ್ರ ಸರಕಾರ ಅನುಮತಿ ನೀಡಿದರೆ ನಾಳೆಯೇ ಕಾಮಗಾರಿ ಆರಂಭ ಮಾಡುತ್ತೇವೆ ಎಂದು ಹೇಳಿದರು.

ಮಹದಾಯಿ, ಮೇಕೆದಾಟು, ಕೃಷ್ಣಾ ಮೇಲ್ದಂಡೆ ಯೋಜನೆಯಡಿ ಆಲಮಟ್ಟಿ ಜಲಾಶಯ ಎತ್ತರ ಹೆಚ್ಚಳ ಸೇರಿದಂತೆ ರಾಜ್ಯದಲ್ಲಿ ನನೆಗುದಿಗೆ ಬಿದ್ದಿರುವ ಎಲ್ಲ ನೀರಾವರಿ ಯೋಜನೆಗಳನ್ನು ತಕ್ಷಣ ಆರಂಭಿಸಲು ರಾಜ್ಯ ಸರಕಾರ ಸಿದ್ಧವಿದೆ. ಒಕ್ಕೂಟ ವ್ಯವಸ್ಥೆಯಲ್ಲಿ ಕೇಂದ್ರ ಸರಕಾರ ಮಧ್ಯಸ್ಥಿಕೆ ವಹಿಸುವ ಮೂಲಕ ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ ಅನುಕೂಲ ಮಾಡಿಕೊಡಬೇಕು ಎಂದು ತಿಳಿಸಿದರು.

ಮಹದಾಯಿ ಯೋಜನೆ ವಿಳಂಬವಾಗಲು ಕೇಂದ್ರ ಸರಕಾರವೇ ಕಾರಣ. ಈ ಹಿಂದೆ ಬಿ.ಎಸ್.ಯಡಿಯೂರಪ್ಪ ಬಿಜೆಪಿ ಅಧಿಕಾರಕ್ಕೆ ಬಂದರೆ ಮರುದಿನವೇ ಮಹದಾಯಿ ಯೋಜನೆ ಆರಂಭಿಸುತ್ತೇವೆ ಎಂದಿದ್ದರು. ಆದರೆ, ಏನೂ ಮಾಡಲಿಲ್ಲ. ಕೇಂದ್ರದಲ್ಲಿ ನಮ್ಮ ಸಂಸದರು ಮಾತನಾಡುವುದಿಲ್ಲ. ಇಲ್ಲಿ ಬಂದು ರಾಜ್ಯ ಸರಕಾರದ ಮೇಲೆ ಗೂಬೆ ಕೂರಿಸುವ ಕೆಲಸ ಮಾಡುತ್ತಾರೆಂದು ಸಿದ್ದರಾಮಯ್ಯ ಕಿಡಿಕಾರಿದರು.

ಬಳಿಕ ರೈತರಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳ ಕುರಿತು ಮಾತನಾಡಿದ ಅವರು, ಒಣ ಬೇಸಾಯಗಾರರಿಗೆ ಅನುಕೂಲ ಕಲ್ಪಿಸಲು ಕೃಷಿ ಭಾಗ್ಯ ಜಾರಿಗೆ ತರಲಾಗಿದ್ದು, 200 ಕೋಟಿ ರೂಪಾಯಿ ಮೀಸಲಿಡಲಾಗಿದೆ. ರಾಜ್ಯದಲ್ಲಿ ಕಳೆದ ವರ್ಷ 25,000 ಕ್ಕೂ ಹೆಚ್ಚು ಕೃಷಿ ಹೊಂಡಗಳನ್ನು ನಿರ್ಮಿಸಲಾಗಿದೆ. ಸರ್ಕಾರದಿಂದ ನೀರಾವರಿಗೆ ಆದ್ಯತೆ ನೀಡಲಾಗಿದ್ದು, ಬೃಹತ್ ಮತ್ತು ಸಣ್ಣ ನೀರಾವರಿಗೆ 25 ಸಾವಿರ ಕೋಟಿಗೂ ಅಧಿಕ ಹಣವನ್ನು ಖರ್ಚು ಮಾಡಲಾಗುತ್ತಿದೆ. ರಾಜ್ಯದ ಎಲ್ಲ ನೀರಾವರಿ ಯೋಜನೆ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಬೆಳಗಾವಿ ವಿಭಾಗದ ವ್ಯಾಪ್ತಿಯ ರೈತರಿಗೆ ಕಳೆದ ವರ್ಷ ಕೂಡ ರೈತರಿಗೆ ಕೃಷಿ ಯಂತ್ರೋಪಕರಣಗಳನ್ನು ನೀಡಲಾಗಿದೆ. ಅದೇ ರೀತಿ ಈ ಬಾರಿ ಕೂಡ ಕೃಷಿ ಇಲಾಖೆಯ ಸಹಾಯಧನದಡಿಯಲ್ಲಿ ವಿವಿಧ ಬಗೆಯ ಸವಲತ್ತುಗಳನ್ನು ನೀಡಲಾಗಿದೆ. ಕೃಷಿ ಪ್ರಧಾನವಾಗಿರುವ ದೇಶದಲ್ಲಿ ರೈತರಿಗೆ ಸಹಾಯ ಮಾಡಬೇಕಾಗಿರುವುದು ಸರಕಾರದ ಜವಾಬ್ದಾರಿಯಾಗಿದೆ. ಆದ್ದರಿಂದ ಸರಕಾರ ರೈತರ ಹಿತರಕ್ಷಣೆಗೆ ಬದ್ಧವಾಗಿ ಕಾರ್ಯನಿರ್ವಹಿಸುತ್ತಿದೆ. ನೀರಾವರಿಗೆ ಒತ್ತು ನೀಡಲಾಗುತ್ತಿದ್ದು, ಬೆಳಗಾವಿ ವಿಭಾಗದಲ್ಲಿ ಕಬ್ಬು ಬೆಳೆಗಾರರ ಸಂಖ್ಯೆ ಹೆಚ್ಚಾಗಿರುವುದರಿಂದ ಸಾಮಾನ್ಯ ವರ್ಗದ ರೈತರಿಗೆ ಶೇ.40 ಮತ್ತು ಪರಿಶಿಷ್ಟ ವರ್ಗದ ರೈತರಿಗೆ ಶೇ.50 ಸಹಾಯಧನದಲ್ಲಿ ಅತ್ಯಾಧುನಿಕ ಕಬ್ಬು ಕಟಾವು ಯಂತ್ರ ನೀಡಲಾಗುತ್ತಿದೆ ಎಂದರು.

ಕೃಷಿ ಕಾರ್ಮಿಕರ ಸಂಖ್ಯೆ ಕಡಿಮೆಯಾಗಿರುವುದರಿಂದ ಬೇಸಾಯ ಕಷ್ಟಕರವಾಗಿದೆ. ಆದ್ದರಿಂದ ಕೃಷಿ ಯಂತ್ರೋಪಕರಣಗಳನ್ನು ಸರಕಾರದ ವತಿಯಿಂದ ವಿತರಿಸಲಾಗುತ್ತಿದೆ. ಈ ಬಾರಿ ಉತ್ತಮ ಮಳೆಯ ಮುನ್ಸೂಚನೆ ಇದೆ. ಮುಂಬರುವ ದಿನಗಳಲ್ಲಿ ಆಹಾರ ಉತ್ಪಾದನೆ ಇನ್ನೂ ಹೆಚ್ಚಾಗಲಿ. ಸರಕಾರ ಅಗತ್ಯ ನೆರವು ನೀಡಲಿದೆ ಎಂದು ಭರವಸೆ ನೀಡಿದರು.

ಕೃಷಿ ಪ್ರಧಾನವಾಗಿರುವ ದೇಶದಲ್ಲಿ ರೈತರಿಗೆ ಸಹಾಯ ಮಾಡಬೇಕಾಗಿರುವುದು ಸರಕಾರದ ಜವಾಬ್ದಾರಿಯಾಗಿದೆ. ಆದ್ದರಿಂದ ಸರಕಾರ ರೈತರ ಹಿತರಕ್ಷಣೆಗೆ ಬದ್ಧವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು.

ಸಚಿವರಾದ ಸತೀಶ್ ಜಾರಕಿಹೊಳಿ, ಚಲುವರಾಯಸ್ವಾಮಿ, ಲಕ್ಷ್ಮಿ ಹೆಬ್ಬಾಳ್ಕರ್ ಇನ್ನಿತರರು ಉಪಸ್ಥಿತರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಹಾಸನ ಮಿತ್ರ

ಪರಿಸರ ಸ್ನೇಹಿ ಆಡಳಿತ: ಬಿರಡಹಳ್ಳಿ ಗ್ರಾಪಂಗೆ ರಾಷ್ಟ್ರೀಯ ಪುರಸ್ಕಾರ



ಸಕಲೇಶಪುರ, ಏ.21– ಕೇಂದ್ರ ಸರ್ಕಾರ ಕೊಡಮಾಡುವ ರಾಷ್ಟ್ರೀಯ ಪಂಚಾಯತ್‌ರಾಜ್ ಪುರಸ್ಕಾರಕ್ಕೆ ತಾಲೂಕಿನ ಬಿರಡಹಳ್ಳಿ ಗ್ರಾಮ ಪಂಚಾಯಿತಿ ಆಯ್ಕೆಯಾಗಿದೆ. ಈ ಪ್ರಶಸ್ತಿಗೆ ಆಯ್ಕೆಯಾದ ರಾಜ್ಯದ ಏಕೈಕ ಪಂಚಾಯಿತಿ ಎನ್ನುವ ಹೆಗ್ಗಳಿಕೆಗೆ ಪಾತ್ರವಾಗಿದೆ.

ಬಿರಡಹಳ್ಳಿ ಗ್ರಾಮ ಪಂಚಾಯಿತಿಯ ಕ್ರಿಯಾಶೀಲ ಆಡಳಿತ, ಉತ್ತಮ ಸೇವೆ, ನವೀನ ತಂತ್ರಜ್ಞಾನಗಳ ಅಳವಡಿಕೆಗಳನ್ನು ಪರಿಗಣಿಸಿ, ಪರಿಸರ ಸ್ನೇಹಿ ಪಂಚಾಯಿತಿ ವಿಭಾಗದಲ್ಲಿ ಪ್ರಶಸ್ತಿಗೆ ಆಯ್ಕೆಯಾಗಿದೆ. 11 ಚುನಾಯಿತ ಸದಸ್ಯರನ್ನು ಒಳಗೊಂಡ ಪಂಚಾಯಿತಿ ವ್ಯಾಪ್ತಿಯಲ್ಲಿ 4,145 ಜನಸಂಖ್ಯೆ ಇದೆ. ಹಸಿರು ಸಿರಿಯ ನಡುವೆ ಕಂಗೊಳಿಸುತ್ತಿರುವ ಈ ಗ್ರಾಮ ಪಂಚಾಯಿತಿಯು ಝೀರೋ ಕಾರ್ಬನ್ ಗುರಿಯೆಡೆಗೆ ಸಾಗುವತ್ತ ಹಲವು ಕ್ರಮ ಕೈಗೊಂಡಿದೆ.

ಗ್ರಾಮ ಪಂಚಾಯಿತಿ ಕಚೇರಿಗೆ ಸೌರ ಚಾವಣಿ ಅಳವಡಿಸಲಾಗಿದ್ದು, ಸಂಪೂರ್ಣ ಕಚೇರಿಗೆ ಬೇಕಾದ ವಿದ್ಯುತ್ ಉತ್ಪಾದಿಸಿಕೊಳ್ಳುತ್ತಿದೆ. ಇದರ ಜೊತೆಗೆ ಮಳೆ ಮಾಪನ ಯಂತ್ರ, ಸೌರ ತಂತಿ ಬೇಲಿ, ಸಿಸಿ ಕ್ಯಾಮರಾಗಳು, ಇಂಟರ್‌ನೆಟ್ ಸಂಪರ್ಕ ಮತ್ತು ಅಂಚೆ ಕಚೇರಿಗಳು ಸಹ ಸೌರ ವಿದ್ಯುತ್ ಸಹಾಯದಿಂದ ನಡೆಯುತ್ತಿವೆ.

ಗ್ರಾಮ ಪಂಚಾಯಿತಿ ಪ್ರದೇಶದಲ್ಲಿ ಇಪ್ಪತ್ತು ಸೌರ ಹೈಮಾಸ್ಕ್ ಬೀದಿದೀಪಗಳು, ಮತ್ತು 190 ಸೌರ ಬೀದಿದೀಪಗಳನ್ನು ಅಳವಡಿಸುವ ಮೂಲಕ ವಿದ್ಯುತ್ ವೆಚ್ಚ ನಿಯಂತ್ರಿಸಲು ಪ್ರಯತ್ನಿಸಲಾಗಿದೆ. ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಲವು ಮನೆಗಳು ಸೌರ ವಿದ್ಯುತ್ ವಿದ್ಯುತ್ ಉತ್ಪಾದಿಸುವ ಮೂಲಕ ಸ್ವಾವಲಂಬನೆ ಸಾಧಿಸಿವೆ.

ಗ್ರಾಮ ಪಂಚಾಯಿತಿಯ ಸಂಪನ್ಮೂಲದಿಂದ ಸೌರ ಲಾಟೀನುಗಳನ್ನು ದುರ್ಬಲ ವರ್ಗದ ಕುಟುಂಬಗಳಿಗೆ ವಿತರಿಸಲಾಗಿದೆ. ಹಲವು ಮನೆಗಳು ಸೌರ ವಿದ್ಯುತ್ ಆಧಾರಿತ ನೀರು ಕಾಯಿಸುವ ವ್ಯವಸ್ಥೆ ಹೊಂದಿವೆ.

ರೈತರ ಜಮೀನಿನಲ್ಲಿ ಸ್ಪ್ರಿಂಕ್ಲರ್ ಮತ್ತು ಹನಿ ನೀರಾವರಿ ವ್ಯವಸ್ಥೆ ಅಳವಡಿಸಿಕೊಳ್ಳುವ ಮೂಲಕ ನೀರಿನ ಸದ್ಬಳಕೆ ಮಾಡಲಾಗುತ್ತಿದೆ. ಪಂಚಾಯಿತಿಯಿಂದ ನಿರ್ಮಿಸಿರುವ ಘನ ತ್ಯಾಜ್ಯ ಸಂಸ್ಕರಣಾ ಘಟಕದಲ್ಲಿ ವೈಜ್ಞಾನಿಕವಾಗಿ ಹಸಿ ಮತ್ತು ಒಣ ಕಸಗಳನ್ನು ಬೇರ್ಪಡಿಸಿ ಸಂಸ್ಕರಣೆ ಮಾಡಲಾಗುತ್ತಿದೆ.

ಹಾಸನ ಜಿಲ್ಲೆಯಲ್ಲಿ ಹೊಗೆಸೊಪ್ಪು, ಶುಂಠಿ ಬಿತ್ತನೆ ಕಾರ್ಯ ಚುರುಕು



ಕೊಣನೂರು: ಒಂದೆರಡು ಬಾರಿ ಮಳೆ ಸುರಿದಿದ್ದರಿಂದ ಶುಂಠಿ ಬಿತ್ತನೆ ಮತ್ತು ಹೊಗೆಸೊಪ್ಪು ನಾಟಿ ಚಟುವಟಿಕೆ ಚುರುಕುಗೊಂಡಿದೆ.

ಇಲ್ಲಿನ ಪ್ರಮುಖ ವಾಣಿಜ್ಯ ಬೆಳೆ ಹೊಗೆಸೊಪ್ಪು ನಾಟಿಗೆ ಸಕಾಲವಾಗಿದ್ದು, ಬೆಳೆಗಾರರು ಸಸಿ ಮಡಿಗಳನ್ನು ಬೆಳೆಸುತ್ತಿದ್ದಾರೆ. ಮಳೆ ಬೀಳುವುದು ತಡವಾದರೆ ಅಲ್ಲಿಯವರೆಗೂ ಸಸಿಗಳನ್ನು ಉಳಿಸಿಕೊಳ್ಳಲು ಸಾಧ್ಯವಾಗುವಂತೆ ಸಸಿಗಳನ್ನು ಕೋಕೊಪಿಟ್ ಟ್ರೇಗಳಲ್ಲಿಟ್ಟು ಕಾಪಾಡಿಕೊಳ್ಳುತ್ತಿದ್ದಾರೆ.

ಅತೀ ಹೆಚ್ಚು ಹೊಗೆಸೊಪ್ಪು ಮತ್ತು ಶುಂಠಿಯನ್ನು ಬೆಳೆಯುವ ಕೊಣನೂರು ಮತ್ತು ರಾಮನಾಥಪುರ ವ್ಯಾಪ್ತಿಯ ಯುಗಾದಿ ನಂತರ ಒಂದೆರಡು ಬಾರಿ ಉತ್ತಮ ಮಳೆ ಸುರಿದಿದ್ದು, ಬಹುತೇಕ ಬೆಳೆಗಾರರು ಹೊಲಗದ್ದೆಗಳನ್ನು ಉಳುಮೆ ಮಾಡಿ ಸಿದ್ಧಪಡಿಸಿಕೊಂಡಿದ್ದಾರೆ. ನಾಟಿ ಮಾಡಲು ಇನ್ನೊಂದು ಮಳೆಗಾಗಿ ಎದುರು ನೋಡುತ್ತಿದ್ದಾರೆ.

ನೀರಾವರಿ ಸೌಲಭ್ಯವಿರುವ ಕೆಲವೇ ಹೊಗೆಸೊಪ್ಪು ಬೆಳೆಗಾರರು ಈಗಾಗಲೇ ನಾಟಿ ಮಾಡಿದ್ದು, ರಸಗೊಬ್ಬರ ನೀಡಿ ಆರೈಕೆ ಮಾಡುತ್ತಿದ್ದಾರೆ. ಮಳೆಯಾಶ್ರಿತ ಜಮೀನಿನ ಬೆಳೆಗಾರರು ನಾಟಿ ಮಾಡಲು ಮತ್ತೊಮ್ಮೆ ಮಳೆ ಸುರಿದು ಮಣ್ಣು ತಂಪಾಗಲಿ ಎಂದು ಕಾಯುತ್ತಿದ್ದಾರೆ.

ಶುಂಠಿಯ ಬಿತ್ತನೆ ಫೆಬ್ರುವರಿ ಕೊನೆಯ ವಾರದಿಂದಲೇ ಪ್ರಾರಂಭವಾಗಿದೆ. ಅನೇಕ ಬೆಳೆಗಾರರು ನೀರಿನ ಲಭ್ಯತೆ ಗಮನದಲ್ಲಿಟ್ಟುಕೊಂಡು, ಒಂದೆರಡು ಮಳೆ ಸುರಿದ ನಂತರ ಬಿತ್ತನೆ ಮಾಡುತ್ತಿದ್ದಾರೆ. ಶುಂಠಿಗೆ ಕಳೆದ ವರ್ಷ ಬೆಲೆ ಕಡಿಮೆಯಾಗಿದ್ದು, ಈ ವರ್ಷ ಉತ್ತಮ ಬೆಲೆ ದೊರಕುವ ವಿಶ್ವಾಸದಲ್ಲಿ ಮತ್ತೊಮ್ಮೆ ಲಕ್ಷಾಂತರ ರೂಪಾಯಿ ಬಂಡವಾಳ ಹಾಕಿ ಶುಂಠಿ ಕೃಷಿ ಮುಂದುವರಿಸಿದ್ದಾರೆ.

ಗಾಳಿ–ಮಳೆ ಆರ್ಭಟ: ಆಟೋ ಮೇಲೆ ಬಿದ್ದ ವಿದ್ಯುತ್ ಕಂಬ, ಚಾಲಕ ಪಾರು



ಸಕಲೇಶಪುರ: ಭಾರಿ ಗಾಳಿ–ಮಳೆಗೆ ಚಲಿಸುತ್ತಿದ್ದ ಆಟೋವೊಂದರ ಮೇಲೆ ವಿದ್ಯುತ್ ಕಂಬ ಬಿದ್ದು ಆಟೋ ಜಖಂಗೊಂಡಿದ್ದು, ಅದೃಷ್ಟವಶಾತ್ ಚಾಲಕ ಅಪಾಯದಿಂದ ಪಾರಾಗಿರುವ ಘಟನೆ ತಾಲೂಕಿನ ಕುನಿಗನಹಳ್ಳಿ ಸಮೀಪ ನಡೆದಿದೆ.

ತಾಲೂಕಿನ ಕುನಿಗನಹಳ್ಳಿ ಗ್ರಾಮದ ದಿಲೀಪ್ ಎಂಬುವರು ಕೂಲಿ ಕಾರ್ಮಿಕರನ್ನು ಬಿಡಲು ಆಲೂರು ತಾಲೂಕಿನ ಬೋಸ್ಮಾನಹಳ್ಳಿಗೆ ತೆರಳುವಾಗ ಮಧ್ಯಾಹ್ನ 2 ಗಂಟೆ ವೇಳೆಗೆ ಸುರಿದ ಭಾರಿ ಮಳೆಗೆ ರಸ್ತೆ ಬದಿಯಿದ್ದ ವಿದ್ಯುತ್ ಕಂಬವೊಂದು ರಸ್ತೆಗೆ ಬಿದ್ದು ಆಟೋ ಮುಂಭಾಗಕ್ಕೆ ಹೊಡೆದಿದೆ. ಅದೃಷ್ಟವಶಾತ್ ಆಟೋ ಚಾಲಕ ಯಾವುದೆ ಅಪಾಯವಿಲ್ಲದೆ ಪಾರಾಗಿದ್ದಾನೆ. ಆಟೋ ಹಿಂಬದಿ ಕುಳಿತಿದ್ದ ಇಬ್ಬರು ಮಹಿಳೆಯರು ಸಣ್ಣ ಪ್ರಮಾಣದಲ್ಲಿ ಗಾಯಗೊಂಡಿದ್ದು ಬಾಳ್ಳುಪೇಟೆಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಮನೆಗೆ ತೆರಳಿದ್ದಾರೆ.

ವಿದ್ಯುತ್ ಕಂಬದಿಂದ ಆಟೋ ಭಾಗಶಃ ಜಖಂಗೊಂಡಿದೆ. ಸುರಿಯುತ್ತಿರುವ ಮಳೆಯಲ್ಲಿ ವಿದ್ಯುತ್ ಕಂಬ ಆಟೋ ಮೇಲೆ ಬಿದ್ದ ದೃಶ್ಯ ಲಿಖಿತಾ ಕಾಫಿ ಟ್ರೇಡರ್ಸ್‌ನವರು ಅಳವಡಿಸಿದ್ದ ಸಿಸಿ ಕ್ಯಾಮರಾದಲ್ಲಿ ದಾಖಲಾಗಿದ್ದು ನೋಡುಗರ ಎದೆ ಝಲ್ ಎನ್ನುವಂತಿದೆ. ವಿದ್ಯುತ್ ಕಂಬ ಉರುಳಿದಾಗ ವಿದ್ಯುತ್ ತಂತಿ ತುಂಡರಿಸದ ಕಾರಣ ಹೆಚ್ಚಿನ ಅಪಾಯವಾಗಿಲ್ಲ. ಮಳೆ ಕೇವಲ ಅರ್ಧ ಗಂಟೆಗಳ ಕಾಲ ಮಾತ್ರ ಸುರಿದಿದ್ದು ಆದರೆ ಮಳೆಯ ಆರ್ಭಟದಿಂದ ಈ ರೀತಿಯಲ್ಲಿ ಹಾನಿ ಸಂಭವಿಸಿದೆ. ಆಲೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

ಇದೇ ವೇಳೆ ಕುನಿಗನಹಳ್ಳಿ ಗ್ರಾಮದಲ್ಲಿ ಸಿಡಿಲ ಹೊಡೆತದಿಂದ ಮೇಯಲು ಬಿಟ್ಟಿದ್ದ ಗ್ರಾಮದ ಆನಂದ್ ಎಂಬುವರ ಎರಡು ಹಸುಗಳು ಸಾವನ್ನಪ್ಪಿವೆ.

ಮೈಸೂರಿನ ತಿಲಕ್‌ನಗರದಲ್ಲಿ ಶಾಸಕ ಕೆ. ಹರೀಶ್‌ಗೌಡ ಪಾದಯಾತ್ರೆ

ಕುಡಿಯುವ ನೀರು, ಒಳಚರಂಡಿ ಸಮಸ್ಯೆ ಪರಿಹರಿಸುವಂತೆ ಜನರ ಮನವಿ

ಮೈಸೂರು, ಏ.21(ಬಿಎಲ್‌ಯು)– ಮೈಸೂರಿನ ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡರು ತಮ್ಮ ಕ್ಷೇತ್ರ ವ್ಯಾಪ್ತಿಯ ತಿಲಕ್‌ನಗರದಲ್ಲಿ ಪಾದಯಾತ್ರೆ ನಡೆಸಿ, ಜನರ ಅಹವಾಲು ಸ್ವೀಕರಿಸಿದರು.

ಸಮರ್ಪಕ ರೀತಿ ಕುಡಿಯುವ ನೀರು ಸರಬರಾಜಾಗುತ್ತಿಲ್ಲ. ಹಾಗಾಗಿ ತುಂಬಾ ತೊಂದರೆ ಅನುಭವಿಸುತ್ತಿದ್ದೇವೆ. ಪರ್ಯಾಯವಾಗಿ ಟ್ಯಾಂಕರ್‌ಗಳಿಂದಲೂ ನೀರು ಒದಗಿಸುತ್ತಿಲ್ಲ ಎಂದು ಸಾರ್ವಜನಿಕರು ದೂರಿದರು.

ಇದಲ್ಲದೆ ಒಳಚರಂಡಿ ಸಮಸ್ಯೆ ಇದ್ದು, ಆಗಾಗ್ಗೆ ಮ್ಯಾನ್‌ಹೋಲ್‌ನಿಂದ ಕಲುಷಿತ ನೀರು ಉಕ್ಕಿ ಹರಿಯುತ್ತದೆ. ಈ ಬಗ್ಗೆ ನಗರಪಾಲಿಕೆಗೆ ದೂರು ನೀಡಿದರೆ, ಸೂಕ್ತ ಸಮಯಕ್ಕೆ ಸರಿಪಡಿಸುತ್ತಿಲ್ಲ ಎಂದು ಕೆ. ಹರೀಶ್‌ಗೌಡ ಅವರಿಗೆ ಪರಿಸ್ಥಿತಿ ಮನವರಿಕೆ ಮಾಡಿಕೊಟ್ಟರು.

ಗೌಡರು ಹೋದ ಕಡೆಯಲ್ಲೆಲ್ಲಾ ಸಾಮಾನ್ಯವಾಗಿ ಈ ಎರಡು ಸಮಸ್ಯೆಯನ್ನು ಜನರು ತಿಳಿಸಿ, ಕೂಡಲೇ ಇದನ್ನು ಪರಿಹರಿಸಬೇಕೆಂದು ಮನವಿ ಮಾಡಿದರು.

ತೆರೆದ ಮೋರಿಗಳಿದ್ದು, ಆಗಾಗ ಅವುಗಳನ್ನು ಸ್ವಚ್ಛ ಮಾಡಬೇಕು. ಆದರೆ ನಗರಪಾಲಿಕೆಯವರು ಯಾವಾಗಲೋ ಬಂದು ಸ್ವಚ್ಛ ಮಾಡುತ್ತಾರೆ. ಭಾರಿ ಸೊಳ್ಳೆ ಕಾಟವಿದ್ದು, ಅನಾರೋಗ್ಯಕ್ಕೆ ಕಾರಣವಾಗುತ್ತಿದೆ ಎಂದು ಸಾರ್ವಜನಿಕರು ದೂರಿದರು.



ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡರು ತಿಲಕ್‌ನಗರದಲ್ಲಿ ಪಾದಯಾತ್ರೆ ಮಾಡಿ, ಜನರ ಅಹವಾಲು ಸ್ವೀಕರಿಸಿದರು.

ತಿಲಕ್‌ನಗರದಲ್ಲಿ ಪಾಲಿಕೆ ಹಾಗೂ ಆರೋಗ್ಯ ಇಲಾಖೆ ಕಟ್ಟಡಗಳಿವೆ. ರಾತ್ರಿ ಆಯಿತೆಂದರೆ ಅಲ್ಲಿ ಜೂಜು ಸೇರಿದಂತೆ ಹಲವು ಅನೈತಿಕ ಚಟುವಟಿಕೆ ನಡೆಯುತ್ತವೆ. ಇದರಿಂದ ಮಹಿಳೆಯರು, ಮಕ್ಕಳು ನಿರ್ಭೀತಿಯಿಂದ ಓಡಾಡದ ಪರಿಸ್ಥಿತಿ ನಿರ್ಮಾಣವಾಗಿದೆ. ತಿಲಕ್‌ನಗರದಲ್ಲಿ ಎರಡು ಸಮುದಾಯ ಭವನಗಳು ನಿರ್ಮಾಣ ಹಂತದಲ್ಲಿದ್ದು, ಕಾಮಗಾರಿ ಪೂರ್ಣಗೊಳಿಸದೆ ಅರ್ಧಕ್ಕೆ ನಿಲ್ಲಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಶೀಘ್ರವೇ ಅದನ್ನು ಪೂರ್ಣಗೊಳಿಸಿ ಸಾರ್ವಜನಿಕರ ಸೌಲಭ್ಯಕ್ಕೆ ಮುಕ್ತಗೊಳಿಸಬೇಕು ಎಂದು ಕೋರಿದರು. ಇಲ್ಲಿರುವ ಸರ್ಕಾರಿ ಆಸ್ಪತ್ರೆಯಲ್ಲಿ ಸುತ್ತಮುತ್ತಲಿನ ಜನರಿಗೆ ಚಿಕಿತ್ಸೆ ದೊರೆಯುತ್ತಿತ್ತು. ಆದರೆ ಈಗ ಆಸ್ಪತ್ರೆ ಮುಚ್ಚಿದ್ದು, ಚಿಕಿತ್ಸೆಗಾಗಿ ಜನರು ಕೆ.ಆರ್. ಆಸ್ಪತ್ರೆಗೆ ಹೋಗಬೇಕಿದೆ ಎಂದು ಹೇಳಿದರು.

ತಿಲಕ್‌ನಗರದಲ್ಲಿ ನೂರಾರು ಮರಗಳಿವೆ. ಮರಗಳ ರೆಂಬೆ–ಕೊಂಬೆ ರಸ್ತೆಗೆ ಹರಡಿವೆ. ಮಳೆಗಾಲದಲ್ಲಿ ಮುರಿದು ಬಿದ್ದರೆ ಅನಾಹುತವಾಗುತ್ತದೆ. ಆದ ಕಾರಣ ಕೂಡಲೇ ಮರಗಳ ರೆಂಬೆ–ಕೊಂಬೆ ಕತ್ತರಿಸುವ ವ್ಯವಸ್ಥೆ ಮಾಡಬೇಕೆಂದು ಸಾರ್ವಜನಿಕರು ಮನವಿ ಮಾಡಿದರು.

ಜನರ ಸಮಸ್ಯೆಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಹರೀಶ್‌ಗೌಡರು, ಸಮರ್ಪಕ ಕುಡಿಯುವ ನೀರು ಸರಬರಾಜು, ಒಳಚರಂಡಿ ಸಮಸ್ಯೆಯನ್ನು ಶೀಘ್ರವೇ ಪರಿಹಾರ ಮಾಡಬೇಕೆಂದು ಪಾದಯಾತ್ರೆ ವೇಳೆ ತಮ್ಮ ಜೊತೆಯಲ್ಲಿದ್ದ ನಗರಪಾಲಿಕೆ ಅಧಿಕಾರಿಗಳಿಗೆ ತಾಕೀತು ಮಾಡಿದರು.

ಪಾಲಿಕೆ ಹಾಗೂ ಆರೋಗ್ಯ ಇಲಾಖೆ ಜಾಗದಲ್ಲಿ ನಡೆಯುತ್ತಿರುವ ಅನೈತಿಕ ಚಟುವಟಿಕೆ ತಡೆಗಟ್ಟುವ ನಿಟ್ಟಿನಲ್ಲಿ ಪೊಲೀಸ್ ಅಧಿಕಾರಿಗಳ ಜೊತೆ ಮಾತನಾಡುತ್ತೇನೆ ಎಂದು ಭರವಸೆ ನೀಡಿದರು.

ಸಮುದಾಯ ಭವನದ ಕಾಮಗಾರಿ ಪೂರ್ಣಗೊಳಿಸಲಾಗುವುದು. ಮುಚ್ಚಿರುವ ಆಸ್ಪತ್ರೆ ತೆರೆಯಲಾಗುವುದು, ಮರಗಳ ರೆಂಬೆ–ಕೊಂಬೆಗಳನ್ನು ಕತ್ತರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಆಶ್ವಾಸನೆ ನೀಡಿದರು. ಪಾದಯಾತ್ರೆ ಸಂದರ್ಭದಲ್ಲಿ ಮಾಜಿ ಮೇಯರ್ ಅನಂತು, ಮಾಜಿ ಕಾರ್ಪೊರೇಟರ್ ನಂದಕುಮಾರ್, ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷ ರಮೇಶ್ ರಾಯಪ್ಪ, ಪಾಲಿಕೆ ಅಧೀಕ್ಷಕಿ ಸಿಂಧು, ಸಹಾಯಕ ಆಯುಕ್ತೆ ಪ್ರತಿಭಾ, ಸಹಾಯಕ ಕಾರ್ಯಪಾಲಕ ಅಭಿಯಂತರಾದ ವೆಂಕಟೇಶ್ ಹಾಜರಿದ್ದರು.

ಗೂಳ್ಯದ ಮಾರಮ್ಮ ದೇವಾಲಯ ಉದ್ಘಾಟನೆ...



ಮೈಸೂರು ತಾಲೂಕು ಜಯಪುರ ಹೋಬಳಿಯ ಸೋಲಿಗರ ಕಾಲೋನಿ ಗ್ರಾಮದಲ್ಲಿ ನೂತನವಾಗಿ ನಿರ್ಮಾಣವಾದ ಗೂಳ್ಯದ ಮಾರಮ್ಮ ದೇವಾಲಯವನ್ನು ಸೋಮವಾರ ಶಾಸಕರಾದ ಜಿ.ಟಿ.ದೇವೇಗೌಡರು ಟೇಪ್ ಕತ್ತರಿಸುವುದರ ಮೂಲಕ ಉದ್ಘಾಟನೆ ಮಾಡಿದರು. ಈ ವೇಳೆ ಜಯಪುರ ಗ್ರಾಮ ಪಂಚಾಯಿತಿ ಅಧ್ಯಕ್ಷ ಎಂ.ಮಾದೇವಯ್ಯ, ಸಮಾಜ ಸೇವಕ ಎಸ್.ಶ್ರೀಕಾಂತ್, ಗ್ರಾಮ ಪಂಚಾಯಿತಿ ಸದಸ್ಯೆ ಲಕ್ಷ್ಮಮ್ಮ ನಾಗರಾಜು ಮತ್ತು ಹಲವು ಮುಖಂಡರು ಉಪಸ್ಥಿತರಿದ್ದರು.


ಶಿಸ್ತಿನ ಪಾಠದಿಂದ ಮಾನಸಿಕ ಕಿರಿಕಿರಿ; ತಾಯಿ ಜೊತೆ ಸೇರಿ ಪುತ್ರನಿಂದ ತಂದೆ ಹತ್ಯೆ!

ಬೆಂಗಳೂರು: ತಂದೆಯ ಅತಿಯಾದ ಶಿಸ್ತಿನ ಪಾಠಕ್ಕೆ ಬೇಸತ್ತ ಪುತ್ರನೊಬ್ಬ ತಾಯಿ ಜತೆ ಸೇರಿ ನಿವೃತ್ತ ಸೈನಿಕನನ್ನು ಹತ್ಯೆಗೈದಿರುವ ಘಟನೆ ವಿವೇಕನಗರ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

ವಿವೇಕನಗರ ನಿವಾಸಿ ಬೋಲು ಅರಬ್ (47) ಕೊಲೆಯಾದ ಮಾಜಿ ಸೈನಿಕ. ಭಾನುವಾರ ಬೆಳಗ್ಗೆ ಸುಮಾರು 1.30ಕ್ಕೆ ದುರ್ಘಟನೆ ನಡೆದಿದೆ. ಈ ಸಂಬಂಧ ಮೃತನ ಪುತ್ರ ಸಮೀರ್(19) ಮತ್ತು ಪತ್ನಿ ತಬಸ್ಸುಮ್ (36) ಎಂಬುವರನ್ನು ಬಂಧಿಸಲಾಗಿದೆ ಎಂದು ಪೊಲೀಸರು ಹೇಳಿದರು.

ಮಹಾರಾಷ್ಟ್ರ ಮೂಲದ ಬೋಲು ಅರಬ್ ನಿವೃತ್ತ ಸೈನಿಕರಾಗಿದ್ದು, 2003ರಲ್ಲಿ ತಬಸ್ಸುಮ್‌ರನ್ನು ಮದುವೆಯಾಗಿ ಪುತ್ರನ ಜತೆ ವಿವೇಕನಗರದಲ್ಲಿ ವಾಸವಾಗಿದ್ದರು. ಪುತ್ರ ಸಮೀರ್ ನಗರದ ಖಾಸಗಿ ಕಾಲೇಜಿನಲ್ಲಿ ಪ್ರಥಮ ವರ್ಷದ ಪದವಿ ವ್ಯಾಸಂಗ ಮಾಡುತ್ತಿದ್ದ. ಬೋಲು ಅರಬ್ ಶಿಸ್ತಿನ ವ್ಯಕ್ತಿಯಾಗಿದ್ದರು. ಪತ್ನಿ ಮತ್ತು ಪುತ್ರನಿಗೂ ಶಿಸ್ತಿನಿಂದ ಇರುವಂತೆ ಎಚ್ಚರಿಕೆ ನೀಡುತ್ತಿದ್ದರು.


ವಿನಾಕಾರಣ ಮನೆಯಿಂದ ಹೊರಗೆ ಹೋಗುವಂತಿಲ್ಲ. ಇಂತಿಷ್ಟೇ ಊಟ ಮಾಡಬೇಕೆಂದು ನಿಯಮ ಮಾಡಿದ್ದರು. ಈ ಅತಿಯಾದ ಶಿಸ್ತಿನಿಂದ ಪುತ್ರ ಮತ್ತು ಪತ್ನಿ ಬೇಸತ್ತಿದ್ದರು. ಹೀಗಾಗಿ ತಾಯಿ–ಮಗ ಸೇರಿ ಬೋಲು ಅರಬ್ ಹತ್ಯೆಗೆ ಸಂಚು ರೂಪಿಸಿದ್ದರು ಎಂದು ಪೊಲೀಸರು ಹೇಳಿದರು.



ಶನಿವಾರ ರಾತ್ರಿ ಊಟಕ್ಕೆ ನಿದ್ರೆ ಮಾತ್ರೆ ಬರೆಸಿ ಬೋಲು ಅರಬ್‌ಗೆ ನೀಡಲಾಗಿತ್ತು. ಊಟ ಮಾಡಿದ ಬಳಿಕ ಬೋಲು ಅರಬ್ ಗಾಢ ನಿದ್ದೆಗೆ ಜಾರಿದಾಗ ಕೊಲೆ ಮಾಡಿದ್ದಾರೆ. ಬೋಲು ಅರಬ್ ಮೃತಪಟ್ಟಿರುವುದು ಖಚಿತವಾದ ಬಳಿಕ ಸಮೀರ್, 112 ಪೊಲೀಸ್ ಸಹಾಯವಾಣಿಗೆ ಕರೆ ಮಾಡಿ ಯಾರೋ ನಾಲ್ಕೈದು ಮಂದಿ ಮನೆಗೆ ನುಗ್ಗಿ ತಂದೆಯನ್ನು ಕೊಲೆ ಮಾಡಿ ಪರಾರಿಯಾದರು ಎಂದು ಹೇಳಿದ್ದಾನೆ.

ವಿಷಯ ತಿಳಿದು ಸ್ಥಳಕ್ಕೆ ಆಗಮಿಸಿದ ಪೊಲೀಸರು ಪರಿಶೀಲನೆ ನಡೆಸಿದ್ದಾರೆ. ಬಳಿಕ ತಾಯಿ–ಮಗನ ವರ್ತನೆ ಬಗ್ಗೆ ಅನುಮಾನಗೊಂಡು ಇಬ್ಬರನ್ನೂ ವಶಕ್ಕೆ ಪಡೆದು ವಿಚಾರಣೆ ಮಾಡಿದಾಗ ಕೊಲೆ ರಹಸ್ಯ ಬಯಲಾಗಿದೆ. ಬಳಿಕ ಇಬ್ಬರನ್ನು ಬಂಧಿಸಲಾಗಿದೆ ಎಂದು ಪೊಲೀಸರು ಹೇಳಿದರು. ಈ ಸಂಬಂಧ ವಿವೇಕನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಹುಟ್ಟುಹಬ್ಬದ ಶುಭಾಶಯ...



ಹುಟ್ಟುಹಬ್ಬ ಆಚರಿಸಿಕೊಂಡ ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅವರನ್ನು ಕಾಂಗ್ರೆಸ್ ಮುಖಂಡ ಮಹಾಪ್ರಸಾದ್(ಕಿಟ್ಟಿ) ಅಭಿನಂದಿಸಿ, ಶುಭ ಕೋರಿದರು. ಈ ವೇಳೆ ಮಾಜಿ ಸಂಸದ ಶಿವಣ್ಣ ಪುತ್ರ ಅಭಿಲೇಶ್, ಕಾಂಗ್ರೆಸ್ ಮುಖಂಡ ಸಿದ್ದೇಗೌಡ ಉಪಸ್ಥಿತರಿದ್ದರು.

ವೀರಶೈವ ಲಿಂಗಾಯತ ವಧು–ವರರಿಗೆ ಮುಖಾಮುಖಿ ಸಮಾವೇಶ

ಮೈಸೂರು, ಏ.21– ಡಾಕ್ಟರ್ಸ್, ಇಂಜಿನಿಯರ್ಸ್, ಪಿ.ಜಿ. ಪದವೀಧರರು, ಅನಿವಾಸಿ ಭಾರತೀಯರು (ಎನ್‌ಆರ್‌ಐ), ಪದವೀಧರರು, ಡಿಪ್ಲೋಮಾ, ಐಟಿಐ, ಪಿಯುಸಿ, ಎಸ್‌ಎಸ್‌ಎಲ್‌ಸಿ ಹಾಗೂ ಎಲ್ಲಾ ವೀರಶೈವ ಲಿಂಗಾಯತ ವಧು–ವರರ 262ನೇ ಮಾಸಿಕ ಮುಖಾ–ಮುಖಿ ಸಮಾವೇಶ ಏಪ್ರಿಲ್ 27ರ ಭಾನುವಾರದಂದು ಮಧ್ಯಾಹ್ನ 2 ಗಂಟೆಗೆ ಲಿಂಗಾಯತ ಕಲ್ಯಾಣ ಟ್ರಸ್ಟ್, ನಂ.18/1, 6ನೇ ಕ್ರಾಸ್, 5ನೇ ಮುಖ್ಯ ರಸ್ತೆ, ಗಾಂಧಿನಗರ, ಬೆಂಗಳೂರು–560009 ಇಲ್ಲಿ ಏರ್ಪಡಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಸಂಪರ್ಕಿಸಿ. ದೂರವಾಣಿ ಸಂಖ್ಯೆ.–22269237

ಏ.26ರಂದು ಡಾ.ರಾಜ್ ರಂಗರತ್ನ ಪ್ರಶಸ್ತಿ ಪ್ರದಾನ

ಮೈಸೂರು, ಏ.21(ಜಿಎ)–ಡಾ.ರಾಜ್‌ಕುಮಾರ್ ರಂಗ ಪರಿಷತ್ತಿನಿಂದ ಕೃಷ್ಣಮೂರ್ತಿಪುರಂನ ನಮನ ಕಲಾ ಮಂಟಪದಲ್ಲಿ ಏ.26ರಂದು ಸಂಜೆ 4ಕ್ಕೆ ಡಾ.ರಾಜ್ ರಂಗರತ್ನ ಪ್ರಶಸ್ತಿ ಪ್ರದಾನ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ಪರಿಷತ್ತಿನ ರಾಜ್ಯಾಧ್ಯಕ್ಷ ಆರ್.ಕೆ.ಸ್ವಾಮಿ ತಿಳಿಸಿದರು.

ನಗರದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಲನಚಿತ್ರ ನಿರ್ದೇಶಕ ಬಿ.ಸಿದ್ದೇಗೌಡ, ರಂಗಕಲಾವಿದರಾದ ಕಟ್ಟೆ ಎಂ.ಎಸ್.ಕೃಷ್ಣಸ್ವಾಮಿ, ಹೆಚ್.ಸಿ.ಮಹೇಶ್ ಕುಮಾರ್, ರಂಗ ನಿರ್ದೇಶಕರಾದ ಎಸ್.ಡಿ. ದಯಾನಂದ್, ವಿ. ಉದಯಕುಮಾರ್ ಅವರಿಗೆ ಪ್ರಶಸ್ತಿ ನೀಡಲಾಗುತ್ತದೆ ಎಂದು ಮಾಹಿತಿ ನೀಡಿದರು.

ಮುಖ್ಯ ಅತಿಥಿಗಳಾಗಿ ವಿಶ್ರಾಂತ ಕುಲಪತಿ ಪ್ರೊ.ಎನ್.ಎಸ್.ರಾಮೇಗೌಡ, ಸಮಾಜ ಸೇವಕ ಕೆ.ರಘುರಾಮ ವಾಜಪೇಯಿ, ಸುಯೋಗ ಆಸ್ಪತ್ರೆ ಅಧ್ಯಕ್ಷ ಡಾ.ಎಸ್.ಪಿ.ಯೋಗಣ್ಣ, ಮೈಸೂರು ವಿಶ್ವವಿದ್ಯಾಲಯ ಪ್ರಾಣಿಶಾಸ್ತ್ರ ವಿಭಾಗದ ಪ್ರೊ.ಎಸ್. ಬಸವರಾಜಪ್ಪ, ಬಸವೇಶ್ವರ ಸಾಂಸ್ಕೃತಿಕ ಪ್ರತಿಷ್ಠಾನದ ಅಧ್ಯಕ್ಷ ಬಸವರಾಜೇಂದ್ರ ಸ್ವಾಮಿ ಪಾಲ್ಗೊಳ್ಳುವರು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಕನ್ನಡಾಂಬೆ ರಕ್ಷಣಾ ವೇದಿಕೆ ಅಧ್ಯಕ್ಷ ರಾಜಶೇಖರ್, ನಿರ್ಮಾಪಕ ಪಾರ್ಥಸಾರಥಿ, ಲಯನ್ಸ್ ಸಂಸ್ಥೆಯ ಸುರೇಶ್ ಗೋಲ್ಡ್ ಉಪಸ್ಥಿತರಿದ್ದರು.

ಸಂಚಾರ ನಿಯಮ ಪಾಲನೆ, ನಿಬಂಧನೆಗಳ ಕುರಿತು ನಾಳೆ ಫೋನ್–ಇನ್ ಕಾರ್ಯಕ್ರಮದಲ್ಲಿ ಎಸಿಪಿ ಶಿವಶಂಕರ್ ನೇರ ಸಂದರ್ಶನ

ಮೈಸೂರು: ಸಂಚಾರ ನಿಯಮ ಪಾಲನೆ ಮತ್ತು ನಿಬಂಧನೆಗಳ ಕುರಿತು ಏ.23ರ ಬುಧವಾರ ಬೆಳಗ್ಗೆ 11:30ರಿಂದ 12:30ರ ಎಸಿಪಿ ಎಂ.ಶಿವಶಂಕರ್ ಜೊತೆ ನೇರ ಸಂದರ್ಶನ ಫೋನ್–ಇನ್ ಕಾರ್ಯಕ್ರಮವನ್ನು ಮೈಸೂರಿನ ಊಟಿ ರಸ್ತೆಯಲ್ಲಿರುವ ಜೆಎಸ್‌ಎಸ್ ಕಾಲೇಜಿನ ಜೆಎಸ್‌ಎಸ್ ರೇಡಿಯೋ 91.2ಎಫ್‌ಎಂ ಸಮುದಾಯ ಬಾನುಲಿ ಕೇಂದ್ರದಲ್ಲಿ ಆಯೋಜಿಸಲಾಗಿದೆ.

ಸಾರ್ವಜನಿಕರು ಸಂಚಾರ ನಿಯಮ ಪಾಲನೆ, ನಿಬಂಧನೆಗಳು, ನಿಯಮ ಉಲ್ಲಂಘನೆಗಳು, ಉಲ್ಲಂಘನೆಯಿಂದಾಗುವ ದುಷ್ಪರಿಣಾಮಗಳು, ನಗರ ಸಂಚಾರಿ ಸಮಸ್ಯೆಗಳು ಹಾಗೂ ಇದಕ್ಕಿರುವ ಪರಿಹಾರಗಳ ಕುರಿತು ಯಾವುದೇ ಪ್ರಶ್ನೆಗಳು ಅಥವಾ ಸಲಹೆಗಳು ಇದ್ದಲ್ಲಿ, ಕರೆ ಮಾಡಿ ಸಹಾಯಕ ಪೊಲೀಸ್ ಆಯುಕ್ತರ ಜೊತೆ ನೇರವಾಗಿ ಮಾತನಾಡಬಹುದು.

ದೂರವಾಣಿ ಸಂಖ್ಯೆ: 829672 5912, 0821–2546563 ಅನ್ನು ಜೆಎಸ್‌ಎಸ್ ರೇಡಿಯೋವನ್ನು ಪ್ಲೇಸ್ಟೋರ್ ನಲ್ಲಿ ಲಭ್ಯವಿರುವ ಆಪ್ ಮೂಲಕವೂ ವಿಶ್ವದ ಯಾವುದೇ ಮೂಲೆಯಲ್ಲಾದರು ಆಲಿಸಬಹುದು.

ಸ್ಪರ್ಧಾತ್ಮಕ ಪರೀಕ್ಷೆ ಬರೆಯುವವರಿಗೆ ದೃಢ ವಿಶ್ವಾಸ, ಅಚಲ ಗುರಿ ಮುಖ್ಯ

ಮಂಡ್ಯ ಜಿಲ್ಲಾ ಪಂಚಾಯತ್ ಸಿಇಓ ಕೆ.ಆರ್.ನಂದಿನಿ ಅಭಿಮತ

ಮೈಸೂರು,ಏ.21(ಎಂಟಿವೈ)– ಸ್ಪರ್ಧಾತ್ಮಕ ಪರೀಕ್ಷೆ ತೆಗೆದುಕೊಳ್ಳಲು ಬಯಸುವ ಅಭ್ಯರ್ಥಿಗಳು ಯಾವುದೇ ಕಾರಣಕ್ಕೂ ನಕಾರಾತ್ಮಕ ಚಿಂತನೆಗೆ ಒಳಗಾಗದೇ ದೃಢ ವಿಶ್ವಾಸದಿಂದ ಗುರಿ ತಲುಪುವತ್ತ ಗಮನ ಹರಿಸಬೇಕು ಎಂದು ಮಂಡ್ಯ ಜಿ.ಪಂ. ಸಿಇಓ ಕೆ.ಆರ್.ನಂದಿನಿ ಸಲಹೆ ನೀಡಿದ್ದಾರೆ.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಸ್ಪರ್ಧಾತ್ಮಕ ಪರೀಕ್ಷಾ ಕೇಂದ್ರದ ವತಿಯಿಂದ ಕಾವೇರಿ ಸಭಾಂಗಣದಲ್ಲಿ ಆಯೋಜಿಸಿದ್ದ ಐಎಎಸ್ ಹಾಗೂ ಕೆಎಎಸ್ ಪರೀಕ್ಷಾ ತರಬೇತಿ ಶಿಬಿರಾರ್ಥಿಗಳೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸ್ಪರ್ಧಾತ್ಮಕ ಪರೀಕ್ಷೆ ತೆಗೆದುಕೊಳ್ಳುವ ಅಭ್ಯರ್ಥಿಗಳಿಗೆ ದೃಢ ವಿಶ್ವಾಸ, ಅಚಲ ಗುರಿ ಮುಖ್ಯ. ಸರಿಯಾದ ಸಮಯಕ್ಕೆ ಸರಿಯಾದ ನಿರ್ಣಯ ತೆಗೆದುಕೊಳ್ಳಬೇಕು. ಪರೀಕ್ಷೆ ಎದುರಿಸುವುದಕ್ಕೆ ಧೈರ್ಯ ಇರಬೇಕು. ಪರೀಕ್ಷೆಯೇ ಅಂತಿಮ ಅಲ್ಲ. ಎರಡು ವರ್ಷ ಓದಿ ಪರೀಕ್ಷೆಯಲ್ಲಿ ಪಾಸಾಗದೇ ಇದ್ದರೆ ಧೃತಿಗೆಡಬಾರದು ಎಂದರು.

ಅಭ್ಯರ್ಥಿಗಳು ಯಾವುದೇ ಕಾರಣಕ್ಕೂ ಬೇರೆಯವರೊಂದಿಗೆ ಹೋಲಿಕೆ ಮಾಡಿಕೊಳ್ಳಬಾರದು. ಪ್ರಸ್ತುತ ವಿದ್ಯಮಾನದ ಬಗ್ಗೆ ಹೆಚ್ಚಿನ ಗಮನಹರಿಸಬೇಕು. ಪ್ರಸ್ತುತ ಓದುತ್ತಿರುವ ವಿಷಯದ ಕುರಿತು ಸಂಪೂರ್ಣ ಅರಿವು ಇರಬೇಕು. ಪರೀಕ್ಷೆ ಎದುರಿಸುವವರು ಎನ್‌ಸಿಆರ್‌ಟಿ ಪುಸ್ತಕ ಓದಬೇಕು. ಇಂಗ್ಲಿಷ್, ಹಿಂದಿ ಹಾಗೂ ಕನ್ನಡ ಎಂಬ ಮಾಧ್ಯಮ ಅಸಹಾಯಕತೆ ಬೇಡ. ಕನ್ನಡದಲ್ಲಿ ಪರೀಕ್ಷೆ ಎದುರಿಸಲು ನೀವು ಸಮರ್ಥವಾಗಿದ್ದರೇ, ಕನ್ನಡದಲ್ಲೇ ಪರೀಕ್ಷೆ ಎದುರಿಸಲು ಆಯ್ಕೆ ಮಾಡಿಕೊಳ್ಳಬಹುದು. ನಾನು ಯುಪಿಎಸ್‌ಸಿಯಲ್ಲಿ ಕನ್ನಡವನ್ನೇ ಆಯ್ಕೆ ಮಾಡಿಕೊಂಡಿದ್ದೆ ಎಂದು ತಿಳಿಸಿದರು.



ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕಾವೇರಿ ಸಭಾಂಗಣದಲ್ಲಿ ಸೋಮವಾರ ಐಎಎಸ್ ಹಾಗೂ ಕೆಎಎಸ್ ಪರೀಕ್ಷಾ ತರಬೇತಿ ಶಿಬಿರಾರ್ಥಿಗಳೊಂದಿಗೆ ನಡೆದ ಸಂವಾದ ಕಾರ್ಯಕ್ರಮದಲ್ಲಿ ಮಂಡ್ಯ ಜಿ.ಪಂ. ಸಿಇಓ ಕೆ.ಆರ್.ನಂದಿನಿ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಬಿ.ರಂಗೇಗೌಡ ಅವರನ್ನು ಸನ್ಮಾನಿಸಲಾಯಿತು.

> “ಶ್ರದ್ಧೆ ಹಾಗೂ ನಿರಂತರ ಪ್ರಯತ್ನದಿಂದ ಗುರಿ ಮುಟ್ಟುವವರೆಗೂ ಅಭ್ಯಾಸ ಮಾಡುವ ಛಲ ಬೆಳೆಸಿಕೊಳ್ಳಬೇಕು. ಸಮಸ್ಯೆಗೆ ಹೆದರಿ ಅಭ್ಯಾಸ ನಿಲ್ಲಿಸಬೇಡಿ. ಸಮಯ ವ್ಯರ್ಥ ಮಾಡದೆ ಅಧ್ಯಯನದಲ್ಲಿ ತೊಡಗಿಸಿಕೊಳ್ಳಬೇಕು. ನಿಮ್ಮ ಶೈಕ್ಷಣಿಕ ಅರ್ಹತೆಗೆ ಪೂರಕವಾದ ಎಲ್ಲಾ ಪರೀಕ್ಷೆಗಳನ್ನು ಧೈರ್ಯವಾಗಿ ತೆಗೆದುಕೊಳ್ಳಬೇಕು. ಆಗ ಒಂದಲ್ಲಾ ಒಂದು ಪರೀಕ್ಷೆಯಲ್ಲಿ ಯಶಸ್ಸು ಸಾಧಿಸಲು ಸಾಧ್ಯ. ಪರೀಕ್ಷೆ ಎದುರಿಸಲು ನಿಮ್ಮ ವೈಯಕ್ತಿಕ ಆಸಕ್ತಿ ಮುಖ್ಯವಾಗಿರಬೇಕೆ ಹೊರತು ಬೇರೆಯವರ ಒತ್ತಾಯಕ್ಕೆ ಓದಬಾರದು. ನಿಮ್ಮ ಗುರಿ ಅಚಲವಾಗಿರಬೇಕು.
>
> –ಬಿ.ರಂಗೇಗೌಡ

ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಬಿ.ರಂಗೇಗೌಡ ಮಾತನಾಡಿ, ಸ್ಪರ್ಧಾತ್ಮಕ ಪರೀಕ್ಷೆಗೆ ಸಜ್ಜಾಗುವ ಅಭ್ಯರ್ಥಿಗಳಿಗೆ ಆಸಕ್ತಿ ಮುಖ್ಯ. ತರಬೇತಿ ಪಡೆಯಲು ಬಂದಿರುವ ಶಿಬಿರಾರ್ಥಿಗಳಲ್ಲಿ ಕನ್ನಡ ಮಾಧ್ಯಮದಿಂದ ಬಂದವರೇ ಹೆಚ್ಚಾಗಿದ್ದಾರೆ. ಪರೀಕ್ಷೆಗೆ ಎದುರಿಸಬೇಕಾದವರಿಗೆ ಮಾಧ್ಯಮ ಮುಖ್ಯ ಅಲ್ಲ. ಓದುವ ಆಸಕ್ತಿ ಮುಖ್ಯ. ಇಂಗ್ಲಿಷ್, ಹಿಂದಿ ಬರುವುದಿಲ್ಲ ಎನ್ನುವ ಹಿಂಜರಿಕೆಗೆ ಒಳಗಾಗಬಾರದು. ನಿಮಗೆ ಹಿಡಿತವಿರುವ ಮಾಧ್ಯಮದಲ್ಲೇ ಪರೀಕ್ಷೆ ಬರೆಯಬಹುದು. ಅದಕ್ಕಾಗಿ ಓದುವ ಅನಿವಾರ್ಯ ಸೃಷ್ಟಿಸಿಕೊಳ್ಳಿ. ಎರಡು ವರ್ಷ ಓದಿಗಾಗಿ ಮೀಸಲಿಟ್ಟು ಒಳ್ಳೆ ಪುಸ್ತಕ ಅಧ್ಯಯನ ಮಾಡಬೇಕು.. ನಿಮ್ಮ ಸ್ನೇಹಿತರೊಂದಿಗೆ ವಿಷಯವಾರು ಚರ್ಚೆ ಮಾಡಿ. ಒಟ್ಟಾರೆ ಪರೀಕ್ಷೆ ಎದುರಿಸುವ ಛಲ ಬೆಳೆಸಿಕೊಳ್ಳುವಂತೆ ಸಲಹೆ ನೀಡಿದರು.

ಸಂವಾದ ಕಾರ್ಯಕ್ರಮದಲ್ಲಿ ಅಭ್ಯರ್ಥಿಗಳು ಕೇಳಿದ ವಿವಿಧ ಪ್ರಶ್ನೆಗಳಿಗೆ ಇಬ್ಬರು ಅಧಿಕಾರಿಗಳು ಉತ್ತರಿಸಿ, ಸಲಹೆ, ಸೂಚನೆ ನೀಡಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ವಿ.ಶರಣಪ್ಪ ಹಲಸೆ ಅವರು ಮಾತನಾಡಿದರು. ಕುಲಸಚಿವ ಪ್ರೊ.ಕೆ.ಬಿ ಪ್ರವೀಣ್, ಸಂಯೋಜನಾಧಿಕಾರಿ ಜೈನಹಳ್ಳಿ ಸತ್ಯಾನಾರಾಯಣಗೌಡ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಚೌಡೇನಹಳ್ಳಿ ಗ್ರಾಪಂ ಅಧ್ಯಕ್ಷರಾಗಿ ಡಿ.ಎಂ.ಧನಲಕ್ಷ್ಮಿ ಅವಿರೋಧ ಆಯ್ಕೆ


ಅಧ್ಯಕ್ಷರಾಗಿ ಆಯ್ಕೆಯಾದ ಧನಲಕ್ಷ್ಮಿ ಶಂಭುಲಿಂಗೇಗೌಡ ಅವರನ್ನು ಗ್ರಾಮಸ್ಥರು ಅಭಿನಂದಿಸಿದರು.

ಕೆ.ಆರ್.ಪೇಟೆ,ಏ.21– ತಾಲೂಕಿನ ಚೌಡೇನಹಳ್ಳಿ ಗ್ರಾಮ ಪಂಚಾಯಿತಿಯ ನೂತನ ಅಧ್ಯಕ್ಷರಾಗಿ ಡಿ.ಎಂ. ಧನಲಕ್ಷ್ಮಿ ಅವಿರೋಧ ಆಯ್ಕೆಯಾಗಿದ್ದಾರೆ.

ಈ ಹಿಂದಿನ ಗ್ರಾ.ಪಂ. ಅಧ್ಯಕ್ಷೆ ರಾಧಾಮಣಿ ಅವರ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ಧನಲಕ್ಷ್ಮಿ ಹೊರತುಪಡಿಸಿ ಬೇರೆ ಯಾವುದೇ ಸದಸ್ಯರು ನಾಮಪತ್ರ ಸಲ್ಲಿಸದ ಕಾರಣ ಅವಿರೋಧ ಆಯ್ಕೆ ನಡೆಯಿತು.

ಚುನಾವಣಾಧಿಕಾರಿಯಾಗಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಕೆ.ಸುಷ್ಮ ಸಹ ಚುನಾವಣಾಧಿಕಾರಿಯಾಗಿ ಪಿಡಿಓ ನುರಾಜ್ ಮೂರ್ತಿ, ತಾಪಂ ವ್ಯವಸ್ಥಾಪಕ ಅನಿಲ್ ಬಾಬು ಕಾರ್ಯನಿರ್ವಹಿಸಿದರು.

ನೂತನ ಅಧ್ಯಕ್ಷೆ ಧನಲಕ್ಷ್ಮಿ ಅವರನ್ನು ಉಪಾಧ್ಯಕ್ಷರಾದ ಕೆ.ಎನ್.ವಿನೋದ, ಸದಸ್ಯರಾದ ಪಿ.ಚಿತ್ರ, ಹೆಚ್.ಡಿ.ಹೇಮಾವತಿ, ಜಯಲಕ್ಷ್ಮಮ್ಮ, ದೇವರಾಜ್, ದ್ರಾಕ್ಷಾಯಿಣಿ ರಾಜೇಶ್, ಅಂಜುಮಮ್ಮ, ಟಿ.ರಮೇಶ್, ರಘು, ನಂಜಾಮಣಿ, ಸಿ.ಆರ್.ಶ್ರೀಶೈಲ, ಎಸ್.ದೇವರಾಜು, ಎಸ್.ಜೆ.ಸೋಮಶೇಖರ್, ಆರ್.ಕೆ.ರವಿಕುಮಾರ್, ಶಿಲ್ಪ, ಜಿ.ಕೆ.ಪ್ರದೀಪ್, ಕಾರ್ಯದರ್ಶಿ ವಿಷಕಂಠ ಆರಾಧ್ಯ, ಕೃಷ್ಣಾಪುರ ಗಿರೀಶ್, ಭದ್ರಿ, ನಾರಾಯಣ ಸ್ವಾಮಿ ಮತ್ತಿತರರು ಅಭಿನಂದಿಸಿದರು.

ನೂತನ ಅಧ್ಯಕ್ಷೆ ಧನಲಕ್ಷ್ಮಿ ಅಧಿಕಾರ ಸ್ವೀಕರಿಸಿ ಮಾತನಾಡಿ, ಗ್ರಾಮ ಪಂಚಾಯಿತಿ ಸದಸ್ಯರು ಹಾಗೂ ನೌಕರರ ಸಹಕಾರದೊಂದಿಗೆ ನನಗೆ ಸಿಕ್ಕಿರುವ ಅಧಿಕಾರದ ಅವಧಿಯಲ್ಲಿ ಗ್ರಾಮಗಳ ಅಭಿವೃದ್ಧಿಗೆ ಕೆಲಸ ಮಾಡುತ್ತೇನೆ. ಗ್ರಾಮಗಳ ಸಮಗ್ರ ಅಭಿವೃದ್ಧಿಗೆ ಉದ್ಯೋಗ ಖಾತ್ರಿ ಯೋಜನೆಯೂ ವರದಾನವಾಗಿದೆ. ಪ್ರಮುಖವಾಗಿ ಕೃಷಿ ಹೊಂಡಗಳ ನಿರ್ಮಾಣ, ಜಾನುವಾರು ತೊಟ್ಟಿಗಳು ಕೊಟ್ಟಿಗೆಗಳ ನಿರ್ಮಾಣ, ಜಮೀನು ಅಭಿವೃದ್ಧಿ, ಕೆರೆ, ಕಟ್ಟೆಗಳ ಹೂಳೆತ್ತುವುದು, ಅಂತರ್ಜಲ ವೃದ್ಧಿಗೆ ಚೆಕ್ ಡ್ಯಾಮ್‌ಗಳ ನಿರ್ಮಾಣ, ಇಂಗು ಗುಂಡಿಗಳ ನಿರ್ಮಾಣ, ಮಳೆನೀರು ಸಂಗ್ರಹಿಸುವುದು, ಸಸಿಗಳನ್ನು ನೆಟ್ಟು ತೋಪುಗಳನ್ನು ನಿರ್ಮಿಸುವುದು ಸೇರಿದಂತೆ ಹತ್ತಾರು ಕಾಮಗಾರಿಗಳನ್ನು ಮಾಡಿ ಗ್ರಾಮಗಳ ಸಮಗ್ರ ಅಭಿವೃದ್ಧಿ ಕೈಜೋಡಿಸುವುದಾಗಿ ಭರವಸೆ ನೀಡಿದರು.

ಸಾರ್ವಜನಿಕರ ಕೆಲಸ ಮಾಡಿಕೊಡಲಾಗದ ಪಿಡಿಓಗಳು ಅಧಿಕಾರ ಬಿಟ್ಟು ಹೊರಡಿ

ಶಾಸಕ ರಮೇಶ್ ಬಂಡಿಸಿದ್ದೇಗೌಡ ಗರಂ


ನಾಡಕಚೇರಿ ಕಟ್ಟಡ ಉದ್ಘಾಟಿಸುತ್ತಿರುವ ರಮೇಶ ಬಂಡಿಸಿದ್ದೇಗೌಡ.

ಮಂಡ್ಯ,ಏ.21– ಗ್ರಾಮ ಪಂಚಾಯಿತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪಿಡಿಓಗಳು ತಮ್ಮ ವ್ಯಾಪ್ತಿ ಗ್ರಾಮಗಳ ಗ್ರಾಮ ಠಾಣಾ ಆಸ್ತಿಗಳಿಗೆ 9 ಮತ್ತು 11 ಇ–ಸ್ವತ್ತುಗಳನ್ನು ನೀಡಲು ಕ್ರಮ ವಹಿಸಬೇಕು. ಸಣ್ಣ ಪುಟ್ಟ ತೊಂದರೆಗಳಿದ್ದರೆ ಅದನ್ನು ಸರಿಪಡಿಸಿ ಸಾರ್ವಜನಿಕರಿಗೆ ತುರ್ತಾಗಿ ಇ–ಸ್ವತ್ತು ವಿತರಿಸಬೇಕು. ಸಾರ್ವಜನಿಕರ ಕೆಲಸ ಮಾಡಿಕೊಡಲಾಗದ ಪಿಡಿಓಗಳು ಅಧಿಕಾರ ಬಿಟ್ಟು ಹೊರಡಿ ಎಂದು ಶಾಸಕ ಹಾಗೂ ಚೆಸ್ಕಾಂ ಅಧ್ಯಕ್ಷ ಪಿ.ಎ. ರಮೇಶ ಬಂಡಿಸಿದ್ದೇಗೌಡ ಎಚ್ಚರಿಕೆ ನೀಡಿದರು.

ಸೋಮವಾರ ತಾಲೂಕಿನ ತಗ್ಗಹಳ್ಳಿ ಗ್ರಾಮದಲ್ಲಿ ನಿರ್ಮಿಸಿರುವ ನಾಡಕಚೇರಿ ಕಟ್ಟಡದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಜನರನ್ನು ಸುತ್ತಾಡಿಸದೆ ಸಣ್ಣ ಪುಟ್ಟ ವ್ಯತ್ಯಾಸ ಸರಿಪಡಿಸಿಕೊಂಡು ಯಿದ್ದೋದಾಯಿಂದಲ್ಲಿ ಯೋಜನೆಗಳನ್ನು ರೂಪಿಸಿಕೊಂಡು ಜಾಗರೂಕತೆಯಿಂದ ಕೆಲಸಗಳನ್ನು ಮಾಡಿಕೊಡುವಂತೆ ಸೂಚಿಸಿದರು.

ತಗ್ಗಹಳ್ಳಿ ನಾಡಕಚೇರಿ ಕಟ್ಟಡಕ್ಕೆ ಸ್ಥಳ ದಾನ ಮಾಡಿದ ಲೇ.ಗುರುಮಲ್ಲಪ್ಪ ಕುಟುಂಬಕ್ಕೆ ಋಣಿಯಾಗಿ ಅವರ ಹೆಸರನ್ನು ಶಾಶ್ವತವಾಗಿ ಉಳಿಸುವ ಕೆಲಸ ಮಾಡುತ್ತೇವೆ. ನಾನು ಎರಡನೇ ಬಾರಿ ಶಾಸಕನಾಗಿದ್ದ ಅವಧಿಯಲ್ಲಿ ನಾಡಕಚೇರಿ ಕಟ್ಟಡ ಕಟ್ಟಲು ಪ್ರಾರಂಭವಾಯಿತು. ಈಗ ಇಲ್ಲಿಯೇ ಉಳಿಸುವ ಕೆಲಸ ಆಯಿತು ಎಂದು ಹೇಳಿದರು.

ರೈತರಿಗೆ ನಿರಂತರವಾಗಿ 7 ಗಂಟೆ ವಿದ್ಯುತ್ ಕೊಡಲು ಪ್ರಯತ್ನ ಮಾಡುತ್ತಿದ್ದೇವೆ. 24 ಗಂಟೆಯ ಒಳಗೆ ಟಿಸಿ ಬದಲಾವಣೆಗೆ ಕ್ರಮ ವಹಿಸುತ್ತಿದ್ದೇವೆ. ಕಂದಾಯ ಇಲಾಖೆಯು, ಪಂಚಾಯಿತಿ ಹಾಗೂ ಎಲ್ಲ ಇಲಾಖೆಗಳೂ ಮಾತ್ರ ಇಲಾಖೆಯಾಗಿವೆ. ತಗ್ಗಹಳ್ಳಿ ಹಾಗೂ ಕೊತ್ತತ್ತಿ ವ್ಯಾಪ್ತಿಯಲ್ಲಿ ಹತ್ತು ಸಾವಿರ ಪೌತಿ ಖಾತೆಗಳಿವೆ ರೈತ ಬಾಂಧವರು ಸಣ್ಣಪುಟ್ಟ ಸಮಸ್ಯೆಗಳಿದ್ದರೆ ಸರಿ ಮಾಡಿಕೊಂಡು ದೊಡ್ಡ ಮನಸ್ಸು ಮಾಡಿ ಮುಂದೆ ಬಂದು ಪೌತಿ ಖಾತೆಗಳನ್ನು ಮಾಡಿಸಿಕೊಳ್ಳಿ ಎಂದು ಸಲಹೆ ನೀಡಿದರು.

ಏಪ್ರಿಲ್ 25ರಂದು ಕೊತ್ತತ್ತಿ, ಮೇ 3ರಂದು ಸೂನಗಹಳ್ಳಿ, ಮೇ 13ರಂದು ಮಂಗಲ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಜನಸ್ಪಂದನ ಕಾರ್ಯಕ್ರಮವಿದ್ದು, ಸಾರ್ವಜನಿಕರು ಜನಸ್ಪಂದನ ಕಾರ್ಯಕ್ರಮದ ಪ್ರಯೋಜನವನ್ನು ಪಡೆದುಕೊಳ್ಳಬೇಕು. ನಾನು ಶಾಸಕನಾಗಿ ಮೇ 25ನೇ ತಾರೀಕಿಗೆ ಎರಡು ವರ್ಷಗಳು ತುಂಬುತ್ತಿದ್ದು ಜನ ಪರವಾಗಿ ಮುತುವರ್ಜಿ ವಹಿಸಲಿಲ್ಲ ಎಂದರೆ ಜನರು ನಮಗೆ ಶಾಪ ಹಾಕುತ್ತಾರೆ. ಈ ನಿಟ್ಟಿನಲ್ಲಿ ತಗ್ಗಹಳ್ಳಿ ಜಿಲ್ಲಾ ಪಂಚಾಯತ್ ವ್ಯಾಪ್ತಿಯನ್ನು ಮಾದರಿಯಾಗಿ ಅಭಿವೃದ್ಧಿಪಡಿಸಲು ಯೋಜನೆಗಳನ್ನು ರೂಪಿಸಿ ಕೆಲಸ ಮಾಡಲಾಗುತ್ತಿದೆ ಎಂದು ಹೇಳಿದರು.

ಉಪವಿಭಾಗಾಧಿಕಾರಿ ಎಂ.ಶಿವಮೂರ್ತಿ ಮಾತನಾಡಿ, 18 ಲಕ್ಷ ರೂ. ವೆಚ್ಚದ ಸರ್ಕಾರದ ಅನುದಾನದ ಜೊತೆ ದಾನಿಗಳ ಸಹಕಾರದಿಂದ ತಗ್ಗಹಳ್ಳಿ ಗ್ರಾಮದಲ್ಲಿ ಉತ್ತಮವಾದ ನಾಡಕಚೇರಿ ನಿರ್ಮಾಣ ಆಗಿದೆ ಸಾರ್ವಜನಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ತಗ್ಗಹಳ್ಳಿ ನಾಡಕಚೇರಿಗೆ ನಿವೇಶನ ನೀಡಿದ ಲೇ.ಗುರುಮಲ್ಲಪ್ಪರವರ ಕುಟುಂಬಸ್ಥರನ್ನು ಕಾರ್ಯಕ್ರಮದಲ್ಲಿ ಸನ್ಮಾನಿಸಲಾಯಿತು.

ವೇದಿಕೆಯಲ್ಲಿ ತಹಸೀಲ್ದಾರ್ ಡಾ.ಶಿವಕುಮಾರ್ ಬಿರಾದರ, ತಗ್ಗಹಳ್ಳಿ ನಾಡಕಚೇರಿ ಉಪ ತಹಸೀಲ್ದಾರ್ ಡಿ.ತಮ್ಮಣ್ಣಗೌಡ, ನಿರ್ಮಿತಿ ಕೇಂದ್ರ ಯೋಜನಾ ವ್ಯವಸ್ಥಾಪಕ ಬಿ.ಜಯಪ್ರಕಾಶ್, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಭಾರತಿ, ಜಿ.ಪಂ. ಮಾಜಿ ಅಧ್ಯಕ್ಷ ತಗ್ಗಹಳ್ಳಿ ವೆಂಕಟೇಶ್, ಮುಖಂಡ ತಗ್ಗಹಳ್ಳಿ ಕೃಷ್ಣ, ಜಿ.ಪಂ. ಮಾಜಿ ಸದಸ್ಯ ಮಂಜು ನಾಥ್, ಹಳುವಾಡಿ ಗ್ರಾ.ಪಂ. ಅಧ್ಯಕ್ಷ ಕೃಷ್ಣ, ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

ಏಷ್ಯನ್ ಚಾಂಪಿಯನ್ಸ್‌ನ ಪದಕ ವಿಜೇತ ಚಿರಂತ್‌ಗೆ ತವರಿನಲ್ಲಿ ಸನ್ಮಾನ



ಶ್ರೀರಂಗಪಟ್ಟಣ: ಏ.18ರಂದು ಸೌದಿ ಅರೇಬಿಯಾ ದೇಶದಲ್ಲಿ 18 ವರ್ಷ ಒಳಪಟ್ಟ ಏಷ್ಯನ್ ಚಾಂಪಿಯನ್ಸ್ ಶಿಪ್‌ನ ರಿಲೇಯಲ್ಲಿ ಬೆಳ್ಳಿ ಪದಕ ಗಳಿಸಿದ ಬೆಳಗೊಳ ಗ್ರಾಮದ ಪಿ.ಚಿರಂತ್ ಅವರನ್ನು ತವರು ಗ್ರಾಮಸ್ಥರಿಗೆ ಅದ್ದೂರಿಯಾಗಿ ಸ್ವಾಗತಿಸಿ ಅಭಿನಂಧಿಸಲಾಯಿತು.

ಗ್ರಾಪಂ ಅಧ್ಯಕ್ಷ ಪುಟ್ಟರಾಜು ನೇತೃತ್ವದಲ್ಲಿ ಗ್ರಾಮಸ್ಥರು, ಬೆಂಗಳೂರಿನಿಂದ ಭಾನುವಾರ ಗ್ರಾಮಕ್ಕೆ ಆಗಮಿಸಿದ ಚಿರಂತ್ ಅವರನ್ನು ಬರಮಾಡಿಕೊಂಡು ಕಾರಿನ ಮೇಲೆ ಕೂರಿಸಿ ಮೆರವಣಿಗೆ ಮಾಡಿ ಅಭಿನಂದಿಸಿದರು.

ಗ್ರಾಮದ ಕವಿತಾ ಹಾಗೂ ಪ್ರಸನ್ನ ದಂಪತಿ ಪುತ್ರ ಪಿ.ಚಿರಂತ್ ಅವರು ಹಲವಾರು ದಿನಗಳಿಂದ ಶಾಲಾ ಕಾಲೇಜುಗಳಲ್ಲಿ ನಂತರ ಕ್ಲಬ್‌ಗಳ ಮೂಲಕ ರನ್ನಿಂಗ್ ಹಾಗೂ ರಿಲೇಯಲ್ಲಿ ರಾಜ್ಯ, ಹೊರರಾಜ್ಯಗಳಲ್ಲಿ ಭಾಗವಹಿಸಿ ವಿಜೇತರಾಗಿ ಹೆಸರುಗಳಿಸಿದರು. ಇದೀಗ ದೇಶವನ್ನು ಪ್ರತಿನಿಧಿಸುವ ಅವಕಾಶ ದೊರಕಿದ್ದು, 18 ವರ್ಷ ಒಳಪಟ್ಟ ಏಷ್ಯಾನ್ ಚಾಂಪಿಯನ್‌ಶಿಪ್‌ನ ರಿಲೇಯಲ್ಲಿ 16 ದೇಶಗಳ ನಡುವೆ ನಡೆದ ಪಂದ್ಯದಲ್ಲಿ ಅಥ್ಲೆಟಿಕ್ಸ್ ಫೆಡರೇಷನ್ ಆಫ್ ಇಂಡಿಯಾ ಮೂಲಕ ಭಾರತ ದೇಶವನ್ನು ಪ್ರತಿನಿಧಿಸಿದ ಚಿರಂತ್ ಪಿ. 18 ವರ್ಷ ಒಳಪಟ್ಟ 6ನೇ ಏಷ್ಯನ್ ಚಾಂಪಿಯನ್‌ಶಿಪ್‌ನ ರಿಲೇಯಲ್ಲಿ ಸೇರಿ ನಾಲ್ಕು ಮಂದಿ ಯುವಕ ತಂಡದಲ್ಲಿ ರಿಲೇಯಲ್ಲಿ ಭಾಗವಹಿಸಿ ನ್ಯಾಷನಲ್ ಯೂತ್ ರೆಕಾರ್ಡ್ ಮಾಡುವ ಮೂಲಕ ಎರಡನೇ ಸ್ಥಾನ ಗಳಿಸಿದರು.

ಮೈಸೂರಿನ ಕಾಲೇಜು ಒಂದರಲ್ಲಿ ಈ ಬಾರಿ ದ್ವಿತೀಯ ಪಿಯುಸಿ ಓದುತ್ತಿರುವ ಚಿರಂತ್‌ಗೆ ಎಲ್ಲೆಡೆಯಿಂದ ಶುಭಾಶಯಗಳ ಕರೆಗಳು ಬರುತ್ತಿವೆ. ಗ್ರಾಪಂ ಮಾಜಿ ಅಧ್ಯಕ್ಷ ಬಿ.ವಿ.ಸುರೇಶ್, ಮಾಜಿ ಉಪಾಧ್ಯಕ್ಷ ಮಂಜುನಾಥ್, ಗ್ರಾಪಂ ಸದಸ್ಯರಾದ ಯರ್ಾಂಬೋರವಿ, ಪ್ರಕಾಶ್, ಸೊಟ್ಟೈಟಿ ಮಾಜಿ ಅಧ್ಯಕ್ಷರಾದ ಬಿ.ವಿ. ವೆಂಕಟೇಶ್, ಚಾಮುಂಡಿ ರವಿ, ಹರೀಶ್ ಸೇರಿದಂತೆ ಗ್ರಾಮದ ಮುಖಂಡರು ಹಾಗೂ ಯಜಮಾನರುಗಳು ಸ್ವಾಗತಿಸಿ ಬರಮಾಡಿಕೊಂಡು ಅಭಿನಂದಿಸಿದರು.

ನಾಳೆ ರಾಜ್ಯಮಟ್ಟದ ಯುಗಾದಿ ಕವಿಗೋಷ್ಠಿ

ಮಂಡ್ಯ,ಏ.21– ಅಖಿಲು ಸೇವಾ ಬಳಗದ ವತಿಯಿಂದ ಯುಗಾದಿ ಕಾವ್ಯ ಸಂಭ್ರಮದ ಅಂಗವಾಗಿ ರಾಜ್ಯ ಮಟ್ಟದ ಯುಗಾದಿ ಕವಿಗೋಷ್ಠಿ ಹಾಗೂ ಸಾಧಕರಿಗೆ ಸನ್ಮಾನ ಕಾರ್ಯಕ್ರಮವನ್ನು ಏ.23ರಂದು ಬೆಳಿಗ್ಗೆ 10 ಗಂಟೆಗೆ ನಗರದ ಕೆ.ವಿ.ಶಂಕರಗೌಡ ಶತಮಾನೋತ್ಸವ ಭವನದಲ್ಲಿ ಆಯೋಜಿಸಲಾಗಿದೆ ಎಂದು ಬಳಗದ ಅಧ್ಯಕ್ಷ ರವಿಕಿರಣ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮದಲ್ಲಿ ಕವಿಗಳ ಕವಿತೆಯನ್ನು ಪದ್ಯದ ರೀತಿಯಲ್ಲಿ ಪ್ರಸ್ತುತಪಡಿಸಲಾಗುವುದು ಎಂದರು. ಜಿಪಂ ಆಡಳಿತ ಉಪಕಾರ್ಯದರ್ಶಿ ಎಂ.ಬಾಬು ಕಾರ್ಯಕ್ರಮ ಉದ್ಘಾಟಿಸುವರು, ಎಸ್.ಬಿ.ಎಜುಕೇಷನ್ ಟ್ರಸ್ಟ್‌ನ ಡಾ.ಮೀರಾಶಿವಲಿಂಗಯ್ಯ ಅಧ್ಯಕ್ಷತೆ ವಹಿಸಲಿದ್ದು, ಸ್ಪಂದನ ಸಾಂಸ್ಕೃತಿಕ ಪರಿಷತ್ತಿನ ಸಂಸ್ಥಾಪಕ ಅಧ್ಯಕ್ಷ, ಸಾಹಿತಿ ಟಿ.ಸತೀಶ್ ಜವರೇಗೌಡ ಆಶಯ ನುಡಿಗಳನ್ನಾಡುವರು ಎಂದು ಹೇಳಿದರು. ಗೋಷ್ಠಿಯಲ್ಲಿ ಗೌರವಾಧ್ಯಕ್ಷ ಬಾಲ ಸುಬ್ರಮಣ್ಯ, ಪ್ರಧಾನ ಕಾರ್ಯದರ್ಶಿ ಹನುಮಂತಪ್ಪ ಇದ್ದರು.

ಬ್ರಾಹ್ಮಣ ವಿದ್ಯಾರ್ಥಿಗಳ ಭವಿಷ್ಯಕ್ಕೆ ಕುತ್ತು ತಂದವರ ವಿರುದ್ಧ ಕ್ರಮಕ್ಕೆ ಒತ್ತಾಯ



ಮಂಡ್ಯ,ಏ.21– ಬ್ರಾಹ್ಮಣ ವಿದ್ಯಾರ್ಥಿಗಳು ಜನಿವಾರ ಧರಿಸಿ ಸಿಇಟಿ ಪರೀಕ್ಷೆ ಬರೆಯಲು ಅನುಮತಿ ನೀಡದೇ, ಅವರ ಭವಿಷ್ಯಕ್ಕೆ ಕುತ್ತು ತಂದ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಮಂಡ್ಯ ಜಿಲ್ಲಾ ಬ್ರಾಹ್ಮಣ ಸಭಾದ ಜಿಲ್ಲಾಧ್ಯಕ್ಷ ಪ್ರೊ.ಹೆಚ್.ಎಸ್.ನರ ಸಿಂಹಮೂರ್ತಿ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮಾಜದ್ರೋಹಿ ಮನಸ್ಥಿತಿಗಳ ಅವಿವೇಕಿತನ ಅತಿರೇಕಕ್ಕೆ ಹೋಗುತ್ತಿದ್ದು, ಜನಿವಾರ ತೆಗೆದರೆ ಮಾತ್ರ ಪರೀಕ್ಷೆ ಬರೆಯಲು ಅವಕಾಶ ನೀಡುವುದಾಗಿ ಹೇಳಿ ಬ್ರಾಹ್ಮಣ ವಿದ್ಯಾರ್ಥಿಗಳನ್ನು ಪರೀಕೆ ವಂಚಿತರನ್ನಾಗಿಸಿದ್ದಾರೆ ಎಂದು ದೂರಿದರು.

ಸಾಮಾನ್ಯ ಜ್ಞಾನ ಪರೀಕ್ಷಾ ನಿಯಮಗಳಲ್ಲಿ ಜನಿವಾರ ತೆಗೆದು ಪರೀಕ್ಷೆ ಬರೆಯಬೇಕು ಎಂಬ ನಿಯಮವಿಲ್ಲವಾದರೂ ಅಧಿಕಾರಿ ಸಮಾಜದ ಸ್ವಾಸ್ಥ್ಯ ಹಾಳು ಮಾಡುವ ದೃಷ್ಟಿಯಿಂದ ಬ್ರಾಹ್ಮಣ ವಿದ್ಯಾರ್ಥಿಗಳನ್ನು ಉದ್ದೇಶ ಪೂರ್ವಕವಾಗಿ ಗುರಿಯಾಗಿಸಿಕೊಂಡು ಈ ರೀತಿಯ ಕುಕೃತ್ಯವೆಸಗಿದ್ದಾರೆ ಎಂದು ಆರೋಪಿಸಿದರು.

ಇಂದು ಪ್ರತಿಭಟನೆ: ಜನಿವಾರ ಧರಿಸಿ ಸಿಇಟಿ ಪರೀಕ್ಷೆ ಬರೆಯಲು ಅನುಮತಿ ನೀಡಿದ ಅಧಿಕಾರಿಗಳ ಕ್ರಮವನ್ನು ಖಂಡಿಸಿ, ಮತ್ತೆ ಈ ರೀತಿಯ ಅಹಿತಕರ ಘಟನೆ ನಡೆಯದಂತೆ ಕ್ರಮ ವಹಿಸಲು ಒತ್ತಾಯಿಸಿ ಮಂಡ್ಯ ಜಿಲ್ಲಾ ಬ್ರಾಹ್ಮಣ ಸಭಾದ ವತಿಯಿಂದ ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ನಾಳೆ (ಏ.22) ಪ್ರತಿಭಟನೆ ನಡೆಸಲಾಗುವುದು ಎಂದರು.

ಸದರಿ ಅಹಿತಕರ ಘಟನೆ ಮರುಕಳಿಸದಂತೆ ಒತ್ತಾಯಿಸಿ ಮಂಡ್ಯ ನಗರದ ಎಸ್.ಎಂ. ವಿಶ್ವೇಶ್ವರಯ್ಯ ಪ್ರತಿಮೆಯಿಂದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಮೆರವಣಿಗೆ ನಡೆಸಿ, ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಪತ್ರ ರವಾನಿಸಲಾಗುವುದು ಎಂದು ಇದೇ ವೇಳೆ ತಿಳಿಸಿದರು.

ಗೋಷ್ಠಿಯಲ್ಲಿ ಬ್ರಾಹ್ಮಣ ಸಭಾದ ಗೋಪಾಲಕೃಷ್ಣ ಶಣೈ, ಎಸ್.ಶ್ರೀಧರ್, ಎಸ್.ಶಂಕರ ನಾರಾಯಣ ಶಾಸ್ತ್ರಿ, ಜಿ.ವಿ.ನಾಗರಾಜ್, ಸತ್ಯನಾರಾಯಣ್, ಪ್ರಭಾಕರ್, ರಾಘು ಇದ್ದರು.

ಒಂದನೇ ಪುಟದಿಂದ

ತಾಯಿ ಬಂಧನ; ತಂಗಿ ಪೊಲೀಸ್ ವಶಕ್ಕೆ

ಖಿನ್ನತೆಯಿಂದ ಬಳಲುತ್ತಿದ್ದು ಅವರೇ ಕೊಲೆ ಮಾಡಿರುವ ಶಂಕೆ ವ್ಯಕ್ತವಾಗಿದೆ, ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ಕಾರ್ತಿಕೇಶ್ ದೂರಿನಲ್ಲಿ ಹೇಳಿಕೊಂಡಿದ್ದಾರೆ. ಪೊಲೀಸರು ಓಂಪ್ರಕಾಶ್ ಅವರ ಪತ್ನಿ ಪಲ್ಲವಿ ಮತ್ತು ಪುತ್ರಿ ಕೃತಿ ಅವರನ್ನು ವಶಕ್ಕೆ ಪಡೆದು ವಿಚಾರಣೆಗೊಳಪಡಿಸಲಾಗಿ, ಈ ವೇಳೆ ಪಲ್ಲವಿ ಅವರು ತಾವೊಬ್ಬರೇ ಪತಿಯನ್ನು ಹತ್ಯೆ ಮಾಡಿದ್ದಾಗಿಯೂ, ಪುತ್ರಿಗೆ ಇದ ರಲ್ಲಿ ಸಂಬಂಧವಿಲ್ಲವೆಂದು ಹೇಳಿಕೆ ನೀಡಿದ್ದಾರೆ ಎನ್ನಲಾಗಿದೆ, ಅದೇ ವೇಳೆ ಕೃತಿ ಅವರು ವಿಚಾರಣೆಗೆ ಸಹಕರಿಸದ ಕಾರಣ ಪಲ್ಲವಿ ಅವರನ್ನು ಮಾತ್ರ ಬಂಧಿಸಿ, ಕೃತಿ ಅವರನ್ನು ಹೆಚ್ಚಿನ ವಿಚಾರಣೆಗೊಳಪಡಿಸಲಾಗಿದೆ.

ಸಕಲ ಸರ್ಕಾರಿ ಗೌರವದೊಂದಿಗೆ ಅಂತ್ಯಕ್ರಿಯೆ: ಪತ್ನಿಯಿಂದ ಹತ್ಯೆಗೀಡಾದ ನಿವೃತ್ತ ಪೊಲೀಸ್ ಮಹಾನಿರ್ದೇಶಕ ಓಂ ಪ್ರಕಾಶ್ ಅವರ ಅಂತ್ಯಕ್ರಿಯೆ ಸೋಮವಾರ ಸಂಜೆ ಬೆಂಗಳೂರಿನಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ನಡೆಯಿತು.

ಇಂದು ಸಂಜೆ ವಿಲ್ಸನ್ ಗಾರ್ಡನ್ ಸ್ಮಶಾನದಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು. ಅವರ ಮಗ ಕಾರ್ತಿಕೇಶ್ ಅವರು ಅಂತಿಮ ವಿಧಿವಿಧಾನಗಳನ್ನು ನೆರವೇರಿಸಿದರು.

ಪೊಲೀಸ್ ಪಡೆಯಿಂದ ಮೂರು ಸುತ್ತು ಗಾಳಿಯಲ್ಲಿ ಗುಂಡು ಹಾರಿಸಿ, ಓಂ ಪ್ರಕಾಶ್ ಪಾರ್ಥಿವ ಶರೀರಕ್ಕೆ ಅಂತಿಮ ನಮನ ಸಲ್ಲಿಸಲಾಯಿತು. ಬಳಿಕ ಪುತ್ರ ಕಾರ್ತಿಕೇಶ್ ಅಂತಿಮ ವಿಧಿ–ವಿಧಾನ ನೆರವೇರಿಸಿ ಪಾರ್ಥಿವ ಶರೀರಕ್ಕೆ ಅಗ್ನಿಸ್ಪರ್ಶ ಮಾಡಿದರು. ಓಂಪ್ರಕಾಶ್ ಅವರ ಸಂಬಂಧಿಕರು, ಸ್ನೇಹಿತರು ಹಾಗೂ ಹಲವು ಗಣ್ಯರು ಅಂತಿಮ ನಮನ ಸಲ್ಲಿಸಿದರು.

ಸಿಸಿಬಿಗೆ ವರ್ಗಾವಣೆ

ಬೆಂಗಳೂರು, ಏ.21– ರಾಜ್ಯದ ನಿವೃತ್ತ ಪೊಲೀಸ್ ಮಹಾನಿರ್ದೇಶಕ ಓಂ ಪ್ರಕಾಶ್ ಅವರ ಹತ್ಯೆ ಪ್ರಕರಣವನ್ನು ಹೆಚ್ಚಿನ ತನಿಖೆಗಾಗಿ ನಗರ ಪೊಲೀಸ್ ಆಯುಕ್ತ ಬಿ. ದಯಾನಂದ ಅವರು ಸಿಸಿಬಿಗೆ ವರ್ಗಾಯಿಸಿ ಸೋಮವಾರ ಆದೇಶ ಹೊರಡಿಸಿದ್ದಾರೆ. ಪ್ರಕರಣದ ತನಿಖೆ ನಡೆಸುವಂತೆ ಸಿಸಿಬಿ ಮಹಿಳಾ ಸಂರಕ್ಷಣಾ ದಳದ ಎಸಿಪಿಗೆ ಪೊಲೀಸ್ ಆಯುಕ್ತರು ಸೂಚಿಸಿದ್ದಾರೆ.

ಓಂ ಪ್ರಕಾಶ್ ಕೊಲೆ ಹಿಂದೆ ಹಲವು ಕಾರಣಗಳು ಕೇಳಿಬರುತ್ತಿವೆ. ಅವರ ಪತ್ನಿ ಪಲ್ಲವಿ ಮಾನಸಿಕ ಕಾಯಿಲೆಯಿಂದ ಬಳಲುತ್ತಿದ್ದರಿಂದ ಭ್ರಮೆಯಲ್ಲಿ ಪತಿಯನ್ನು ಚಾಕುವಿನಿಂದ ಚುಚ್ಚಿ ಬರ್ಬರವಾಗಿ ಹತ್ಯೆ ಮಾಡಿದ್ದಾರೆ ಎನ್ನಲಾಗುತ್ತಿದೆ. ಇನ್ನು ಆಸ್ತಿ ಕಲಹದಿಂದ ಓಂ ಪ್ರಕಾಶ್ ಅವರು ಕೊಲೆಯಾದಾರಾ ಎಂಬ ಅನುಮಾನವೂ ವ್ಯಕ್ತವಾಗಿದೆ. ಹತ್ಯೆಗೆ ನಿಖರ ಕಾರಣ ಹಾಗೂ ಆಳವಾದ ತನಿಖೆ ನಡೆಸಲು ಪ್ರಕರಣವನ್ನು ಸಿಸಿಬಿಗೆ ವರ್ಗಾಯಿಸಲಾಗಿದೆ.

ಅಂತ್ಯಕ್ರಿಯೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಕಾರ್ತಿಕೇಶ್, ನಿನ್ನೆಯ ಘಟನೆಯ ನಂತರ, ನಾನು ದೂರು ನೀಡಿದ್ದೇನೆ. ಪೊಲೀಸರು ತಮ್ಮ ಕೆಲಸ ಮಾಡುತ್ತಿದ್ದಾರೆ ಮತ್ತು ನನಗೆ ಅವರ ಮೇಲೆ ಸಂಪೂರ್ಣ ನಂಬಿಕೆ ಇದೆ. ತನಿಖೆಯಿಂದ ಎಲ್ಲವೂ ಬಹಿರಂಗ ಗೊಳ್ಳುವುದರಿಂದ ನಾನು ಹೆಚ್ಚಿನ ಪ್ರತಿಕ್ರಿಯೆ ನೀಡಲು ಬಯಸುವುದಿಲ್ಲ ಎಂದರು.

ಲಕ್ಷದ ಗಡಿಯಲ್ಲಿ ಚಿನ್ನ!

ಅನ್ನು ತಲುಪಲು ಈಗ ಕೇವಲ 1,650 ರೂಪಾಯಿ ದೂರದಲ್ಲಿದೆ. ಭಾರತದಲ್ಲಿ ಚಿನ್ನದ ದರದಲ್ಲಿ ಈ ತೀವ್ರ ಏರಿಕೆ ಹೊಸ ವಹಿವಾಟಿನ ವಾರದ ಆರಂಭದಲ್ಲಿ ಬಂದಿದೆ. 10 ಗ್ರಾಂ 24 ಕ್ಯಾರೆಟ್ ಚಿನ್ನದ ಬೆಲೆ ಈಗ 98,350 ರೂ.ಗಳಿಗೆ ತಲುಪಿದ್ದು, 22 ಕ್ಯಾರೆಟ್ ಚಿನ್ನದ ಬೆಲೆ 10 ಗ್ರಾಂಗೆ 90,150 ರೂ.ಗಳಿಗೆ ತಲುಪಿದೆ. ತಜ್ಞರ ಪ್ರಕಾರ, ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಚಿನ್ನದ ಬೆಲೆ ಏರಿಕೆಯೇ ಈ ಏರಿಕೆಗೆ ಪ್ರಮುಖ ಕಾರಣ. ಅಮೆರಿಕ ಮತ್ತು ಯುರೋಪ್‌ನಲ್ಲಿ ಬಡ್ಡಿದರ ಕಡಿತದ ಸಾಧ್ಯತೆ, ಡಾಲರ್‌ನಲ್ಲಿನ ದುರ್ಬಲತೆ ಮತ್ತು ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಭೌಗೋಳಿಕ ರಾಜಕೀಯ ಉದ್ವಿಗ್ನತೆಗಳು ಮತ್ತೊಮ್ಮೆ ಹೂಡಿಕೆದಾರರನ್ನು ಸುರಕ್ಷಿತ ಹೂಡಿಕೆಯಾಗಿ ಚಿನ್ನದತ್ತ ಆಕರ್ಷಿಸಿವೆ.

ಬೆಂಗಳೂರಿನಲ್ಲಿ ಇಂದಿನ ಚಿನ್ನದ ಬೆಲೆ: ಬೆಂಗಳೂರಿನಲ್ಲಿ 24 ಕ್ಯಾರೆಟ್ ಚಿನ್ನದ ಬೆಲೆ 10 ಗ್ರಾಂಗೆ 98,350 ರೂ. ಮತ್ತು 22 ಕ್ಯಾರೆಟ್ ಚಿನ್ನದ ಬೆಲೆ 10 ಗ್ರಾಂಗೆ 90,150 ರೂಪಾಯಿ ಇದೆ.

ಲೋಕಾಯುಕ್ತಕ್ಕೆ ಬಿಜೆಪಿ ದೂರು

ಕೊಂಡೊಯ್ಯಬೇಕೆಂದು ಮನವಿ ಮಾಡಿದ್ದೇವೆ ಎಂದರು. ಇಂಧನ ಸಚಿವ ಕೆ.ಜೆ.ಜಾರ್ಜ್ 9 ಸುಳ್ಳು ಹೇಳಿದ್ದಾರೆ, ಬೇನಾಮಿ, ದುರ್ಬಳಕೆ ನಡೆದಿ ರುವುದು, ಗ್ರಾಹಕರಿಗೆ ಸ್ಮಾರ್ಟ್ ಮೀಟರ್ ಅಳವಡಿಕೆ ಕಡ್ಡಾಯ ಮಾಡಲು ಕಾನೂನಿನಲ್ಲಿ ಅವಕಾಶ ಇಲ್ಲದಿದ್ದರೂ ಬಲವಂತವಾಗಿ ಮಾಡಲಾಗುತ್ತಿದೆ. ಸಚಿವ ಕೆ.ಜೆ.ಜಾರ್ಜ್, ಪ್ರಧಾನ ಕಾರ್ಯದರ್ಶಿ ಗೌರವ್ ಗುಪ್ತ, ಬೆಸ್ಕಾಂ ಎಂ.ಡಿ. ಮಹಂತೇಶ್, ತಾಂತ್ರಿಕ ನಿರ್ದೇಶಕರಾದ ರಮೇಶ್, ಬಾಲಾಜಿ ಮತ್ತಿತರರ ವಿರುದ್ಧ ಅಧಿಕಾರ ದುರ್ಬಳಕೆ ದೂರು ನೀಡಿದ್ದೇವೆ, ಗುತ್ತಿಗೆ ಕೊಡುವಲ್ಲಿ ಕಾನೂನು ಉಲ್ಲಂಘನೆಯಾಗಿದೆ ಎಂದಿದ್ದಾರೆ.

ಧರ್ಮಗುರು ಪೋಪ್ ಫ್ರಾನ್ಸಿಸ್ ವಿಧಿವಶ

ಪೋಪ್‌ಗೆ ಗೌರವ; ಪೋಪ್ ಫ್ರಾನ್ಸಿಸ್ ಅವರಿಗೆ ಗೌರವ ಸೂಚಕವಾಗಿ ಪ್ಯಾರಿಸ್‌ನ ಐತಿಹಾಸಿಕ ನೊಟ್ರೆ–ಡ್ಯಾಮ್ ಡಿ ಕ್ಯಾಥೆಡ್ರಲ್ ಚರ್ಚ್‌ನಲ್ಲಿ 88 ಸಲ ಗಂಟೆ ಮೊಳಗಿಸಿ ಅಂತಿಮ ನಮನ ಸಲ್ಲಿಸಲಾಯಿತು. ಅದೇ ರೀತಿ ವಿಶ್ವ ಪ್ರಸಿದ್ಧ ಐಫೆಲ್ ಟವರ್‌ನ ಲೈಟ್‌ಗಳನ್ನು ಆಫ್ ಮಾಡುವ ಮೂಲಕ ಪೋಪ್‌ಗೆ ಗೌರವ ಸಲ್ಲಿಸಲಾಯಿತು. ಪೋಪ್ ಫ್ರಾನ್ಸಿಸ್ ನಿಧನದ ಹಿನ್ನೆಲೆಯಲ್ಲಿ ವಿಶೇಷ ಪ್ರಾರ್ಥನೆಯನ್ನು ಸಹ ಏರ್ಪಡಿಸಲಾಗಿತ್ತು.

ವಿಧಿ ವಿಧಾನಗಳು: ಪೋಪ್ ಫ್ರಾನ್ಸಿಸ್ ಅವರ ನಿಧನ ದಿಂದಾಗಿ ವ್ಯಾಟಿಕನ್ ಸಿಟಿಯಲ್ಲಿ ಹಲವು ಧಾರ್ಮಿಕ ಪ್ರಕ್ರಿಯೆ ಗಳಿಗೆ ಚಾಲನೆ ಸಿಗಲಿದೆ. ಹೊಸ ಪೋಪ್ ಆಯ್ಕೆಯಾಗುವವರೆಗೆ ವಿವಿಧ ವಿಧಿವಿಧಾನಗಳು ನಡೆಯಲಿವೆ. ಹೊಸ ಪೋಪ್ ಆಯ್ಕೆಯಾಗುವವರೆಗಿನ ಅವಧಿಯನ್ನು ಕ್ಯಾಥೋಲಿಕ್ ಚರ್ಚ್‌ನ 'ಸೆಡ್ ವೆಕೆಂಟೆ' (ಖಾಲಿ ಅವಧಿ) ಎಂದು ಕರೆಯಲಾಗುತ್ತದೆ. ಈ ಅವಧಿಯಲ್ಲಿ ದೈನಂದಿನ ಕೆಲಸಗಳನ್ನು ಹಿರಿಯ ಕಾರ್ಡಿನಲ್ ನಿರ್ವಹಿಸುತ್ತಾರೆ.

ಕಾರ್ಡಿನಲ್ ಅವರನ್ನು 'ಕ್ಯಾಮರ್ಲೆಂಗೊ' ಎಂದು ಸಂಬೋಧಿಸಲಾಗುತ್ತದೆ. 2019ರಲ್ಲಿ ಪೋಪ್ ಫ್ರಾನ್ಸಿಸ್ ನೇಮಿಸಿದ ಐರಿಷ್ ಅಮೆರಿಕನ್ ಕೆವಿನ್ ಫಾರೆಲ್ ಅವರು ಈಗಿನ ಸನ್ನಿವೇಶದಲ್ಲಿ ಆ ಕೆಲಸವನ್ನು ನಿರ್ವಹಿಸಲಿದ್ದಾರೆ. ಕ್ಯಾಮರ್ಲೆಂಗೊ ಹೊರತುಪಡಿಸಿ ಚರ್ಚ್‌ನ ಅಧಿಕಾರ ದಲ್ಲಿರುವ ಎಲ್ಲರೂ ಪೋಪ್ ನಿಧನದ ಕೂಡಲೇ ರಾಜೀನಾಮೆ ನೀಡಬೇಕು. ಸಾಂಪ್ರದಾಯಿಕವಾಗಿ, ಕ್ಯಾಮರ್ಲೆಂಗೊ ಅವರ ಪ್ರಮುಖ ಕೆಲಸ ಪೋಪ್ ಅವರ ಮರಣವನ್ನು ದೃಢೀಕರಿಸುವುದು. ವಿಶೇಷ ಬೆಳ್ಳಿಯ ಸುತ್ತಿಗೆಯಿಂದ ಪೋಪ್ ತಲೆಗೆ ತಟ್ಟಿ, ಅವರ ಹುಟ್ಟು ಹೆಸರನ್ನು ಕರೆಯುತ್ತಾರೆ.

ಪೋಪ್ ಧರಿಸಲೆಂದೇ ವಿಶೇಷವಾಗಿ ತಯಾರಿಸಲಾಗುವ ಫಿಶರ್‌ಮ್ಯಾನ್ಸ್ ರಿಂಗ್ ಎಂದು ಕರೆಯಲ್ಪಡುವ ಚಿನ್ನದ ಉಂಗುರವನ್ನು ಒಡೆದು ಹಾಕಲಾಗುತ್ತದೆ. ಈ ಉಂಗುರವನ್ನು ದಾಖಲೆಗಳಿಗೆ ಮೊಹರು ಹಾಕಲು ಬಳಸಲಾಗುತ್ತಿತ್ತು. ಜಗತ್ತಿನಾದ್ಯಂತ ಇರುವ ಕಾರ್ಡಿನಲ್‌ಗಳು ಸರಣಿ ಸಭೆಗಳನ್ನು ನಡೆಸಲಿದ್ದಾರೆ. ಈ ಸಭೆಯನ್ನು 'ಜನರಲ್ ಕಾಂಗ್ರೇಗೇಷನ್ಸ್' ಎನ್ನಲಾಗುತ್ತದೆ.

"ಧರ್ಮಗುರು ಪೋಪ್ ಫ್ರಾನ್ಸಿಸ್ ಅವರ ನಿಧನದಿಂದ ತೀವ್ರ ದುಃಖಿತನಾಗಿದ್ದೇನೆ. ಜಗತ್ತಿನ ಶಾಂತಿ, ಕರುಣೆ ಹಾಗೂ ನ್ಯಾಯಕ್ಕಾಗಿ ಪ್ರವಾದಿಯ ಧ್ವನಿಯಾಗಿದ್ದ ಇವರು, ಬಡವರ ಮೇಲೆ ಅಪಾರ ಪ್ರೀತಿ, ಪರಿಸರ ಕಾಳಜಿ, ಸಮನ್ವಯತೆಯ ಬದ್ಧತೆ ಹೊಂದಿದ್ದರು. ಸರಳತೆ, ಅಚಲವಾದ ನಂಬಿಕೆ ಮೂಲಕ ಪ್ರಭು ಕ್ರಿಸ್ತರ ದರ್ಶನ ಮಾಡಿಸಿದ್ದರು. ಅವರ ಆತ್ಮಕ್ಕೆ ಚಿರಶಾಂತಿ ಸಿಗಲೆಂದು ದೇವರಲ್ಲಿ ಪ್ರಾರ್ಥಿಸೋಣ. ಅವರ ಆತ್ಮಶಾಂತಿಗಾಗಿ ಅಂತ್ಯಕ್ರಿಯೆಯ ಹಿಂದಿನ ದಿನ ಮೈಸೂರಿನ ಸಂತ ಜೋಸೇಫರ ಪ್ರಧಾನ ದೇವಾಲಯದಲ್ಲಿ ನಡೆಯಲಿರುವ ವಿಶೇಷ ಬಲಿಪೂಜೆಯಲ್ಲಿ ಎಲ್ಲರೂ ಭಾಗಿಯಾಗೋಣ.



–ಡಾ.ಬರ್ನಾರ್ಡ್ ಮೊರಾಸ್,
ಆಡಳಿತಾಧಿಕಾರಿ, ಮೈಸೂರು ಧರ್ಮ ಕ್ಷೇತ್ರ

ಕಾರ್ಡಿನಲ್‌ಗಳು ಮೃತದೇಹ ಸಂಸ್ಕಾರದ ದಿನವನ್ನು ನಿಶ್ಚಯಿಸುತ್ತಾರೆ. ಇದು ಸಾವಿನ ನಾಲ್ಕು ದಿನಗಳ ಬಳಿಕ ಆರು ದಿನಗಳ ಒಳಗಾಗಿ ನಡೆಯಬೇಕು. ಫ್ರಾನ್ಸಿಸ್ ಅವರು ತಮ್ಮನ್ನು ರೋಮ್‌ನಲ್ಲಿರುವ ಸಂತ ಮರಿಯಾ ಮಗ್ಗಿಯೋರ್ ಬೆಸಿಲಿಕಾದಲ್ಲಿ ಅಂತ್ಯ ಸಂಸ್ಕಾರ ಮಾಡ ಬೇಕು ಎಂದು ತಿಳಿಸಿದ್ದಾರೆ. ಅವರ ಪಾರ್ಥಿವ ಶರೀರವನ್ನು ಮರ ಹಾಗೂ ಸತುವಿನಿಂದ ಮಾಡಲಾದ ಶವಪೆಟ್ಟಿಗೆಯಲ್ಲಿ ಇರಿಸಲಾಗುತ್ತದೆ. ಬಳಿಕ ಸಂಪ್ರದಾಯದ ಪ್ರಕಾರ ಅದನ್ನು ಒಡೆಯಲಾಗುತ್ತದೆ. ಸೇಂಟ್ ಪೀಟರ್ಸ್ ಬೆಸಿಲಿಕಾದಲ್ಲಿ ಅವರ ಪಾರ್ಥಿವ ಶರೀರವನ್ನು ಭಕ್ತರ ದರ್ಶನಕ್ಕೆ ಇಡಲಾಗುತ್ತದೆ. ಸಾಂಪ್ರದಾಯಿಕವಾಗಿ ನಿರ್ಮಿಸಲಾಗಿರುವ ವೇದಿಕೆಯಲ್ಲಿ ಮೃತದೇಹವನ್ನು ಇಡಲಾಗುತ್ತದೆ. ಫ್ರಾನ್ಸಿಸ್ ಅವರ ಸಂಭಾವ್ಯ ಉತ್ತರಾಧಿಕಾರಿಗಳಾದ 'ಪಾಪಾಬಿಲಿ' ಯನ್ನು ಆಯ್ಕೆ ಮಾಡಲು ಸಭೆಗಳು ನಡೆಯುತ್ತಿರುತ್ತವೆ. ಪೋಪ್ ಮರಣದ 15 ದಿನಗಳ ಬಳಿಕ 20 ದಿನಗಳು ಮೀರದೆ ಕೊನೆಯ ಸಭೆಯ ದಿನಾಂಕ ನಿಗದಿ ಮಾಡಲಾಗುತ್ತದೆ.

ಫಲಿಸದ ಭಾರತ ಭೇಟಿ ಕನಸು

ರೋಮನ್ ಕ್ಯಾಥೋಲಿಕ್ ಚರ್ಚ್‌ನ ಪ್ರಧಾನ ಧರ್ಮಗುರು ಪೋಪ್ ಫ್ರಾನ್ಸಿಸ್ ಅವರನ್ನು 2021 ಮತ್ತು 2024ರಲ್ಲಿ ಭೇಟಿಯಾಗಿದ್ದ ಪ್ರಧಾನಿ ಮೋದಿ ಭಾರತಕ್ಕೆ ಭೇಟಿ ನೀಡುವಂತೆ ಅವರನ್ನು ಆಹ್ವಾನಿಸಿದ್ದರು. ಮೋದಿ ಅವರ ಆಹ್ವಾನವನ್ನು ಅವರು ಸ್ವೀಕರಿಸಿದ್ದರು.

ಕಳೆದ ಡಿಸೆಂಬರ್‌ನಲ್ಲಿ ವ್ಯಾಟಿಕನ್ ಸಿಟಿಗೆ ಭೇಟಿ ನೀಡಿದ್ದ ಕೇಂದ್ರ ಸಚಿವ ಜಾರ್ಜ್ ಕುರಿಯನ್, ಪೋಪ್ ಫ್ರಾನ್ಸಿಸ್ 2025ರ ನಂತರ ಭಾರತಕ್ಕೆ ಭೇಟಿ ನೀಡುವ ಸಾಧ್ಯತೆಯಿದೆ ಎಂದು ಹೇಳಿದ್ದರು. 1999ರಲ್ಲಿ ಪೋಪ್ ಜಾನ್ ಪಾಲ್–II ಅವರು ಕೊನೆಯದಾಗಿ ಭಾರತಕ್ಕೆ ಭೇಟಿ ನೀಡಿದ್ದರು. ಏಷ್ಯಾದ ಬಿಷಪ್‌ಗಳ ಸಿನೊಡ್‌ನ ವಿಶೇಷ ಸಭೆಯ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಲು ನವದೆಹಲಿಗೆ ಬಂದಿದ್ದ ಅವರು, ಆಗಿನ ಉಪರಾಷ್ಟ್ರಪತಿ ಕೃಷ್ಣಕಾಂತ್ ಮತ್ತು ಅಂದಿನ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವ ರನ್ನು ಭೇಟಿ ಮಾಡಿದ್ದರು. ಇದಕ್ಕೂ ಮೊದಲು ಪೋಪ್ ಜಾನ್ ಪಾಲ್–II ಅವರು 1986ರ ಫೆಬ್ರವರಿಯಲ್ಲಿ ಭಾರತಕ್ಕೆ ಭೇಟಿ ನೀಡಿದ್ದರು. ದೇಶದ ವಿವಿಧ ಭಾಗ ಗಳಿಗೆ ಪ್ರವಾಸ ಕೈಗೊಂಡಿದ್ದ ಅವರು ಕೊಲ್ಕತ್ತಾದ ಮಿಷನರೀಸ್ ಆಫ್ ಚಾರಿಟಿಗೆ ಭೇಟಿ ನೀಡಿದ್ದರು. ಅಲ್ಲದೇ ದೇಶದ ಪ್ರಮುಖ ನಾಯಕರನ್ನೂ ಭೇಟಿಯಾಗಿದ್ದರು. ಭಾರತಕ್ಕೆ ಭೇಟಿ ನೀಡಿದ ಮೊದಲ ಪೋಪ್ ಪಾಲ್ IV. ಇವರು 1964ರಲ್ಲಿ ಅಂತರ ರಾಷ್ಟ್ರೀಯ ಯೂಕ ರಿಸ್ಟಿಕ್ ಕಾಂಗ್ರೆಸ್ ನಲ್ಲಿ ಭಾಗ ವಹಿಸಲು ಮುಂಬೈಗೆ ಭೇಟಿ ನೀಡಿದ್ದರು.

10ಕ್ಕೂ ಹೆಚ್ಚು ಬಾರಿ ಇರಿದು ಕೊಲೆ

ತಿಳಿದುಬಂದಿದೆ. ಓಂ ಪ್ರಕಾಶ್ ಅವರ ಎದೆ, ಹೊಟ್ಟೆ, ಕೈ ಸೇರಿ ದೇಹದ ಇತರೆ ಭಾಗಗಳಿಗೆ 10ಕ್ಕೂ ಹೆಚ್ಚು ಬಾರಿ ಇರಿದು ಹತ್ಯೆ ಮಾಡಲಾಗಿದ್ದು, ಚಾಕು ಇರಿತದ ಬಳಿಕ ಸುಮಾರು 10–15 ನಿಮಿಷ ರಕ್ತದ ಮಡುವಿನಲ್ಲಿ ಒದ್ದಾಡಿ ಪ್ರಾಣ ಬಿಟ್ಟಿದ್ದಾರೆಂದು ತಿಳಿದುಬಂದಿದೆ. ಈ ನಡುವೆ ಓಂ ಪ್ರಕಾಶ್ ಅವರ ಪತ್ನಿ ಪಲ್ಲವಿ ಅವರು ಕಳೆದ 12 ವರ್ಷಗಳಿಂದ ಸ್ಕಿಜೋಫ್ರೇನಿಯಾ (ಭ್ರಮೆ ಕಾಯಿಲೆ) ಎಂಬ ಮಾನಸಿಕ ಕಾಯಿಲೆಯಿಂದ ಬಳಲುತ್ತಿದ್ದಾರೆನ್ನಲಾಗುತ್ತಿದ್ದು, ಇದಕ್ಕಾಗಿ ಚಿಕಿತ್ಸೆ ಕೂಡ ಪಡೆಯುತ್ತಿದ್ದರು ಎಂದು ತಿಳಿದುಬಂದಿದೆ. ಇದೇ ಕಾರಣಕ್ಕೇ ಪತಿ ಮೇಲೆ ಇಲ್ಲ ಸಲ್ಲದ ಊಹೆ ಮಾಡಿಕೊಂಡು ಜಗಳ ಮಾಡುತ್ತಿದ್ದರು. ಗನ್ ಹಿಡಿದು ಹೆದರಿಸುತ್ತಿದ್ದರು ಎಂದು ಸಂಬಂಧಿಕರ ಬಳಿ ಓಂಪ್ರಕಾಶ್ ವಿರುದ್ಧ ದೂರುತ್ತಿದ್ದರು ಎಂದು ಹೇಳಲಾಗುತ್ತಿದೆ. ಹತ್ಯೆ ಬಳಿಕ ಪಲ್ಲವಿ ತನ್ನ ಸ್ನೇಹಿತೆಯೊಬ್ಬರಿಗೆ ವೀಡಿಯೋ ಕರೆ ಮಾಡಿದ್ದು, ರಾಕ್ಷಸನನ್ನು ಹತ್ಯೆ ಮಾಡಿದ್ದೇನೆಂದು ಹೇಳಿದ್ದಾರೆಂದು ಮೂಲಗಳು ತಿಳಿಸಿವೆ. ದಾಂಡೇಲಿಯಲ್ಲಿರುವ ಜಮೀನಿಗೆ ಸಂಬಂಧಿಸಿದಂತೆ ಆಸ್ತಿ ವಿವಾದವಿದ್ದು, ಇದೇ ಕಾರಣಕ್ಕೂ ಹತ್ಯೆ ನಡೆದಿರ ಬಹುದು ಎಂಬ ಮಾತುಗಳೂ ಕೂಡ ಇದೀಗ ಕೇಳಿ ಬರುತ್ತಿವೆ. ಆಸ್ತಿ ವಿವಾದ ಸಂಬಂಧ ಕೆಲವು ತಿಂಗಳ ಹಿಂದೆ ಪಲ್ಲವಿ ಹೆಚ್‌ಎಸ್‌ಆರ್ ಲೇಔಟ್ ಪೊಲೀಸ್ ಠಾಣೆಗೆ ದೂರು ನೀಡಲು ತೆರಳಿದ್ದು, ಪೊಲೀಸರು ದೂರು ಸ್ವೀಕರಿಸಲು ನಿರಾಕರಿಸಿದಾಗ ಠಾಣೆಯ ಮುಂದೆ ಧರಣಿ ನಡೆಸಿದ್ದರು ಎಂದು ಮೂಲಗಳು ತಿಳಿಸಿವೆ.

ಡಿ ನೋಟಿಫಿಕೇಷನ್ ಪ್ರಕರಣ

ಈ ಸೆಕ್ಷನ್ ಹೇಳುತ್ತದೆ. 'ಪೂರ್ವಾನುಮತಿಗೆ ಸಂಬಂಧಿಸಿದ ಎರಡು ಪ್ರಕರಣಗಳು ವಿಸ್ತೃತ ಪೀಠದಲ್ಲಿ ವಿಚಾರಣೆಗೆ ಬಾಕಿ ಇವೆ. ನ್ಯಾಯಾಂಗ ಶಿಸ್ತು ಮತ್ತು ಔಚಿತ್ಯ ಕಾಪಾಡಿಕೊಳ್ಳುವ ಸಲುವಾಗಿ, ಸೂಕ್ತ ಆದೇಶಗಳಿಗಾಗಿ ಯಡಿಯೂರಪ್ಪ ಪ್ರಕರಣವನ್ನು ಭಾರತದ ಮುಖ್ಯ ನ್ಯಾಯಮೂರ್ತಿಗಳ ಮುಂದೆ ಇಡಬೇಕು' ಎಂದು ನ್ಯಾಯಮೂರ್ತಿಗಳಾದ ಜೆ.ಬಿ.ಪಾರ್ದೀವಾಲಾ ಹಾಗೂ ಮನೋಜ್ ಮಿಶ್ರಾ ಪೀಠವು ನಿರ್ದೇಶನ ನೀಡಿತು.

ದ್ವಿಸದಸ್ಯ ಪೀಠವು ಏಪ್ರಿಲ್ 4ರಂದು ಬಿಎಸ್‌ವೈ ಪ್ರಕರಣದ ವಿಚಾರಣೆ ಪೂರ್ಣಗೊಳಿಸಿತ್ತು. ಸಿಆರ್‌ಪಿಸಿ ಸೆಕ್ಷನ್ 156 (3) ಅಡಿಯಲ್ಲಿ ಪ್ರಕರಣದ ತನಿಖೆ ನಡೆದಿದೆಯೇ ಮತ್ತು ಈಗಲೂ ಕೂಡ ಭ್ರಷ್ಟಾಚಾರ ನಿಗ್ರಹ ಕಾಯ್ದೆ ಸೆಕ್ಷನ್ 17 ಎ ಅನುಸಾರ ಸೂಕ್ತ ಸರ್ಕಾರಿ ಪ್ರಾಧಿಕಾರಗಳಿಂದ ಪೂರ್ವಾನುಮತಿಯ ಅಗತ್ಯವಿದೆಯೇ ಎಂಬುದು ಸೇರಿದಂತೆ ಹಲವು ಕಾನೂನಾತ್ಮಕ ಪ್ರಶ್ನೆಗಳನ್ನು ನ್ಯಾಯಪೀಠ ಕೇಳಿತ್ತು.

'ನಾವು ಈ ತೀರ್ಪಿನ ಬಗ್ಗೆ ಕೆಲಸ ಪ್ರಾರಂಭಿಸುವ ಹಂತದಲ್ಲಿದ್ದಾಗ, ಶೆಮಿನ್ ಖಾನ್ ವರ್ಸಸ್ ದೇಬಾಶಿಶ್ ಚಕ್ರವರ್ತಿ ಮತ್ತು ಇತರರು ಪ್ರಕರಣದಲ್ಲಿ 2024ರ ಏಪ್ರಿಲ್ 16ರಂದು ನ್ಯಾಯಪೀಠವು ಹೊರಡಿಸಿದ್ದ ಮತ್ತೊಂದು ಆದೇಶವು ಗಮನಕ್ಕೆ ಬಂತು. ಆ ಪ್ರಕರಣವನ್ನು ವಿಸ್ತೃತ ಪೀಠಕ್ಕೆ ವರ್ಗಾಯಿಸಲಾಗಿತ್ತು. ಮಂಜು ಸುರಾನ ವರ್ಸಸ್ ಸುನೀಲ್ ಅರೋರಾ ಪ್ರಕರಣವನ್ನು 2018ರಲ್ಲೇ ವಿಸ್ತೃತ ಪೀಠಕ್ಕೆ ವರ್ಗಾಯಿಸಲಾಗಿತ್ತು. ಹೀಗಾಗಿ, ಈ ಪ್ರಕರಣವನ್ನು ವಿಸ್ತೃತ ಪೀಠಕ್ಕೆ ಶಿಫಾರಸು ಮಾಡುವುದು ಸೂಕ್ತ ಎಂದು ಭಾವಿಸಿದ್ದೇವೆ' ಎಂದು ನ್ಯಾಯಪೀಠ ಅಭಿಪ್ರಾಯಪಟ್ಟಿತು.

ಯಡಿಯೂರಪ್ಪ ಪರ ವಾದ ಮಂಡಿಸಿದ್ದ ಹಿರಿಯ ವಕೀಲ ಸಿದ್ಧಾರ್ಥ್ ಲೂತ್ರಾ, 'ಯಡಿಯೂರಪ್ಪ ವಿರುದ್ಧ ಈ ಹಿಂದೆ ಎರಡು ದೂರುಗಳಲ್ಲಿ ಉಲ್ಲೇಖಿಸಲಾದ ಸಂಗತಿಗಳು ಮತ್ತು ಸಾಕ್ಷ್ಯಗಳು ಹೆಚ್ಚಾಗಿ ಒಂದೇ ಆಗಿವೆ. ಕರ್ನಾಟಕ ಹೈಕೋರ್ಟ್ 2015ರ ಸಂಬಂಧಿತ ಪ್ರಕರಣವನ್ನು ಅದರ ಅರ್ಹತೆ ಪರಿಶೀಲಿಸದೆ ತಾಂತ್ರಿಕ ಆಧಾರದ ಮೇಲೆ ಪರಿಗಣಿಸಿ ತಪ್ಪು ಮಾಡಿದೆ' ಎಂದು ವಾದಿಸಿದ್ದರು.

ಕರ್ನಾಟಕ ಸರ್ಕಾರದ ಪರವಾಗಿ ಹಿರಿಯ ವಕೀಲರಾದ ವಿಕಾಸ್ ಸಿಂಗ್, ಆರ್.ಬಸಂತ್, ಹೆಚ್ಚುವರಿ ಅಡ್ವೊಕೇಟ್ ಜನರಲ್ ಅಮನ್ ಪನ್ವಾರ್, ವಕೀಲ ಡಿ.ಎಲ್. ಚಿದಾನಂದ ವಾದ ಮಂಡಿಸಿದ್ದರು.

ಕ್ಯಾಬಿನೆಟ್ ಸಭೆಗಾಗಿ ಮಹದೇಶ್ವರನ ಬೆಟ್ಟದಲ್ಲಿ ತೆಂಗಿನ ಮರಗಳಿಗೆ ಕತ್ತರಿ



ಚಾಮರಾಜನಗರ, ಏ.21– 'ಹಸಿರು ನಾಳೆ' ಯೋಜನೆ ಜಾರಿಯಲ್ಲಿರುವ ಮಹದೇಶ್ವರನ ಬೆಟ್ಟದಲ್ಲಿ ರಾಜ್ಯ ಕ್ಯಾಬಿನೆಟ್ ಸಭೆ ಸಿದ್ಧತೆಗಾಗಿ ಕೆಲ ತೆಂಗಿನ ಮರಗಳನ್ನು ಕಡಿಯಲಾಗಿದ್ದು, ಪರಿಸರ ಪ್ರೇಮಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಹನೂರು ತಾಲೂಕಿನ ಮಲೆಮಹದೇಶ್ವರ ಬೆಟ್ಟದ 108 ಅಡಿ ಪ್ರತಿಮೆಯ ದೀಪದಗಿರಿ ಒಡ್ಡಿನಲ್ಲಿ ಸಚಿವ ಸಂಪುಟ ಸಭೆ ನಡೆಸಲು ನಿರ್ಧಾರ ಕೈಗೊಳ್ಳಲಾಗಿತ್ತು. ಆದರೆ, ಈ ಪ್ರದೇಶವು ಎತ್ತರದಲ್ಲಿದ್ದು ಬಿರುಗಾಳಿ ಬೀಸುವ ಸಾಧ್ಯತೆ ಹಾಗೂ ಮಳೆ ಸಂಭವ ಇರುವ ಹಿನ್ನೆಲೆ ಸಭೆ ನಡೆಸಲು ತೊಂದರೆ ಆಗಬಹುದು ಎಂಬ ಕಾರಣದಿಂದ ಸಭೆಯ ಸ್ಥಳವನ್ನು ಶ್ರೀ ಕ್ಷೇತ್ರದ ನೂತನ 376 ವಸತಿ ಗೃಹದ ಮುಂಭಾಗದ ಖಾಲಿ ನಿವೇಶನಕ್ಕೆ ವರ್ಗಾಯಿಸಲಾಗಿದೆ. ಈ ಸ್ಥಳ ಸಿದ್ಧಪಡಿಸಲು ಕೆಲ ತೆಂಗಿನ ಮರಗಳನ್ನು ಕಡಿದು ಹಾಕಲಾಗಿದ್ದು, ಈ ಕ್ರಮಕ್ಕೆ ವಿರೋಧ ವ್ಯಕ್ತವಾಗಿದೆ. 'ಹಸಿರು ನಾಳೆ' ಯೋಜನೆ ಅರ್ಥವೇನು ಎಂದು ಸ್ಥಳೀಯರು ಪ್ರಶ್ನಿಸಿದ್ದಾರೆ.

ಮಲೆಮಹದೇಶ್ವರ ಬೆಟ್ಟದಲ್ಲಿ ಏ.24ರಂದು ಸಚಿವ ಸಂಪುಟ ಸಭೆಯ ಸಿದ್ಧತೆಗೆ ಕೆಲ ತೆಂಗಿನ ಮರಗಳನ್ನು ಕಡಿದು ಹಾಕಲಾಗಿದೆ ಎಂದು ಆರೋಪಿಸಿ ರೈತ ಸಂಘದ ಮುಖಂಡರು ಹನೂರು ಪಟ್ಟಣದ ಖಾಸಗಿ ಬಸ್ ನಿಲ್ದಾಣದ ಬಳಿ ರಸ್ತೆ ತಡೆದು ಪ್ರತಿಭಟನೆಗೆ ಮುಂದಾದರು. ಈ ವೇಳೆ ಪೊಲೀಸರು ಮಧ್ಯೆ ಪ್ರವೇಶಿಸಿ ಪ್ರತಿಭಟನೆ ಮಾಡದಂತೆ ಮನವೊಲಿಸಿದರು. ಈ ವೇಳೆ ರೈತರು ಮಾತನಾಡಿ, ಸಚಿವ ಸಂಪುಟ ಸಭೆ ನಮ್ಮ ತಾಲೂಕಿನಲ್ಲಿ ನಡೆಯುತ್ತಿರುವುದು ಹೆಮ್ಮೆಯ ಸಂಗತಿ. ಆದರೆ ಸಭೆಗೆ ಸ್ಥಳ ಬದಲಾವಣೆ ನೆಪದಲ್ಲಿ ಮರಗಳನ್ನು ಕಡಿದಿರುವುದು ಖಂಡನೀಯ. ದೀಪದಗಿರಿ ಒಡ್ಡುವಿನ 108 ಅಡಿ ಮಹದೇಶ್ವರಸ್ವಾಮಿ ಪ್ರತಿಮೆ ಆವರಣದಿಂದ ಸಭೆಯನ್ನು ನೂತನ 376 ವಸತಿಗೃಹದ ಮುಂಭಾಗದ ಖಾಲಿ ನಿವೇಶನಕ್ಕೆ ಸ್ಥಳಾಂತರ ಮಾಡಿ, ಅಲ್ಲಿದ್ದ ತೆಂಗಿನ ಮರಗಳನ್ನು ಕಡಿದು ಹಾಕಲಾಗಿದೆ. ಇದಕ್ಕೆ ಯಾರು ಅನುಮತಿ ನೀಡಿದ್ದಾರೆ? ಎಂದು ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು.

ವಿವಾದಾತ್ಮಕ ಜಾತಿ ಸಮೀಕ್ಷೆ ವರದಿ ತಿರಸ್ಕರಿಸಿ

ಬಿಜೆಪಿ ನಾಯಕ ಡಾ.ಶುಶ್ರುತ್‌ಗೌಡ ಆಗ್ರಹ


ಡಾ.ಶುಶ್ರುತ್‌ಗೌಡ

ಮೈಸೂರು,ಏ.21–ಹತ್ತು ವರ್ಷ ಹಳೆಯದಾದ ವಿವಾದಾತ್ಮಕ ಜಾತಿ ಸಮೀಕ್ಷಾ ವರದಿಯನ್ನು ತಿರಸ್ಕರಿಸುವಂತೆ ಬಿಜೆಪಿ ನಾಯಕ ಡಾ.ಶುಶ್ರುತ್‌ಗೌಡ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಹೊಸದಾಗಿ ಜಾತಿ ಗಣತಿಯನ್ನು ವೈಜ್ಞಾನಿಕವಾಗಿ ಮಾಡುವಂತೆ ಆಗ್ರಹಿಸಿದ್ದಾರೆ. ಸುಮಾರು 10 ವರ್ಷಗಳ ಹಿಂದೆ ನಡೆಸಲಾದ ಈ ಜಾತಿ ಸಮೀಕ್ಷೆಯು ಈಗ ಅಪ್ರಸ್ತುತ. ಇದು ಎಲ್ಲಾ ಜಾತಿಗಳಲ್ಲಿ ಗೊಂದಲ ಮತ್ತು ಉದ್ವಿಗ್ನತೆಯನ್ನು ಸೃಷ್ಟಿಸಿದೆ. ಇದು ಸಮಾಜವನ್ನು ಜಾತಿ ಆಧಾರದ ಮೇಲೆ ವಿಭಜಿಸುತ್ತದೆ ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

ಬಹಳಷ್ಟು ಮನೆಗಳಿಗೆ ಸಮೀಕ್ಷೆದಾರರು ಭೇಟಿ ನೀಡಿಲ್ಲ. ಇದು ಎಲ್ಲರಿಗೂ ತಿಳಿದಿರುವ ಬಹಿರಂಗ ರಹಸ್ಯ. ಈ ಸಮೀಕ್ಷೆ ಅವೈಜ್ಞಾನಿಕ ಎಂಬ ಭಯ ಎಲ್ಲರಲ್ಲಿದೆ. ಪ್ರತಿಯೊಬ್ಬರಿಗೂ ನ್ಯಾಯವನ್ನು ಖಚಿತಪಡಿಸಿಕೊಳ್ಳಲು ವೈಜ್ಞಾನಿಕ ಗಣತಿಯು ಈಗಿನ ಅಗತ್ಯವಾಗಿದೆ ಎಂದು ಅವರು ಪ್ರತಿಪಾದಿಸಿದ್ದಾರೆ.

ಪ್ರಸ್ತುತ, ರಾಜ್ಯ ಸರ್ಕಾರವು ಈ ಸಮೀಕ್ಷೆ ವರದಿಯ ಜಾರಿ ಸಂಬಂಧ ವಿಳಂಬ ತಂತ್ರವನ್ನು ಅನುಸರಿಸುತ್ತಿದೆ. ಈ ತಂತ್ರದ ಬದಲಾಗಿ, ಸರ್ಕಾರವು ಹೊಸ ವೈಜ್ಞಾನಿಕ ಗಣತಿಗೆ ಆದೇಶಿಸಬಹುದು. ಅದು ಸರಿಯಾದ ದತ್ತಾಂಶ ಪಡೆದುಕೊಳ್ಳಲು ನೆರವಾಗುತ್ತದೆ. ಜೊತೆಗೆ ಹಿಂದುಳಿದ ಸಮುದಾಯಗಳ ಕಲ್ಯಾಣ ಯೋಜನೆಗಳನ್ನು ವಿನ್ಯಾಸಗೊಳಿಸಲು ನಿಖರವಾದ ದತ್ತಾಂಶ ತುಂಬಾ ಅಗತ್ಯವಿದೆ. ದೋಷಪೂರಿತ ವರದಿಯು ರಾಜ್ಯದ ಪ್ರಗತಿಗೆ ಮುಳ್ಳಾಗಬಹುದು ಎಂದು ಡಾ.ಶುಶ್ರುತ್ ಗೌಡ ವಿವರಿಸಿದರು. ಪರಸ್ಪರ ನಂಬಿಕೆ, ಪ್ರೀತಿ ಮತ್ತು ಸಹೋದರತ್ವದ ಆಧಾರದ ಮೇಲೆ ಸಮಾಜವನ್ನು ನಿರ್ಮಿಸುವುದು ಇಂದಿನ ಅಗತ್ಯವಾಗಿದೆ ಎಂದು ಹೇಳಿದರು.

ಸಂಕಷ್ಟದಲ್ಲಿರುವ ವಿವಿಗಳ ಅನುದಾನಕ್ಕೆ ಒತ್ತಾಯಿಸಿ ಪ್ರತಿಭಟನೆ


ಸಂಕಷ್ಟದಲ್ಲಿರುವ ಕರ್ನಾಟಕದ ಎಲ್ಲಾ ವಿಶ್ವವಿದ್ಯಾನಿಲಯಗಳಿಗೂ ಕೂಡಲೇ ಅನುದಾನ ನೀಡಬೇಕೆಂದು ಒತ್ತಾಯಿಸಿ ಕದಂಬ ಸೈನ್ಯ ವತಿಯಿಂದ ಹಳೆ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಏ.21(ಜಿಎ)–ಸೂಕ್ತ ಅನುದಾನವಿಲ್ಲದೆ ಸಂಕಷ್ಟದಲ್ಲಿರುವ ಕರ್ನಾಟಕದ ಎಲ್ಲಾ ವಿಶ್ವವಿದ್ಯಾನಿಲಯಗಳಿಗೂ ಕೂಡಲೇ ಅನುದಾನ ನೀಡಬೇಕೆಂದು ಒತ್ತಾಯಿಸಿ ಕದಂಬ ಸೈನ್ಯದ ವತಿಯಿಂದ ಹಳೆಯ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು.


ಚಾಮರಾಜನಗರ ವಿವಿ ಸಂಬಳ ನೀಡಲಾಗದಷ್ಟು ಸಂಕಷ್ಟಕ್ಕೆ ಸಿಲುಕಿದ್ದು ಉನ್ನತ ಶಿಕ್ಷಣದಲ್ಲಿ ತೀರಾ ಹಿಂದುಳಿದಿದೆ. ಬುಡಕಟ್ಟು ಜನಾಂಗ, ರೈತರ, ಶೋಷಿತರ ಮಕ್ಕಳ ಉನ್ನತ ಶಿಕ್ಷಣಕ್ಕೆ ತೊಡಕಾಗಿದೆ. ಇದರಿಂದ ಜನರು ಸರ್ಕಾರಕ್ಕೆ ಶಾಪ ಹಾಕುತ್ತಿದ್ದಾರೆ. ವಿವಿ ಮುಚ್ಚಿದರೆ ಸಾವಿರಾರು ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ. 30 ಸಾವಿರ ವಿದ್ಯಾರ್ಥಿಗಳಿರುವ ಬಾಗಲಕೋಟೆ ವಿವಿಯಲ್ಲಿ ಕನಿಷ್ಠ ಸ್ಥಳಾವಕಾಶ, ಮೂಲಸೌಕರ್ಯಗಳೂ ಇಲ್ಲ. ಕ್ಯಾಂಪಸ್ ಭೂಮಿ ವಿವಿಗೆ ಹಸ್ತಾಂತರ ಆಗಿಲ್ಲ. ಶೇ.90ರಷ್ಟು ಪರಿಶಿಷ್ಟ ಜಾತಿ, ಪಂಗಡಗಳ ವಿದ್ಯಾರ್ಥಿಗಳಿರುವ ವಿವಿ ಆರ್ಥಿಕವಾಗಿ, ಭೌತಿಕವಾಗಿ ಸದೃಢವಾಗಿಲ್ಲ. ಜಾನಪದ ಅಧ್ಯಯನಕ್ಕಿರುವ ಏಕೈಕ ಹಾವೇರಿ ವಿವಿಗೆ ಆಂತರಿಕ ಆದಾಯ, ಸರ್ಕಾರದ ಅನುದಾನ ತೀರಾ ಕಡಿಮೆ. ಇದರಿಂದ ಮೂಲ ಸೌಕರ್ಯಗಳ ಕೊರತೆಯಿಂದ ಬಳಲುತ್ತಿದೆ. ಬೋಧಕ ಮತ್ತು ಬೋಧಕೇತರ ಹುದ್ದೆಗಳ ವೇತನ ನೀಡಲೂ ಹಣ ಇಲ್ಲ. ಅನುದಾನದ ಕೊರತೆಯಿಂದ ಅಭಿವೃದ್ಧಿ ಕುಂಠಿತವಾಗಿದೆ ಎಂದು ದೂರಿದರು.

ಬೆಂಗಳೂರು ಯುವಿಸಿಇ ವಿವಿಗೆ ಕ್ಯಾಂಪಸ್ ಇಲ್ಲ. ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶ ಕಲ್ಪಿಸುವ ಕಾಮಧೇನುವಾದ ಈ ವಿವಿ. 2024ರಲ್ಲಿ ಶೇ.84ರಷ್ಟು ವಿದ್ಯಾರ್ಥಿಗಳಿಗೆ ಉದ್ಯೋಗ ದೊರೆತಿದೆ. ಐದು ವರ್ಷಕ್ಕೆ 850 ಕೋಟಿ ಅನುದಾನಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಸರ್ಕಾರ ಕೂಡಲೇ ಬಿಡುಗಡೆ ಮಾಡಬೇಕು. ಅಗತ್ಯ ಬೋಧಕರನ್ನು ನೇಮಿಸಬೇಕು. ಜತೆಗೆ ವಿಟಿಯು ವಿವಿಗೆ ವಿದ್ಯಾರ್ಥಿಗಳ ಶುಲ್ಕವೇ ಆಧಾರ. 44 ಕೋಟಿ ವೇತನಾನುದಾನಕ್ಕೆ ಮನವಿ ಮಾಡಿದರೂ ಸರ್ಕಾರ ಸ್ಪಂದಿಸಿಲ್ಲ. ಇದರಿಂದ ವಿವಿ ಆರ್ಥಿಕ ಮುಗ್ಗಟ್ಟು ಎದುರಿಸುತ್ತಿದೆ. ಹೀಗಾಗಿ ಸಂಶೋಧನೆಗಳಿಗೆ ತೀವ್ರ ಹಿನ್ನಡೆಯಾಗಿದೆ. ಮಂಡ್ಯ ವಿವಿಯಲ್ಲಿ ಬೋಧಕ ಮತ್ತು ಪದಾಧಿಕಾರಿಗಳ ಹುದ್ದೆ ಖಾಲಿಯಾಗಿ ಎರಡು ವರ್ಷವಾದರೂ ಸರ್ಕಾರ ಭರ್ತಿ ಮಾಡಿಲ್ಲ. ಇದರಿಂದಾಗಿ ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ಸಿಗುತ್ತಿಲ್ಲ. ಸಂಶೋಧನೆಗೆ ಆದ್ಯತೆ ಸಿಗುತ್ತಿಲ್ಲ. ಜಿಲ್ಲೆಯ ಮಂತ್ರಿಗಳು, ಶಾಸಕರು, ವಿಧಾನ ಪರಿಷತ್ ಸದಸ್ಯರು ಸಂಪೂರ್ಣ ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ಕಿಡಿಕಾರಿದರು.

ಪ್ರತಿಭಟನೆಯಲ್ಲಿ ರಾಜ್ಯಾಧ್ಯಕ್ಷ ಬೇಕ್ರಿ ರಮೇಶ್, ರಾಜ್ಯ ಸಂಚಾಲಕ ಬಿ.ಶಿವಕುಮಾರ್ ಮೈಸೂರು, ರಾಜ್ಯ ಸಹ ಕಾರ್ಯದರ್ಶಿ ಉಮ್ಮಡಹಳ್ಳಿ ನಾಗೇಶ್, ರಾಜ್ಯ ಸಮಿತಿ ಸದಸ್ಯ ನಾ.ಮಹದೇವ ಸ್ವಾಮಿ, ಚಾಮುಂಡೇಶ್ವರಿ ಕ್ಷೇತ್ರದ ಉಪಾಧ್ಯಕ್ಷ ಮಹೇಶ್‌ಕುಮಾರ್, ಹೆಚ್.ಎಂ., ಜಿಲ್ಲಾ ಸಮಿತಿ ಸದಸ್ಯರಾದ ಟಗರು ಮಹಾದೇವ, ಟೈಲರ್ ಮಹದೇವು, ಮುಖಂಡರಾದ ಸ್ವಾಮಿ, ವಿಷ್ಣು ರವಿ ನಂಜನಗೂಡು, ಆರಾಧ್ಯ ಗುಡಗನಹಳ್ಳಿ, ಸಲ್ಮಾನ್, ರಾಮು ಚಿಕ್ಕೇಗೌಡನದೊಡ್ಡಿ ಇನ್ನಿತರರು ಪಾಲ್ಗೊಂಡಿದ್ದರು.

> "ಮೈಸೂರು ವಿವಿ ಆರ್ಥಿಕ ಸಂಕಷ್ಟದಲ್ಲಿದೆ. ಗದಗ ಗ್ರಾಮೀಣ ವಿವಿಗೆ ಕುಲಪತಿಯೂ ಇಲ್ಲ, ಹಣವೂ ಇಲ್ಲ. ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ವಿವಿ ಅತ್ಯಂತ ಕಡಿಮೆ ಅವಧಿಯಲ್ಲಿ ಅಗಾಧ ಸಾಧನೆ ಮಾಡಿದ್ದರೂ ಆರ್ಥಿಕ ಸಂಪನ್ಮೂಲದ ಕೊರತೆಯಿಂದ ನರಳುತ್ತಿದೆ. ನಮ್ಮಲ್ಲಿ ಆಡಳಿತ ಸೂತ್ರ ಹಿಡಿದವರು ಶಿಕ್ಷಣ ಕ್ಷೇತ್ರವನ್ನು ಪ್ರಯೋಗಶಾಲೆ ಎಂದು ಭಾವಿಸಿದಂತಿದೆ. ಪ್ರಾಥಮಿಕದಿಂದ ಉನ್ನತ ಶಿಕ್ಷಣದವರೆಗೂ ಈ ಮಾತು ಅನ್ವಯಿಸುತ್ತದೆ. ಬಹಳ ಗಂಭೀರವಾಗಿ ಪರಿಗಣಿಸಬೇಕಾಗಿದ್ದ ಕ್ಷೇತ್ರವನ್ನು ಲಘುವಾಗಿ ಪರಿಗಣಿಸುತ್ತಿರುವುದರ ದೂರಗಾಮಿ ಪರಿಣಾಮಗಳ ಬಗ್ಗೆ ಲಕ್ಷ್ಯವೇ ಇಲ್ಲ. ಹೀಗಾಗಿ ಕೂಡಲೇ ಕರ್ನಾಟಕದ ಎಲ್ಲಾ ವಿಶ್ವ ವಿದ್ಯಾಲಯಗಳಿಗೂ ಶೈಕ್ಷಣಿಕ ಅಭಿವೃದ್ಧಿಗೆ ಮಾರಕವಾಗದಂತೆ ಸಾಕಷ್ಟು ಅನುದಾನ ಬಿಡುಗಡೆ ಮಾಡಬೇಕು.
> –ಪ್ರತಿಭಟನಾಕಾರರು.

ಹೆಚ್.ವಿಶ್ವನಾಥ್ ದಂಪತಿಗೆ ವಿವಾಹ ವಾರ್ಷಿಕೋತ್ಸವ ಶುಭಾಶಯ...


ವಿಧಾನಪರಿಷತ್ ಸದಸ್ಯ ಅಡಗೂರು ಎಚ್.ವಿಶ್ವನಾಥ್ ಹಾಗೂ ಶಾಂತಮ್ಮ ದಂಪತಿ 50ನೇ ವರ್ಷದ ವಿವಾಹ ವಾರ್ಷಿಕೋತ್ಸವ ಕೆ.ಆರ್.ನಗರ ಚಂದ್ರಮೌಳೇಶ್ವರ ಸ್ವಾಮಿ ದೇವಸ್ಥಾನದಲ್ಲಿ ನೆರವೇರಿತು. ಪಾಲಿಕೆ ಮಾಜಿ ಸದಸ್ಯ ಪ್ರಶಾಂತ್‌ಗೌಡ ಶುಭ ಕೋರಿದರು. ವಿಶ್ವನಾಥ್ ಪುತ್ರರಾದ ಅಮಿತ್ ದೇವರಹಟ್ಟಿ, ಸಂತೋಷ್, ಮುಖಂಡರಾದ ಗಣೇಶ್ ಕಿತ್ತೂರು, ಸಮಂತ್‌ಗೌಡ, ಹೊಸೂರ್ ರಮೇಶ್ ಇತರರು ಉಪಸ್ಥಿತರಿದ್ದರು.

ಭಗವಾನ್ ಮಹಾವೀರ ಜಯಂತಿ ಆಚರಣೆ


ಮೈಸೂರಿನ ಭಾರತೀಯ ಜೈನ್ ಸಂಘಟನೆ ವತಿಯಿಂದ ಗಾಂಧಿ ಚೌಕದಲ್ಲಿ ಭಗವಾನ್ ಮಹಾವೀರ್ ಜಯಂತಿ ಆಚರಿಸಲಾಯಿತು.

ಮೈಸೂರು,ಏ.21–ಮೈಸೂರಿನ ಭಾರತೀಯ ಜೈನ್ ಸಂಘಟನೆ ವತಿಯಿಂದ ಗಾಂಧಿ ಚೌಕದಲ್ಲಿ ಭಗವಾನ್ ಮಹಾವೀರ್ ಜಯಂತಿಯನ್ನು, ಮಜ್ಜಿಗೆ ವಿತರಣೆ, ಕುಡಿಯುವ ನೀರಿನ ಕೇಂದ್ರ ಉದ್ಘಾಟನೆ ಮತ್ತು ಇನ್ನಿತರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು. ಇಟ್ಟಿಗೆಗೂಡಿನ ಸರ್ಕಾರಿ ಶಾಲೆಯಲ್ಲಿ ಚಿತ್ರಕಲಾ ಸ್ಪರ್ಧೆ ಆಯೋಜಿಸಲಾಗಿದ್ದು, ವಿಜೇತರಿಗೆ ಬಹುಮಾನ ವಿತರಿಸಲಾಯಿತು. ಜಲಸೇವಾ ಕಾರ್ಯಕ್ರಮದಡಿಯಲ್ಲಿ ಶ್ರೀ ಸ್ಥಾನಿಕವಾಸಿ ಜೈನ್ ಯುವ ಸಂಘಟನೆ ಸಹಯೋಗದಲ್ಲಿ ಇರ್ವಿನ್ ರಸ್ತೆಯಲ್ಲಿರುವ ಕರ್ನಾಟಕ ಕಾರ್ಡಿಯೋ ಡಯಾಗ್ನಾಸ್ಟಿಕ್ ಸೆಂಟರ್‌ಗೆ ಕುಡಿಯುವ ನೀರಿನ ಘಟಕ ಹಸ್ತಾಂತರಿಸಲಾಯಿತು.

ಚಾಪ್ಟರ್ ಅಧ್ಯಕ್ಷ ರಾಜನ್ ಬಾಗ್‌ಮಾರ್, ಪ್ರಧಾನ ಕಾರ್ಯದರ್ಶಿ ದೀಪಕ್ ಬೋಹ್ರಾ, ಖಜಾಂಚಿ ಮನೋಹರ್ ಶಂಕ್ಲ, ಉಪಾಧ್ಯಕ್ಷರಾದ ಅಮಿತ್ ಚೌಹಾನ್, ನೇಮಿಚಂದ್ ಬರೋಲಾ, ಕುಶಲ್ ಪಾಲ್ ರೇಚಾ, ಕಾರ್ಯದರ್ಶಿಗಳಾದ ಸುನೀಲ್ ಪಟ್ವಾ, ನವರತನ್‌ಮಲ್ ಪಿಟ್ಲಿಯಾ, ರಾಜೇಂದ್ರ ದೇಸರಾಲ, ಬಿಜೆಎಸ್ ಕರ್ನಾಟಕ ಕಾರ್ಯದರ್ಶಿ ಪ್ರಕಾಶ್ ಗುಲೇಚಾ, ಪ್ರಾದೇಶಿ ಕಾರ್ಯದರ್ಶಿ ಸುಕ್‌ರಾಜ್ ವಿನಯಕಿಯಾ, ಮಹಿಳಾ ಘಟಕದ ಅಧ್ಯಕ್ಷೆ ಶರ್ಮಿಲಾ ದೋಕಾ, ಕಾರ್ಯದರ್ಶಿ ಸೀಮಾ ಬೋಹ್ರಾ, ಯುವ ಘಟಕದ ಅಧ್ಯಕ್ಷ ಕೌಶಿಕ್ ಜೈನ್, ನವರತನ್ ಡರ್ಲಾ, ಆಶಿಸ್ ಪಟ್ವಾ, ರಿಷಬ್ ಶಂಕ್ಲ ಮತ್ತಿತರರಿದ್ದರು.

ಸುತ್ತೂರು ಶ್ರೀಕ್ಷೇತ್ರದಲ್ಲಿ ಯುವಜನರ ಶಿಬಿರ

ಮೈಸೂರು,ಏ.21–ಸುತ್ತೂರು ಶ್ರೀಮಠ, ಜೆಎಸ್‌ಎಸ್ ಮಹಾವಿದ್ಯಾಪೀಠ ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಗಳ ಸಂಯುಕ್ತಾಶ್ರಯದಲ್ಲಿ ಏ.26ರಿಂದ 28ರವರೆಗೆ ಸುತ್ತೂರು ಶ್ರೀಕ್ಷೇತ್ರದಲ್ಲಿ ವಿದ್ಯಾರ್ಥಿಗಳ (ಎಸ್‌ಎಸ್‌ಎಲ್‌ಸಿ, ಪಿಯುಸಿ ವಿದ್ಯಾರ್ಥಿಗಳು) ಶಿಬಿರ ಏರ್ಪಡಿಸಲಾಗಿದೆ. ಶಿಬಿರವು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ಮಾರ್ಗದರ್ಶನ ಹಾಗೂ ದಿವ್ಯ ಆಶೀರ್ವಾದದೊಂದಿಗೆ ನಡೆಯಲಿದೆ. ಶಿಬಿರದಲ್ಲಿ ಸಾಮೂಹಿಕ ಪ್ರಾರ್ಥನೆ, ಯೋಗ, ವಿಶೇಷ ಉಪನ್ಯಾಸ, ಚಿಂತನ–ಮಂಥನ, ದೇಸಿ ಆಟಗಳು ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಿರುತ್ತವೆ. ಶಿಬಿರದಲ್ಲಿ ಭಾಗವಹಿಸಲು ಇಚ್ಛೆಯುಳ್ಳವರು ಶಿಬಿರದ ಸಂಚಾಲಕರಾದ ಬಿ.ನಿರಂಜನಮೂರ್ತಿ (8884471974), ಡಾ.ಎಚ್.ಎಂ.ಮಹೇಶ್ (8970723663), ಡಾ.ಎನ್.ರಾಜೇಂದ್ರ ಪ್ರಸಾದ್ (9880547493), ಶ್ರೀಮತಿ ಎನ್.ನಾಗಲಾಂಬಿಕ (9739596959) ಶ್ರೀಮತಿ ಅನುಷಾ (8095170082) ಅವರನ್ನು ದೂರವಾಣಿಗಳಲ್ಲಿ ಸಂಪರ್ಕಿಸಬಹುದು.

ನಕಲಿ, ಕಳಪೆ ಗುಣಮಟ್ಟದ ಪನ್ನೀರ್ ಮಾರಾಟದ ವಿರುದ್ಧ ದೂರು

ಮಾರಾಟ ಕೇಂದ್ರಗಳ ಮೇಲೆ ಆಹಾರ ಸುರಕ್ಷತೆ ಇಲಾಖೆ ದಾಳಿ



ಮೈಸೂರು, ಏ.21(ಬಿಎಲ್‌ಯು)–ನಕಲಿ ಹಾಗೂ ಕಳಪೆ ಗುಣಮಟ್ಟದ ಪನ್ನೀರ್ ಮಾರಾಟ ಮಾಡಲಾಗುತ್ತಿದೆ ಎಂಬ ದೂರುಗಳ ಹಿನ್ನೆಲೆಯಲ್ಲಿ ಮೈಸೂರು ನಗರ ಪಾಲಿಕೆಯ ಆಹಾರ ಸುರಕ್ಷತೆ ಮತ್ತು ಔಷಧಿ ಆಡಳಿತ ಇಲಾಖೆ ಮೈಸೂರಿನ ಪನ್ನೀರ್ ಮಾರಾಟ ಸ್ಥಳಗಳಿಗೆ ದಿಢೀರ್ ಭೇಟಿ ನೀಡಿ ಪನ್ನೀರ್ ಮಾದರಿಗಳನ್ನು ಸಂಗ್ರಹಿಸಿ ಪ್ರಯೋಗಾಲಯಕ್ಕೆ ಕಳುಹಿಸಿದೆ.

ಕಳಪೆ ಗುಣಮಟ್ಟದ ಹಾಗೂ ನಕಲಿ ಪನ್ನೀರ್ ಮಾರಾಟವಾಗುತ್ತಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವ ಪ್ರಹ್ಲಾದ್ ಜೋಷಿ ಆತಂಕ ವ್ಯಕ್ತಪಡಿಸಿದ್ದರು. ದೇಶಾದ್ಯಂತ ನಡೆಯುತ್ತಿರುವ ನಕಲಿ ಪನ್ನೀರ್ ಮಾರಾಟ ದಂಧೆಗೆ ಕಡಿವಾಣ ಹಾಕಬೇಕೆಂದು ಕೇಂದ್ರ ಆರೋಗ್ಯ ಸಚಿವ ಜೆ.ಪಿ.ನಡ್ಡಾ ಅವರಿಗೆ ಪತ್ರ ಕೂಡ ಬರೆದಿದ್ದರು.

ಈ ಹಿನ್ನೆಲೆಯಲ್ಲಿ ಆಹಾರ ಸುರಕ್ಷತೆ ಮತ್ತು ಔಷಧಿ ಆಡಳಿತ ಇಲಾಖೆಯ ಅಂಕಿತ ಅಧಿಕಾರಿ ಡಾ.ರವೀಂದ್ರ ಅವರ ನೇತೃತ್ವದ ತಂಡ ಮೈಸೂರಿನಲ್ಲಿ ಪನ್ನೀರ್ ಮಾರಾಟ ಕೇಂದ್ರಗಳಿಗೆ ದಿಢೀರ್ ಭೇಟಿ ನೀಡಿ ಪನ್ನೀರ್ ಮಾದರಿಗಳನ್ನು ಸಂಗ್ರಹಿಸಿದೆ.

ನಕಲಿ ಹಾಗೂ ಕಳಪೆ ಗುಣಮಟ್ಟದ ಪನ್ನಿರ್ ಮಾದರಿಗಳನ್ನು ಕೆಮಿಕಲ್ ಟೆಸ್ಟ್ ಹಾಗೂ ಸೂಕ್ಷ್ಮ ಜೀವಾಣು ಪರೀಕ್ಷೆಗೂ ಕಳುಹಿಸಲಾಗಿದೆ ಎಂದು ಡಾ.ರವೀಂದ್ರ ತಿಳಿಸಿದರು. ಕಳೆದ ಆಗಸ್ಟ್ 24 ರಂದು ಮೈಸೂರಿನ 9 ಪನ್ನೀರ್ ಮಾರಾಟ ಕೇಂದ್ರಗಳಲ್ಲಿ ಪನ್ನಿರ್ ಮಾದರಿಗಳನ್ನು ಸಂಗ್ರಹಿಸಲಾಗಿತ್ತು. ಇದರಲ್ಲಿ 6 ಪನ್ನೀರ್ ಗುಣಮಟ್ಟದಲ್ಲಿದ್ದರೆ, 1 ಅಸುರಕ್ಷಿತ, 1 ಕಳಪೆ ಗುಣಮಟ್ಟದ ಪನ್ನಿರ್ ಪತ್ತೆಯಾಗಿತ್ತು.

ಕಳಪೆ ಗುಣಮಟ್ಟದ ಪನ್ನೀರ್ ಮಾರಾಟ ಮಾಡುತ್ತಿದ್ದ ಮಾರಾಟಗಾರರ ವಿರುದ್ಧ ಮೈಸೂರಿನ ಅಪರ ಜಿಲ್ಲಾಧಿಕಾರಿ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಲಾಗುವುದು. ಅಸುರಕ್ಷಿತ ಪನ್ನಿರ್ ಮಾರಾಟ ಮಾಡಿದ ವ್ಯಕ್ತಿ ವಿರುದ್ಧ ಮೈಸೂರಿನ ಜೆಎಂಎಫ್‌ಸಿ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಲಾಗುವುದು ಎಂದು ಡಾ.ರವೀಂದ್ರ ಮಾಹಿತಿ ನೀಡಿದರು.

ಏ.30ರಂದು ವಚನ ಗಾಯನ ಸ್ಪರ್ಧೆ

ಮೈಸೂರು,ಏ.21(ಜಿಎ)–ಬಸವ ಬಳಗಗಳ ಒಕ್ಕೂಟ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದಿಂದ ಬಸವ ಜಯಂತಿ ಪ್ರಯುಕ್ತ ಏ.30ರಂದು ಮಧ್ಯಾಹ್ನ 12.30ಕ್ಕೆ ನಗರದ ಕಲಾಮಂದಿರದಲ್ಲಿ ವಚನ ಗಾಯನ ಸ್ಪರ್ಧೆ ಆಯೋಜಿಸಲಾಗಿದೆ ಎಂದು ಒಕ್ಕೂಟದ ಅಧ್ಯಕ್ಷ ಬಿ.ಕೆ.ನಾಗರಾಜು ಬ್ಯಾತಹಳ್ಳಿ ತಿಳಿಸಿದರು.


ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಹಿಳಾ ತಂಡಗಳಿಗೆ ಮಾತ್ರ ಸ್ಪರ್ಧೆಯಲ್ಲಿ ಭಾಗವಹಿಸುವ ಅವಕಾಶವಿದ್ದು, ಒಂದು ತಂಡದಲ್ಲಿ ವಾದ್ಯಗಾರರು ಸೇರಿದಂತೆ 7 ಸದಸ್ಯರು ಇರಬಹುದು. ವಿಜೇತ ತಂಡಗಳಿಗೆ ಪ್ರಥಮ ಸ್ಥಾನಕ್ಕೆ 10,000, ದ್ವಿತೀಯ 6,000, ತೃತೀಯ 3,000 ಹಾಗೂ 5 ತಂಡಗಳಿಗೆ ತಲಾ 1,000 ರೂ. ಸಮಾಧಾನಕರ ನಗದು ಬಹುಮಾನ ನೀಡಲಾಗುವುದು ಎಂದರು. ಗೋಷ್ಠಿಯಲ್ಲಿ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಎಂ.ಪ್ರಸಾದ್, ಖಜಾಂಚಿ ಎಚ್.ಪಿ.ರಾಜು, ಸಂಘಟನಾ ಕಾರ್ಯದರ್ಶಿಗಳಾದ ರೇಚಣ್ಣ, ಚಿಕ್ಕಳ್ಳಿ ಶಿವು ಉಪಸ್ಥಿತರಿದ್ದರು.

> ಜೆಎಸ್‌ಎಸ್ ವಿದ್ಯಾಪೀಠ ಮುಂಭಾಗದ ಬಸವ ಪುತ್ಥಳಿ ಆವರಣದಲ್ಲಿ ಬೆಳಗ್ಗೆ 11ರಿಂದ ಮಧ್ಯಾಹ್ನ 1 ಹಾಗೂ ಸಂಜೆ 4ರಿಂದ 6ರವರೆಗೆ ತಂಡದ ನೋಂದಣಿ ಮಾಡಬಹುದು. ಏ.28 ಕೊನೇ ದಿನ. ಪ್ರತಿ ತಂಡಕ್ಕೆ 500 ರೂ. ಪ್ರವೇಶ ಶುಲ್ಕ ನಿಗದಿಪಡಿಸಲಾಗಿದೆ. ಮಾಹಿತಿಗೆ ಮೊ.9886196675 ಸಂಪರ್ಕಿಸಿ.

ಹುಟ್ಟುಹಬ್ಬದ ಶುಭಾಶಯ...


ಮೈಸೂರು ಮಹಾನಗರಪಾಲಿಕೆ ಮಾಜಿ ಸದಸ್ಯ ಶ್ರೀರಾಮ್ ಅವರ ಹುಟ್ಟುಹಬ್ಬಕ್ಕೆ ಮುಖಂಡರಾದ ಟಿ.ಸೋಮು, ಒಂಟಿಕೊಪ್ಪಲ್ ಗುರುರಾಜ್, ಮೈಸೂರು ಮಹಾನಗರಪಾಲಿಕೆ ಮಾಜಿ ಸದಸ್ಯ ಉಮೇಶ್, ಸತೀಶ್, ಕೋಟೆಗೌಡ, ರೈಲ್ವೆ ಕೋ–ಆಪರೇಟಿವ್ ಬ್ಯಾಂಕ್ ನಿರ್ದೇಶಕರಾದ ಹನುಮಂತ, ಗಂಗಾಧರ್, ಸೋಮಶೇಖರ್, ಸ್ನೇಹಿತರು ಶುಭಾಶಯ ಕೋರಿದರು.

ತೇಜಸ್ವಿ ಚಿಂತನೆ ಕುರಿತು ಸಂವಾದ



ಮೈಸೂರು, ಏ.21(ಬಿಎಲ್‌ಯು)– ಮೈಸೂರಿನ ಹೂಟಗಳ್ಳಿಯ ಒಡನಾಡಿ ಸಂಸ್ಥೆಯಲ್ಲಿ ನಾಳೆ (ಏಪ್ರಿಲ್ 23) ಪ್ರಚಲಿತ ವಿದ್ಯಮಾನದಲ್ಲಿ ಕೆ.ಪಿ.ಪೂರ್ಣಚಂದ್ರ ತೇಜಸ್ವಿ ಚಿಂತನೆ ಕಾರ್ಯಕ್ರಮ ಆಯೋಜಿಸಲಾಗಿದೆ. ಹೊಸ ತಲೆಮಾರಿನ ಅನುಕೂಲಕ್ಕಾಗಿ ವರ್ತಮಾನವನ್ನು ಜೀವಪರವಾದ ವಾಸ್ತವವನ್ನು ದಾಖಲಿಸಿದ ಡಾ.ಪೂರ್ಣಚಂದ್ರ ತೇಜಸ್ವಿ ಅವರ ಚಿಂತನೆಗಳ ಬಗ್ಗೆ ಮುಕ್ತ ಸಂವಾದ ನಡೆಯಲಿದೆ. ಮೈಸೂರಿನ ಸಿದ್ಧಾರ್ಥನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ಸಹ ಪ್ರಾಧ್ಯಾಪಕಿ ಡಾ.ತ್ರಿವೇಣಿ ಅವರು ತೇಜಸ್ವಿ ಅವರ ಚಿಂತನೆ ಕುರಿತ ಸಂವಾದದಲ್ಲಿ ಪಾಲ್ಗೊಳ್ಳಲಿದ್ದಾರೆ. ತೇಜಸ್ವಿ ಅವರ ಗೆಳೆಯ ಶ್ರೀರಾಮ್ ನೆರವು ನೀಡಲಿದ್ದಾರೆ.

ಟೀಂ ಇಂಡಿಯಾ ಸ್ಟಾರ್ ಕ್ರಿಕೆಟಿಗನ ವಿರುದ್ಧ ಪತ್ನಿ ಪೊಲೀಸ್ ದೂರು

ಮುಂಬೈ: ಟೀಂ ಇಂಡಿಯಾ ಸ್ಟಾರ್ ಕ್ರಿಕೆಟಿಗ ಅಮಿತ್ ಮಿಶ್ರಾ ತನಗೆ ವರದಕ್ಷಿಣೆ ಕಿರುಕುಳ ನೀಡುತ್ತಿದ್ದು, ಅನೇಕ ಮಹಿಳೆಯರೊಂದಿಗೆ ಅನೈತಿಕ ಸಂಬಂಧ ಹೊಂದಿದ್ದಾರೆ ಎಂದು ಪತ್ನಿ ಪೊಲೀಸರಿಗೆ ದೂರು ನೀಡಿದ್ದಾರೆ. ಅಮಿತ್ ಮಿಶ್ರಾ ಮತ್ತು ಅವರ ಪತ್ನಿ ಗರಿಮಾ ನಡುವೆ ಕೌಟುಂಬಿಕ ಕಲಹ ಏರ್ಪಟ್ಟಿದೆ. ಮಿಶ್ರಾ, ಅವರ ಕುಟುಂಬಸ್ಥರ ವಿರುದ್ಧ ಗರಿಮಾ ದೂರು ನೀಡಿದ್ದಾರೆ. ಮಿಶ್ರಾ ತನ್ನನ್ನು ಹಲವು ಬಾರಿ ಹೊಡೆದಿದ್ದಾರೆ ಎಂದು ಆರೋಪಿಸಿರುವ ಗರಿಮಾ, ಅಮಿತ್ ಇತರ ಮಹಿಳೆಯರೊಂದಿಗೆ ಅನೈತಿಕ ಸಂಬಂಧ ಹೊಂದಿರುವುದನ್ನು ನಾನು 4 ತಿಂಗಳ ಹಿಂದೆ ವಿರೋಧಿಸಿದೆ. ಆಗ ನನ್ನನ್ನು ಮನೆಯಿಂದ ಹೊರಗೆ ಹಾಕಿದ್ದರು. ಹೀಗಾಗಿ ನಾನು ಪ್ರಸ್ತುತ ತಮ್ಮ ತಾಯಿಯ ಮನೆಯಲ್ಲಿ ವಾಸಿಸುತ್ತಿದ್ದೇನೆ' ಎಂದು ಆರೋಪಿಸಿದ್ದಾರೆ. ಅಮಿತ್ ಮಿಶ್ರಾ ಮತ್ತು ಗರಿಮಾ ಏಪ್ರಿಲ್ 26 2021ರಂದು ವಿವಾಹವಾಗಿದ್ದರು.

ಸರ್ಕಾರಿ ನೌಕರರ ಪ್ರಾಮಾಣಿಕತೆ ಫಲ; ರಾಜ್ಯದಲ್ಲಿ ಆರ್ಥಿಕ ಪ್ರಗತಿ

● ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ ● ಜಿಎಸ್‌ಟಿ ಸಂಗ್ರಹದಲ್ಲಿ ದೇಶದಲ್ಲೇ ಎರಡನೇ ಸ್ಥಾನ ● ಸರ್ಕಾರಿ ನೌಕರರ ದಿನಾಚರಣೆಗೆ ಸಿಎಂ ಚಾಲನೆ


ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಲ್ಲಿ ಸೋಮವಾರ ಹಲವರಿಗೆ 2023ನೇ ಸಾಲಿನ ರಾಜ್ಯಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರದಾನ ಮಾಡಿದರು.

ಬೆಂಗಳೂರು,ಏ.21(ಕೆಎಂಶಿ)– ಬಹುತೇಕ ಸರ್ಕಾರಿ ನೌಕರರ ಪ್ರಾಮಾಣಿಕ ಕರ್ತವ್ಯ ಪ್ರಜ್ಞೆಯಿಂದ ಕರ್ನಾಟಕ ಆರ್ಥಿಕ ಪ್ರಗತಿ ಸಾಧಿಸಿದೆ. ಜಿಎಸ್‌ಟಿ ಸಂಗ್ರಹದಲ್ಲಿ ದೇಶದಲ್ಲೇ ಎರಡನೇ ರಾಜ್ಯವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ಮೆಚ್ಚುಗೆ ಸೂಚಿಸಿದ್ದಾರೆ.

ರಾಜ್ಯ ಸರ್ಕಾರಿ ನೌಕರರ ಸಂಘ ಮತ್ತು ಸಿಬ್ಬಂದಿ ಹಾಗೂ ಆಡಳಿತ ಸುಧಾರಣಾ ಇಲಾಖೆ ವತಿಯಿಂದ ವಿಧಾನಸೌಧದ ಬ್ಯಾಂಕ್ವೆಟ್ ಹಾಲಿನಲ್ಲಿ ರಾಜ್ಯ ಸರ್ಕಾರಿ ನೌಕರರ ದಿನಾಚರಣೆ ಉದ್ಘಾಟಿಸಿ, 2023ನೇ ಸಾಲಿನ ರಾಜ್ಯಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಅವರು, ಸಮಾಜದ ನಾಲ್ಕು ಸ್ತಂಭಗಳಾದ ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗ ಮತ್ತು ಪತ್ರಿಕಾ ರಂಗದ ಕೆಲಸ ಸಂವಿಧಾನದ ಆಶಯ ಈಡೇರಿಸುವುದಾಗಿದೆ. ಜಾತ್ಯತೀತ ಸಮಾಜ ನಿರ್ಮಾಣದ ಮೂಲಕ ಜಾತಿ ಅಸಮಾನತೆ ನಿರ್ಮೂಲನೆ ಮಾಡುವುದಾಗಿದೆ ಎಂದರು.

ಬುದ್ಧ, ಬಸವ, ಗಾಂಧಿ ಹೇಳಿದ್ದನ್ನೇ ಅಂಬೇಡ್ಕರ್ ಸಂವಿಧಾನದಲ್ಲಿ ಅಳವಡಿಸಿದ್ದಾರೆ, ಇವರೆಲ್ಲರ ಆಶಯದಂತೆ ಸಂವಿಧಾನದ ಕರ್ತವ್ಯಗಳನ್ನು ನಾವುಗಳು ನಿರ್ವಹಿಸಬೇಕಿದೆ. ರಾಜ್ಯದ 5.5 ಲಕ್ಷ ಸರ್ಕಾರಿ ನೌಕರರಿಗೆ ಪ್ರಶಸ್ತಿ ಪುರಸ್ಕೃತರು ಸ್ಫೂರ್ತಿ ಆಗಬೇಕು, ಪ್ರಶಸ್ತಿ ಪುರಸ್ಕೃತರ ಜವಾಬ್ದಾರಿ ಹೆಚ್ಚಾಗಿದೆ, ಸರ್ಕಾರಿ ನೌಕರರು ಕರ್ತವ್ಯಪ್ರಜ್ಞೆ ಹೆಚ್ಚಿಸಿಕೊಂಡು ಜನರ ಸೇವೆಯನ್ನು ಪರಿಣಾಮಕಾರಿಯಾಗಿ ನಿರ್ವಹಿಸಬೇಕು. ಆರ್ಥಿಕ ಮತ್ತು ಸಾಮಾಜಿಕ ಸ್ವಾತಂತ್ರ್ಯ ಸಿಗದ ಹೊರತು ರಾಜಕೀಯ ಸ್ವಾತಂತ್ರ್ಯಕ್ಕೆ ಅರ್ಥವಿಲ್ಲ, ಅಸಮಾನತೆಯನ್ನು ಬೇರುಸಹಿತ ಕಿತ್ತು ಹಾಕುವಲ್ಲಿ ಕರ್ತವ್ಯ ನಿರ್ವಹಿಸಬೇಕು ಎಂದು ಕರೆ ನೀಡಿದರು.

ದೇಶ – ವಿದೇಶ

ಸ್ಕಾಟ್ಲೆಂಡ್‌ನಲ್ಲಿ ಹಿಂದೂಗಳ ರಕ್ಷಣೆಗಾಗಿ ನಿರ್ಣಯ



ಲಂಡನ್: ಭಾರತದಲ್ಲಿ ಮಾತ್ರವಲ್ಲದೆ ವಿದೇಶಗಳಲ್ಲಿಯೂ ಹಿಂದೂಗಳನ್ನು ದ್ವೇಷಿಸುವ ಮೂಲಭೂತವಾದಿಗಳ ಸಂಖ್ಯೆ ಹೆಚ್ಚುತ್ತಿದೆ. ಆದ್ದರಿಂದ ಸ್ಕಾಟ್ಲೆಂಡ್‌ನಲ್ಲಿ ಹಿಂದೂಗಳ ವಿರುದ್ಧ ಪೂರ್ವಾಗ್ರಹ ಮತ್ತು ತಾರತಮ್ಯವನ್ನು ಎತ್ತಿ ತೋರಿಸಿದ ಗ್ಲಾಸ್ಗೋ ಮೂಲದ ಗಾಂಧಿವಾದಿ ಸಂಘಟನೆಯ ವರದಿಯನ್ನು ಶ್ಲಾಘಿಸುವ ನಿರ್ಣಯವನ್ನು ಸಂಸತ್ತಿನ ಸದಸ್ಯರೊಬ್ಬರು ಸದನದಲ್ಲಿ ಮಂಡಿಸಿದ್ದಾರೆ.

ಹಿಂದೂ ವಿರೋಧಿಗಳು ಮತ್ತು ಹಿಂದೂಫೋಬಿಯಾದಿಂದ ಬಳಲುತ್ತಿರುವ ಜನರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಸಂಸದರು ನಿರ್ಣಯದಲ್ಲಿ ಒತ್ತಾಯಿಸಿದ್ದಾರೆ. ಕಳೆದ ವಾರ ಎಡಿನ್‌ಬರ್ಗ್‌ನ ಆಲ್ಬಾ ಪಕ್ಷದ ಸಂಸದ ಈಸ್ಟರ್ನ್ ಆಶ್ ರೇಗನ್ ಅವರು 'ಗಾಂಧಿಯನ್ ಪೀಸ್ ಸೊಸೈಟಿ' ವರದಿ ಆಧಾರದ ಮೇಲೆ ಪ್ರಸ್ತಾವನೆ ಮಂಡಿಸಿದರು. ಗಾಂಧಿಯವರ ಶಾಂತಿ, ಅಹಿಂಸೆ ಮತ್ತು ಸಾಮರಸ್ಯದ ತತ್ವಗಳನ್ನು ಉತ್ತೇಜಿಸುವ ಈ ಸಮಾಜವು ಫೆಬ್ರವರಿಯಲ್ಲಿ ಜನಾಂಗೀಯ ಮತ್ತು ಧಾರ್ಮಿಕ ಪೂರ್ವಾಗ್ರಹವನ್ನು ಪ್ರಶ್ನಿಸಿ ಸ್ಕಾಟಿಷ್ ಸಂಸತ್ತಿನ ಸಮಿತಿಗೆ 'ಸ್ಕಾಟ್ಲೆಂಡ್‌ನಲ್ಲಿ ಹಿಂದೂ ಫೋಬಿಯಾ' ವರದಿ ಸಲ್ಲಿಸಿತು.

ಅನಾಥ ಕಂದನ ರಕ್ಷಿಸಿದ ನಟಿ ದಿಶಾ ಪಟಾನಿ ಸಹೋದರಿ

ಬರೇಲಿ: ಪಾಳು ಬಿದ್ದ ಮನೆಯಲ್ಲಿ ಅನಾಥವಾಗಿ ಬಿದ್ದಿದ್ದ ಪುಟ್ಟ ಕಂದಮ್ಮನನ್ನು ಖ್ಯಾತ ಬಾಲಿವುಡ್ ನಟಿ ದಿಶಾಪಟಾನಿ ಸಹೋದರಿ ಖುಷ್ಬೂ ಪಟಾನಿ ರಕ್ಷಿಸಿದ್ದಾರೆ.



ಉತ್ತರಪ್ರದೇಶದ ಬರೇಲಿಯಲ್ಲಿ ಭಾನುವಾರ ಬಾಲಿವುಡ್ ನಟಿ ದಿಶಾ ಪಟಾನಿ ಅವರ ಸಹೋದರಿ ಖುಷ್ಬೂ ಪಟಾನಿ ಅವರು ಶಿಥಿಲಗೊಂಡ ಕಟ್ಟಡದಿಂದ ಸುಮಾರು ಒಂಬತ್ತರಿಂದ 10 ತಿಂಗಳ ವಯಸ್ಸಿನ ಅನಾಥ ಶಿಶುವನ್ನು ರಕ್ಷಿಸಿದ್ದಾರೆ.

ಭಾನುವಾರ ಮಗು ಅಳುತ್ತಿರುವ ಶಬ್ದ ಕೇಳಿ ಆರಂಭದಲ್ಲೇ ಯಾರದ್ದೋ ಮನೆಯಲ್ಲಿ ಮಗು ಅಳುತ್ತಿದೆ ಎಂದು ಖುಷ್ಬೂ ಕುಟುಂಬಸ್ಥರು ಸುಮ್ಮನಾಗಿದ್ದರು. ಆದರೆ ಮಗುವಿನ ಅಳು ನಿಲ್ಲದ ಕಾರಣ ಅನುಮಾನಗೊಂಡ ಖುಷ್ಬೂ ಕುಟುಂಬಸ್ಥರು ಒಮ್ಮೆ ನೋಡೋಣ ಎಂದು ಪಾಳು ಬಿದ್ದ ಮನೆ ಬಳಿ ಬಂದಿದ್ದಾರೆ. ಪಾಳುಬಿದ್ದ ಕೊಠಡಿಯ ಮಣ್ಣಿನ ನೆಲದ ಮೇಲೆ ಮಗುವೊಂದು ನಿತ್ರಾಣವಾಗಿ ಬಿದ್ದಿರುವುದು ಕಣ್ಣಿಗೆ ಬಿದ್ದಿದೆ. ಕೂಡಲೇ ಖುಷ್ಬೂ ಮಗುವನ್ನು ಎತ್ತಿಕೊಂಡು ಹೊರಗೆ ತಂದಿದ್ದಾರೆ. ಬಳಿಕ ಮನೆ ಸುತ್ತಮುತ್ತ ವಿಚಾರಿಸಿದ್ದ ಮಗುವಿನ ಪೋಷಕರು ಪತ್ತೆಯಾಗಿಲ್ಲ. ಮಗು ಈ ಪಾಳು ಬಿದ್ದ ಕಟ್ಟಡಕ್ಕೆ ಹೇಗೆ ಬಂತು... ಯಾರು ಇಲ್ಲಿ ಬಿಟ್ಟು ಹೋದರು ಎಂಬ ಮಾಹಿತಿ ಲಭ್ಯವಾಗಿಲ್ಲ.

ಶೇಖ್ ಹಸೀನಾ ಸೇರಿ 12 ಮಂದಿಗೆ ರೆಡ್ ನೋಟಿಸ್ ಜಾರಿಗೆ ಮನವಿ



ಢಾಕಾ: ಕಳೆದ ವರ್ಷ ಬಾಂಗ್ಲಾದೇಶದಲ್ಲಿ ಎದ್ದ ದಂಗೆಯಿಂದ ತಪ್ಪಿಸಿಕೊಂಡು ಭಾರತಕ್ಕೆ ಬಂದಿದ್ದ ಅಲ್ಲಿಯ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರಿಗೆ ರೆಡ್ ನೋಟಿಸ್ ನೀಡುವಂತೆ ಇಂಟರ್‌ಪೋಲ್‌ಗೆ ಮನವಿ ಮಾಡಲಾಗಿದೆ ಎನ್ನುವ ಸುದ್ದಿ ಬಂದಿದೆ. ಬಾಂಗ್ಲಾದೇಶ ಪೊಲೀಸ್‌ನ ನ್ಯಾಷನಲ್ ಸೆಂಟ್ರಲ್ ಬ್ಯೂರೋ ಈ ಮನವಿ ಸಲ್ಲಿಸಿದೆ ಎಂದು ಬಾಂಗ್ಲಾದೇಶದ ದಿ ಡೈಲಿ ಸ್ಟಾರ್ ಪತ್ರಿಕೆಯಲ್ಲಿ ವರದಿಯಾಗಿದೆ. ಶೇಖ್ ಹಸೀನಾ ಅವರು ಬಾಂಗ್ಲಾದಿಂದ ತಪ್ಪಿಸಿಕೊಂಡು ಭಾರತಕ್ಕೆ ಬಂದಾಗಿನಿಂದ ಅಲ್ಲಿನ ಹಂಗಾಮಿ ಸರ್ಕಾರವು ಮಾಜಿ ಪ್ರಧಾನಿಯನ್ನು ವಶಕ್ಕೆ ಒಪ್ಪಿಸುವಂತೆ ಭಾರತದ ಮೇಲೆ ನಿರಂತರವಾಗಿ ಒತ್ತಡ ಹೇರುತ್ತಿದೆ. ಬಾಂಗ್ಲಾದಲ್ಲಿ ಶೇಖ್ ಹಸೀನಾ ವಿರುದ್ಧ ಹಲವು ಪ್ರಕರಣಗಳಿದ್ದು, ಅವರನ್ನು ವಿಚಾರಣೆಗೆ ಒಳಪಡಿಸಬೇಕಾಗಿದೆ ಎಂದು ಅಲ್ಲಿನ ಸರ್ಕಾರ ಹೇಳುತ್ತಿದೆ. ಬಾಂಗ್ಲಾದೇಶದ ಕೋರ್ಟ್‌ಗಳು, ತನಿಖಾ ಸಂಸ್ಥೆಗಳು ಮೊದಲಾದವುಗಳಿಂದ ಮನವಿಗಳು ಬಂದಾಗ ನ್ಯಾಷನಲ್ ಸೆಂಟ್ರಲ್ ಬ್ಯೂರೋ ಇಂಟರ್‌ಪೋಲ್‌ಗೆ ಈ ರೀತಿಯ ಮನವಿ ಮಾಡುತ್ತದೆ ಎನ್ನಲಾಗಿದೆ.

ಭಾರತಕ್ಕೆ ಬಂದಿಳಿದ ಅಮೆರಿಕದ ಉಪಾಧ್ಯಕ್ಷ ಜೆಡಿ ವ್ಯಾನ್ಸ್

ದೆಹಲಿ: ಅಮೆರಿಕದ ಉಪಾಧ್ಯಕ್ಷ ಜೆಡಿ ವ್ಯಾನ್ಸ್, ಅವರ ಪತ್ನಿ ವ್ಯಾನ್ಸ್ ಉಷಾ ವ್ಯಾನ್ಸ್, ಅವರ ಮಕ್ಕಳು 4 ದಿನಗಳ ಭೇಟಿಗಾಗಿ ಭಾರತಕ್ಕೆ ಆಗಮಿಸಿದ್ದಾರೆ. ಅಮೆರಿಕದ ಆಡಳಿತದ ಇತರ ಹಿರಿಯ ಸದಸ್ಯರು ಅವರ ಜೊತೆಗಿದ್ದಾರೆ. ಅಮೆರಿಕ ಉಪಾಧ್ಯಕ್ಷ ಮತ್ತು ಅವರ ಪತ್ನಿಯನ್ನು ಪಾಲಂ ವಾಯುನೆಲೆಯಲ್ಲಿ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಬರಮಾಡಿಕೊಂಡರು.




ಭಾರತ ಪ್ರವಾಸದಲ್ಲಿರುವ ಅಮೆರಿಕ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಅವರಿಗೆ ರಾಷ್ಟ್ರ ರಾಜಧಾನಿ ಹೊಸದಿಲ್ಲಿಯಲ್ಲಿ ಭಾರತದ ಮೂರೂ ರಕ್ಷಣಾ ಪಡೆಗಳಿಂದ ಗೌರವ ವಂದನೆ ಸಲ್ಲಿಸಲಾಯಿತು. ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಸಭೆ ನಡೆಯುವುದೂ ಸೇರಿದಂತೆ ವಿವಿಧ ಕಾರ್ಯಕ್ರಮಗಳಲ್ಲಿ ಜೆಡಿ ವ್ಯಾನ್ಸ್ ಪಾಲ್ಗೊಳ್ಳಲಿದ್ದಾರೆ. ಆಗ್ರಾ, ಜೈಪುರ್ ಮುಂತಾದ ಕಡೆಯೂ ತೆರಳಲಿದ್ದಾರೆ.

ಭಾರತ ಮತ್ತು ಅಮೆರಿಕ ನಡುವಿನ ದ್ವಿಪಕ್ಷೀಯ ವ್ಯಾಪಾರ ಒಪ್ಪಂದಕ್ಕೆ ಶೀಘ್ರದಲ್ಲೇ ಅಂಕಿತ ಹಾಕುವ ಒಂದು ಮುಖ್ಯ ಅಜೆಂಡಾ ಈ ಭೇಟಿಯ ಹಿಂದಿದೆ. ಇದರ ಜೊತೆಗೆ, ಎರಡೂ ದೇಶಗಳ ನಡುವಿನ ಮೈತ್ರಿಯನ್ನು ಗಟ್ಟಿಗೊಳಿಸಲು ವಿಧಗಳನ್ನು ಅವಲೋಕಿಸುವ ಸಾಧ್ಯತೆ ಇದೆ.

ಕಣ್ಣಿಗೆ ಕಾಣದ ಹೊಸ ಬಣ್ಣ ಕಂಡು ಹಿಡಿದ ವಿಜ್ಞಾನಿಗಳು

ಕ್ಯಾಲಿಫೋರ್ನಿಯಾ: ಇಲ್ಲಿನ ವಿಜ್ಞಾನಿಗಳು ಹೊಸ ಬಣ್ಣವೊಂದನ್ನು ಪತ್ತೆ ಮಾಡಿದ್ದಾರೆ. ಆದರೆ ಈ ಬಣ್ಣ ಕಣ್ಣಿಗೆ ಕಾಣದ ಬಣ್ಣವಾಗಿದ್ದು, ಇದಕ್ಕೆ 'ಓಲೋ' ಎಂದು ಹೆಸರಿಡಲಾಗಿದೆ. ಈ ಬಣ್ಣವನ್ನು ನೋಡಬೇಕಿದ್ದರೆ ಕಣ್ಣಿನ ರೆಟಿನಾಗಳ ಮೇಲೆ ಲೇಸರ್ ಕಿರಣಗಳನ್ನು ಹಾಯಿಸಬೇಕು. ಈ ಸಮಯದಲ್ಲಿ ಮಾತ್ರ ಹೊಸ ಬಣ್ಣ ಗೋಚರವಾಗುತ್ತದೆ. ಈವರೆಗೆ 5 ಮಂದಿ ಮಾತ್ರ ಈ ಬಣ್ಣವನ್ನು ನೋಡಿದ್ದಾರೆ ಎಂದು ವಿಜ್ಞಾನಿಗಳು ತಿಳಿಸಿದ್ದಾರೆ. ಹೊಸ ಬಣ್ಣವು ನವಿಲಿನ ನೀಲಿ ಬಣ್ಣದೊಂದಿಗೆ ಹೋಲಿಕೆ ಹೊಂದಿದ್ದು, ಹೆಚ್ಚಿನ ಸ್ಯಾಚುರೇಶನ್ ಹೊಂದಿದೆ. ಹೀಗಾಗಿ ಇದು ಬರಿಗಣ್ಣಿಗೆ ಕಾಣುವುದಿಲ್ಲ ಎಂದು ಕ್ಯಾಲಿಫೋರ್ನಿಯಾ ವಿವಿಯ ಸಂಶೋಧಕ ಹೇಳಿದ್ದಾರೆ.



ರೆಟಿನಾದ ಮೇಲೆ ವಿವಿಧ ಬೆಳಕುಗಳು ಬಿದ್ದಾಗ ಅದರಲ್ಲಿರುವ ಕೆಲವು ಕೋನ್‌ಗಳು ಬಣ್ಣದ ಛಾಯೆಗಳನ್ನು ಸೃಷ್ಟಿಸುತ್ತದೆ. ಹೀಗಾಗಿ ಬಣ್ಣಗಳನ್ನು ಗುರುತಿಸಬಹುದಾಗಿದೆ. ಆದರೆ ಓಲೋವನ್ನು ಗುರುತಿಸಲು ರೆಟಿನಾದಲ್ಲಿರುವ ಯಾವುದೇ ಕೋನ್‌ಗಳು ಸಹಾಯ ಮಾಡುವುದಿಲ್ಲ. ಹೀಗಾಗಿ ಲೇಸರ್ ಬಳಸಿದರಷ್ಟೇ ಈ ಬಣ್ಣ ಗೋಚರವಾಗುತ್ತದೆ ಎಂದು ಅವರು ಹೇಳಿದ್ದಾರೆ.

ಮುದ್ದಂಡ ಕಪ್ ಹಾಕಿ ಉತ್ಸವ;

ಮಹಿಳಾ ತಂಡಗಳ ನಡುವೆ ಪೈಪೋಟಿ



ಮಡಿಕೇರಿ,ಏ.21– ಕೊಡವ ಕುಟುಂಬಗಳ ನಡುವಿನ ಹಾಕಿ ಪಂದ್ಯಾವಳಿಯ ಬೆಳ್ಳಿಮಹೋತ್ಸವದ ಹಿನ್ನೆಲೆಯಲ್ಲಿ ಮುದ್ದಂಡ ಕಪ್ ಹಾಕಿ ಉತ್ಸವದಲ್ಲಿ ಮಹಿಳಾ ತಂಡಗಳ ನಡುವೆ ಪೈಪೋಟಿ ಆರಂಭಗೊಂಡಿದೆ.

ನಗರದ ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಕಾಲೇಜು ಮೈದಾನದಲ್ಲಿ ನಡೆಯುತ್ತಿರುವ ಮಹಿಳೆಯರ '5ಎ ಸೈಡ್' ಹಾಕಿ ಪಂದ್ಯಾವಳಿಗೆ ಅರ್ಜುನ ಪ್ರಶಸ್ತಿ ವಿಜೇತ, ಮಾಜಿ ಒಲಂಪಿಯನ್ ಎಂ.ಎಂ.ಸೋಮಯ್ಯ ಚಾಲನೆ ನೀಡಿದರು,

ಕಾರ್ಯಕ್ರಮ ಉದ್ಘಾಟಿಸಿದ ಪದ್ಮಶ್ರೀ ಪ್ರಶಸ್ತಿ ವಿಜೇತ ಹಿರಿಯ ಕಲಾವಿದೆ ಐಮುಡಿಯಂಡ ರಾಣಿ ಮಾಚಯ್ಯ ಮಾತನಾಡಿ, ಹಾಕಿ ಒಲಿಂಪಿಯನ್‌ಗಳನ್ನು ಕೊಡುಗೆಯಾಗಿ ನೀಡಿದ ಹೆಗ್ಗಳಿಕೆ ಕೊಡಗಿಗೆ ಇದ್ದು, ಮುಂದಿನ ದಿನಗಳಲ್ಲಿ ಹೆಚ್ಚಿನ ಸಂಖ್ಯೆಯ ಮಹಿಳಾ ಕ್ರೀಡಾಪಟಗಳು ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಳ್ಳುವಂತಾಗಲಿ ಎಂದು ಶುಭ ಹಾರೈಸಿದರು.

ರಾಷ್ಟ್ರೀಯ ಬಾಸ್ಕೆಟ್‌ಬಾಲ್ ಆಟಗಾರ್ತಿ ಮಂಡೇಪಂಡ ಪುಷ್ಪ ಕುಟ್ಟಣ್ಣ, ಉತ್ಸವ ಸಮಿತಿಯ ಅಧ್ಯಕ್ಷ ಮುದ್ದಂಡ ರಶಿನ್ ಸುಬ್ಬಯ್ಯ, ಕಾರ್ಯದರ್ಶಿ ಮುದ್ದಂಡ ಆದ್ಯ ಪೂವಣ್ಣ, ಉಪಾಧ್ಯಕ್ಷ ಡೀನ್ ಬೋಪಣ್ಣ, ಮುದ್ದಂಡ ಒಕ್ಕದ ಪ್ರಮುಖರು ಉಪಸ್ಥಿತರಿದ್ದರು.

ಕುಟುಂಬ ತಂಡಗಳು ಪ್ರೀ ಕ್ವಾರ್ಟರ್ ಫೈನಲ್ಸ್‌ನಲ್ಲಿ ಹಣಾಹಣಿ

ಮಡಿಕೇರಿ,ಏ.21–ಮುದ್ದಂಡ ಹಾಕಿ ಉತ್ಸವ ಪ್ರೀ ಕ್ವಾರ್ಟರ್ ಫೈನಲ್ಸ್ ಪಂದ್ಯಾವಳಿ ಹಂತ ತಲುಪಿದೆ. ಏ.22ರಂದು ನಡೆಯಲಿರುವ ಪ್ರೀ ಕ್ವಾರ್ಟರ್ ಫೈನಲ್ಸ್ ಪಂದ್ಯಾವಳಿ ಮೈದಾನ 1ರಲ್ಲಿ ಮಾತ್ರ ಆಯೋಜಿಸಲಾಗಿದೆ. ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಕಾಲೇಜು ಮೈದಾನದಲ್ಲಿ ಬೆಳಿಗ್ಗೆ 9 ಗಂಟೆಗೆ ಮೇಚಿಯಂಡ–ಚೇಂದಂಡ, 10.30 ಗಂಟೆಗೆ ಅಂಜಪರವಂಡ–ಚೆಪ್ಪುಡಿರ, ಮಧ್ಯಾಹ್ನ 12 ಗಂಟೆಗೆ ಸಣ್ಣುವಂಡ–ಮಂಡೇಪಂಡ, 1.30 ಗಂಟೆಗೆ ಪರದಂಡ–ಕುಪ್ಪಂಡ(ಕೈಕೇರಿ) ಕುಟುಂಬ ತಂಡಗಳು ಪ್ರೀ ಕ್ವಾರ್ಟರ್ ಫೈನಲ್ಸ್‌ನಲ್ಲಿ ಹಣಾಹಣಿ ನಡೆಸಲಿವೆ.

ಮುದ್ದಂಡ ಹಾಕಿ ಉತ್ಸವದಲ್ಲಿ ಏ.21ರಂದು ನಡೆದ '5ಎ ಸೈಡ್' ಮಹಿಳಾ ಪಂದ್ಯಾವಳಿಯಲ್ಲಿ ಪಾಂಡಿರ(ಹೆಬ್ಬೆಟ್ಟಗೇರಿ), ಕಾಂಡಂಡ, ಚೆಪ್ಪುಡಿರ, ಮಾಳೇಟಿರ(ಕೆದಮುಳ್ಳೂರು), ಕೇಚೇಟಿರ, ಚೋಯಮಾಡಂಡ, ನಾಪಂಡ, ಕುಪ್ಪಂಡ(ಕೈಕೇರಿ), ಚೇಂದಿರ, ಚೌರಿರ(ಹೊದವಾಡ), ಮೇವಡ ಅಚ್ಚಪಂಡ, ತೆಕ್ಕಡ, ಚೇನಂಡ, ಕುಟ್ಟಂಡ(ಮಾದಾಪುರ), ಪರದಂಡ ತಂಡಗಳು ಮುಂದಿನ ಹಂತಕ್ಕೆ ಪ್ರವೇಶ ಪಡೆದಿವೆ.

ಮಾಯಮುಡಿ ಗ್ರಾಮದ ಕಲ್ತೋಡು ಮುತ್ತಪ್ಪ ಜಾತ್ರೆ



ಗೋಣಿಕೊಪ್ಪ,ಏ.21– ಮಾಯಮುಡಿ ಗ್ರಾಮದ ಕಲ್ತೋಡು ಮುತ್ತಪ್ಪ ದೇವರ ವಾರ್ಷಿಕೋತ್ಸವ ನಡೆಯಿತು.

ಗಣಪತಿ ಹೋಮ, ಮುತ್ತಪ್ಪನ್ ವೆಳ್ಳಾಟಂ, ಅನ್ನಸಂರ್ಪಣೆ ನೆರವೇರಿತು. ನೆರವೇರಲಿದೆ. ಭಾನುವಾರ ವಿವಿಧ ಆಚರಣೆಗಳು ನಡೆದವು. ಭಕ್ತರು ಪೈಂಗುತ್ತಿ, ಮುತ್ತಪ್ಪನ್ ವೆಳ್ಳಾಟಂ ಸೇವೆ ಮೂಲಕ ಹರಕೆ ಒಪ್ಪಿಸಿದರು.

ಸಿಇಟಿ ವೇಳೆ ಜನಿವಾರ ಪ್ರಕರಣ

ಜಿಲ್ಲಾ ಬ್ರಾಹ್ಮಣರ ಕ್ಷೇಮಾಭಿವೃದ್ಧಿ ಸಂಘ ಪ್ರತಿಭಟನೆ

ಮಡಿಕೇರಿ,ಏ.21– ಬೀದರ್ ಹಾಗೂ ಶಿವಮೊಗ್ಗದಲ್ಲಿ ಸಿ.ಇ.ಟಿ ಪರೀಕ್ಷೆ ಬರೆಯಲು ಜನಿವಾರ ತೆಗೆಸಿದ ಪ್ರಕರಣ ಖಂಡಿಸಿ ಜಿಲ್ಲಾ ಬ್ರಾಹ್ಮಣರ ಕ್ಷೇಮಾಭಿವೃದ್ಧಿ ಸಂಘ ಪೊನ್ನಂಪೇಟೆ ತಹಶೀಲ್ದಾರ್ ಕಚೇರಿ ಎದುರು ಪ್ರತಿಭಟನೆ ನಡೆಯಿತು.

ಕೊಡಗು ಜಿಲ್ಲಾ ಬ್ರಾಹ್ಮಣ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಘವೇಂದ್ರ ಮಾತನಾಡಿ, ಬ್ರಾಹ್ಮಣ ಸಮುದಾಯವನ್ನು ತುಳಿಯುವಂತಹ ಕೆಲಸ ನಿರಂತರವಾಗಿ ನಡೆಯುತ್ತಿದೆ ಬ್ರಾಹ್ಮಣ ಸಮುದಾಯಕ್ಕೆ ಅವಮಾನ ಮಾಡಿರುವಂತಹ ಅಧಿಕಾರಿಯ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ಯಜ್ಞ ಪವಿತ್ರ ಜನಿವಾರ ಬ್ರಾಹ್ಮಣರ ಜನ್ಮಸಿದ್ಧ ಹಕ್ಕು. ಇದನ್ನು ಕಸಿದುಕೊಳ್ಳುವಂತಹ ಕೆಲಸ ಸರಕಾರದಿಂದ ಆಗುತ್ತಿದೆ ಎಂದು ಆರೋಪಿಸಿದರು. ಬ್ರಾಹ್ಮಣ ಸಮುದಾಯಕ್ಕೆ ಅವಮಾನ ಮಾಡಿದ ಅಧಿಕಾರಿಯ ವಿರುದ್ಧ ಕಠಿಣ ಕ್ರಮ ಕಾನೂನು ಕ್ರಮ ಕೈಗೊಳ್ಳುವಂತೆ ಪ್ರಭಾಕರ್ ನೆಲ್ಲಿತ್ತಾಯ ಒತ್ತಾಯಿಸಿದರು.



ಜನಿವಾರ ತೆಗೆಸಿದ ಪ್ರಕರಣ ಖಂಡಿಸಿ ಕೊಡಗು ಜಿಲ್ಲಾ ಬ್ರಾಹ್ಮಣ ಕ್ಷೇಮಾಭಿವೃದ್ಧಿ ಸಂಘದಿಂದ ತಹಶೀಲ್ದಾರ್ ಮೋಹನ್ ಕುಮಾರ್ ಮೂಲಕ ಸರಕಾರಕ್ಕೆ ಮನವಿ ಸಲ್ಲಿಸಲಾಯಿತು.

ಸಂಘದ ಸದಸ್ಯ ಶಂಕರ್ ವೈಲಾಂಯ ಮಾತನಾಡಿ ಘಟನೆಯನ್ನು ಖಂಡಿಸಿದರು.

ತಹಶೀಲ್ದಾರ್ ಮೋಹನ್ ಕುಮಾರ್ ಮೂಲಕ ಸರಕಾರಕ್ಕೆ ಮನವಿ ಸಲ್ಲಿಸಲಾಯಿತು. ಪ್ರತಿಭಟನೆಯಲ್ಲಿ ಸಂಘದ ವಲಯ ಪ್ರಧಾನ ಕಾರ್ಯದರ್ಶಿ ಸುದರ್ಶನ್ ಕೆದಿಲಾಯ, ಖಜಾಂಜಿ ಪವನ್ ಕಂಡಿಪ್ಪಾಡಿತ್ತಾಯ, ಶ್ರೀಪತಿ ಪಡಂತ್ತಾಯ, ಕೆ.ಜಿ ರಾಮಕೃಷ್ಣ ಕಣ್ಣಾರಾಯ, ಸುಂದರ ಪಡಂತ್ತಾಯ, ಮತ್ತಿತರರು ಪಾಲ್ಗೊಂಡಿದ್ದರು.

ಸಿಇಟಿ ಪರೀಕ್ಷೆ ಜನಿವಾರ ಪ್ರಕರಣ

ಬ್ರಾಹ್ಮಣರ ಮನೋಬಲ ಕುಗ್ಗಿಸುವ ಪ್ರಯತ್ನ



ಮಡಿಕೇರಿ: ಸಿಇಟಿ ಪರೀಕ್ಷೆಯಲ್ಲಿ ಜನಿವಾರ ಪ್ರಕರಣ ಹಿಂದೂಗಳ ಭಾವನೆಗೆ ಧಕ್ಕೆ ತಂದಿರುವ ಕೃತ್ಯವಾಗಿದೆ ಎಂದು ಕೊಡಗು ಜಿಲ್ಲಾ ವಿಶ್ವ ಹಿಂದೂ ಪರಿಷದ್ ಮಠ ಮಂದಿರ ಪ್ರಮುಖ್ ಡಾ.ಮಹಾಬಲೇಶ್ವರ ಭಟ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸರಣಿ ಅಪಘಾತ: ಚಾಲಕ ಸೇರಿ ಇಬ್ಬರಿಗೆ ತೀವ್ರ ಗಾಯ



ಮಡಿಕೇರಿ: ವಾಹನಗಳನ್ನು ಹಿಂದಿಕ್ಕುವ ಭರದಲ್ಲಿ ಕಾರೊಂದು, ಆಟೋ ರಿಕ್ಷಾ ಹಾಗೂ ಮತ್ತೊಂದು ಕಾರಿಗೆ ಡಿಕ್ಕಿ ಸಂಭವಿಸಿದ ಪರಿಣಾಮ ಆಟೋ ಚಾಲಕ ಹಾಗೂ ಓರ್ವ ಪ್ರಯಾಣಿಕ ಸೇರಿದಂತೆ ಇಬ್ಬರು ತೀವ್ರ ಗಾಯಗೊಂಡ ಘಟನೆ ಗೋಣಿಕೊಪ್ಪಲಿನಲ್ಲಿ ಸೋಮವಾರ ನಡೆದಿದೆ.

ಗೋಣಿಕೊಪ್ಪ–ತಿತಿಮತಿ ಮುಖ್ಯ ರಸ್ತೆಯಲ್ಲಿ ಎಂ.ಅಶೋಕ್ ಎಂಬುವರಿಗೆ ಸೇರಿದ ಮಾರುತಿ ಸ್ವಿಫ್ಟ್ ಕಾರೊಂದು ವಾಹನಗಳನ್ನು ಓವರ್ ಟೇಕ್ ಮಾಡುವಾಗ ಮತ್ತೊಂದು ಕಾರು ಹಾಗೂ ಗೋಣಿಕೊಪ್ಪ ನಿವಾಸಿ ವಾಸು ಎಂಬುವರಿಗೆ ಸೇರಿದ ಆಟೋರಿಕ್ಷಾಕ್ಕೆ ಡಿಕ್ಕಿ ಹೊಡೆದಿದೆ.

ಸರಣಿ ಅಪಘಾತದಲ್ಲಿ ಆಟೋ ಚಾಲಕ ವಾಸು ಹಾಗೂ ಆಟೋದಲ್ಲಿದ ಪ್ರಯಾಣಿಕರೊಬ್ಬರು ತೀವ್ರವಾಗಿ ಗಾಯಗೊಂಡಿದ್ದು, ಗಾಯಳುಗಳನ್ನು ಚಿಕಿತ್ಸೆಗಾಗಿ ಸ್ಥಳೀಯರ ಸಹಕಾರದಿಂದ ಗೋಣಿಕೊಪ್ಪಲಿನ ಸಮುದಾಯ ಆರೋಗ್ಯ ಕೇಂದ್ರಕ್ಕೆ ದಾಖಲಿಸಲಾಗಿದೆ. ಗೋಣಿಕೊಪ್ಪ ಠಾಣಾಧಿಕಾರಿ ಟಿ.ಎಂ.ಕಾವೇರಪ್ಪ ಸಿಬ್ಬಂದಿಗಳಾದ ಬಿ.ವಿ ಪ್ರವೀಣ್, ಎಸ್.ಕೆ.ಪ್ರಸನ್ನ, ಎಂ.ಮಹೇಂದ್ರ ಬಿ.ಹೆಚ್ ನವೀನ್ ಕುಮಾರ್ ಕಾನೂನು ಕ್ರಮ ಕೈಗೊಂಡಿದ್ದಾರೆ.

ಓದುಗರಿಗೆ ಆಪ್ತವಾಗುವ ಭಾಷೆಯಲ್ಲಿ ಸಾಹಿತ್ಯ ರಚಿಸಿದ ತೇಜಸ್ವಿ

ವಿರಾಜಪೇಟೆ, ಏ.21– ಪೂರ್ಣಚಂದ್ರ ತೇಜಸ್ವಿ ಕನ್ನಡದ ಅತ್ಯುತ್ತಮ ಬರಹಗಾರರಾಗಿ ಸಾಹಿತ್ಯದಲ್ಲಿ ತಮ್ಮದೇ ಆದ ಆಯಾಮವನ್ನು ಹಿಡಿದು ಓದುಗರಿಗೆ ಆಪ್ತವಾಗುವ ಭಾಷೆಯಲ್ಲಿ ಸಾಹಿತ್ಯವನ್ನು ರಚಿಸಿದರು ಎಂದು ಮೂರ್ನಾಡು ಪದವಿ ಕಾಲೇಜಿನ ಪ್ರಾಧ್ಯಾಪಕ ಕಿಗ್ಗಾಲು ಹರೀಶ್ ಹೇಳಿದರು.

ಪಟ್ಟಣಕ್ಕೆ ಸಮೀಪದ ಅರಮೇರಿ ಕಳಂಚೇರಿ ಶ್ರೀ ಮಠದ ಶ್ರೀಲಿಂಗ ರಾಜೇಂದ್ರ ಭವನದಲ್ಲಿ ಹೊಂಬೆಳಕು ಕಿರಣ 230 ಮಾಸಿಕ ತತ್ತ್ವಚಿಂತನಾ ಗೋಷ್ಠಿ ಕಾರ್ಯಕ್ರಮದಲ್ಲಿ "ಪೂಚಂತೇ ಕೃತಿಗಳು ಹಾಗೂ ಜೀವನ" ಎಂಬ ವಿಷಯದ ಬಗ್ಗೆ ನೀಡಿದ ಉಪನ್ಯಾಸದಲ್ಲಿ ಪೂರ್ಣಚಂದ್ರ ತೇಜಸ್ವಿಗೆ ವಿವಿಧ ಕ್ಷೇತ್ರಗಳಲ್ಲಿ ಆಸಕ್ತಿ ಇತ್ತು. ವಿಶ್ವದ ಎಲ್ಲಾ ಆಗು–ಹೋಗುಗಳ ಬಗ್ಗೆ ತಿಳಿದುಕೊಳ್ಳುವ ಕುತೂಹಲ ಹೊಂದಿದ್ದ ಅವರು ಜೀವನ ಪ್ರೇಮಿಯಾಗಿದ್ದರು. ಭಾರತೀಯ ಸ್ಟೇಟ್ ಬ್ಯಾಂಕ್ ಉದ್ಯೋಗಿ ಕೆ.ಎನ್.ಉಷಾ ಅವರು ಜ್ಯೋತಿ ಬೆಳಗಿಸಿ ಕಾರ್ಯಕ್ರಮ ಉದ್ಘಾಟಿಸಿ ಸಭೆಯನ್ನುದ್ದೇಶಿಸಿ ಮಾತನಾಡಿ ಹೊಂಬೆಳಕು ಕಾರ್ಯಕ್ರಮದಿಂದ ಮನುಷ್ಯನ ಮನಸ್ಸು ಪರಿವರ್ತನೆ ಆಗಲಿದೆ. ಪ್ರತಿಯೊಬ್ಬ ಮಕ್ಕಳು ವಿದ್ಯಾವಂತರಾಗಬೇಕೆಂದು ಹೇಳಿದರು.

ಅರಮೇರಿ ಕಳಂಚೇರಿ ಶ್ರೀಮಠದ ಪೀಠಾಧಿಪತಿ ಶಾಂತಮಲ್ಲಿಕಾರ್ಜುನ ಸ್ವಾಮೀಜಿ ಸಾನಿಧ್ಯ ವಹಿಸಿ ವಿದ್ಯಾರ್ಥಿಗಳು ಉತ್ತಮ ಸಾಹಿತ್ಯದ ಕಡೆಗೆ ಗಮನಹರಿಸಬೇಕು. ಕೃತಿಗಳು ಬರಹ ಗೌರವವನ್ನು ತರುತ್ತದೆ. ಶಿಕ್ಷಣದಿಂದ ಜ್ಞಾನ ಉತ್ತಮ ಬದುಕು ಜೀವನ, ಎಲ್ಲೇಇರಲಿ. ಕೆಲಸ ಯಾವುದೇ ಆಗಲಿ ಕರ್ತವ್ಯ ಉತ್ತಮ ಗುಣ ನಡತೆ ಮಾನವನಿಗೆ ಮುಖ್ಯವಾಗಿರುತ್ತದೆ ಎಂದರು. ವಿರಾಜಪೇಟೆ ವೈದ್ಯ ಡಾ.ಎಸ್.ವಿ.ನರಸಿಂಹನ್ ಸ್ವಾಗತಿಸಿ, ನಿರೂಪಿಸಿದರು.



ಮಾಸಿಕ ತತ್ತ್ವಚಿಂತನಾಗೋಷ್ಠಿಯನ್ನು ಕೆ.ಎನ್.ಉಷಾ ಉದ್ಘಾಟಿಸಿದರು.

ಪರಿಸರ ಶುಚಿತ್ವಕ್ಕೆ ಒತ್ತು ನೀಡಲು ಜಿಲ್ಲಾಧಿಕಾರಿ ಕರೆ

ಮಡಿಕೇರಿ: ಜಿಲ್ಲೆಯಲ್ಲಿ ಆಗಾಗ ಮಳೆಯಾಗುತ್ತಿರುವ ಹಿನ್ನೆಲೆ ಮನೆಯ ಸುತ್ತಮುತ್ತ ತೆಂಗಿನ ಚಿಪ್ಪು, ಟೈರು, ಹೂಕುಂಡಗಳಲ್ಲಿ ನೀರು ನಿಲ್ಲದಂತೆ ಗಮನಹರಿಸಿ ಪರಿಸರ ಶುಚಿತ್ವಕ್ಕೆ ಹೆಚ್ಚು ಒತ್ತು ನೀಡಬೇಕು. ಆ ನಿಟ್ಟಿನಲ್ಲಿ ಹೆಚ್ಚಿನ ಜಾಗೃತಿ ಮೂಡಿಸುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ವೆಂಕಟ್ ರಾಜಾ ಸೂಚಿಸಿದ್ದಾರೆ.

ಮನೆಯ ಸುತ್ತಮುತ್ತ ಪರಿಸರ ಶುಚಿತ್ವವಾಗಿದ್ದಲ್ಲಿ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬಹುದು. ಸೊಳ್ಳೆಗಳು ಹರಡದಂತೆ ಗಮನಹರಿಸುವುದು ಅತ್ಯಗತ್ಯವಾಗಿದೆ. ಆ ನಿಟ್ಟಿನಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಸ್ಥಳೀಯ ಸಂಸ್ಥೆಗಳು ಅಗತ್ಯ ಅರಿವು ಮೂಡಿಸಬೇಕು ಎಂದು 'ಜಿಲ್ಲಾ ಆರೋಗ್ಯ ಅಭಿಯಾನ' ಸಭೆಯಲ್ಲಿ ಸಲಹೆ ನೀಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಆನಂದ್, ಡಾ.ಸತೀಶ್ ಕುಮಾರ್, ಡಾ.ಸತೀಶ್ ಕುಮಾರ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಶ್ರೀನಿವಾಸ್ ಸಭೆಯಲ್ಲಿ ಮಾತನಾಡಿದರು.

ಜಿಲ್ಲಾ ಹಾಗೂ ತಾಲೂಕು ಮಟ್ಟದ ವೈದ್ಯಾಧಿಕಾರಿಗಳು ಇತರರು ಇದ್ದರು.

ಚಿಕಿತ್ಸೆಗೆ ದಾಖಲಾಗಿದ್ದ ವೃದ್ಧ ನಿಧನ

ಗೋಣಿಕೊಪ್ಪ: ಸಮುದಾಯ ಆರೋಗ್ಯ ಕೇಂದ್ರದಲ್ಲಿ ಚಿಕಿತ್ಸೆಗೆ ದಾಖಲಾಗಿದ್ದ ವೃದ್ಧ ನಿಧನರಾಗಿದ್ದು, ವಾರಸುದಾರರು ಇದ್ದಲ್ಲಿ ಪೊಲೀಸ್ ಠಾಣೆ ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

ಚಿಕಿತ್ಸೆಗೆ ದಾಖಲಾಗಿದ್ದ ಸಂದರ್ಭ ಕೇಶವ ಎಂದು ಮಾತ್ರ ಹೆಸರು ಹೇಳಿಕೊಂಡಿದ್ದು, ಪೂರ್ಣ ಮಾಹಿತಿ ಇಲ್ಲ. ವೃದ್ಧ ಮಾರ್ಚ್ 29 ರಂದು ಹೃದಯಾಘಾತದಿಂದ ಮೃತಪಟ್ಟಿದ್ದು, ವಾರಸುದಾರರು ಪೊಲೀಸ್ ಠಾಣೆ ಮೊ.ಸಂ.9480804957 ನ್ನು ಸಂಪರ್ಕಿಸಿ.

ಶ್ರೀ ಮಲೆ ಮಹದೇಶ್ವರಬೆಟ್ಟದಲ್ಲಿ ಗುರುವಾರ ಸಂಪುಟ ಸಭೆ

ಚಾ.ನಗರ ಜಿಲ್ಲೆಯ ಜನತೆಯಲ್ಲಿ ಗರಿಗೆದರಿದ ನಿರೀಕ್ಷೆಗಳು

ಸಿದ್ದಲಿಂಗಸ್ವಾಮಿ

ಚಾಮರಾಜನಗರ,ಏ.21– ಜಿಲ್ಲೆಯ ಹನೂರು ತಾಲೂಕಿನ ಮಲೆ ಮಹದೇಶ್ವರಸ್ವಾಮಿ ಬೆಟ್ಟದಲ್ಲಿ ಇದೇ ತಿಂಗಳ 24ರಂದು ರಾಜ್ಯ ಸರ್ಕಾರದ ಸಚಿವ ಸಂಪುಟ ಸಭೆ ನಡೆಯಲಿದೆ. ಇದಕ್ಕಾಗಿ ಅಗತ್ಯ ಸಿದ್ಧತೆಗಳು ಪ್ರಗತಿಯಲ್ಲಿದ್ದು, ಜಿಲ್ಲೆಯ ಜನತೆ ಹಲವಾರು ನಿರೀಕ್ಷೆಗಳಿಂದ ಜಾತಪಕ್ಷಿಯಂತೆ ಕಾಯುತ್ತಿದ್ದಾರೆ.

ಎಸ್.ಎಂ.ಕೃಷ್ಣ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಜಿಲ್ಲೆಯ ಯಳಂದೂರು ತಾಲೂಕಿನ ಬಿಳಿಗಿರಿ ರಂಗನ ಬೆಟ್ಟದಲ್ಲಿ ಮಿನಿ ಸಚಿವ ಸಂಪುಟ ಸಭೆ ನಡೆದಿತ್ತು. ಇದೀಗ ಮಹದೇಶ್ವರ ಬೆಟ್ಟದಲ್ಲಿ ಏ.24ರಂದು ಪೂರ್ಣ ಪ್ರಮಾಣದ ಕ್ಯಾಬಿನೆಟ್ ಸಭೆ ನಡೆಯಲಿದೆ. ಇದು ಜಿಲ್ಲೆಯಲ್ಲಿ ಮೊದಲ ಬಾರಿಗೆ ನಡೆಯುತ್ತಿರುವ ಪೂರ್ಣ ಪ್ರಮಾಣದ ಕ್ಯಾಬಿನೆಟ್ ಸಭೆಯಾಗಿರುವುದರಿಂದ ಜಿಲ್ಲೆಯ ಜನತೆ ಈ ಕ್ಯಾಬಿನೆಟ್ ಸಭೆಯನ್ನು ಎದುರು ನೋಡುತ್ತಿದೆ



ನಿರೀಕ್ಷೆಗಳು : ಜಿಲ್ಲೆಯ ಎಲ್ಲಾ ಕೆರೆಗಳಿಗೆ ನೀರು ತುಂಬಿಸುವ ಯೋಜನೆ, ಒಳಚರಂಡಿ ಯೋಜನೆ, ಬಡವರಿಗೆ ವಸತಿ ಸೌಲಭ್ಯ ಒದಗಿಸುವ ಯೋಜನೆ, ಕಾಡಂಚಿನ ಗ್ರಾಮಗಳ ಅಭಿವೃದ್ಧಿಗೆ ವಿಶೇಷ ಯೋಜನೆ, ಮಹದೇಶ್ವರಬೆಟ್ಟದ ಆಸುಪಾಸಿನಲ್ಲಿ ಇರುವ ಗ್ರಾಮಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಯೋಜನೆ, ಜಿಲ್ಲೆಯಲ್ಲಿ ವಾಸಿಸುತ್ತಿರುವ ಗಿರಿಜನರು ಹಾಗೂ ಸೋಲಿಗರ ಅಭಿವೃದ್ಧಿಗೆ ವಿಶೇಷ ಯೋಜನೆಗಳು ಸೇರಿದಂತೆ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ವಿಶೇಷ ಅನುದಾನದ ನಿರೀಕ್ಷೆಯಲ್ಲಿ ಇದ್ದಾರೆ. ಈ ನಿರೀಕ್ಷೆಗೆ ರಾಜ್ಯ ಸರ್ಕಾರ ಯಾವ ರೀತಿ ಸ್ಪಂದಿಸುತ್ತದೆ ಎಂದು ಜಿಲ್ಲೆಯ ಜನತೆ ಕಾದು ನೋಡುತ್ತಿದೆ.

ಭರದ ಸಿದ್ಧತೆ : ಸಚಿವ ಸಂಪುಟ ಸಭೆಯನ್ನು ಯಶಸ್ವಿಗೊಳಿಸಲು ಜಿಲ್ಲಾಡಳಿತ ಟೊಂಕಕಟ್ಟಿ ನಿಂತಿದೆ. ಶಾಸಕ ಎಂ.ಆರ್.ಮಂಜುನಾಥ್ ಜಿಲ್ಲಾಧಿಕಾರಿ ಸಿ.ಟಿ. ಶಿಲ್ಪಾನಾಗ್, ಹಿರಿಯ ಅಧಿಕಾರಿಗಳೊಂದಿಗೆ ಮಹದೇಶ್ವರಬೆಟ್ಟಕ್ಕೆ ತೆರಳಿ ಅಗತ್ಯ ಸಿದ್ಧತೆಗಳನ್ನು ಕೈಗೊಂಡಿದ್ದಾರೆ.

ಆರೋಗ್ಯ ಮಂದಿರ ಚಿಕಿತ್ಸಾಲಯಕ್ಕೆ ಡಿಸಿ ಚಾಲನೆ

ಚಾಮರಾಜನಗರ,ಏ.21– ಎಲ್ಲರಿಗೂ ಆರೋಗ್ಯ, ಎಲ್ಲೆಡೆಯೂ ಆರೋಗ್ಯ, ಶೀರ್ಷಿಕೆಯಡಿ ತೆರೆಯಲಾಗಿರುವ 'ಆರೋಗ್ಯ ಮಂದಿರ' ಕ್ಕೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಚಾಲನೆ ನೀಡಿದರು.

ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿರುವ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಪಕ್ಕದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣ ಇಲಾಖೆ ಸಹಯೋಗದಲ್ಲಿ ನಡೆದ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಆರೋಗ್ಯ ಮಂದಿರದ ಟೇಪ್ ಕತ್ತರಿಸುವ ಮೂಲಕ ಚಿಕಿತ್ಸಾಲಯವನ್ನು ಉದ್ಘಾಟಿಸಿ, ಜಿಲ್ಲಾಡಳಿತ ಭವನದ ಕ್ಯಾಂಪಸ್‌ನಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿ, ಸಿಬ್ಬಂದಿ ಹಾಗೂ ಸಾರ್ವಜನಿಕರಿಗೆ ತುರ್ತು ಸಂದರ್ಭಗಳಲ್ಲಿ ಪ್ರಥಮ ಚಿಕಿತ್ಸೆ, ತಾತ್ಕಾಲಿಕವಾಗಿ ಆರೋಗ್ಯ ಸೇವೆ ನೀಡಿ ನೆರವಾಗುವ ಹಿತದೃಷ್ಟಿಯಿಂದ ಆರೋಗ್ಯ ಮಂದಿರ ತೆರೆಯಲಾಗಿದೆ. ಖಾಸಗಿ ಕ್ಲಿನಿಕ್‌ಗಿಂತಲೂ ವ್ಯವಸ್ಥಿತ ಮಾದರಿಯಲ್ಲಿ ರೂಪಿತವಾಗಿರುವ ಆರೋಗ್ಯ ಮಂದಿರದಲ್ಲಿ ದೊರೆಯುವ ಸೌಲಭ್ಯಗಳನ್ನು ಜಿಲ್ಲಾಡಳಿತ ಭವನದ ಅಧಿಕಾರಿ ಸಿಬ್ಬಂದಿಗಳು ಸದ್ಬಳಕೆ ಮಾಡಕೊಳ್ಳಬೇಕು ಎಂದರು.

ಕಳೆದ ವರ್ಷ ಕೊಳ್ಳೇಗಾಲದಲ್ಲಿ ಆರೋಗ್ಯ ಇಲಾಖೆ ಏರ್ಪಡಿಸಿದ್ದ ಆರೋಗ್ಯ ತಪಾಸಣಾ ಶಿಬಿರದಲ್ಲಿ 12 ಸಾವಿರ ಜನರು ಚಿಕಿತ್ಸಾ ಸೌಲಭ್ಯ ಪಡೆದಿದ್ದಾರೆ. ಇಡೀ ರಾಜ್ಯದಲ್ಲಿಯೇ ಮೊದಲ ಬಾರಿಗೆ ಹನೂರು ತಾಲೂಕಿನ ರಾಮಾಪುರದಲ್ಲಿ ಡಯಾಲಿಸಿಸ್ ಕೇಂದ್ರ ತೆರೆಯಲಾಗಿದೆ. ಮುಂದಿನ ದಿನಗಳಲ್ಲಿ ಜಿಲ್ಲೆ ಆರೋಗ್ಯ ಕ್ಷೇತ್ರದಲ್ಲಿ ಹೆಚ್ಚಿನ ಪ್ರಗತಿ ಸಾಧಿಸಿ ಮುಂಚೂಣಿಗೆ ಬರಲು ಜನರಿಗೆ ಪೂರಕ ಆರೋಗ್ಯ ಸೇವೆಗಳನ್ನು ಒದಗಿಸಲಾಗುವುದು ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಉಪ ಕಾರ್ಯದರ್ಶಿ ಪಿ.ಲಕ್ಷ್ಮೀ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ, ಆರೋಗ್ಯ ಇಲಾಖೆಯ ಆಡಳಿತಾಧಿಕಾರಿ, ಅಧಿಕಾರಿಗಳು, ಕಾರ್ಯಕ್ರಮದಲ್ಲಿ ಇದ್ದರು.



'ಆರೋಗ್ಯ ಮಂದಿರ'ಕ್ಕೆ ಡಿಸಿ ಶಿಲ್ಪಾ ನಾಗ್ ಚಾಲನೆ ನೀಡಿದರು.

ಕಾಡಾನೆ ದಾಳಿಯಿಂದ ಮನೆ, ಫಸಲು ನಾಶ



ಚಾಮರಾಜನಗರ: ಮನೆ ಮಂದಿ ಮದುವೆಗೆ ತೆರಳಿ ವಾಪಸ್ ಆಗುವಷ್ಟರಲ್ಲಿ ಕಾಡಾನೆ ದಾಳಿಗೆ ಮನೆಯ ಛಾವಣಿ ಹಾಗೂ ಜಮೀನಿನಲ್ಲಿ ಬೆಳೆದಿದ್ದ ಫಸಲು ನಾಶವಾಗಿರುವ ಘಟನೆ ತಾಲೂಕಿನ ಮೂಕನಪಾಳ್ಯ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ನಿವಾಸಿ ನಾನಕ್ ಭಾಯಿ ಅವರ ಜಮೀನಿಗೆ ನಿನ್ನೆ ತಡರಾತ್ರಿ ಕಾಡಾನೆ ಹಿಂಡು ಜಮೀನಿಗೆ ನುಗ್ಗಿ ಅಪಾರ ಪ್ರಮಾಣದ ಬೆಳೆ ಹಾಗೂ ಮನೆಗೆ ಹಾನಿ ಮಾಡಿದ್ದು ರೈತ ಕುಟುಂಬ ಕಂಗಾಲಾಗಿದೆ. ನುಗ್ಗಿರುವ ಕಾಡಾನೆ ಹಿಂಡು ಟೊಮೆಟೊ, ಬೀನ್ಸ್ ಫಸಲನ್ನು ತುಳಿದು ತಿಂದು ನಾಶ ಮಾಡಿದೆ. ಜೊತೆಗೆ, ಹಲಸಿನ ಮರ, ಮಾವಿನಮರ, 8 ತೆಂಗಿನ ಸಸಿಗಳನ್ನು ಮುರಿದು, ತುಳಿದು ಹಾಕಿದೆ.

ಈ ಬಗ್ಗೆ ರೈತ ನಾಗೇಶ್‌ನಾಯಕ್ ಮಾತನಾಡಿ, ಈ ಭಾಗದಲ್ಲಿ ನಿರಂತರವಾಗಿ ಕಾಡಾನೆ ದಾಳಿ ನಡೆಯುತ್ತಿದೆ. ಅರಣ್ಯ ಇಲಾಖೆಯವರಿಗೆ ದೂರು ನೀಡಿದರೂ ಯಾವುದೇ ಪ್ರಯೋಜನವಾಗಿಲ್ಲ. ರಾತ್ರಿ ಸಂಬಂಧಿಕರ ಮದುವೆಗೆ ಹೋಗಿ ಮನೆಗೆ ವಾಪಾಸ್ಸಾಗುವಷ್ಟರಲ್ಲಿ ಕಾಡಾನೆ ಹಿಂಡು ಜಮೀನಿಗೆ ನುಗ್ಗಿ ಮನೆ ಧ್ವಂಸ ಮಾಡಿದ್ದು, ಫಸಲು ನಾಶ ಮಾಡಿದೆ. ಈಗ ವಾಸ ಮಾಡಲು ನಮಗೆ ಮನೆ ಇಲ್ಲ. ಅರಣ್ಯ ಇಲಾಖೆ ಪರಿಶೀಲಿಸಿ ಸೂಕ್ತ ಪರಿಹಾರ ಕೊಡಿಸಬೇಕು. ನಮ್ಮ ಜಮೀನುಗಳಿಗೆ ಕಾಡಾನೆ ಹಾವಳಿ ತಪ್ಪಿಸಬೇಕು ಎಂದು ಒತ್ತಾಯಿಸಿದರು.

ಜಾನಪದ ಅಕಾಡೆಮಿ ಪುರಸ್ಕೃತೆ

ಹೊನ್ನೂರು ಗೌರಮ್ಮರಿಗೆ ಜಿಲ್ಲಾಡಳಿತ ಗೌರವ

ಚಾಮರಾಜನಗರ, ಏ.21– ಸೋ... ಎನ್ನಿರೇ... ಸೋಬಾನ ಎನ್ನಿರೇ... ಸೋಬಾನೆ ಪದಗಳನ್ನು ಮದುವೆ, ಜಾತ್ರೆ, ಉತ್ಸವಗಳು ಸೇರಿದಂತೆ ಇನ್ನಿತರೆ ಕಾರ್ಯಕ್ರಮಗಳಲ್ಲಿ ಹಾಡುತ್ತಾ ಹೆಸರುವಾಸಿಯಾಗಿ ಕರ್ನಾಟಕ ಜಾನಪದ ಅಕಾಡೆಮಿಯ ವಾರ್ಷಿಕ ಗೌರವ ಪ್ರಶಸ್ತಿ ಪಡೆದಿರುವ ಯಳಂದೂರು ತಾಲೂಕಿನ ಹೊನ್ನೂರು ಗ್ರಾಮದ ಹೊನ್ನೂರು ಗೌರಮ್ಮರನ್ನು ಗೌರವಿಸಲಾಯಿತು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಜಿಲ್ಲಾಡಳಿತ, ಮೈಸೂರು ಆಕಾಶವಾಣಿ ಹಾಗೂ ಕರ್ನಾಟಕ ಜಾನಪದ ಅಕಾಡೆಮಿ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಸರಳ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಹಾಗೂ ಅಕಾಡೆಮಿ ಅಧ್ಯಕ್ಷ ಗೊಲ್ಲಹಳ್ಳಿ ಶಿವಪ್ರಸಾದ್ ಪ್ರಶಸ್ತಿಗೆ ಭಾಜನರಾಗಿರುವ ಗೌರಮ್ಮ ಅವರಿಗೆ ಶಾಲು ಹೊದಿಸಿ ಫಲತಾಂಬೂಲ, ಸ್ಮರಣಿಕೆ ನೀಡಿ ಸನ್ಮಾನಿಸಿದರು.

ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಮಾತನಾಡಿ ಜಾನಪದ ಕಲೆಗಳ ತವರೂರಾಗಿ ನಶಿಸಿ ಹೋಗುತ್ತಿರುವ ಜಾನಪದ ಕಲೆಗಳು, ಹಾಡುಗಳು ಇನ್ನಷ್ಟು ಪಸರಿಸಿ ಬೆಳಕಿಗೆ ಬರಬೇಕು. ಆಕಾಶವಾಣಿ ಈ ನಿಟ್ಟಿನಲ್ಲಿ ಉತ್ತಮ ಕಾರ್ಯಕ್ರಮಗಳನ್ನು ಪ್ರಸಾರ ಮಾಡುತ್ತಿದೆ. ಅದರಲ್ಲೂ ಮದುವೆ, ಉತ್ಸವಗಳಂತಹ ಶುಭ ಸಮಾರಂಭಗಳಲ್ಲಿ ಹಾಡುವ ಸೋಬಾನೆ ಪದಗಳನ್ನು ಸಂಗ್ರಹಿಸಿ (ಡಾಕುಮೆಂಟೇಶನ್) ದಾಖಲೀಕರಣ ಮಾಡಲು ಮುಂದಾಗಬೇಕು ಎಂದ ಜಿಲ್ಲಾಧಿಕಾರಿ ಗೌರಮ್ಮ ಇನ್ನಷ್ಟು ಕಾಲ ಜೀವಿಸಿ ಮತ್ತಷ್ಟು ಮದುವೆಗಳನ್ನು ಮಾಡಿಸಲಿ ಎಂದು ಹಾರೈಸಿದರು.

ಜಾನಪದ ಅಕಾಡಮಿಯ ಅಧ್ಯಕ್ಷ ಗೊಲ್ಲಹಳ್ಳಿ ಶಿವಪ್ರಸಾದ್ ಮಾತನಾಡಿ ಅಕಾಡಮಿಯ ವಾರ್ಷಿಕ ಪ್ರಶಸ್ತಿಗೆ ರಾಜ್ಯದ ಎಲ್ಲಾ ಜಿಲ್ಲೆಗಳ ಕಲಾವಿದರನ್ನು ಪರಿಗಣಿಸಲಾಗುತ್ತಿದೆ. 2023ರ ಸಾಲಿನ ಪ್ರಶಸ್ತಿಗೆ ಜಿಲ್ಲೆಯ ಹೊನ್ನೂರು ಗೌರಮ್ಮ ಆಯ್ಕೆಯಾಗಿದ್ದರೂ ಪ್ರಶಸ್ತಿ ಪ್ರದಾನ ಸಮಾರಂಭವು 2025ರ ಮಾ.15ರಂದು ಬೀದರ್‌ನಲ್ಲಿ ಆಯೋಜಿತವಾಗಿದ್ದು. ಅಂಥರಾಗಿರುವ ಗೌರಮ್ಮ ಅನಿವಾರ್ಯ ಕಾರಣಗಳಿಂದ ಪ್ರಶಸ್ತಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಸಾಧ್ಯವಾಗದ ಹಿನ್ನೆಲೆಯಲ್ಲಿ ಇಲ್ಲಿಯೇ ಬಂದು ಗೌರವಿಸಲಾಗಿದೆ ಎಂದರು.

ಅಕಾಡಮಿಯ ಸದಸ್ಯರು ಹಾಗೂ ಮೈಸೂರು ಆಕಾಶವಾಣಿಯ ಡಾ. ಉಮೇಶ್ ಅವರು ಮಾತನಾಡಿ ಇಂದಿನ ವಿಜ್ಞಾನ, ತಂತ್ರಜ್ಞಾನ ಯುಗದಲ್ಲೂ ಜಾನಪದ ಕಲೆಗಳು, ಹಾಡುಗಳು ತಮ್ಮ ಜೀವಂತಿಕೆ ಕಂಡುಕೊಂಡಿವೆ. ಸೋಬಾನೆ ಪದಗಳು ಕೇವಲ ರಂಜನೀಯವಲ್ಲ. ಅವು ಮದುವೆಯಾಗುವ ಹೊಸ ಜೋಡಿಗಳಿಗೆ ಮುಂದಿನ ಬದುಕಿನ ಮೌಲ್ಯಗಳನ್ನು ಕಟ್ಟಿಕೊಡುವ ಮಾರ್ಗದರ್ಶಿಗಳಾಗಿವೆ ಎಂದರು.

ಬಳಿಕ ಹೊನ್ನೂರು ಗೌರಮ್ಮ ಕೆಲ ಸೋಬಾನೆ ಪದಗಳನ್ನು ಹಾಡಿ ಎಲ್ಲರನ್ನು ರಂಜಿಸಿದರು. ಜಿಪಂ ಉಪ ಕಾರ್ಯದರ್ಶಿ ಪಿ.ಲಕ್ಷ್ಮೀ, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಮುನಿರಾಜು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಚಿದಂಬರ, ಕನ್ನಡ–ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ನಂಜುಂಡಯ್ಯ, ಜಾನಪದ ಅಕಾಡಮಿ ರಿಜಿಸ್ಟ್ರಾರ್ ನಮ್ರತಾ ಇತರಿದ್ದರು.



ಯಳಂದೂರು ತಾಲೂಕಿನ ಹೊನ್ನೂರು ಗ್ರಾಮದ ಗೌರಮ್ಮರನ್ನು ಗೌರವಿಸಲಾಯಿತು.

ಸಂವಿಧಾನದ ಸ್ಪರ್ಧಾತ್ಮಕ ಪರೀಕ್ಷೆ ಯಶಸ್ವಿ

ಕೊಳ್ಳೇಗಾಲ: ಭಾರತ ಸಂವಿಧಾನದ ಬಗ್ಗೆ ಜಾಗೃತಿಯನ್ನು ಮೂಡಿಸುವ ಸಲುವಾಗಿ ಅಂಬೇಡ್ಕರ್ ವಿವಿಧೋದ್ದೇಶ ಸೇವಾ ಸಂಸ್ಥೆ ಆಯೋಜಿಸಿದ್ದ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಹೆಚ್ಚು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಭಾರತ ಸಂವಿಧಾನ ಕುರಿತು ಜಿಲ್ಲಾ ವ್ಯಾಪ್ತಿಯ ಎಲ್ಲಾ ಸಮುದಾಯದ ವಿದ್ಯಾರ್ಥಿಗಳಿಗೆ ಪರೀಕ್ಷೆಯನ್ನು ವಿಶ್ವ ಚೇತನ ಪದವಿ ಪೂರ್ವ ಕಾಲೇಜಿನಲ್ಲಿ ಏರ್ಪಡಿಸಲಾಗಿತ್ತು. ಪರೀಕ್ಷೆಗೆ ನೊಂದಣಿ ಮಾಡಿಸಿಕೊಂಡಿದ್ದ 147 ಮಂದಿಯಲ್ಲಿ 96 ಮಂದಿ ಹಾಜರಾಗಿದ್ದಾರೆ ಎಂದು ಎವಿಎಸ್‌ಎಸ್ ಅಧ್ಯಕ್ಷ ತುಂಬಲ ರಾಮಣ್ಣ ತಿಳಿಸಿದರು.

ಪರೀಕ್ಷೆಯಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ಪ್ರಥಮ ಬಹುಮಾನ 10 ಸಾವಿರ, ದ್ವೀತಿಯ ಬಹುಮಾನ ಏಳೂವರೆ ಸಾವಿರ, ತೃತೀಯ ಬಹುಮಾನ 5 ಸಾವಿರ ನೀಡಲಾಗುವುದು. ನಂತರದ 10 ಸ್ಥಾನಗಳನ್ನು ಗಳಿಸಿದವರಿಗೆ ಭಾರತದ ಸಂವಿಧಾನದ ಪುಸ್ತಕದ ಜೊತೆಗೆ ಪ್ರಶಸ್ತಿ ಪತ್ರವನ್ನು ನೀಡಿ ಗೌರವಿಸಲಾಗುವುದು.



ವಿಶ್ವಚೇತನ ಕಾಲೇಜಿನಲ್ಲಿ ಸಂವಿಧಾನ ಕುರಿತ ಸ್ಪರ್ಧಾತ್ಮಕ ಪರೀಕ್ಷೆ ನಡೆಯಿತು.

ಏ.25, ಅಂತರ ಕಾಲೇಜುಗಳ ಕ್ರೀಡಾಕೂಟ

ಚಾಮರಾಜನಗರ: ಚಾಮರಾಜನಗರ ವಿಶ್ವವಿದ್ಯಾನಿಲಯ ದೈಹಿಕ ಶಿಕ್ಷಣ ವಿಭಾಗದ ವತಿಯಿಂದ ಅಂತರ ಕಾಲೇಜುಗಳ ಪುರುಷರ ಮತ್ತು ಮಹಿಳೆಯರ ಕ್ರೀಡಾಕೂಟದ ಉದ್ಘಾಟನಾ ಸಮಾರಂಭವನ್ನು ಏ.25ರಂದು ಬೆಳಿಗ್ಗೆ 10 ಗಂಟೆಗೆ ಡಾ. ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಸಂಸದ ಸುನೀಲ್ ಬೋಸ್ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ಸಿ.ಪುಟ್ಟರಂಗಶೆಟ್ಟಿ, ಜಿಲ್ಲಾಧಿಕಾರಿ ಶಿಲ್ಪಾ ನಾಗ್, ಸಿಮ್ಸ್ ನಿರ್ದೇಶಕರು ಹಾಗೂ ಡೀನ್ ಡಾ. ಹೆಚ್.ಜಿ ಮಂಜುನಾಥ್, ಅಂತರಾಷ್ಟ್ರೀಯ ಖೋಖೋ ಕ್ರೀಡಾಪಟು ವಿಶ್ವಕಪ್ ವಿಜೇತೆ ಬಿ. ಚೈತ್ರ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಚಾಮರಾಜನಗರ ವಿವಿ ಕುಲಪತಿ ಪ್ರೊ. ಎಂ.ಆರ್. ಗಂಗಾಧರ್ ಅಧ್ಯಕ್ಷತೆ ವಹಿಸುವರು. ಕುಲಸಚಿವ (ಆಡಳಿತ) ಆರ್.ಲೋಕನಾಥ್, ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕ ಡಾ.ಶಾಂತರಾಜು ಘನ ಉಪಸ್ಥಿತರಿರುವರು. ಬಹುಮಾನ ವಿತರಣಾ ಸಮಾರಂಭವು ಸಂಜೆ 5 ಗಂಟೆಗೆ ನಡೆಯಲಿದ್ದು, ಜಿಪಂ ಸಿಇಓ ಮೋನಾ ರೋತ್, ಎಸ್‌ಪಿ ಡಾ.ಬಿ.ಟಿ.ಕವಿತಾ, ಸಿಂಡಿಕೇಟ್ ಸದಸ್ಯ ವೈ.ಶಿವಪ್ರಕಾಶ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಕೆ.ಸುರೇಶ್ ಮುಖ್ಯಅತಿಥಿಗಳಾಗಿ ಪಾಲ್ಗೊಳ್ಳುವರು.

ಚಾವಿವಿ ಕುಲಸಚಿವ ಆರ್. ಲೋಕನಾಥ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಕುಲಸಚಿವ ಡಾ. ಜಿ.ವಿ ವೆಂಕಟರಮಣ, ಹಣಕಾಸು ಅಧಿಕಾರಿ ಎಸ್.ಹೆಚ್ ನಾಗೇಶ್, ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕರಾದ ಡಾ. ಶಾಂತರಾಜು ಅವರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

5 ಗ್ರಾಪಂ ಸದಸ್ಯ ಸ್ಥಾನಗಳ ಉಪ ಚುನಾವಣೆ ಮುಂದೂಡಿಕೆ

ಚಾಮರಾಜನಗರ, ಏ.21 – ರಾಜ್ಯ ಚುನಾವಣಾ ಆಯೋಗದ ಆದೇಶದಂತೆ ಜಿಲ್ಲೆಯ 5 ಗ್ರಾಮ ಪಂಚಾಯಿತಿಗಳ 5 ಸ್ಥಾನಗಳಿಗೆ ನಡೆಯಬೇಕಿದ್ದ ಉಪ ಚುನಾವಣೆಯನ್ನು 15 ದಿನಗಳ ಮಟ್ಟಿಗೆ ಮುಂದೂಡಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ತಾಲೂಕಿನ ಕೆಂಪನಪುರ ಗ್ರಾಮ ಪಂಚಾಯಿತಿಯ ಸಿಂಗನಪುರ ಕ್ಷೇತ್ರ, ಗುಂಡ್ಲುಪೇಟೆ ತಾಲೂಕಿನ ಸೋಮಹಳ್ಳಿ ಗ್ರಾಮ ಪಂಚಾಯಿತಿಯ ಕೊಡಗಾಪುರ ಕ್ಷೇತ್ರ, ಯಳಂದೂರು ತಾಲೂಕಿನ ಗೌಡಹಳ್ಳಿ ಗ್ರಾಮ ಪಂಚಾಯಿತಿಯ ಟಿ. ಹೊಸೂರು ಕ್ಷೇತ್ರ ಹಾಗೂ ಹನೂರು ತಾಲ್ಲೂಕಿನ ಪಿ.ಜಿ.ಪಾಳ್ಯ ಗ್ರಾಮ ಪಂಚಾಯಿತಿಯ ಅತ್ತಿಖಾನೆ ಕ್ಷೇತ್ರ ಮತ್ತು ಮಲೈ ಮಹದೇಶ್ವರ ಬೆಟ್ಟ ಗ್ರಾಮ ಪಂಚಾಯಿತಿಯ ಗೊರಸಾಣೆ ಕ್ಷೇತ್ರಗಳಲ್ಲಿ ವಿವಿಧ ಕಾರಣಗಳಿಂದ ತೆರವಾಗಿರುವ ಸದಸ್ಯ ಸ್ಥಾನಗಳಿಗೆ ನಡೆಸಬೇಕಾಗಿದ್ದ ಉಪ ಚುನಾವಣೆಯನ್ನು 15 ದಿನಗಳ ಮಟ್ಟಿಗೆ ಮುಂದೂಡಲಾಗಿದೆ ಎಂದು ಹೇಳಿದ್ದಾರೆ.

ಹಿರಿಯ ಲೇಖಕ ಹೆಚ್.ಎಲ್.ಶಿವಬಸಪ್ಪ ರಚಿತ ಕರ್ಣ ಚರಿತಾಮೃತ ಕೃತಿ ಬಿಡುಗಡೆ



'ಕರ್ಣ ಚರಿತಾಮೃತ' ಅಥವಾ 'ಕರ್ಣ ಪುನರುತ್ಥಾನ' ಮಹಾಕಾವ್ಯವನ್ನು ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಅವರ ಸಾನ್ನಿಧ್ಯದಲ್ಲಿ ಹಿರಿಯ ಸಾಹಿತಿ ಪ್ರೊ.ಸಿ.ನಾಗಣ್ಣ ಸೋಮವಾರ ಬಿಡುಗಡೆಗೊಳಿಸಿದರು.

ಮೈಸೂರು, ಏ.21(ಎಸ್‌ಪಿಎನ್)– ಹಿರಿಯ ಲೇಖಕ ಹೆಚ್.ಎಲ್.ಶಿವಬಸಪ್ಪ ಹೊರೆಯಾಲ ರಚಿತ, ಸಂವಹನ ಪ್ರಕಾಶನ ಹೊರತಂದಿರುವ 'ಕರ್ಣ ಚರಿತಾಮೃತ' ಅಥವಾ 'ಕರ್ಣ ಪುನರುತ್ಥಾನ' ಮಹಾಕಾವ್ಯವನ್ನು ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಅವರ ಸಾನ್ನಿಧ್ಯದಲ್ಲಿ ಹಿರಿಯ ಸಾಹಿತಿ ಪ್ರೊ.ಸಿ.ನಾಗಣ್ಣ ಸೋಮವಾರ ಬಿಡುಗಡೆಗೊಳಿಸಿದರು.

ಮೈಸೂರು ಜೆಎಲ್‌ಬಿ ರಸ್ತೆಯಲ್ಲಿರುವ ದಿ ಇನ್ಸ್‌ಟಿಟ್ಯೂಟ್ ಆಫ್ ಇಂಜಿನಿಯರ್ ಸಭಾಂಗಣದಲ್ಲಿ ಕಸಾಪ ಜಿಲ್ಲಾ ಘಟಕ, ಕನ್ನಡ ಸಾಹಿತ್ಯ ಕಲಾಕೂಟ, ಸಂವಹನ ಪ್ರಕಾಶನ ಸಹಯೋಗದೊಂದಿಗೆ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಕೃತಿಗಳ ಬಿಡುಗಡೆಗೊಳಿಸಿ ಮಾತನಾಡಿದ ಪ್ರೊ.ಸಿ.ನಾಗಣ್ಣ, 21ನೇ ಶತಮಾನದ ಈ ಕಾಲಘಟ್ಟದಲ್ಲಿ ನಮಗೆ ಗೆದ್ದವರಿಗಿಂತ, ಸಂದರ್ಭ, ಸನ್ನಿವೇಶಗಳ ಕಾರಣಕ್ಕೆ ಸೋತವರು ಮುಖ್ಯವಾಗುತ್ತಾರೆ ಎಂದು ತಿಳಿಸಿದರು.

ತಾವು ನಂಬಿದ ಮೌಲ್ಯಗಳಿಗೆ ಪ್ರಾಣತೆತ್ತವರ ಬಗ್ಗೆ ಪ್ರಸ್ತುತ ಹೆಚ್ಚು ವಿಮರ್ಶಿಸಲಾಗುತ್ತಿದೆ ಈ ಹಿನ್ನೆಲೆಯಲ್ಲಿ ಕರ್ಣ ಸಹಜವಾಗಿಯೇ ಎಲ್ಲರನ್ನು ಆಕರ್ಷಿಸುವ ವ್ಯಕ್ತಿತ್ವ. ಕರ್ಣನ ಬದುಕನ್ನು ಪುನರ್ವಿಮರ್ಶಿಸುವ ಈ ಕೃತಿ ಸಮಯೋಚಿತವಾಗಿದೆ ಎಲ್ಲರಿಗೂ ಅನುಕೂಲ ಮಾಡಿ, ಸತತ ಅನ್ಯಾಯವನ್ನು ಅನುಭವಿಸುವ ಕರ್ಣನ ಜೀವನವು ಜನಮಾನಸದಲ್ಲಿ ನೆನಪು ಉಳಿಯುವ ಪಾತ್ರವಾಗಿದೆ ಎಂದರು.

1970ನೇ ದಶಕದ ಬಳಿಕ ಸಬ್ ಆಲ್ಟನ್ ಇತಿಹಾಸ ಅಧ್ಯಯನ ಹೆಚ್ಚು ಪ್ರಚಲಿತಕ್ಕೆ ಬಂತು. ಇದರ ಪ್ರಭಾವವು ಕಾವ್ಯದಲ್ಲಿಯೂ ಪ್ರತಿಫಲಿಸಿತು. ಅಲಕ್ಷಿತ ನಾಯಕರನ್ನು, ಪಾತ್ರಗಳನ್ನು ಮುನ್ನೆಲೆಗೆ ತರುವ ಪ್ರಯತ್ನ ನಡೆಯಿತು. ಪಾತ್ರಗಳನ್ನು ಕಪ್ಪು–ಬಿಳುಪಾಗಿ ಕಾಣದೆ ಅವರಲ್ಲಿನ ಸಂಕೀರ್ಣ ವ್ಯಕ್ತಿತ್ವವನ್ನು ಅರಿಯುವ ಕೆಲಸವಾಯಿತು ಎಂದು ಹೇಳಿದರು.

ಈ ಕಾವ್ಯವು ದೀರ್ಘ, ಹ್ರಸ್ವ ವಿಭಾಗವನ್ನು ಅನುಸರಿಸಿ ಸಾಗುತ್ತದೆ. ಇಲ್ಲಿ ಕವಿಯು ಗಾದೆಗಳು, ಪರಿಭಾಷೆಗಳನ್ನು ಯಥೇಚ್ಛವಾಗಿ ಬಳಸಿದ್ದು, ಗ್ರಾಮೀಣ ಸೊಗಡು ತುಂಬಿದೆ. ಕರ್ಣನ ತೊಳಲಾಟಗಳನ್ನು ಸಮರ್ಥವಾಗಿ ಚಿತ್ರಿಸುತ್ತದೆ. ಭೀಷ್ಮನ ಬಗ್ಗೆಯೂ ಶಿವಬಸಪ್ಪ ಅವರು ಅಧ್ಯಯನ ನಡೆಸುತ್ತಿದ್ದು, ಆ ಬಗ್ಗೆಯೂ ಮಹಾಕಾವ್ಯ ಮೂಡಿಬರಲಿ ಎಂದು ಲೇಖಕ ಶಿವಬಸಪ್ಪ ಅವರನ್ನು ಉತ್ತೇಜಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಹಿರಿಯ ಸಾಹಿತಿ ಡಾ.ಸಿ.ಪಿ.ಕೃಷ್ಣಕುಮಾರ್ ಮಾತನಾಡಿ, ಕನ್ನಡ ಸಾಹಿತ್ಯವು ಮಹಾಕಾವ್ಯ ಹಾಗೂ ಚುಟುಕುಗಳ ಕಾಲಘಟ್ಟದಲ್ಲಿದೆ. ಲೇಖಕರು ಈ ಕಾವ್ಯವನ್ನು ಸರಳೀಕರಿಸುವ ಪ್ರಯತ್ನ ಮಾಡಿದ್ದಾರೆ. ಎಲ್ಲರಿಗೂ ತ್ಯಾಗಮಯಿಯಾಗಿ ಕಾಣುವ ಕರ್ಣನ ಪಾತ್ರವನ್ನು ಅಮೋಘವಾಗಿ ಲೇಖಕರು ಚಿತ್ರಿಸಿದ್ದಾರೆ ಕನ್ನಡ ಭಾಷೆಯಲ್ಲಿ ಮಹಾಕಾವ್ಯ ಗಳು ಬಂದಷ್ಟು ಬೇರೆ ಭಾಷೆಗಳಲ್ಲಿ ಬಂದಿಲ್ಲ ಎಂದರು.

> ಕರ್ಣನ ಬದುಕು ಸದಾ ಬೇರೆಯವರ ಉದ್ಧಾರಕ್ಕಾಗಿ ಎಂಬಂತಿದೆ. ಹಿರಿಯ ಲೇಖಕ ಡಾ.ಹೆಚ್.ಎಲ್. ಶಿವಬಸಪ್ಪ ಹೊರೆಯಾಲ ಅವರು, ಕರ್ಣ ಚರಿತಾಮೃತ ಕಾವ್ಯದ ಮೂಲಕ ಈ ಕಾಲಘಟ್ಟದಲ್ಲೂ ಕರ್ಣನ ಬದುಕಿನ ಬಗ್ಗೆ ತಮ್ಮ ಕಾವ್ಯದ ಮೂಲಕ ಚಿತ್ರಿಸಿದ್ದಾರೆ. ಮಹಾಕಾವ್ಯಗಳ ರಚನೆಗೆ ಕರ್ಣನ ಬದುಕು ಆಕರ್ಷಿತ, ಆದರ್ಶಪ್ರಾಯವಾಗಿದೆ.
> – ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಸುತ್ತೂರು ಮಠ

ಹಿರಿಯ ಸಾಹಿತಿ ಡಾ.ಪ್ರದೀಪಕುಮಾರ್ ಹೆಬ್ರಿ ಕೃತಿ ಕುರಿತು ಮಾತನಾಡಿದರು. ವೇದಿಕೆಯಲ್ಲಿ ವಿಶ್ರಾಂತ ಪೊಲೀಸ್ ಅಧಿಕಾರಿ ಜೆ.ಬಿ.ರಂಗಸ್ವಾಮಿ(ಜೇಬರ್), ಕಸಾಪ ಜಿಲ್ಲಾ ಘಟಕದ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಕನ್ನಡ ಸಾಹಿತ್ಯ ಕಲಾಕೂಟ ಅಧ್ಯಕ್ಷ ಎಂ.ಚಂದ್ರಶೇಖರ್, ಪ್ರಕಾಶಕ ಡಿ.ಎನ್. ಲೋಕಪ್ಪ ಉಪಸ್ಥಿತರಿದ್ದರು. ಬೆಂಗಳೂರಿನ ಆಕಾಶ್ ವಿನಯ್ ಪ್ರಾರ್ಥಿಸಿದರು.

ಜನಿವಾರ ತೆಗೆಸಿದ ಪ್ರಕರಣ: ಸಿಎಂ ಕ್ಷಮೆ ಯಾಚಿಸುವಂತೆ ಒತ್ತಾಯಿಸಿ ಮನವಿ




ಜನಿವಾರ ತೆಗೆಸಿದ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯದ ಜನರಲ್ಲಿ ಕ್ಷಮೆಯಾಚಿಸುವಂತೆ ಒತ್ತಾಯಿಸಿ ಯುವ ಭಾರತ್ ಸಂಘಟನೆ ಕಾರ್ಯಕರ್ತರು ಮನವಿ ಪತ್ರ ನೀಡಿದರು.

ಮೈಸೂರು, ಏ.21(ಎಸ್‌ಪಿಎನ್)– ಸಿಇಟಿ ವೇಳೆ ಜನಿವಾರ ಧರಿಸಿದ್ದ ವಿದ್ಯಾರ್ಥಿಗಳಿಗೆ ಅಪಮಾನ ಮಾಡಿದ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ನೈತಿಕ ಹೊಣೆ ಹೊತ್ತು ರಾಜ್ಯದ ಜನರ ಕ್ಷಮೆ ಕೇಳಬೇಕು ಎಂದು ಒತ್ತಾಯಿಸಿ ಮೈಸೂರು ಜಿಲ್ಲಾಧಿಕಾರಿಗಳಿಗೆ ಯುವ ಭಾರತ್ ಸಂಘಟನೆಯ ಕಾರ್ಯಕರ್ತರು ಮನವಿ ಪತ್ರ ಸಲ್ಲಿಸಿದರು.

ಜಿಲ್ಲಾಧಿಕಾರಿಗಳ ಪರವಾಗಿ ಕಚೇರಿಯ ತಹಸೀಲ್ದಾರ್ ಶಿವಪ್ರಸಾದ್ ಮನವಿ ಪತ್ರ ಸ್ವೀಕರಿಸಿದರು. ಈ ವೇಳೆ ಮಾತನಾಡಿದ ಸಂಘಟನೆಯ ಸಂಚಾಲಕ ಜೋಗಿ ಮಂಜು, ಜನಿವಾರ ವಿಪ್ರ ಸಮಾಜದ ಪ್ರಾಥಮಿಕ ಸಂಕೇತವಾಗಿದೆ. ಆ ವರ್ಗದ ಜನರು ಜನಿವಾರ ಧರಿಸುವುದು ಪವಿತ್ರ ಭಾವನೆ ಎಂದು ಭಾವಿಸಿದ್ದಾರೆ. ಸಿಇಟಿ ವೇಳೆ ವಿದ್ಯಾರ್ಥಿಗಳ ಜನಿವಾರ ತೆಗೆಸಿದ ಕ್ರಮ ಖಂಡನೀಯ. ಇದಕ್ಕೆ ಬೀದರ್, ಧಾರವಾಡ, ಶಿವಮೊಗ್ಗದ ಜಿಲ್ಲಾಧಿಕಾರಿಗಳು, ಪೊಲೀಸ್ ವರಿಷ್ಠಾಧಿಕಾರಿಗಳ ನಿರ್ಲಕ್ಷ್ಯವೇ ಪ್ರಮುಖ ಕಾರಣವಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದಲ್ಲಿ ಹಿಂದು ಧರ್ಮೀಯರ ಆಚರಣೆ, ಸಂಸ್ಕೃತಿ– ಸಂಪ್ರದಾಯವನ್ನು ಅವಮಾನಿಸುವ ಪ್ರಕರಣಗಳು ಹೆಚ್ಚಾಗುತ್ತಿದೆ. ಸಂವಿಧಾನ ನೀಡಿದ ಧಾರ್ಮಿಕ ಸ್ವಾತಂತ್ರ್ಯವನ್ನು ಕಸಿಯಲು ಯತ್ನಿಸುತ್ತಿದ್ದು, ಜನಿವಾರ ತೆಗೆಸಿದ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ಮನವಿ ಮಾಡಿದರು.

ಈ ವೇಳೆ ಒಕ್ಕಲಿಗರ ಸಂಘದ ನಿರ್ದೇಶಕ ರವಿ, ಅಪೂರ್ವ ಸ್ನೇಹ ಬಳಗದ ಅಧ್ಯಕ್ಷ ಅಪೂರ್ವ ಸುರೇಶ್, ಮುಖಂಡರಾದ ಕೇಬಲ್ ಮಹೇಶ್, ಆನಂದ್, ವಿನಯ್ ಪಾಂಚಜನ್ಯ ಹಾಗೂ ಇನ್ನಿತರರು ಹಾಜರಿದ್ದರು.

ಕೃಷ್ಣದೇವರಾಯ ಸಮಾಧಿ ಮೇಲೆ ಮಾಂಸ ಮಾರಾಟ



ಇತಿಹಾಸದಲ್ಲಿ ಶ್ರೇಷ್ಠ ಆಡಳಿತಗಾರರಾಗಿದ್ದ ವಿಜಯನಗರದ ಶ್ರೀ ಕೃಷ್ಣದೇವರಾಯರ ಸಮಾಧಿಯ ದುಸ್ಥಿತಿ ಇದು.

ಬೆಂಗಳೂರು: ಭಾರತೀಯ ಇತಿಹಾಸದಲ್ಲಿ ಶ್ರೇಷ್ಠ ಆಡಳಿತಗಾರರಾಗಿದ್ದ ವಿಜಯನಗರದ ಶ್ರೀ ಕೃಷ್ಣದೇವ ರಾಯರ ಗಂಗಾವತಿ ಬಳಿ ಆನೆಗುಂದಿಯಲ್ಲಿನ ಸಮಾಧಿ ಜಾಗವನ್ನು ಮಾಂಸದ ಮಾರುಕಟ್ಟೆಯಾಗಿ ಪರಿವರ್ತಿಸಲಾಗಿದ್ದು, ಇದು ಕನ್ನಡ ನಾಡಿನ ಹೆಮ್ಮೆಯ ಅರಸರಾದ ಅಸಾಮಾನ್ಯ ಆಡಳಿತಗಾರ, ಅಪ್ರತಿಮ ದಂಡನಾಯಕ ಶ್ರೀ ಕೃಷ್ಣದೇವರಾಯರಿಗೆ ಮಾಡಿದ ಅವಮಾನ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಭಾರತೀಯ ಇತಿಹಾಸದಲ್ಲಿ ಶ್ರೇಷ್ಠ ಆಡಳಿತಗಾರರಾಗಿದ್ದ ವಿಜಯನಗರದ ಶ್ರೀ ಕೃಷ್ಣದೇವ ರಾಯರ ಸಮಾಧಿಯ ದುಸ್ಥಿತಿ ಇದು. ಈ ಜಾಗವನ್ನು ಅಕ್ಷರಶಃ ಮಾಂಸದ ಮಾರುಕಟ್ಟೆಯಾಗಿ ಕೆಲ ಸ್ಥಳೀಯರು ಪರಿವರ್ತಿಸಿರುವುದು ಕನ್ನಡ ನಾಡಿನ ಹೆಮ್ಮೆಯ ಅರಸರಾದ ಅಸಾಮಾನ್ಯ ಆಡಳಿತಗಾರ, ಅಪ್ರತಿಮ ದಂಡನಾಯಕ ಶ್ರೀ ಕೃಷ್ಣದೇವರಾಯರಿಗೆ ಮಾಡಿದ ಅವಮಾನವಾಗಿದೆ ಎಂದು ಹೇಳಿದ್ದಾರೆ.

ಹಿಂದೂ ದೇವಾಲಯಗಳನ್ನು ಕೆಡವಿ, ದೇಶದ ಸಂಪತ್ತನ್ನು ದೋಚಿ, ಸಾವಿರಾರು ಹಿಂದೂಗಳನ್ನು ಅಮಾನವೀಯವಾಗಿ ಕೊಂದ ಔರಂಗಜೇಬನ ಸಮಾಧಿಗೆ ಪುರಾತತ್ವ ಸರ್ವೇಕ್ಷಣಾ ಇಲಾಖೆ [ASI] ತೆರಿಗೆದಾರರ ಹಣದಿಂದ ಸಂರಕ್ಷಣೆ ಮಾಡುತ್ತಿದೆ ಆದರೆ, ವಿಜಯ ನಗರ ಸಾಮ್ರಾಜ್ಯವನ್ನು ವಿಸ್ತರಿಸಿದ ಪರಾಕ್ರಮಿ, ಕಲೆ, ಸಾಹಿತ್ಯ ರಂಗಗಳ ಪೋಷಕ ಶ್ರೀ ಕೃಷ್ಣದೇವರಾಯರ ಸಮಾಧಿಗೆ ಏಕೆ ಈ ರೀತಿಯಾದ ದಿವ್ಯ ನಿರ್ಲಕ್ಷ್ಯ ಎಂದು ಪ್ರಶ್ನಿಸಿದ್ದಾರೆ.

ಇದು ಕನ್ನಡಿಗರಿಗಷ್ಟೇ ಅಲ್ಲ ರಾಷ್ಟ್ರಕ್ಕೆ ಮಾಡಿದ ಅವಮಾನ. ಮಾಂಸವನ್ನು ಮಾರುತ್ತ ಸ್ಥಳದ ಪಾವಿತ್ರ್ಯತೆಯನ್ನು ಹಾಳು ಮಾಡುತ್ತಿರುವ ಇಂತಹವರನ್ನು ಜಿಲ್ಲಾಡಳಿತ ಕೂಡಲೇ ಜಾಗ ಖಾಲಿ ಮಾಡಲು ಸೂಚಿಸಬೇಕು ಹಾಗೂ ಇಲ್ಲಿ ನೈರ್ಮಲ್ಯ ಮತ್ತು ಸಮಾಧಿಯ ಪಾವಿತ್ರ್ಯತೆಯನ್ನು ಕಾಪಾಡುವ ಕೆಲಸವನ್ನು ಸರ್ಕಾರ ತುರ್ತಾಗಿ ಮಾಡಲಿ ಎಂದು ಆಗ್ರಹಿಸಿದ್ದಾರೆ.

ಮೂರೇ ತಿಂಗಳಲ್ಲಿ ರಾಜ್ಯ ಮಾನವ ಹಕ್ಕುಗಳ ಆಯೋಗಕ್ಕೆ 87 ಕಾನೂನುಬಾಹಿರ ಬಂಧನದ ದೂರು ದಾಖಲು

ಬೆಂಗಳೂರು: ಬಂಧನದ ವಿರುದ್ಧ ಕಠಿಣ ನಿಯಮಗಳು ಜಾರಿಯಲ್ಲಿದ್ದರೂ, ರಾಜ್ಯ ಮಾನವ ಹಕ್ಕುಗಳ ಆಯೋಗಕ್ಕೆ ಕೇವಲ ಮೂರು ತಿಂಗಳಲ್ಲಿ 'ಕಾನೂನುಬಾಹಿರ ಬಂಧನ'ದ 87 ದೂರುಗಳು ದಾಖಲಾಗಿವೆ.

ಈ ವರ್ಷ ರಾಜ್ಯ ಮಾನವ ಹಕ್ಕುಗಳ ಆಯೋಗ ದಾಖಲಿಸಿದ ಒಟ್ಟು 9,556 ಪ್ರಕರಣಗಳಲ್ಲಿ, ಶೇಕಡಾ 78 ಕ್ಕಿಂತ ಹೆಚ್ಚು ಪ್ರಕರಣಗಳು ಪೊಲೀಸ್ ಇಲಾಖೆ ಮತ್ತು ಅದರ ದೌರ್ಜನ್ಯದ ವಿರುದ್ಧವಾಗಿವೆ. SHRC ಯ ಮಾಹಿತಿಯ ಪ್ರಕಾರ, 2025 ರಲ್ಲಿ 5,341 ಹೊಸ ಪ್ರಕರಣಗಳು ಮತ್ತು 271 ಸ್ವಯಂಪ್ರೇರಿತ ಪ್ರಕರಣಗಳು ದಾಖಲಾಗಿವೆ. ಒಟ್ಟು 2024 ರಿಂದ ಬಾಕಿ ಇರುವ 3,944 ಪ್ರಕರಣಗಳು ಸೇರಿವೆ. ಒಟ್ಟು 6,664 ಪ್ರಕರಣಗಳಲ್ಲಿ ಮಾರ್ಚ್ 2025 ರ ವೇಳೆಗೆ 6,892 ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದ್ದು, 2,892 ಪ್ರಕರಣಗಳು ಬಾಕಿ ಉಳಿದಿವೆ.

ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯಿಂದ ಅತೀ ಹೆಚ್ಚು ದೂರುಗಳು ಬಂದಿವೆ. 2024 ರಲ್ಲಿ ಮಾತ್ರ, SHRC ಕಾನೂನುಬಾಹಿರ ಬಂಧನಕ್ಕೆ ಸಂಬಂಧಿಸಿದ 153 ಪ್ರಕರಣಗಳನ್ನು ದಾಖಲಿಸಿದೆ.

ಆಯೋಗದ ಕಾರ್ಯಕಾರಿ ಅಧ್ಯಕ್ಷ ಟಿ. ಶಾಮ್ ಭಟ್ ಮಾಧ್ಯಮಗಳೊಂದಿಗೆ ಮಾತನಾಡುತ್ತಾ, ಸಮಸ್ಯೆಗಳನ್ನು ಪರಿಹರಿಸಲು ಆಯೋಗವು ರಾಜ್ಯಾದ್ಯಂತ 21 ಜಿಲ್ಲೆಗಳಿಗೆ ಭೇಟಿ ನೀಡುತ್ತಿದೆ, ಆದ್ದರಿಂದ ದೂರುದಾರರು ಇನ್ನು ಮುಂದೆ ಬೆಂಗಳೂರಿಗೆ ಪ್ರಯಾಣಿಸಬೇಕಾಗಿಲ್ಲ. ಈ ವರ್ಷ, ಆಯೋಗವು ಸರ್ಕಾರವು ಸಂತ್ರಸ್ತರಿಗೆ 2.5 ಕೋಟಿ ರೂ.ಗಳಿಗಿಂತ ಹೆಚ್ಚಿನ ಪರಿಹಾರವನ್ನು ನೀಡಬೇಕು ಮತ್ತು ತಪ್ಪಿತಸ್ಥರೆಂದು ಕಂಡುಬಂದವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಬೇಕು ಎಂದು ಶಿಫಾರಸು ಮಾಡಿದೆ.

ಅಧಿಕಾರಿಗಳು ಹಾಸ್ಟೆಲ್‌ಗಳು, ಬಸ್ ನಿಲ್ದಾಣಗಳು, ಜಿಲ್ಲಾ ಕಾರಾಗೃಹಗಳು ಮತ್ತು ಸರ್ಕಾರಿ ಆಸ್ಪತ್ರೆಗಳನ್ನು ಪರಿಶೀಲಿಸುತ್ತಿದ್ದಾರೆ ಎಂದು ಹೇಳಿದರು. ಯಾವುದೇ ಮಾನವ ಹಕ್ಕುಗಳ ಉಲ್ಲಂಘನೆಯನ್ನು ವರದಿ ಮಾಡಲು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಅಧಿಕಾರಿಗಳು ಕೆಲಸ ಮಾಡುತ್ತಿದ್ದಾರೆ.

ಬೆಂಗಳೂರು ಮೂಲದ ಕಾರ್ಯಕರ್ತ ಮತ್ತು ವಕೀಲ ವಿನಯ್ ಶ್ರೀನಿವಾಸ ಅವರು, ಕಾನೂನುಬಾಹಿರ ಬಂಧನದ ಸಾಮಾನ್ಯ ಸಂತ್ರಸ್ತರಲ್ಲಿ ವಲಸೆ ಕಾರ್ಮಿಕರು ಸೇರಿದ್ದಾರೆ ಎಂದು ಹೇಳಿದರು. ಅಂತಹ ಬಂಧನದ ವಿರುದ್ಧ ಕಠಿಣ ನಿಯಮಗಳಿದ್ದರೂ, ಅವುಗಳನ್ನು ಹೆಚ್ಚಾಗಿ ಪಾಲಿಸಲಾಗುತ್ತಿಲ್ಲ. ಹೆಚ್ಚಿನ ಜನರಿಗೆ ತಮ್ಮ ಹಕ್ಕುಗಳ ಬಗ್ಗೆ ತಿಳಿದಿಲ್ಲ ಮತ್ತು ಪೊಲೀಸರ ವಿರುದ್ಧ ದೂರು ನೀಡಲು ಭಯಪಡುತ್ತಾರೆ.

ಇದಲ್ಲದೆ, ಯಾರನ್ನು ಸಂಪರ್ಕಿಸಬೇಕು ಅಥವಾ ಹೇಗೆ ಪ್ರಕರಣ ದಾಖಲಿಸಬೇಕು ಎಂದು ಅವರಿಗೆ ತಿಳಿದಿರುವುದಿಲ್ಲ ಎಂದು ಹೇಳಿದ್ದಾರೆ. ಹೆಚ್ಚಿನ ಸಂತ್ರಸ್ತರು ಬಡ ಅಥವಾ ಮಧ್ಯಮ ವರ್ಗದ ಹಿನ್ನೆಲೆಯಿಂದ ಬಂದವರಾಗಿರುವುದರಿಂದ ಮತ್ತು ಹೆಚ್ಚಾಗಿ ಹಣಕ್ಕಾಗಿ ಗುರಿಯಾಗಿರುವುದರಿಂದ, ಹಿರಿಯ ಪೊಲೀಸ್ ಅಧಿಕಾರಿಗಳು ಕೆಳ ಹಂತದ ಸಿಬ್ಬಂದಿಗಳ ಮೇಲೆ ಹೆಚ್ಚಿನ ಮೇಲ್ವಿಚಾರಣೆ ನಡೆಸಬೇಕಾಗಿದೆ ಎಂದು ಅವರು ಗಮನಸೆಳೆದರು.

ಯಾವುದೇ ಅಮಾಯಕ ವ್ಯಕ್ತಿಯನ್ನು ಬಂಧಿಸಿ ಹಣಕ್ಕಾಗಿ ಬೇಡಿಕೆ ಇಟ್ಟರೆ, ಜವಾಬ್ದಾರಿಯುತ ಅಧಿಕಾರಿಯನ್ನು ಶಿಕ್ಷಿಸಬೇಕು ಎಂದು ನಗರದ ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ಹೇಳಿದರು. ಆದಾಗ್ಯೂ, ಕೆಲವು ಸಂದರ್ಭಗಳಲ್ಲಿ, ಸತ್ಯವನ್ನು ಬಹಿರಂಗಪಡಿಸಲು ಮತ್ತು ಅಪರಾಧವನ್ನು ಅರ್ಥ ಮಾಡಿಕೊಳ್ಳಲು ಪೊಲೀಸರು ಕಟ್ಟುನಿಟ್ಟಾಗಿ ಕಾನೂನು ಪ್ರಕಾರ ಹೋಗಲು ಸಾಧ್ಯವಿಲ್ಲ ಎಂದು ಅವರು ಹೇಳಿದರು.

ತನಿಖಾ ಸಂಸ್ಥೆಗಳ ದುರುಪಯೋಗ ಆರೋಪ; ಯುವ ಕಾಂಗ್ರೆಸ್ ಪ್ರತಿಭಟನೆ



ಮೈಸೂರು ನಗರ ಯುವ ಕಾಂಗ್ರೆಸ್‌ನಿಂದ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಏ.21(ಎಂಕೆ)– ಕೇಂದ್ರ ಬಿಜೆಪಿ ಸರ್ಕಾರದ ದ್ವೇಷ ರಾಜಕಾರಣ ಹಾಗೂ ಐಟಿ, ಸಿಬಿಐ, ಇಡಿ ಸಂಸ್ಥೆಗಳ ದುರುಪಯೋಗ ಖಂಡಿಸಿ ಮೈಸೂರು ನಗರ ಯುವ ಕಾಂಗ್ರೆಸ್ ಸಮಿತಿ ವತಿಯಿಂದ ಸೋಮವಾರ ದಿಢೀರ್ ಪ್ರತಿಭಟನೆ ನಡೆಸಲಾಯಿತು.

ಮೈಸೂರು ತಾಲೂಕು ಕಚೇರಿ ಎದುರು ಜಮಾವಣೆಗೊಂಡ ಯುವ ಕಾಂಗ್ರೆಸ್ ಕಾರ್ಯಕರ್ತರು, ಕೇಂದ್ರ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿದರು. ಕೇಂದ್ರ ಬಿಜೆಪಿ ಸರ್ಕಾರ ಸ್ವತಂತ್ರ ತನಿಖಾ ಸಂಸ್ಥೆಗಳಾದ ಐಟಿ, ಸಿಬಿಐ ಮತ್ತು ಇಡಿ ದುರುಪಯೋಗಪಡಿಸಿಕೊಂಡು ದ್ವೇಷದ ರಾಜಕಾರಣ ಮಾಡುತ್ತಿದೆ ಎಂದು ಆಕ್ರೋಶ ಹೊರಹಾಕಿದರು.

ಕಾಂಗ್ರೆಸ್ ಪಕ್ಷದ ನಾಯಕರನ್ನು ಗುರಿಯಾಗಿಸಲು ಕೇಂದ್ರ ತನಿಖಾ ಸಂಸ್ಥೆಗಳನ್ನು ನರೇಂದ್ರ ಮೋದಿ ನೇತೃತ್ವದ ಸರ್ಕಾರ ದುರ್ಬಳಕೆ ಮಾಡಿಕೊಳ್ಳುತ್ತಿದೆ. ಇದೇ ರೀತಿ ಮುಂದುವರೆದರೆ ದೇಶದ ಜನತೆ ತನಿಖಾ ಸಂಸ್ಥೆಗಳ ಮೇಲಿನ ವಿಶ್ವಾಸ ಕಳೆದುಕೊಳ್ಳಬೇಕಾಗುತ್ತದೆ ಎಂದು ಕಿಡಿಕಾರಿದರು.

ಮೈಸೂರು ನಗರ ಯುವ ಕಾಂಗ್ರೆಸ್ ಉಪಾಧ್ಯಕ್ಷ ನೌಫಿಲ್ ಅಹಮದ್, ರಾಜ್ಯ ಕಾರ್ಯದರ್ಶಿ ಮೊಹಮ್ಮದ್ ಅಬ್ರಾರ್, ನಗರ ಕಾರ್ಯದರ್ಶಿಗಳಾದ ನಿರ್‌ಕುಶ್ರು, ಎಂ.ಪಿ.ಶ್ರೀನಿಧಿ, ಎನ್.ಆರ್.ಅಧ್ಯಕ್ಷ ಸೈಯದ್ ಸ್ಲೈನ್, ಎನ್.ಚಂದ್ರು, ವಿಷ್ಣು ಮತ್ತಿತರರಿದ್ದರು.

ಭಾರತೀಯ ಸೇನೆಯ ದಿಟ್ಟ ಕಾರ್ಯಾಚರಣೆ

ತಲೆಗೆ 1 ಕೋಟಿ ರೂ. ಬಹುಮಾನವಿದ್ದ ನಕಲ್ ಪ್ರಯಾಗ್ ಮಾಂಝಿ ಸೇರಿ 8 ಮಂದಿ ಹತ್ಯೆ!

ಬೊಕಾರೊ: ಭದ್ರತಾ ಪಡೆಗಳು ನಕ್ಸಲರ ವಿರುದ್ಧ ಪ್ರಮುಖ ಯಶಸ್ಸನ್ನು ಸಾಧಿಸಿದ್ದು ಈ ಎನ್‌ಕೌಂಟರ್‌ನಲ್ಲಿ ಎಂಟು ನಕ್ಸಲರು ಸಾವನ್ನಪ್ಪಿದ್ದಾರೆ. ಲುಗುಬುರು ಬೆಟ್ಟದ ಪ್ರದೇಶದಲ್ಲಿ ಈ ಎನ್ಕೌಂಟರ್ ನಡೆದಿದೆ. ಸ್ಥಳದಿಂದ ಮೂರು ಶಸ್ತ್ರಾಸ್ತ್ರ ಗಳನ್ನು ಸಹ ವಶಪಡಿಸಿಕೊಳ್ಳಲಾಗಿದೆ. ಪ್ರಸ್ತುತ ಪ್ರದೇಶದಲ್ಲಿ ಶೋಧ ಕಾರ್ಯಾಚರಣೆ ನಡೆಯುತ್ತಿದೆ. ಹತ್ಯೆಯಾದ ನಕ್ಸಲರ ಪೈಕಿ ತಲೆಗೆ 1 ಕೋಟಿ ರೂಪಾಯಿ ಬಹುಮಾನ ಘೋಷಿಸಲಾದ ನಕ್ಸಲ್ ಪ್ರಯಾಗ್ ಮಾಂಝಿ ಅಲಿಯಾಸ್ ವಿವೇಕ್ ಕೂಡ ಸಾವನ್ನಪ್ಪಿದ್ದಾನೆ ಎಂದು ಮೂಲಗಳು ದೃಢಪಡಿಸಿವೆ.



ಮಾಹಿತಿಯ ಪ್ರಕಾರ, ಲುಗು ಪರ್ವತದ ತಪ್ಪಲು ಸೇರಿದಂತೆ ಇಡೀ ಪ್ರದೇಶದಲ್ಲಿ ಪೊಲೀಸ್ ಶೋಧ ಕಾರ್ಯಾಚರಣೆ ನಡೆಸಲಾಗುತ್ತಿದೆ. ಇದರ ಅಡಿಯಲ್ಲಿ, ನಕ್ಸಲೀಯ ಚಟುವಟಿಕೆಗಳಿಗೆ ಸಂಬಂಧಿಸಿದ ಶಸ್ತ್ರಾಸ್ತ್ರಗಳು ಮತ್ತು ಇತರ ವಸ್ತುಗಳನ್ನು ಶೋಧಿಸಲಾಗುತ್ತಿದೆ. ಅದೇ ಸಮಯದಲ್ಲಿ, ಪೊಲೀಸರ ಭಯದಿಂದ ಅನೇಕ ನಕ್ಸಲರು ಸ್ಥಳದಿಂದ ಪಲಾಯನ ಮಾಡಿದ್ದಾರೆ. ಮಾಹಿತಿಯ ಪ್ರಕಾರ, ಈ ಎನ್ಕೌಂಟರ್ ರೀಜನಲ್ ಕಮಾಂಡರ್ ಬಿರ್ಸೆನ್ ಮತ್ತು ಏರಿಯಾ ಕಮಾಂಡರ್ ಕುನ್ವರ್ ಮಾಂಝಿ ತಂಡದೊಂದಿಗೆ ನಡೆಯಿತು. ಶೋಧ ಕಾರ್ಯಾಚರಣೆ ಇನ್ನೂ ಮುಂದುವರೆದಿದೆ ಎಂದು ಎಸ್ಪಿ ಮನೋಜ್ ಸ್ವರ್ಗಿಯಾರಿ ತಿಳಿಸಿದ್ದಾರೆ ಎನ್ಕೌಂಟರ್ ಮುಗಿದ ನಂತರವೇ ನಿಜವಾದ ಸಂಖ್ಯೆ ತಿಳಿಯಲಿದೆ. ಈ ಇಬ್ಬರ ತಂಡದಲ್ಲಿ 8 ರಿಂದ 10 ನಕ್ಸಲರು ಸೇರಿದ್ದಾರೆ ಎಂಬ ಮಾಹಿತಿ ಇತ್ತು ಎಂದು ಎಸ್ಪಿ ಹೇಳಿದರು. ಆದಾಗ್ಯೂ, ಸಂಪೂರ್ಣ ಮಾಹಿತಿ ಇನ್ನೂ ನಿರೀಕ್ಷಿಸಲಾಗುತ್ತಿದೆ.

ಕೊಪ್ಪಳ ಜಿಲ್ಲಾಧಿಕಾರಿ ಕಾರು ಜಪ್ತಿಗೆ ಕೋರ್ಟ್ ಆದೇಶ; ಕೀ ಕೊಡದೆ ಸತಾಯಿಸಿದ ಡಿಸಿ!

ಕೊಪ್ಪಳ: ಭೂಸ್ವಾಧೀನ ಪ್ರಕರಣದಲ್ಲಿ ಪರಿಹಾರ ನೀಡದ ಕೊಪ್ಪಳ ಜಿಲ್ಲಾಧಿಕಾರಿಯವರ ಅಧಿಕೃತ ಕಾರನ್ನು ಮುಟ್ಟುಗೋಲು ಹಾಕಿಕೊಳ್ಳಲು ಕೊಪ್ಪಳ ಜಿಲ್ಲೆಯ ಗಂಗಾವತಿಯ ನ್ಯಾಯಾಲಯ ಆದೇಶಿಸಿದೆ.

ಜಿಲ್ಲಾಧಿಕಾರಿ ನಳಿನ್ ಅತುಲ್ ಅವರ ವಾಹನದ ಕೀಲಿಯನ್ನು ನೀಡಲು ನಿರಾಕರಿಸಿದ್ದರಿಂದ ಕಾರನ್ನು ವಶಪಡಿಸಿಕೊಳ್ಳಲು ಹೋಗಿದ್ದ ನ್ಯಾಯಾಲಯದ ಸಿಬ್ಬಂದಿ ಮತ್ತು ವಕೀಲರು ಖಾಲಿ ಕೈಯಲ್ಲಿ ಹಿಂತಿರುಗಬೇಕಾಯಿತು. ಗಂಗಾವತಿ ನಗರಸಭೆ ವಾಲ್ಮೀಕಿ ವೃತ್ತದಿಂದ ಜಯನಗರ ಬಡಾವಣೆವರೆಗೆ ರಸ್ತೆ ಅಗಲೀಕರಣ ಮಾಡಲಾಗಿದೆ. ಈ ವೇಳೆ ಗಂಗಾವತಿಯ ಕಲ್ಮಠ ಹಾಗೂ ವೀರುಪಾಕ್ಷಪ್ಪ ಅವರ ಭೂಮಿ ಒತ್ತುವರಿ ಮಾಡಿ ರಸ್ತೆ ಅಗಲೀಕರಣ ಮಾಡಲಾಗಿದೆ. ಮಾಲೀಕರಿಗೆ ಮಾಹಿತಿ ನೀಡದೇ ರಸ್ತೆ ಅಗಲೀಕರಣ ಮಾಡಿದ್ದು, ಮತ್ತು ಪರಿಹಾರ ಕೊಡದ ಹಿನ್ನೆಲೆ ಮಾಲೀಕರು ಕೋರ್ಟ್ ಮೆಟ್ಟಿಲೇರಿದ್ದರು.

ಸುದೀರ್ಘ 6 ವರ್ಷಗಳ ಕಾಲ ವಿಚಾರಣೆ ನಡೆಸಿದ್ದ ಕೋರ್ಟ್ ಜಿಲ್ಲಾಧಿಕಾರಿಯ ಕಾರು ಜಪ್ತಿ ಮಾಡಲು ಆದೇಶ ಮಾಡಿತ್ತು.



ವಿಚಾರಣೆ ಮಾಡಿದ ಬಳಿಕ ಕಲ್ಮಠಕ್ಕೆ ಸುಮಾರು 7 ಲಕ್ಷ ರೂ., ವಿರೂಪಾಕ್ಷಪ್ಪ ಅವರಿಗೆ 6 ಲಕ್ಷ ರೂ. ಪರಿಹಾರ ನೀಡಲು ಆದೇಶ ಮಾಡಿತ್ತು. ಇದುವರೆಗೂ ಪರಿಹಾರ ಸಿಕ್ಕಿರಲಿಲ್ಲ. ಹೀಗಾಗಿ ಮಾಲೀಕರು ಮತ್ತೊಮ್ಮೆ ಕೋರ್ಟ್ ಮೊರೆ ಹೋದಾಗ ಗಂಗಾವತಿಯ ಹಿರಿಯ ಶ್ರೇಣಿಯ ನ್ಯಾಯಾಲಯ ಕಾರು ಜಪ್ತಿ ಮಾಡಲು ಆದೇಶ ನೀಡಿತ್ತು.

ಗಂಗಾವತಿ ಹಿರಿಯ ನ್ಯಾಯಾಲಯವನ್ನು ಇಬ್ಬರೂ ಸಂಪರ್ಕಿಸಿದ ನಂತರ, ನ್ಯಾಯಾಧೀಶ ರಮೇಶ್ ಎಸ್ ಗಾಣಿಗೇರ್ ಕಾರನ್ನು ವಶಪಡಿಸಿಕೊಳ್ಳಲು ಆದೇಶಿಸಿದರು. ವಕೀಲರಾದ ಸಂಜಯ್ ಬಿ ಚಾನೆಲ್, ರಾಮಣ್ಣ ಸೋದ್ರ ಮತ್ತು ಉಮೇಶ್ ಡಿ ಅವರು ಕಾರನ್ನು ವಶಪಡಿಸಿಕೊಳ್ಳಲು ಇತ್ತೀಚೆಗೆ ಜಿಲ್ಲಾಧಿಕಾರಿ ಕಚೇರಿಗೆ ತೆರಳಿದರು. ಜಿಲ್ಲಾಧಿಕಾರಿ ಕೀಲಿಗಳನ್ನು ನೀಡಲು ನಿರಾಕರಿಸಿದಾಗ, ವಕೀಲರು ವಾಹನವನ್ನು ತೆಗೆದುಕೊಂಡು ಹೋಗಲು ಪ್ರಯತ್ನಿಸಿದರು. ಆದರೆ ಕಾರನ್ನು ಸ್ಥಳಾಂತರಿಸಲು ಸಾಧ್ಯವಾಗದ ಕಾರಣ ಅವರು ಅಲ್ಲಿಂದ ಹೊರಟುಹೋದರು.

ವ್ಯಕ್ತಿ ನಾಪತ್ತೆ

ಮೈಸೂರು,ಏ.21– ಮಹೇಶ್. ಎಸ್.ಎಸ್ (32) ಎಂಬುವವರು ಏ.14 ರಂದು ನಾಪತ್ತೆಯಾಗಿದ್ದು, ಮೈಸೂರು ವರುಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ವ್ಯಕ್ತಿಯ ಬಗ್ಗೆ ಮಾಹಿತಿ ಕಂಡು ಬಂದಲ್ಲಿ ದೂ.ಸಂಖ್ಯೆ: 0821–2520040, ಕಂಟ್ರೋಲ್ ರೂಂ: 0821–2444800, ವರುಣ ಪೊಲೀಸ್ ಠಾಣೆ 0821–2594411 ನ್ನು ಸಂಪರ್ಕಿಸಬಹುದು

ಜಾತಿ ಗಣತಿಯಿಂದ ಪ್ರಬಲ ವರ್ಗಕ್ಕೂ ಅನುಕೂಲ!

ಎಂಎಲ್‌ಸಿ ಡಾ॥ ಯತೀಂದ್ರ ಸ್ಪಷ್ಟನೆ

ಮೈಸೂರು,ಏ.21(ಎಂಟಿವೈ)– ಜಾತಿ ಗಣತಿ ವರದಿ ಜಾರಿಗೊಳಿಸಿ ಪ್ರಬಲ ವರ್ಗಕ್ಕೆ ಅನ್ಯಾಯ ಮಾಡುವ ಪೂರ್ವಾಗ್ರಹ ಪೀಡಿತ ಎಂಬ ಹೇಳಿಕೆಯಲ್ಲಿ ಯಾವುದೇ ಹುರುಳಿಲ್ಲ. ಜಾತಿ ಗಣತಿಯಿಂದ ಪ್ರಬಲ ವರ್ಗಕ್ಕೂ ಅನುಕೂಲ ಆಗಲಿದ್ದು, ಯಾರಿಗೂ ಅನ್ಯಾಯವಾಗುವುದಿಲ್ಲ ಎಂದು ವಿಧಾನ ಪರಿಷತ್ ಸದಸ್ಯ ಡಾ. ಯತೀಂದ್ರ ಸ್ಪಷ್ಟಪಡಿಸಿದ್ದಾರೆ.



ಮೈಸೂರಲ್ಲಿ ಸೋಮವಾರ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಸಮೀಕ್ಷೆಯಲ್ಲಿ ಜಾತಿ ಗಣತಿ ಒಂದು ಭಾಗ ಮಾತ್ರ. ಎಲ್ಲಾ ಜಾತಿಗಳ ಜನಸಂಖ್ಯೆ, ಆರ್ಥಿಕ, ಸಾಮಾಜಿಕ, ಔದ್ಯೋಗಿಕ ಸ್ಥಿತಿಗತಿ ತಿಳಿಯಲು ಇದರಿಂದ ಸಾಧ್ಯ. ಇದೆಲ್ಲವನ್ನು ಮಾಡಿ ಮೀಸಲಾತಿ ಹೆಚ್ಚಳಕ್ಕೆ ಶಿಫಾರಸ್ಸು ಮಾಡಿದ್ದಾರೆ. ಹಿಂದುಳಿದ ವರ್ಗಕ್ಕೆ ಲಿಂಗಾಯತರು, ಒಕ್ಕಲಿಗರು ಸೇರಿಕೊಳ್ಳುತ್ತಾರೆ. ಆದರೆ, ಸರ್ಕಾರದ ವಿರುದ್ಧ ಅಪಪ್ರಚಾರ ಮಾಡುವ ಏಕೈಕ ಉದ್ದೇಶದಿಂದ ಜಾತಿ ಗಣತಿ ಕುರಿತು ಇಲ್ಲಸಲ್ಲದ ವದಂತಿ ಹಬ್ಬಿಸುತ್ತಿದ್ದಾರೆ ಎಂದರು.

ಬಿಜೆಪಿ ಸರ್ಕಾರದಲ್ಲಿ 3ಎ, 3ಬಿಗೆ ತಲಾ ಶೇ.2ರಷ್ಟು ಮೀಸಲಾತಿ ಹೆಚ್ಚಿಸಲಾಗಿತ್ತು. ಆದರೆ ಈ ಆಯೋಗ ಶೇ.3ರಷ್ಟು ಹೆಚ್ಚಳಕ್ಕೆ ಶಿಫಾರಸು ಮಾಡಿದೆ. ಶೇ.32ರಷ್ಟು ಒಬಿಸಿ ಮೀಸಲಾತಿಯನ್ನು ಶೇ. 51ಕ್ಕೆ ಹೆಚ್ಚಿಸಲು ಶಿಫಾರಸ್ಸು ಮಾಡಿದೆ. ಹೆಚ್ಚಾಗುವ ಶೇ.19 ಮೀಸಲಾತಿಯಲ್ಲಿ ಶೇ.6 ಲಿಂಗಾಯತ, ಒಕ್ಕಲಿಗರಿಗೆ ಸಿಗಲಿದೆ. ಅವರ ಜನಸಂಖ್ಯೆಗೆ ಅನುಗುಣವಾಗಿ ಹೆಚ್ಚಳ ಮಾಡಲಾಗುತ್ತಿದೆ. ಅವರಿಗೆ ಅನುಕೂಲ ಆಗುತ್ತಿದ್ದರೂ ಕೂಡ ಪೂರ್ವಾಗ್ರಹ ಪೀಡಿತರಾಗಿ ಆರೋಪ ಮಾಡುತ್ತಿದ್ದಾರೆ. ಅಪಾರ ಸಂಖ್ಯೆಯ ಶಿಕ್ಷಕರಿಂದ ಗಣತಿ ಮಾಡಿಸಲಾಗಿದೆ. ಅಷ್ಟೂ ಜನರಿಗೆ ಸಿಎಂ ಮೋಸ ಮಾಡಿ ಎಂದು ಹೇಳಲು ಆಗುತ್ತಾ. ಸಾಕ್ಷಿ ಆಧಾರ ಇಲ್ಲದೆ ಸಿಎಂ ಮೇಲೆ ಗೂಬೆ ಕೂರಿಸುವುದು ತಪ್ಪು ಎಂದು ಕಿಡಿಕಾರಿದರು.

ಸಿಎಂ ಕುರ್ಚಿ ಸುರಕ್ಷಿತ: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕುರ್ಚಿಗೆ ಯಾವ ಆಪತ್ತು ಬಂದಿಲ್ಲ. ಸಿಎಂ ಕುರ್ಚಿ ಸುರಕ್ಷಿತವಾಗಿದೆ ಮತ್ತು ಮುಡಾ ಸುಳ್ಳು ಕೇಸ್ ಹಾಕಿದಾಗಲೂ ನಮ್ಮ ಶಾಸಕರು, ಹೈಕಮಾಂಡ್ ಸಿದ್ದರಾಮಯ್ಯ ಪರ ನಿಂತಿದ್ದಾರೆ. ಕುರ್ಚಿ ಉಳಿಸಿಕೊಳ್ಳಲು ಜಾತಿ ಗಣತಿ ತಂದಿದ್ದಾರೆ ಎಂಬುದು ಸುಳ್ಳು ಎಂದರು.

ಮುಡಾ ಕೇಸ್ ಇಡಿ ತನಿಖೆ ಸಂಬಂಧ ಕೋರ್ಟ್ ಆದೇಶ ಕಾಯ್ದಿರಿಸಿದ ವಿಚಾರವಾಗಿ ಪ್ರತಿಕ್ರಿಯಿಸಿ ಮುಡಾ ಕೇಸ್‌ನಲ್ಲಿ ಏನೂ ಸತ್ಯಾಂಶ ಇಲ್ಲ ಅದಕ್ಕಾಗಿ ಸಿದ್ದರಾಮಯ್ಯ ಹೆದರಬೇಕಾದ ಅವಶ್ಯಕತೆ ಇಲ್ಲ. ಇಡಿ ಬೇಕಂತಲೇ ಕಿರುಕುಳ ಕೊಡುತ್ತಿದ್ದಾರೆ. ನಾವು ಕಾನೂನಾತ್ಮಕ ಹೋರಾಟ ಮುಂದುವರೆಸುತ್ತೇವೆ ನಾವು ತಪ್ಪು ಮಾಡಿಲ್ಲ. ಹಾಗಾಗಿ ಹೆದರುವ ಪ್ರಶ್ನೆ ಇಲ್ಲ. ಬಿಜೆಪಿ ತನಿಖಾ ಸಂಸ್ಥೆಗಳನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ. ಎಲ್ಲೆಲ್ಲಿ ಬಿಜೆಪಿಯೇತರ ಸರ್ಕಾರಗಳಿವೆ, ಅಲ್ಲಿ ತೊಂದರೆ ಕೊಡುತ್ತಲೇ ಬಂದಿದ್ದಾರೆ ಎಂದು ಆರೋಪಿಸಿದರು. ಜನಿವಾರ ತೆಗೆಸಿದವರ ಮೇಲೆ ಈಗಾಗಲೇ ಕ್ರಮ ತೆಗೆದುಕೊಳ್ಳಲಾಗಿದೆ. ವಿದ್ಯಾರ್ಥಿಗೆ ಸೂಕ್ತ ವ್ಯವಸ್ಥೆ ಮಾಡಿಕೊಡಲಾಗುತ್ತದೆ. ಇದರಲ್ಲಿ ಬಿಜೆಪಿ ರಾಜಕೀಯ ಮಾಡುವ ಅವಶ್ಯಕತೆ ಇಲ್ಲ ಎಂದರು.

ಕನ್ನಡಿಗನಿಂದ ಹಲ್ಲೆ ಕಥೆ ಕಟ್ಟಿದ ವಿಂಗ್ ಕಮಾಂಡರ್

ತಾನೇ ಬೈಕ್ ಸವಾರನ ಮೇಲೆ ಮಾರಣಾಂತಿಕ ಹಲ್ಲೆ ಮಾಡಿದ್ದ

ಬೆಂಗಳೂರು: ಬೆಂಗಳೂರಿನ ಐಎಎಫ್ ಅಧಿಕಾರಿ ಮೇಲೆ ಕನ್ನಡಿಗನು ಹಲ್ಲೆ ಮಾಡಿದ್ದ ಪ್ರಕರಣಕ್ಕೆ ದೊಡ್ಡ ಟ್ವಿಸ್ಟ್ ಸಿಕ್ಕಿದೆ. ಬೈಕ್ ಸವಾರನ ಮೇಲೆಯೇ ವಿಂಗ್ ಕಮಾಂಡರ್ ಬಾಕ್ಸರ್‌ನಂತೆ ಮಾರಣಾಂತಿಕ ಹಲ್ಲೆ ಮಾಡಿರುವ ವಿಡಿಯೋ ಇದೀಗ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದೆ. ವಿಂಗ್ ಕಮಾಂಡರ್ ಶೀಲಾಧಿತ್ಯ ಬೋಸ್ ಬೈಕ್ ಸವಾರನ ಮೇಲೆ ಮನಸೋ ಇಚ್ಛೆ ಹಲ್ಲೆ ಮಾಡಿದ್ದು ನಂತರ ಕನ್ನಡ ಭಾಷೆ ವಿಚಾರಕ್ಕೆ ತನ್ನ ಮೇಲೆ ಹಲ್ಲೆ ಅಂತ ಸುಳ್ಳು ಆರೋಪ ಮಾಡಿರುವುದು ಇದೀಗ ಸಿಸಿಟಿವಿ ದೃಶ್ಯಾವಳಿಗಳಿಂದ ಬೆಳಕಿಗೆ ಬಂದಿದೆ.

ಭಾರತೀಯ ವಾಯುಪಡೆಯ ಅಧಿಕಾರಿ ಶಿಲಾಧಿತ್ಯ ಬೋಸ್ ತಮ್ಮ ಪತ್ನಿಯೊಂದಿಗೆ ವಿಮಾನ ನಿಲ್ದಾಣಕ್ಕೆ ತೆರಳುತ್ತಿದ್ದಾಗ ಈ ಘಟನೆ ನಡೆದಿತ್ತು. ಸ್ಕ್ವಾಡ್ರನ್ ಲೀಡರ್ ಪತ್ನಿ ಮಧುಮಿತಾ ದತ್ತಾ ಅವರು ನೀಡಿದ ದೂರಿನ ಆಧಾರದ ಮೇಲೆ, ಅಪರಿಚಿತ ವ್ಯಕ್ತಿಗಳ ವಿರುದ್ಧ ಬೈಯಪ್ಪನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿತ್ತು. ಇದರ ಬೆನ್ನಲ್ಲೇ ಕಾರ್ಯಾಚರಣೆ ಕೈಗೊಂಡಿದ್ದ ಬೈಯಪ್ಪನಹಳ್ಳಿ ಪೊಲೀಸರು ಆರೋಪಿಯನ್ನು ಬಂಧಿಸಿ ಆತನ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ ಎಂದು ಪೂರ್ವ ವಿಭಾಗದ ಡಿಸಿಪಿ ಡಿ. ದೇವರಾಜ ತಿಳಿಸಿದ್ದಾರೆ.



ಬೈಕ್ ಸವಾರನ ಮೇಲೆ ಹಲ್ಲೆ, ಶೀಲಾಧಿತ್ಯ ಬೋಸ್

ದ್ವಿಚಕ್ರ ವಾಹನದಲ್ಲಿ ಹಿಂಬಾಲಿಸಿಕೊಂಡು ಬಂದು ನಡುವೆ ರಸ್ತೆಯಲ್ಲಿ ನಮ್ಮ ಮೇಲೆ ಹಲ್ಲೆ ನಡೆಸಿ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ ಎಂದು ವಿಂಗ್ ಕಮಾಂಡರ್ ಶಿಲಾಧಿತ್ಯ ಬೋಸ್ ಆರೋಪಿಸಿದ್ದಾರೆ. ಗಾಯಗೊಂಡು ರಕ್ತ ಸುರಿಯುತ್ತಿರುವಾಗಲೇ ಬೋಸ್ ವಿಡಿಯೋ ಮಾಡಿದ್ದು ಘಟನೆ ಕುರಿತು ವಿವರಿಸಿದ್ದರು. ಅಲ್ಲದೆ ಆ ವಿಡಿಯೋವನ್ನು ಇನ್‌ಸ್ಟಾಗ್ರಾಮ್‌ನಲ್ಲಿ ಹಂಚಿಕೊಂಡಿದ್ದರು.

ವಿಡಿಯೋದಲ್ಲಿ ನಾವು ಸಿವಿ ರಾಮನ್ ನಗರ ಹಂತ 1ರಲ್ಲಿ ಇರುವ ಡಿಆರ್‌ಡಿಒನಲ್ಲಿ ವಾಸಿಸುತ್ತಿದ್ದೇವೆ. ಇಂದು ಬೆಳಿಗ್ಗೆ, ನನ್ನ ಹೆಂಡತಿ ನನ್ನನ್ನು ವಿಮಾನ ನಿಲ್ದಾಣಕ್ಕೆ ಕರೆದೊಯ್ಯುತ್ತಿದ್ದಾಗ ಹಿಂದಿನಿಂದ ಬಂದ ಬೈಕ್ ನಮ್ಮ ಕಾರನ್ನು ಅಡ್ಡಗಟ್ಟಿತ್ತು. ನಾನು ಡ್ಯಾಶ್ ಕ್ಯಾಮ್ ದೃಶ್ಯಾವಳಿಯನ್ನು ಸಹ ಹಂಚಿಕೊಳ್ಳುತ್ತೇನೆ. ಸವಾರರಲ್ಲಿ ಒಬ್ಬರು ಕನ್ನಡದಲ್ಲಿ ನನ್ನನ್ನು ನಿಂದಿಸಲು ಪ್ರಾರಂಭಿಸಿದರು. ನನ್ನ ಕಾರಿನ ಮೇಲೆ ಡಿಆರ್‌ಡಿಒ ಸ್ಟಿಕ್ಕರ್ ಅನ್ನು ಗಮನಿಸಿ, 'ನೀವು ಡಿಆರ್‌ಡಿಒ ಜನರು' ಎಂದು ಹೇಳಿದರು. ನಂತರ ಕನ್ನಡದಲ್ಲಿ ಇನ್ನಷ್ಟು ನಿಂದನೆಗಳು ಮುಂದುವರೆದವು. ನಂತರ ಅವನು ನನ್ನ ಹೆಂಡತಿಯನ್ನು ನಿಂದಿಸಿದನು. ನನಗೆ ಅದನ್ನು ಸಹಿಸಲಾಗಲಿಲ್ಲ ಎಂದು ಅವರು ವೀಡಿಯೊದಲ್ಲಿ ಆರೋಪಿಸಿದ್ದಾರೆ.

ಹಲ್ಲೆಯನ್ನು ವಿವರಿಸುತ್ತಾ, ಬೋಸ್, ನಾನು ಕಾರಿನಿಂದ ಇಳಿದ ತಕ್ಷಣ, ಅವನು ತನ್ನ ಬೈಕ್ ಕೀನಿಂದ ನನ್ನ ಹಣೆಗೆ ಹೊಡೆದನು. ನಾನು ಅಲ್ಲಿಯೇ ನಿಂತು ಕೂಗುತ್ತಾ ಜನರು ಸೈನ್ಯ ಅಥವಾ ರಕ್ಷಣಾ ಪಡೆಗಳ ಯಾರನ್ನಾದರೂ ಹೀಗೆ ನಡೆಸಿಕೊಳ್ಳುತ್ತಾರೆಯೇ ಎಂದು ಕೇಳಿದೆ. ಈ ವೇಳೆ ಹೆಚ್ಚಿನ ಜನ ಸೇರಿದ್ದು ನಮ್ಮನ್ನೇ ನಿಂದಿಸಲು ಪ್ರಾರಂಭಿಸಿದರು. ಇನ್ನು ಅಷ್ಟಕ್ಕೆ ಸುಮ್ಮನಾಗದ ಆ ವ್ಯಕ್ತಿ ಕಲ್ಲನ್ನು ಎತ್ತಿಕೊಂಡು ನನ್ನ ಕಾರಿಗೆ ಹಾನಿ ಮಾಡಲು ಪ್ರಯತ್ನಿಸಿದನು. ನಾನು ಅವನನ್ನು ತಡೆಯಲು ಪ್ರಯತ್ನಿಸಿದಾಗ, ಅವನು ಮತ್ತೆ ನನಗೆ ಹೊಡೆದನು. ನನ್ನ ಮುಖದಿಂದ ರಕ್ತ ಸೋರುತ್ತಿರುವುದನ್ನು ನೋಡಬಹುದು. ಇದೇ ನಡೆದಿದ್ದು, ಅದೃಷ್ಟವಶಾತ್, ನನ್ನ ಹೆಂಡತಿ ನನ್ನನ್ನು ಅಲ್ಲಿಂದ ಕರೆದುಕೊಂಡು ಹೋದಳು.

ಈ ಸಂಬಂಧ ಪೊಲೀಸ್ ಠಾಣೆಗೆ ದೂರು ನೀಡಲು ಹೋದರೆ ಅಲ್ಲಿ ನಮಗೆ ತಕ್ಷಣದ ಸಹಾಯ ಸಿಗಲಿಲ್ಲ. ಕರ್ನಾಟಕ ಯಾಕೆ ಹೀಗಾಯಿತು. ನಾನು ಈ ಸ್ಥಿತಿಯನ್ನು ಕೇಳಿದ್ದೆ ಆದರೆ ಇಂದಿನ ಘಟನೆಯ ನಂತರ, ನಾನು ಆಘಾತಕ್ಕೊಳಗಾಗಿದ್ದೇನೆ. ದೇವರು ನಮಗೆ ಸಹಾಯ ಮಾಡಲಿ. ಪ್ರತಿಕಾರ ತೀರಿಸಿಕೊಳ್ಳದಿರಲು ದೇವರು ನನಗೆ ಶಕ್ತಿಯನ್ನು ನೀಡಲಿ. ಆದರೆ ಕಾನೂನು ಮತ್ತು ಸುವ್ಯವಸ್ಥೆ ವಿಫಲವಾದರೆ, ನಾನು ಪ್ರತೀಕಾರ ತೀರಿಸಿಕೊಳ್ಳುತ್ತೇನೆ ಎಂದು ಬೋಸ್ ವೀಡಿಯೊದಲ್ಲಿ ಆರೋಪಿಸಿದ್ದಾರೆ.

ನಿಖರವಾದ ಸ್ಥಳವನ್ನು ಇನ್ನೂ ಅಧಿಕೃತವಾಗಿ ದೃಢೀಕರಿಸಲಾಗಿಲ್ಲವಾದರೂ, ಸಿವಿ ರಾಮನ್ ನಗರದಿಂದ ವಿಮಾನ ನಿಲ್ದಾಣಕ್ಕೆ ಹೋಗುವ ಮಾರ್ಗದಲ್ಲಿ ಘಟನೆ ಸಂಭವಿಸಿದೆ ಎಂದು ಅಧಿಕಾರಿ ಹೇಳಿದ್ದಾರೆ. ನಂತರ ಪೋಸ್ಟ್ ಮಾಡಿದ ಎರಡನೇ ವೀಡಿಯೊದಲ್ಲಿ, ಬೋಸ್ ತನ್ನ ಅನಾರೋಗ್ಯ ಪೀಡಿತ ತಂದೆಯನ್ನು ಭೇಟಿ ಮಾಡಲು ಕೋಲ್ಕತ್ತಾಗೆ ಹೋಗುತ್ತಿದ್ದೇನೆ ಎಂದು ಬಹಿರಂಗಪಡಿಸಿದ್ದಾರೆ. ಹಲ್ಲೆಯನ್ನು "ಆಘಾತಕಾರಿ" ಘಟನೆ ಎಂದು ಹೇಳಿದ್ದರು.

ಚಿಕ್ಕರಾಚೇಗೌಡ ನಿಧನ



ಮೈಸೂರು, ಏ. 21– ಮೈಸೂರಿನ ವಿಜಯನಗರ 4ನೇ ಹಂತದ ನಿವಾಸಿ ಚಿಕ್ಕರಾಚೇಗೌಡ(90) ಅವರು ಸೋಮವಾರ ಸಂಜೆ ನಿಧನರಾದರು.

ಮೃತರು ಪತ್ನಿ, ಪುಟ್ಟಚಿನ್ನಮ್ಮ, ಮೂವರು ಪುತ್ರರು, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧುವರ್ಗವನ್ನು ಅಗಲಿದ್ದು, ಅಂತ್ಯಕ್ರಿಯೆ ನಾಳೆ (ಏ. 22) ಮಧ್ಯಾಹ್ನ 12 ಗಂಟೆಗೆ ಅವರ ಸ್ವಗ್ರಾಮ ಸಾಹುಕಾರಹುಂಡಿಯಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಮಿತ್ರ

ಪ್ರತ್ಯೇಕ ಅಪಘಾತ: ಇಬ್ಬರು ಸ್ಥಳದಲ್ಲೇ ಸಾವು

ನಂಜನಗೂಡು, ಏ.21– ಪ್ರತ್ಯೇಕ ಪ್ರಕರಣಗಳಲ್ಲಿ ಇಬ್ಬರು ಸಾವನ್ನಪ್ಪಿದ್ದಾರೆ.



ಗೋವಿಂದನಾಯಕ

ವ್ಯಕ್ತಿ ಸಾವು: ರಸ್ತೆ ಬದಿ ಬೈಕ್ ನಿಲ್ಲಿಸಿಕೊಂಡು ನಿಂತಿದ್ದ ವ್ಯಕ್ತಿಗೆ ಕಾರು ಡಿಕ್ಕಿ ಹೊಡೆದ ಪರಿಣಾಮ ಆತ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ತಾಲೂಕಿನ ತರಗನಹಳ್ಳಿಯಲ್ಲಿ ನಡೆದಿದೆ.

ಗ್ರಾಮದ ನಿವಾಸಿ ಗೋವಿಂದನಾಯಕ (34) ಸಾವನ್ನಪ್ಪಿದವರು. ಈತ ಸೋಮವಾರ ಬೆಳಗ್ಗೆ ಗ್ರಾಮದ ಮುಖ್ಯರಸ್ತೆ ಬದಿ ಬೈಕ್ ನಿಲ್ಲಿಸಿಕೊಂಡು ನಿಂತಿದ್ದ ವೇಳೆ ವೇಗವಾಗಿ ಬಂದ ಕಾರು ಡಿಕ್ಕಿ ಹೊಡೆದ ಪರಿಣಾಮ ತೀವ್ರ ಗಾಯಗೊಂಡು ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ. ಘಟನೆ ಬಳಿಕ ಚಾಲಕ ಸ್ಥಳದಲ್ಲೇ ಕಾರು ಬಿಟ್ಟು ಪರಾರಿಯಾಗಿದ್ದಾನೆ. ಸ್ಥಳಕ್ಕಾಗಮಿಸಿದ ಹುಲ್ಲಹಳ್ಳಿ ಠಾಣೆ ಎಸ್ಐ ಚೇತನ್, ಸಿಬ್ಬಂದಿ ಶವವನ್ನು ಆಸ್ಪತ್ರೆಗೆ ರವಾನಿಸಿ ಮರಣೋತ್ತರ ಪರೀಕ್ಷೆ ಬಳಿಕ ವಾರಸುದಾರರಿಗೆ ಹಸ್ತಾಂತರಿಸಿದರು. ಈ ಸಂಬಂಧ ಹುಲ್ಲಹಳ್ಳಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಪತ್ನಿ ಸಾವು, ಪತಿಗೆ ಗಾಯ: ಸ್ಕೂಟರ್‌ಗೆ ಲಾರಿ ಡಿಕ್ಕಿ ಹೊಡೆದ ಪರಿಣಾಮ ಪತ್ನಿ ಸ್ಥಳದಲ್ಲೇ ಸಾವನ್ನಪ್ಪಿ, ಬೈಕ್ ಚಾಲನೆ ಮಾಡುತ್ತಿದ್ದ ಪತಿ ತೀವ್ರ ಗಾಯಗೊಂಡಿರುವ ಘಟನೆ ನಗರದಲ್ಲಿ ನಡೆದಿದೆ.



ಭವಾನಿ

ತಾಲೂಕಿನ ಬದನವಾಳು ಗ್ರಾಮದ ನಿವಾಸಿ ಹಾಗೂ ಎಟಿ & ಎಸ್ ಕಾರ್ಖಾನೆ ಉದ್ಯೋಗಿ ಭವಾನಿ(37) ಸಾವನ್ನಪ್ಪಿದವರು. ಇವರ ಪತಿ, ರಿಷಿ ಕಾರ್ಖಾನೆ ಉದ್ಯೋಗಿ ಮಹೇಶ್(45) ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಕಾರ್ಯನಿಮಿತ್ತ ತಮ್ಮ ಡಿಯೋ ಸ್ಕೂಟರ್‌ನಲ್ಲಿ ನಂಜನಗೂಡಿಗೆ ಆಗಮಿಸಿದ್ದ ದಂಪತಿ ನಗರದ ಆರ್.ಪಿ.ರಸ್ತೆಯ 15ನೇ ತಿರುವಿನಲ್ಲಿ ತೆರಳುತ್ತಿದ್ದ ವೇಳೆ ಪಡಿತರ ಅಕ್ಕಿ ಸಾಗಾಣಿಕೆ ಮಾಡುವ ಲಾರಿ ಸ್ಕೂಟರ್‌ಗೆ ಡಿಕ್ಕಿ ಹೊಡೆದ ಪರಿಣಾಮ ರಸ್ತೆ ಬಲ ಭಾಗಕ್ಕೆ ಭವಾನಿ ಬಿದ್ದಿದ್ದಾರೆ. ಈ ವೇಳೆ ಆಕೆ ಲಾರಿ ಚಕ್ರಕ್ಕೆ ಸಿಲುಕಿ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಅಪಘಾತದ ರಭಸಕ್ಕೆ ಸವಾರ ಮಹೇಶ್ ಕಾಲು ನುಜ್ಜುಗುಜ್ಜಾಗಿತ್ತು. ಸ್ಥಳಕ್ಕಾಗಮಿಸಿದ ಸಂಚಾರ ಠಾಣೆ ಪೊಲೀಸರು ಪರಿಶೀಲಿಸಿ, ಲಾರಿ ಮತ್ತು ಚಾಲಕನನ್ನು ವಶಕ್ಕೆ ಪಡೆದು ಶವವನ್ನು ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಿ ಮರಣೋತ್ತರ ಪರೀಕ್ಷೆ ಬಳಿಕ ವಾರಸುದಾರರಿಗೆ ಹಸ್ತಾಂತರಿಸಿದರು. ಈ ಸಂಬಂಧ ಸಂಚಾರಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಶಿಷ್ಟಾಚಾರದಂತೆ ಬಸವ, ಭಗೀರಥ ಜಯಂತಿ ಆಚರಣೆ

ಪೂರ್ವಭಾವಿ ಸಭೆಯಲ್ಲಿ ನಿರ್ಧಾರ

ತಿ.ನರಸೀಪುರ, ಏ.21– ತಾಲೂಕು ಆಡಳಿತದಿಂದ ಶಿಷ್ಟಾಚಾರದಂತೆ ಏ.30ರಂದು ಬಸವ ಹಾಗೂ ಮೇ 4 ರಂದು ಭಗೀರಥ ಜಯಂತಿ ಆಚರಿಸಲು ಸೋಮವಾರ ನಡೆದ ಪೂರ್ವಭಾವಿ ಸಭೆಯಲ್ಲಿ ನಿರ್ಧರಿಸಲಾಯಿತು.

ಪಟ್ಟಣದ ತಾಪಂ ಸಭಾಂಗಣದಲ್ಲಿ ನಡೆದ ಬಸವ ಹಾಗೂ ಭಗೀರಥ ಜಯಂತಿ ಪೂರ್ವಭಾವಿ ಸಭೆಯಲ್ಲಿ ನಿಗದಿತ ದಿನಗಳಲ್ಲಿ ಇಬ್ಬರು ಮಹಾನ್ ನಾಯಕರ ಜಯಂತಿಯನ್ನು, ಸಮುದಾಯಗಳ, ಸಂಘ ಸಂಸ್ಥೆಗಳ ಸಹಭಾಗಿತ್ವದಲ್ಲಿ ಸರ್ಕಾರದ ಮಾರ್ಗಸೂಚಿ ಅನ್ವಯ ನಡೆಸಲು ತೀರ್ಮಾನಿಸಲಾಯಿತು.

ತಹಸೀಲ್ದಾರ್ ಟಿ.ಜಿ.ಸುರೇಶಾಚಾರ್ ಮಾತನಾಡಿ, ತಾಪಂ ಸಭಾಂಗಣದಲ್ಲಿ ಏ.30 ರಂದು ವಚನಗಳ ಮೂಲಕ ಸಾಮಾಜಿಕ ಸಮಾನತೆಗಾಗಿ ಜಾಗೃತಿ ಮೂಡಿಸಿದ ಜಗಜ್ಯೋತಿ ಶ್ರೀಬಸವೇಶ್ವರ ಜಯಂತಿಯನ್ನು ಆಚರಿಸಲಾಗುವುದು. ಮೇ 4 ರಂದು ತನ್ನ ತಪಸ್ಸಿನ ಮೂಲಕ ಶಿವನ ವರ ಪಡೆದು ದೇವಗಂಗೆಯನ್ನು ಧರೆಗಿಳಿಸಿದ ಭಗೀರಥರ ಜಯಂತಿಯನ್ನು ವಾಡಿಕೆಯಂತೆ ಆಚರಿಸಲಾಗುವುದು. ಸದರಿ ಕಾರ್ಯಕ್ರಮಗಳಿಗೆ ರಾಜ್ಯ ಸರ್ಕಾರ ಅನುದಾನ ಇನ್ನೂ ಬಿಡುಗಡೆ ಮಾಡಿಲ್ಲ ಎಂದು ತಿಳಿಸಿದರು.



ಸಭೆಯಲ್ಲಿ ತಹಸೀಲ್ದಾರ್ ಟಿ.ಜಿ.ಸುರೇಶಾಚಾರ್ ಮಾತನಾಡಿದರು.

ಜಯಂತಿ ಆಚರಣೆಗೆ ಅನುದಾನ ಪ್ರಸ್ತಾಪಿಸಿದ ತಹಸೀಲ್ದಾರ್ ಹೇಳಿಕೆಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ವಕೀಲರ ಸಂಘದ ಅಧ್ಯಕ್ಷ ತೊಟ್ಟವಾಡಿ ಮಹದೇವಸ್ವಾಮಿ, ಸರ್ಕಾರ ಯಾವುದೇ ಅನುದಾನ ನೀಡದಿದ್ದ ಮೇಲೆ ಜಯಂತಿಗೆ ಖರ್ಚಾಗುವ ವೆಚ್ಚವನ್ನು ವೀರಶೈವ ಲಿಂಗಾಯತ ಮಹಾಸಭಾದಿಂದಲೇ ಮಾಡುತ್ತೇವೆ. ಹೂ, ಹಣ್ಣು, ಪೂಜಾ ಸಾಮಗ್ರಿಗಳನ್ನು ನಾವೇ ತರುತ್ತೇವೆ. ತಾಲೂಕು ಆಡಳಿತ ಆಗಮಿಸಿ ಬಸವೇಶ್ವರರ ಭಾವಚಿತ್ರಕ್ಕೆ ಗೌರವ ಸಲ್ಲಿಸಿ ಎಂದು ತರಾಟೆಗೆ ತೆಗೆದುಕೊಂಡರು. ಸಭೆಯಲ್ಲಿದ್ದ ಉಪ್ಪಾರ ಸಮುದಾಯದ ಮುಖಂಡರು ಕೂಡ ಭಗೀರಥ ಜಯಂತಿಯ ಖರ್ಚು ವೆಚ್ಚಗಳನ್ನು ನಾವೇ ಭರಿಸುತ್ತೇವೆ. ಅಧಿಕಾರಿಗಳು ಬಂದು ಜಯಂತಿ ಆಚರಣೆಯಲ್ಲಿ ಭಾಗವಹಿಸಬೇಕೆಂದು ಧ್ವನಿಗೂಡಿಸಿದರು.

ಸಭೆಯಲ್ಲಿ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಸಿ.ಎಂ.ಪ್ರಕಾಶ್, ಉಪಾಧ್ಯಕ್ಷ ಎಸ್.ಕೆ.ಕಿರಣ್, ಕೋಶಾಧ್ಯಕ್ಷ ನಂಜುಂಡಸ್ವಾಮಿ, ಪ್ರಧಾನ ಕಾರ್ಯದರ್ಶಿ ಶಿವಶಂಕರ್, ಕಾರ್ಯದರ್ಶಿಗಳಾದ ಮಲ್ಲಪ್ಪ, ಪರಮೇಶ್ ಪಟೇಲ್, ಯುವ ಘಟಕದ ಅಧ್ಯಕ್ಷ ಅಶೋಕ್, ಪ್ರಧಾನ ಕಾರ್ಯದರ್ಶಿ ರಘು, ಮಹಿಳಾ ಘಟಕದ ಅಧ್ಯಕ್ಷ ರೂಪಶ್ರೀ ಪರಮೇಶ್, ಶ್ರೀಶಿವಕುಮಾರಸ್ವಾಮಿ ಸೇವಾ ಟ್ರಸ್ಟ್ ಅಧ್ಯಕ್ಷ ನಿಂಗಪ್ಪ, ಅಂಬೇಡ್ಕರ್ ಅಭಿವೃದ್ಧಿ ಸಂಘದ ಅಧ್ಯಕ್ಷ ಮಹದೇವಯ್ಯ, ಬಾಬು ಜಗಜೀವನ್ ರಾಂ ಸಂಘದ ಅಧ್ಯಕ್ಷ ಪುಟ್ಟಯ್ಯ, ಮಾಜಿ ಅಧ್ಯಕ್ಷ ಮೂಗೂರು ಸಿದ್ದರಾಜು, ತಾಪಂ ಮಾಜಿ ಉಪಾಧ್ಯಕ್ಷ ಬಿ.ಮರಯ್ಯ, ಪುರಸಭಾ ಮಾಜಿ ಸದಸ್ಯ ಎನ್.ಲೋಕೇಶ್, ಸಿ.ಪುಟ್ಟಮಲ್ಲಯ್ಯ, ಬಿ.ಮನ್ಸೂರ್ ಆಲಿ, ತಾಪಂ ಮಾಜಿ ಸದಸ್ಯ ಚಂದ್ರಶೇಖರ್, ಮೂಗೂರು ಗ್ರಾಪಂ ಉಪಾಧ್ಯಕ್ಷೆ ಭಾಗ್ಯಮ್ಮ, ಕುಮಾರಸ್ವಾಮಿ, ಅಕ್ಬರ್, ಮುಖಂಡರಾದ ಕೆಇಬಿ ಸಿದ್ದಲಿಂಗಸ್ವಾಮಿ, ಗ್ರಾಪಂ ಅಧ್ಯಕ್ಷ ಮಾಜಿ ಮರಿಸ್ವಾಮಿ, ಪ್ರಭುಸ್ವಾಮಿ, ನಟರಾಜು, ಮಲ್ಲು, ತೊಂಟೇಶ್, ಶಿವಕುಮಾರ್, ಮಾದೇಶ್, ಭಗೀರಥ ಉಪ್ಪಾರ ಸಂಘದ ಸಿದ್ದಶೆಟ್ಟಿ, ರಾಮಶೆಟ್ಟಿ, ಮಣಿಕಂಠ, ಸುಶೀಲ, ತ್ರಿವೇಣಿ, ಪೊಲೀಸ್ ಉಪ ನಿರೀಕ್ಷಕ ಜಗದೀಶ್ ಧೂಳಶೆಟ್ಟಿ, ತಾಲೂಕು ಆರೋಗ್ಯ ಅಧಿಕಾರಿ ಡಾ.ರವಿಕುಮಾರ್, ಆರ್‌ಡಿಪಿ ತಾಂತ್ರಿಕ ಉಪ ವಿಭಾಗದ ಎಇಇ ಪಿ.ಎನ್.ಚರಿತ, ಬನ್ನೂರು ಪುರಸಭಾ ಮುಖ್ಯಾಧಿಕಾರಿ ಹೇಮಂತ್‌ರಾಜ್, ಚೆಸ್ಕಾಂ ಎಇಇ ವೀರೇಶ್, ತಾಪಂ ಯೋಜನಾಧಿಕಾರಿ ರಂಗಸ್ವಾಮಿ, ಪಿಡಬ್ಲ್ಯೂಡಿ ಎಇಇ ಸತೀಶ್ ಚಂದ್ರನ್, ಪುರಸಭೆ ವ್ಯವಸ್ಥಾಪಕ ಮಹೇಂದ್ರ, ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗದ ಎಇಇ ಶಿವರಾಜು, ರೇಷ್ಮೆ ಇಲಾಖೆ ಪ್ರಭಾಕರ್ ಹಾಗೂ ಇತರರಿದ್ದರು.

ಅರ್ಹರಿಗೆ ಸಕಾಲಕ್ಕೆ ಸರ್ಕಾರಿ ಯೋಜನೆಗಳನ್ನು ತಲುಪಿಸಿ

ಅಧಿಕಾರಿಗಳಿಗೆ ತಾಪಂ ಆಡಳಿತಾಧಿಕಾರಿ ಕೆ.ವಿ.ಪ್ರಭುಸ್ವಾಮಿ ಸೂಚನೆ

ಕೆ.ಆರ್.ನಗರ, ಏ.21– ಸರ್ಕಾರದ ಯೋಜನೆಗಳನ್ನು ಸಕಾಲಕ್ಕೆ ಅರ್ಹ ಫಲಾನುಭವಿಗಳ ಮನೆ ಬಾಗಿಲಿಗೆ ತಲುಪಿಸುವ ಪ್ರಾಮಾಣಿಕ ಕೆಲಸವನ್ನು ಅಧಿಕಾರಿಗಳು ಮಾಡಬೇಕು ಎಂದು ತಾಪಂ ಆಡಳಿತಾಧಿಕಾರಿ ಕೆ.ವಿ.ಪ್ರಭುಸ್ವಾಮಿ ತಿಳಿಸಿದರು.

ಪಟ್ಟಣದ ತಾಪಂ ಕೃಷ್ಣರಾಜೇಂದ್ರ ಸಭಾಂಗಣದಲ್ಲಿ ಸೋಮವಾರ ನಡೆದ ಸಾಮಾನ್ಯ ಸಭೆಯಲ್ಲಿ ಮಾತನಾಡಿದ ಅವರು, ನಿಗದಿತ ಅವಧಿಯೊಳಗೆ ಯೋಜನೆಗಳನ್ನು ಅನುಷ್ಠಾನಗೊಳಿಸದಿದ್ದರೆ ಅಂತಹವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದರು.

ಸರ್ಕಾರಿ ನೌಕರರು ಮತ್ತು ಸಂಘ ಸಂಸ್ಥೆಗಳ ಪ್ರತಿನಿಧಿಗಳು ಪರಸ್ಪರ ಕೈಜೋಡಿಸಿ ಪ್ರಧಾನಮಂತ್ರಿ ಸುರಕ್ಷಾ ಯೋಜನೆಗೆ ನೋಂದಣಿ ಮಾಡಿಸಿ ಜನರಿಗೆ ಅನುಕೂಲ ಕಲ್ಪಿಸಿಕೊಡಬೇಕು ಎಂದು ಸಲಹೆ ನೀಡಿದರು.



ಸಭೆಯಲ್ಲಿ ತಾಪಂ ಆಡಳಿತಾಧಿಕಾರಿ ಕೆ.ವಿ.ಪ್ರಭುಸ್ವಾಮಿ ಮಾತನಾಡಿದರು.

ಸಾಲಿಗ್ರಾಮ ಮತ್ತು ಕೆ.ಆರ್.ನಗರ ತಾಲೂಕು ವ್ಯಾಪ್ತಿಯ ಎಲ್ಲಾ ಅಂಗನವಾಡಿ ಕೇಂದ್ರಗಳನ್ನು ಸ್ವಚ್ಛವಾಗಿಟ್ಟುಕೊಳ್ಳುವುದರ ಜೊತೆಗೆ ಸುತ್ತಮುತ್ತಲ ಪ್ರದೇಶವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕೆಂದು ಸೂಚಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿಗಳು ಮಿಂಚಿನ ಸಂಚಾರ ನಡೆಸಿ ಸರ್ಕಾರಿ ಶಾಲೆಗಳನ್ನು ಬಿಟ್ಟಿರುವ ಮಕ್ಕಳನ್ನು ಗುರುತಿಸಿ ಮರು ದಾಖಲೆ ಮಾಡಬೇಕೆಂದು ನುಡಿದ ಆಡಳಿತಾಧಿಕಾರಿಗಳು ಈ ವಿಚಾರದಲ್ಲಿ ನಾನು ಎಲ್ಲಾ ರೀತಿಯ ಸಹಕಾರ ನೀಡುತ್ತೇನೆ ಎಂದು ಭರವಸೆ ನೀಡಿದರು.

ಎರಡೂ ತಾಲೂಕಿನ ವ್ಯಾಪ್ತಿಯ ಕೆಲವು ಗ್ರಾಮಗಳಲ್ಲಿ ಮಾದರಿ ಅಂಗನವಾಡಿ ಕೇಂದ್ರಗಳ ಕಟ್ಟಡವನ್ನು ಮಾದರಿ ಎಂದು ನಿರ್ಮಾಣ ಮಾಡುತ್ತಿದ್ದರೂ ಅವುಗಳು ಮೂಲ ಆಶಯಕ್ಕೆ ತದ್ವಿರುದ್ಧವಾಗಿದ್ದು ಸಿಡಿಪಿಓ ಈ ಬಗ್ಗೆ ಗಮನ ಹರಿಸಬೇಕೆಂದರು.

ತಾಪಂ ಇಓ ವಿ.ಪಿ.ಕುಲದೀಪ್, ಎ.ಎನ್.ರವಿ, ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಕೆ.ಜೆ.ಮಲ್ಲಿಕಾರ್ಜುನ್, ತಾಲೂಕು ಆರೋಗ್ಯಾಧಿಕಾರಿ ಡಾ.ಡಿ.ನಟರಾಜು, ಬಿಇಓ ಆರ್.ಕೃಷ್ಣಪ್ಪ, ಸಿಡಿಪಿಓ ಸಿ.ಎಂ.ಅಣ್ಣಯ್ಯ, ಜಿಪಂ ಎಇಇ ಎಲ್.ವಿನುತ್, ಪಶು ಇಲಾಖೆ ಸಹಾಯಕ ನಿರ್ದೇಶಕ ಮಂಜುನಾಥ್, ಚೆಸ್ಕಾಂ ಎಇಇ ಅರ್ಕೇಶ್ ಮೂರ್ತಿ, ಸಮಾಜ ಕಲ್ಯಾಣಾಧಿಕಾರಿ ಶಂಕರ್ ಮೂರ್ತಿ, ಬಿಸಿಎಂ ಇಲಾಖೆಯ ಮೇಘನ ಸೇರಿದಂತೆ ಇತರ ಇಲಾಖಾಧಿಕಾರಿಗಳು ಹಾಜರಿದ್ದರು.

ಇನ್ನೆರಡು ದಿನದಲ್ಲಿ ದುಪ್ಪಟ್ಟು ಕಂದಾಯ ವಸೂಲಿ ರದ್ದು

ಶಾಸಕ ಜಿ.ಡಿ.ಹರೀಶ್‌ಗೌಡ

ಹುಣಸೂರು, ಏ.21– ಬಿ ಖಾತಾ ಆಂದೋಲನದಡಿ 6 ವರ್ಷಗಳ ದುಪ್ಪಟ್ಟು ಕಂದಾಯ ವಸೂಲಾತಿ ಇನ್ನೆರಡು ದಿನಗಳಲ್ಲಿ ರದ್ದುಗೊಳ್ಳಲಿದೆ ಎಂದು ಶಾಸಕ ಜಿ.ಡಿ.ಹರೀಶ್‌ಗೌಡ ತಿಳಿಸಿದರು.

ಈ ಕುರಿತು ಸೋಮವಾರ ಜಿಲ್ಲಾಧಿಕಾರಿ ಲಕ್ಷ್ಮೀಕಾಂತರೆಡ್ಡಿ ಅವರೊಂದಿಗೆ ಸಭೆ ನಡೆಸಿ ನಂತರ ಮಾತನಾಡಿದ ಅವರು, ಬಿ ಖಾತಾ ಆಂದೋಲನ ಅರಂಭವಾದ ನಂತರ ಮೈಸೂರು ಜಿಲ್ಲೆಯಾದ್ಯಂತ ಸ್ಥಳೀಯ ಸಂಸ್ಥೆಗಳಲ್ಲಿ ಕಳೆದ 6 ವರ್ಷಗಳ ದುಪ್ಪಟ್ಟು ಕಂದಾಯ ವಸೂಲಾತಿಗೆ ಜಿಲ್ಲಾಧಿಕಾರಿಗಳು ಮೌಖಿಕ ಆದೇಶ ಹೊರಡಿಸಿದ್ದರು. ಈ ಕುರಿತು ಹುಣಸೂರು ನಗರದ ನಾಗರಿಕರು ಮತ್ತು ಜನಪ್ರತಿನಿಧಿಗಳಿಂದ ತೀವ್ರ ಆಕ್ರೋಶ ವ್ಯಕ್ತವಾಗಿತ್ತು. ಮತ್ತು ತಮ್ಮ ಬಳಿ ಈ ಬಗ್ಗೆ ದೂರುಗಳು ಬಂದಿದ್ದವು. ಸಮಸ್ಯೆಯ ಪರಿಹಾರಕ್ಕಾಗಿ ಜಿಲ್ಲಾಧಿಕಾರಿಗಳೊಂದಿಗೆ ಚರ್ಚಿಸಿ ಕ್ರಮ ವಹಿಸುವುದಾಗಿ ತಿಳಿಸಿದ್ದೆ ಅದರಂತೆ ಸೋಮವಾರ ಜಿಲ್ಲಾಧಿಕಾರಿಗಳು ಸಮಯ ನಿಗದಿ ಮಾಡಿದ್ದರಿಂದ ಹುಣಸೂರು ನಗರಸಭೆ ಕೌನ್ಸಿಲರ್‌ಗಳು ಮತ್ತು ನಾಗರಿಕರನ್ನೊಡಗೂಡಿ ಭೇಟಿ ಮಾಡಿ ಸಮಸ್ಯೆಯ ಗಂಭೀರತೆ ತಿಳಿಸಲಾಯಿತು ಎಂದರು.



ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಸಮಸ್ಯೆ ಕುರಿತು ಜಿಲ್ಲಾಧಿಕಾರಿ ಲಕ್ಷ್ಮೀಕಾಂತ್‌ರೆಡ್ಡಿ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ. ಪ್ರಸಕ್ತ ವರ್ಷದ ಕಂದಾಯವನ್ನು ಮಾತ್ರ ದುಪ್ಪಟ್ಟು ಪ್ರಮಾಣದಲ್ಲಿ ವಸೂಲಾತಿ ಮಾಡಲು ಮತ್ತು 6 ವರ್ಷಗಳ ದುಪ್ಪಟ್ಟು ಕಂದಾಯವನ್ನು ರದ್ದುಗೊಳಿಸಲು ಕ್ರಮವಹಿಸಿ 2–3 ದಿನಗಳಲ್ಲಿ ಉಪಕ್ರಮಗಳನ್ನು ಕೈಗೊಳ್ಳುವುದಾಗಿ ಭರವಸೆ ನೀಡಿದ್ದಾರೆ ಎಂದು ತಿಳಿಸಿದರು.

ಈ ವೇಳೆ ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಹರೀಶ್ ಕುಮಾರ್, ಉಪಾಧ್ಯಕ್ಷೆ ಆಶಾ, ಸದಸ್ಯರಾದ ಗಣೇಶ್ ಕುಮಾರಸ್ವಾಮಿ, ಸತೀಶ್ ಕುಮಾರ್, ಮಾಲೀಕ್ ಪಾಷಾ, ರಾಣಿ ಪೆರುಮಾಳ್, ಶ್ರೀನಾಥ್, ದೇವನಾಯ್ಕ ಮುಖಂಡ ನಿಂಗರಾಜು ಹಾಜರಿದ್ದರು.

ಅಂಬೇಡ್ಕರ್ ಚಿಂತನೆಗಳನ್ನು ಎಲ್ಲರೂ ಪಾಲಿಸಬೇಕು

ಮಲ್ಕುಂಡಿ, ಏ.21– ದೇಶದ ಪ್ರತಿಯೊಬ್ಬ ನಾಗರಿಕರಿಗೂ ಸಮಾನತೆ ನೀಡಿದ ಡಾ.ಬಿ.ಆರ್.ಅಂಬೇಡ್ಕರ್ ಅವರ ಚಿಂತನೆಗಳನ್ನು ಎಲ್ಲರೂ ಪಾಲಿಸಬೇಕು ಎಂದು ಗ್ರಾಪಂ ಸದಸ್ಯ ಗೋವಿಂದರಾಜು ತಿಳಿಸಿದರು.

ಇಲ್ಲಿಗೆ ಸಮೀಪದ ಹೆಡಿಯಾಲ ಗ್ರಾಮದಲ್ಲಿ ಆಯೋಜಿಸಿದ್ದ ಡಾ.ಅಂಬೇಡ್ಕರ್ ಅವರ 134ನೇ ಜಯಂತಿ ಅಂಗವಾಗಿ ಡಾ.ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚಣೆ ಮಾಡಿ ಮಾತನಾಡಿದ ಅವರು, ಪ್ರಪಂಚದಾದ್ಯಂತ ಸಂಚರಿಸಿ ಅಪಾರ ಅಧ್ಯಯನ ನಡೆಸಿದ ಅಂಬೇಡ್ಕರ್ ಭಾರತೀಯರಿಗೆ ಶ್ರೇಷ್ಠ ಸಂವಿಧಾನ ನೀಡುವ ಮೂಲಕ ಪ್ರತಿಯೊಬ್ಬರಿಗೂ ಸಮಾನತೆ, ಸ್ವಾತಂತ್ರ್ಯ ಕಲ್ಪಿಸಿದ್ದಾರೆ. ಅಂಬೇಡ್ಕರ್ ಅವರ ದೀರ್ಘ ಕಾಲದ ಅಧ್ಯಯನ, ಅನೇಕ ವಿಚಾರಗಳು ಇಂದಿಗೂ ಜೀವಂತವಾಗಿದ್ದು, ಅವರ ಚಿಂತನೆ, ವಿಚಾರಧಾರೆಗಳನ್ನು ನಾವು ಪಾಲನೆ ಮಾಡಬೇಕಿದೆ ಎಂದರು.



ಹೆಡಿಯಾಲ ಗ್ರಾಮದಲ್ಲಿ ಅಂಬೇಡ್ಕರ್ ಜಯಂತಿ ನಡೆಯಿತು.

ಡಾ.ಅಂಬೇಡ್ಕರ್ ಅವರು ಇಡೀ ವಿಶ್ವವೇ ಮೆಚ್ಚುವಂತಹ ಶ್ರೇಷ್ಠ ಸಂವಿಧಾನವನ್ನು ಭಾರತೀಯರಿಗೆ ನೀಡಿದ್ದಾರೆ. ಅಂಬೇಡ್ಕರ್ ಅವರ ತತ್ವ, ಆದರ್ಶಗಳನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು ಎಂದರು.

ಈ ವೇಳೆ ಮಾಜಿ ತಾಪಂ ಸದಸ್ಯ ನಾಗರಾಜೇಗೌಡ, ಸಲಮತ್ ಅಲಿ, ಅನ್ವರ್, ನಾಗನಾಯಕ, ಮಂಟೇಲಿಂಗಚಾರ್, ಮಹದೇವಪ್ಪ, ರವಿ, ಅಕ್ಬರ್, ರಂಗಸ್ವಾಮಿ, ರಾಮಚಂದ್ರು, ನಾಗಯ್ಯ, ಮಹದೇವಪ್ರಸಾದ್, ಡಿ.ಗೋವಿಂದ್, ಶಿವಯ್ಯ, ರಾಚಯ್ಯ, ಮಹದೇವು, ಮಹದೇವಸ್ವಾಮಿ, ಚಿನ್ನಸ್ವಾಮಿ, ಸಾದಿಕ್, ಗುಂಡು, ಜಾಫರ್, ಅಭಿಲಾಷ್, ಗಗನ್, ಕಾಳಸ್ವಾಮಿ, ಮರಿದಾಸಯ್ಯ, ಲಿಂಗರಾಜು, ಗೋಪಾಲ, ಡಾ.ಅಂಬೇಡ್ಕರ್ ಯುವಕ ಸಂಘದವರು ಹಾಜರಿದ್ದರು. ಇದೇ ವೇಳೆ ಡಾ.ಅಂಬೇಡ್ಕರ್, ಬಸವ, ಬುದ್ಧ ಅವರ ಭಾವಚಿತ್ರವನ್ನು ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು.

ಶೋಷಿತ ವರ್ಗಗಳ ಆಶಾಕಿರಣ ಸಚಿವ ಹೆಚ್‌ಸಿಎಂ

ತಿ.ನರಸೀಪುರ, ಏ.21– ದಮನಿತ ಹಾಗೂ ಶೋಷಿತ ವರ್ಗಗಳ ಆಶಾಕಿರಣವಾಗಿ ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ದಶಕಗಳಿಂದಲೂ ಸೇವೆ ಸಲ್ಲಿಸುತ್ತಿದ್ದಾರೆ ಎಂದು ಡಾ.ಹೆಚ್.ಸಿ.ಮಹದೇವಪ್ಪ ಅಭಿಮಾನಿ ಬಳಗದ ರಾಜ್ಯಾಧ್ಯಕ್ಷ ಹಿನಕಲ್ ನಂಜುಂಡ ಬಣ್ಣಿಸಿದರು.

ಸಚಿವ ಡಾ.ಹೆಚ್.ಸಿ.ಮಹದೇವಪ್ಪನವರ 72ನೇ ಹುಟ್ಟುಹಬ್ಬ ಅಂಗವಾಗಿ ಮೈಸೂರಿನ ಅಧಿದೇವತೆ ಚಾಮುಂಡಿ ಬೆಟ್ಟದ ತಾಯಿ ಚಾಮುಂಡೇಶ್ವರಿಗೆ ವಿಶೇಷ ಪೂಜೆ ಸಲ್ಲಿಸಿ, ಭಕ್ತರಿಗೆ ಸಿಹಿ ಹಂಚಿ ಮಾತನಾಡಿದ ಅವರು, ಮಹದೇವಪ್ಪನವರು ಶಾಸಕರಾಗಿ, ಮಂತ್ರಿಯಾಗಿ ರಾಜ್ಯಕ್ಕೆ ಅತ್ಯುನ್ನತ ಕೊಡುಗೆ ನೀಡಿದ್ದಾರೆ. ರಾಜಕೀಯ ಸದೃಢತೆ ಹೊಂದಿ, ಸಮಾಜದಲ್ಲಿ ತುಳಿತಕ್ಕೆ ಒಳಗಾದ ಸಮುದಾಯಗಳ ಆರ್ಥಿಕ, ಶೈಕ್ಷಣಿಕ ಅಭಿವೃದ್ಧಿಗಾಗಿ ಕೆಲಸ ಮಾಡುತ್ತಿದ್ದಾರೆ. ಅವರ ಪುತ್ರ ಸುನೀಲ್ ಬೋಸ್ ಅವರು ಚಾಮರಾಜನಗರ ಸಂಸದರಾಗಿ ಜನಸೇವೆ ಮಾಡುತ್ತಿದ್ದಾರೆ. ಬಡವರ ಅಭಿವೃದ್ಧಿಗೆ ಹೆಚ್ಚು ಕಾಳಜಿ ಹೊಂದಿರುವ ಸಚಿವರು ಮುಂಬರುವ ದಿನಗಳಲ್ಲಿ ಮತ್ತಷ್ಟು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ದೇವರು ಶಕ್ತಿ ನೀಡಲಿ ಎಂದು ತಿಳಿಸಿದರು.



ಬೆಂಗಳೂರಿನಲ್ಲಿ ಸಚಿವ ಹೆಚ್.ಸಿ.ಮಹದೇವಪ್ಪನವರನ್ನು ಸನ್ಮಾನಿಸಲಾಯಿತು.

ನಂತರ ಡಾ.ಹೆಚ್.ಸಿ.ಮಹದೇವಪ್ಪ ಅಭಿಮಾನಿ ಬಳಗದ ಸದಸ್ಯರು ಬೆಂಗಳೂರಿಗೆ ತೆರಳಿ ಸಚಿವರಿಗೆ ಕೇಕ್ ತಿನ್ನಿಸಿ, ಮೈಸೂರು ಪೇಟ ತೊಡಸಿ ಸನ್ಮಾನಿಸುವ ಮೂಲಕ ಹುಟ್ಟುಹಬ್ಬದ ಶುಭಾಶಯ ಕೋರಿದರು.

ಈ ವೇಳೆ ಡಾ.ಹೆಚ್.ಸಿ.ಮಹದೇವಪ್ಪ ಅಭಿಮಾನಿ ಬಳಗದ ಕಾರ್ಯಾಧ್ಯಕ್ಷ ಡಾ.ಬಸವರಾಜು, ರಾಜ್ಯ ಉಪಾಧ್ಯಕ್ಷ ಕಡಕೊಳ ಭರತ್ ರಾಜ್, ರಾಜ್ಯ ಪ್ರಧಾನ ಕಾರ್ಯದರ್ಶಿ ಬೆನಕನಹಳ್ಳಿ ನಾಗರಾಜು, ರಾಜ್ಯ ಕಾರ್ಯದರ್ಶಿ ಹರದನಹಳ್ಳಿ ಮಹೇಶ್, ರಾಜ್ಯ ಖಜಾಂಚಿ ದಡದಹಳ್ಳಿ ಮಹದೇವ, ರಾಜ್ಯ ಮಾಧ್ಯಮ ಸಲಹೆಗಾರ ಕೋಟೆ ಮಂಜುನಾಥ್, ನಿರ್ದೇಶಕರಾದ ಮಾವಿನಹಳ್ಳಿ ನಾಗೇಶ್, ಹರೀಶ್ ಕುಮಾರ್ ಹಾಗೂ ಹುಲ್ಲಹಳ್ಳಿ ಬಾಬು ಹಾಜರಿದ್ದರು.

> **ಸಚಿವ ಡಾ.ಹೆಚ್.ಸಿ.ಮಹದೇವಪ್ಪನವರು ಶಾಸಕ, ಸಚಿವರಾಗಿ ಸಾಕಷ್ಟು ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಮೂಲಕ ರಾಜ್ಯಕ್ಕೆ ಉತ್ತಮ ಕೊಡುಗೆ ನೀಡಿದ್ದಾರೆ. ಅಲ್ಲದೇ ಈ ಹಿಂದೆ ಲೋಕೋಪಯೋಗಿ ಸಚಿವರಾಗಿದ್ದಾಗ ರಾಜ್ಯಾದ್ಯಂತ ರಸ್ತೆಗಳನ್ನು ಅಭಿವೃದ್ಧಿಪಡಿಸಿ ವಿಪಕ್ಷಗಳ ನಾಯಕರಿಂದಲೂ ಹೊಗಳಿಸಿಕೊಂಡ ದೂರದೃಷ್ಟಿಯುಳ್ಳ ಅಭಿವೃದ್ಧಿ ಚಿಂತಕರಾಗಿದ್ದಾರೆ. ಅಲ್ಲದೇ ತಿ.ನರಸೀಪುರ ಕ್ಷೇತ್ರದ ಅಭಿವೃದ್ಧಿಗೆ ಅವಿರತವಾಗಿ ಶ್ರಮಿಸುತ್ತಿರುವ ಸಚಿವ ಮಹದೇವಪ್ಪನವರಿಗೆ ಮುಂದಿನ ದಿನಗಳಲ್ಲಿ ದೇವರು ಇನ್ನೂ ಹೆಚ್ಚಿನ ಜನಸೇವೆ ಮಾಡುವ ಶಕ್ತಿ ಸಾಮರ್ಥ್ಯ ಹಾಗೂ ಅಧಿಕಾರ ನೀಡಲಿ.**
>
> –ಕಗ್ಗಲೀಪುರ ಕೆ.ಎಂ.ಮಧುಕುಮಾರ್, ಮೈಸೂರು ಜಿಲ್ಲಾಧ್ಯಕ್ಷ.

ಸರಗೂರಲ್ಲಿ ಅಂಬೇಡ್ಕರ್ ಭಾವಚಿತ್ರ ಅದ್ದೂರಿ ಮೆರವಣಿಗೆ

ಸರಗೂರು, ಏ.21– ಡಾ.ಬಿ.ಆರ್.ಅಂಬೇಡ್ಕರ್ ಅವರ 134ನೇ ಜಯಂತಿ ಅಂಗವಾಗಿ ಸೋಮವಾರ ಆದಿಕರ್ನಾಟಕ ಸಮಾಜದ ವತಿಯಿಂದ ಅಂಬೇಡ್ಕರ್ ಭಾವಚಿತ್ರವನ್ನು ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಅದ್ದೂರಿಯಾಗಿ ಮೆರವಣಿಗೆ ಮಾಡಲಾಯಿತು.

ಆದಿಕರ್ನಾಟಕ ಮಹಾಸಭಾ ಅಧ್ಯಕ್ಷ ಶಿವಣ್ಣ ಮಾತನಾಡಿ, ಅಂಬೇಡ್ಕರ್ ಅವರು ಶೋಷಿತ ಸಮುದಾಯಗಳ ಏಳಿಗೆಗಾಗಿ ನಿರಂತರವಾಗಿ ಶ್ರಮಿಸಿ ಚಳವಳಿಗಳನ್ನು ಮಾಡಿದವರು. ಜಾಗೃತಿ ಮತ್ತು ಜ್ಞಾನದ ದೀಪವಾಗಿ ಈ ದೇಶದ ಅಭಿವೃದ್ಧಿಗೆ ದಾರಿಯಾದವರು. ಅಂತಹ ಮಹನೀಯರು ಕೇವಲ ಒಂದು ವರ್ಗಕ್ಕೆ ಸೀಮಿತವಲ್ಲ. ಅವರು ದೇಶದ ಆಸ್ತಿ ಎಂದರು.



ಅಂಬೇಡ್ಕರ್ ಭಾವಚಿತ್ರ ಮೆರವಣಿಗೆ ನಡೆಸಲಾಯಿತು.

ಇದಕ್ಕೂ ಮುನ್ನಾ ಪಟ್ಟಣದ ಅಂಬೇಡ್ಕರ್ ಭವನದ ಎದುರು ರಥಕ್ಕೆ ವಿಶೇಷ ಪೂಜೆ ಸಲ್ಲಿಸಿ, ಸತ್ತಿಗೆ ಮಂಗಳವಾದ್ಯದೊಂದಿಗೆ ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಮೆರವಣಿಗೆ 4ನೇ ವಾರ್ಡ್‌ನ ಗಣ್ಯರು ಚಾಲನೆ ನೀಡಿದರು. ವಿವಿಧ ಜಾನಪದ ಕಲಾ ತಂಡಗಳೊಂದಿಗೆ ಮೆರವಣಿಗೆ ನಡೆಯಿತು. ದಾರಿಯುದ್ದಕ್ಕೂ ಮಜ್ಜಿಗೆ, ಪಾನಕ ಹಂಚಲಾಯಿತು.

ಈ ವೇಳೆ ಆದಿ ಕರ್ನಾಟಕ ಮಹಾಸಭಾ ಅಧ್ಯಕ್ಷರು, ಸಂವಿಧಾನ ಸಂರಕ್ಷಣಾ ಸಮಿತಿ ಅಧ್ಯಕ್ಷರು, ಸಮಾಜದ ಯಜಮಾನರು, ಗಡಿ ಯಜಮಾನರು, ಅಂಬೇಡ್ಕರ್ ಭವನದ ಟ್ರಸ್ಟ್ ಅಧ್ಯಕ್ಷರು, ಡಾ.ಬಿ.ಆರ್.ಅಂಬೇಡ್ಕರ್ ಯುವಕ ಸಂಘದವರು ಸೇರಿದಂತೆ ಇತರರಿದ್ದರು.

ಮಕ್ಕಳ ದೈಹಿಕ, ಮಾನಸಿಕ ಆರೋಗ್ಯಕ್ಕೆ ಬೇಸಿಗೆ ಶಿಬಿರ ಸಹಕಾರಿ

ಕ್ಷೇತ್ರ ಶಿಕ್ಷಣಾಧಿಕಾರಿ ಶಿವಮೂರ್ತಿ

ತಿ.ನರಸೀಪುರ, ಏ.21– ಬೇಸಿಗೆ ಶಿಬಿರಗಳು ಮಕ್ಕಳ ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕೆ ಸಹಕಾರಿಯಾಗಿದ್ದು, ಮಕ್ಕಳು ಬೇಸಿಗೆ ಶಿಬಿರವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಶಿವಮೂರ್ತಿ ತಿಳಿಸಿದರು.

ಪಟ್ಟಣದ ಮರಿಗೌಡ ಸ್ಮಾರಕ ಭವನದ ಕನಕ ಗ್ರಾಮೀಣ ಕಾನ್ವೆಂಟ್‌ನಲ್ಲಿ ಶಾರದ ಡ್ಯಾನ್ಸ್ ಅಕಾಡೆಮಿ ಆಯೋಜಿಸಿದ್ದ 40 ದಿನಗಳ 10ನೇ ವರ್ಷದ ಲಿಟಲ್ ಜೀನಿಯಸ್–2025ನೇ ಸಾಲಿನ ಬೇಸಿಗೆ ಶಿಬಿರದ ಉದ್ಘಾಟಿಸಿ ಅವರು ಮಾತನಾಡಿದರು.



ಬೇಸಿಗೆ ಶಿಬಿರವನ್ನು ಕ್ಷೇತ್ರ ಶಿಕ್ಷಣಾಧಿಕಾರಿ ಶಿವಮೂರ್ತಿ ಉದ್ಘಾಟಿಸಿದರು.

ರಜೆ ವೇಳೆ ಮಕ್ಕಳು ಕೇವಲ ಮೊಬೈಲ್ ಮತ್ತು ಇನ್ನಿತರ ಯಾಂತ್ರಿಕ ಯುಗಕ್ಕೆ ಮಾರು ಹೋಗದೆ, ಇಂತಹ ಶಿಬಿರಗಳಿಂದ ಹೆಚ್ಚು ಹೆಚ್ಚು ಕಲಿಯಲು ಅವರಿಗೆ ಅನುಕೂಲವಾಗುತ್ತದೆ. ವರ್ಷಪೂರ್ತಿ ಪಠ್ಯ ಚಟುವಟಿಕೆಗಳಲ್ಲಿ ಪಾಲ್ಗೊಂಡು ಮಾನಸಿಕ ಒತ್ತಡ ಅನುಭವಿಸುತ್ತಿರುವ ಮಕ್ಕಳಿಗೆ ಬೇಸಿಗೆ ಶಿಬಿರ ಸಹಕಾರಿಯಾಗಿವೆ. ಇತ್ತೀಚಿನ ದಿನಗಳಲ್ಲಿ ಅಂಕ ಆಧಾರಿತ ಪಠ್ಯಕ್ಕೆ ಹೆಚ್ಚಿನ ಒತ್ತು ನೀಡಲಾಗುತ್ತಿದ್ದು, ಮಕ್ಕಳಿಗೆ ಅದರ ಜೊತೆ ಪಠ್ಯೇತರ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವಿಕೆ ತುಂಬಾ ಅಗತ್ಯವಿದೆ ಎಂದರು.

ಸೇವಾಶ್ರಯ ಫೌಂಡೇಶನ್ ಅಧ್ಯಕ್ಷ ಮಣಿಕಂಠರಾಜ್‌ಗೌಡ ಮಾತನಾಡಿ, ಬೇಸಿಗೆ ರಜೆಯನ್ನು ಮಕ್ಕಳು ಮನರಂಜನೆಗಾಗಿ ಪರಿಣಾಮಕಾರಿಯಾಗಿ ಬಳಸಿ ಕೊಳ್ಳಲು ಬೇಸಿಗೆ ಶಿಬಿರಗಳನ್ನು ಆಯೋಜಿಸಲಾಗುತ್ತದೆ. ಓದುವ, ಬರೆಯುವ, ವಿಜ್ಞಾನ ವಿಷಯಗಳು ಮತ್ತು ಸಂವಹನ ಕೌಶಲ್ಯ ಅಭಿವೃದ್ಧಿಪಡಿಸಿ, ಪರಿಸರ ಕಾಳಜಿ, ಸಾಮಾಜಿಕ ಕಾಳಜಿ ಬೆಳೆಸುವುದು ಮತ್ತು ಸ್ಥಳೀಯ ಸಂಸ್ಕೃತಿ, ಜೀವನ ಶೈಲಿ, ಇತಿಹಾಸದ ಅಂಶಗಳನ್ನು ತಿಳಿಯುವಂತೆ ಮಾಡುವುದು ಹಾಗೂ ಮಕ್ಕಳಲ್ಲಿರುವ ಸೃಜನಾತ್ಮಕ ಸಾಮರ್ಥ್ಯ ಅಭಿವೃದ್ಧಿಪಡಿಸುವುದು ಬೇಸಿಗೆ ಶಿಬಿರದ ಉದ್ದೇಶವಾಗಿದೆ ಎಂದರು.

ಈ ವೇಳೆ ಕುರುಬೂರಿನ ಅಂತರರಾಷ್ಟ್ರೀಯ ಖೋ ಖೋ ಆಟಗಾರ್ತಿ ಬಿ.ಚೈತ್ರಾ, ಉಪನ್ಯಾಸಕ ಕುಮಾರಸ್ವಾಮಿ, ಡ್ಯಾನ್ಸ್ ಮಾಸ್ಟರ್ ಬಸವರಾಜು, ಖೋ ಖೋ ತರಬೇತಿದಾರ ಮಂಜುನಾಥ್, ಶಿಕ್ಷಕಿ ಪುಷ್ಪ, ಶೃತಿ, ವರ್ಷಿಣಿ, ಭೈರೇಶ್, ಸಹನಾ, ಕೀರ್ತನ ಮತ್ತಿತರರಿದ್ದರು.

ಅಂಚೆ ನೌಕರರು ಸಾಹಿತ್ಯ ಕೃಷಿಯಲ್ಲಿ ತೊಡಗಿರುವುದು ಹೆಮ್ಮೆಯ ಸಂಗತಿ

ದಕ್ಷಿಣ ಕರ್ನಾಟಕ ವಲಯದ ಅಂಚೆ ಸೇವೆಗಳ ನಿರ್ದೇಶಕ ಸಂದೇಶ್ ಮಹದೇವಪ್ಪ ಮೆಚ್ಚುಗೆ

ನಂಜನಗೂಡು, ಏ.21– ಮಹತ್ವದ ಜವಾಬ್ದಾರಿ ಹಾಗೂ ಒತ್ತಡದ ಕೆಲಸಗಳ ನಡುವೆಯೂ ಅಂಚೆ ನೌಕರರು ಸಾಹಿತ್ಯ ಕೃಷಿಯಲ್ಲಿ ತೊಡಗಿಸಿಕೊಂಡಿರುವುದು ಹೆಮ್ಮೆಯ ಸಂಗತಿ ಎಂದು ದಕ್ಷಿಣ ಕರ್ನಾಟಕ ವಲಯದ ಅಂಚೆ ಸೇವೆಗಳ ನಿರ್ದೇಶಕ ಸಂದೇಶ್ ಮಹದೇವಪ್ಪ ಮೆಚ್ಚುಗೆ ವ್ಯಕ್ತಪಡಿಸಿದರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಅಂಚೆ ನೌಕರರ ಸಾಹಿತ್ಯ ಬಳಗ ಬೆಂಗಳೂರು ಮತ್ತು ಸುಮಂಗಲಿ ಸೇವಾಶ್ರಮದ ಸಹಯೋಗದಲ್ಲಿ ಆಯೋಜಿಸಿದ್ದ ರಾಜ್ಯಮಟ್ಟದ 5ನೇ ಅಂಚೆ ನೌಕರರ ಸಾಹಿತ್ಯ ಸಮ್ಮೇಳನದಲ್ಲಿ ಅವರು ಮಾತನಾಡಿದರು.

ಸಾಹಿತ್ಯವನ್ನು ಪಸರಿಸುವ ಕಾರ್ಯ ಅಂಚೆ ಇಲಾಖೆಯಿಂದ ನಡೆಯುತ್ತಿದೆ. ಅಂಚೆ ಇಲಾಖೆಗೂ ಸಾರಸ್ವತ ಲೋಕಕ್ಕೂ ಅವಿನಾಭಾವ ಸಂಬಂಧವಿದ್ದು, ಜನರ ಭಾವನೆಗಳು ಪತ್ರಗಳ ಮೂಲಕ ಅಕ್ಷರ ರೂಪ ತಾಳುತ್ತವೆ. ಹೀಗಾಗಿ ಅಂಚೆ ಇಲಾಖೆಯಲ್ಲಿಯೂ ಪ್ರತಿಭಾವಂತ ಸಾಹಿತ್ಯಾಸಕ್ತರಿದ್ದಾರೆ. ಅವರಿಂದ ಕನ್ನಡ ಸಾಹಿತ್ಯ ಲೋಕದ ಶ್ರೀಮಂತಿಕೆ ಹೆಚ್ಚಲಿ ಎಂದರು.



ರಾಜ್ಯಮಟ್ಟದ 5ನೇ ಅಂಚೆ ನೌಕರರ ಸಾಹಿತ್ಯ ಸಮ್ಮೇಳನವನ್ನು ಅಧ್ಯಕ್ಷೆ ರೇಣುಕಾಂಬೆ ಉದ್ಘಾಟಿಸಿದರು.

ನಿರ್ಮಾಪಕ ಜಿ.ವಿ.ಅಯ್ಯರ್ ಅವರ ಪಿಕ್ಚರ್ ಪೋಸ್ಟ್ ಕಾರ್ಡ್ ಬಿಡುಗಡೆ ಮಾಡಿ ಮಾತನಾಡಿದ ಚಿತ್ರ ನಿರ್ಮಾಪಕ ಚಿನ್ನೇಗೌಡ, ಸೇವಾ ಕ್ಷೇತ್ರದಲ್ಲಿ ಅಂಚೆ ಇಲಾಖೆ ಕೊಡುಗೆ ಮಹತ್ತರವಾಗಿದ್ದು, ಪ್ರಾಮಾಣಿಕತೆ ಮತ್ತು ಗುಣಮಟ್ಟದ ಸೇವೆ ಮೂಲಕ ಜನಮನ್ನಣೆ ಗಳಿಸಿರುವ ಅಂಚೆ ಇಲಾಖೆ ನೌಕರರು ಸಾಹಿತ್ಯ ಕ್ಷೇತ್ರದಲ್ಲೂ ತಮ್ಮ ಛಾಪನ್ನು ಮೂಡಿಸಿದ್ದಾರೆ. ಇನ್ನು ಅಂಚೆ ಸಾಹಿತ್ಯ ಸಮ್ಮೇಳನಾಧ್ಯಕ್ಷರಾಗಿರುವ ರೇಣುಕಾಂಬೆ ಅವರು ನಮ್ಮ ಸ್ವಗ್ರಾಮ ಸಾಲಿಗ್ರಾಮದವರಾಗಿದ್ದು, ಸಾಹಿತ್ಯ ಕ್ಷೇತ್ರದ ಬಗ್ಗೆ ಅವರಿಗಿರುವ ಆಸಕ್ತಿ ಮತ್ತು ಶ್ರದ್ಧೆಯಿಂದಾಗಿ ಹೆಚ್ಚಿನ ಸಾಧನೆ ತೋರಿದ್ದಾರೆ. ಮುಂಬರುವ ದಿನಗಳಲ್ಲಿ ಅವರ ಸಾಹಿತ್ಯ ಕೃಷಿ ಇನ್ನೂ ಎತ್ತರಕ್ಕೇರಲಿ ಎಂದು ಆಶಿಸಿದರು.

ನಂಜನಗೂಡಿನ ಅಂಚೆ ವಿಭಾಗೀಯ ಕಚೇರಿಯ ಸಹಾಯಕಿ ಎಸ್.ಸಿ.ರೇಣುಕಾಂಬೆ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಮಟ್ಟದ 5ನೇ ಅಂಚೆ ನೌಕರರ ಸಾಹಿತ್ಯ ಸಮ್ಮೇಳನದಲ್ಲಿ ಅಂಚೆ ರತ್ನ ಪ್ರಶಸ್ತಿ ವಿತರಣೆ, ಪಿಕ್ಚರ್ ಪೋಸ್ಟ್ ಕಾರ್ಡ್ ಬಿಡುಗಡೆ ಹಾಗೂ ಅಂಚೆ ನೌಕರರು ರಚಿಸಿರುವ ಕೃತಿಗಳನ್ನು ಬಿಡುಗಡೆ ಮಾಡಲಾಯಿತು. ಅಂಚೆ ನೌಕರರು ನಡೆಸಿಕೊಟ್ಟ ಸಾಂಸ್ಕೃತಿಕ ಕಾರ್ಯಕ್ರಮ ವೀಕ್ಷಕರ ಮೆಚ್ಚುಗೆಗೆ ಪಾತ್ರವಾಯಿತು.

> **ನಂಜನಗೂಡು ಸಾಹಿತ್ಯ ಕ್ಷೇತ್ರದಲ್ಲೂ ಅಪಾರ ಜನಮನ್ನಣೆ ಗಳಿಸಿದೆ. ಹಲವು ಶ್ರೇಷ್ಠ ಸಾಹಿತಿಗಳು ನಂಜನಗೂಡು ಮೂಲ ಹೊಂದಿದ್ದು, ಇಂತಹ ನೆಲದಲ್ಲಿ ಅಂಚೆ ನೌಕರರ ಸಾಹಿತ್ಯ ಸಮ್ಮೇಳವನ್ನು ಆಯೋಜಿಸಿರುವುದರಿಂದ ಇಲಾಖೆಯ ಸಾಹಿತ್ಯಾಸಕ್ತರಿಗೆ ಹೆಚ್ಚಿನ ಸ್ಫೂರ್ತಿ ಲಭ್ಯವಾಗಿದೆ.**
>
> –ಎನ್.ಗೋವಿಂದರಾಜು, ನಂಜನಗೂಡಿನ ಅಂಚೆ ಅಧೀಕ್ಷಕ.

ಸಮಾರಂಭದಲ್ಲಿ ಬಳಗದ ಅಧ್ಯಕ್ಷ ಹೆಚ್. ಸುಬ್ರಹ್ಮಣ್ಯ, ಉಪ ಪ್ರಧಾನ ಅಂಚೆ ಪಾಲಕ ಮಂಜುನಾಥ್.ಆರ್, ಚಲನಚಿತ್ರ ನಿರ್ದೇಶಕ ರಾಘವೇಂದ್ರ ಅಯ್ಯರ್, ನಗರಸಭಾ ಸದಸ್ಯ ಮಹೇಶ್, ಸಮ್ಮೇಳನದ ಸ್ವಾಗತ ಅಮಿತಿ ಅಧ್ಯಕ್ಷ ಮಹದೇವಪ್ಪ, ಅಂಚೆ ಸೇವೆಗಳ ನಿವೃತ್ತ ನಿರ್ದೇಶಕ ಕೃಷ್ಣದಾಸ್, ನಟ ಶಂಕರ ಅಶ್ವತ್, ವಕೀಲ ಇ.ಮಹದೇವ ಕುಮಾರ್, ಸುಮಂಗಲಿ ಸೇವಾಶ್ರಮ ಅಧ್ಯಕ್ಷೆ ಡಾ.ಎಸ್.ಜಿ.ಸುಶೀಲಮ್ಮ ಇತರರಿದ್ದರು.

ರಾಜಣ್ಣ ನಿಧನ



ನಂಜನಗೂಡು, ಏ.21– ತಾಲೂಕಿನ ಸಿಂಧುವಳ್ಳಿಪುರ ಗ್ರಾಮದ ನಿವಾಸಿ, ಲಾರಿ ಚಾಲಕ ಎಸ್.ಎಂ.ರಾಜಣ್ಣ(59) ಭಾನುವಾರ ರಾತ್ರಿ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರಿಯರು, ಓರ್ವ ಪುತ್ರ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸೋಮವಾರ ಸ್ವಗ್ರಾಮದಲ್ಲಿ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮಹದೇವ ನಾಯಕ



ನಂಜನಗೂಡು, ಏ.21– ತಾಲೂಕಿನ ಕಳಲೆ ಗ್ರಾಮದ ನಿವಾಸಿ ಮಹದೇವ ನಾಯಕ (68) ಸೋಮವಾರ ಸಂಜೆ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರಿಯರು, ಓರ್ವ ಪುತ್ರ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮಂಗಳವಾರ ಮಧ್ಯಾಹ್ನ ಸ್ವಗ್ರಾಮದಲ್ಲಿ ನಡೆಯಲಿದೆ.

ಐಪಿಎಲ್ ಹಂಗಾಮ

ಕೋಲ್ಕತ್ತಾ ವಿರುದ್ಧ ಗುಜರಾತ್‌ಗೆ ಭರ್ಜರಿ ಜಯ



ಕೋಲ್ಕತ್ತಾ, ಏ.21– ಶುಭಮನ್ ಗಿಲ್ ಅವರ ಅಮೋಘ ಬ್ಯಾಟಿಂಗ್ ಮತ್ತು ಬೌಲರ್‌ಗಳ ಸಂಘಟಿತ ದಾಳಿ ನೆರವಿನಿಂದ ಗುಜರಾತ್ ಟೈಟಾನ್ಸ್, ಕೋಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ 39 ರನ್‌ಗಳ ಭರ್ಜರಿ ಜಯ ಗಳಿಸಿದೆ.

ಆ ಮೂಲಕ ಆಡಿರುವ 8 ಪಂದ್ಯಗಳಲ್ಲಿ 6 ಗೆಲುವಿನೊಂದಿಗೆ 12 ಅಂಕಗಳನ್ನು ಕಲೆ ಹಾಕಿರುವ ಗಿಲ್ ಬಳಗ ಅಂಕಪಟ್ಟಿಯಲ್ಲಿ ಅಗ್ರಸ್ಥಾನ ಭದ್ರಪಡಿಸಿಕೊಂಡಿದೆ. ಕೋಲ್ಕತ್ತಾ ನೈಟ್ ರೈಡರ್ಸ್ ತಂಡ ಕೇವಲ 6 ಅಂಕಗಳೊಂದಿಗೆ 7ನೇ ಸ್ಥಾನದಲ್ಲೇ ಮುಂದುವರಿದಿದೆ.

ಇಲ್ಲಿನ ಈಡನ್ ಗಾರ್ಡನ್ ಮೈದಾನದಲ್ಲಿ ನಡೆದ ಪಂದ್ಯದಲ್ಲಿ ಟಾಸ್ ಸೋತು ಬ್ಯಾಟಿಂಗ್ ಮಾಡಿದ ಗುಜರಾತ್ ಟೈಟನ್ಸ್ 20 ಓವರ್‌ಗಳಲ್ಲಿ 3 ವಿಕೆಟ್ ನಷ್ಟಕ್ಕೆ 198 ರನ್ ಗಳಿಸಿತು. ಗುಜರಾತ್ ನೀಡಿದ ಗುರಿ ಬೆನ್ನತ್ತಿದ ಕೆಕೆಆರ್ 20 ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ 159 ರನ್ ಗಳಿಸಿ ಸೋಲಿಗೆ ಶರಣಾಯಿತು.

ಕೋಲ್ಕತ್ತಾ ಪರ ನಾಯಕ ಅಜಿಂಕ್ಯಾ ರಹಾನೆ ಅವರನ್ನು ಹೊರತುಪಡಿಸಿ ಬೇರಾವ ಆಟಗಾರರಿಂದ ಉತ್ತಮ ಪ್ರದರ್ಶನ ಬರಲಿಲ್ಲ. ರಹಾನೆ 36 ಎಸೆತಗಳಲ್ಲಿ 5 ಬೌಂಡರಿ, 1 ಸಿಕ್ಸರ್ ನೆರವಿಂದ 50 ರನ್ ಗಳಿಸಿ ಔಟಾದರೇ, ಅಂಗರಿಕ್ಷ್ ರಘುವಂಶಿ 27, ಆಂಡ್ರೆ ರಸೆಲ್ 21, ರಿಂಕು ಸಿಂಗ್, ಸುನೀಲ್ ನರೇನ್ ತಲಾ 17, ವೆಂಕಟೇಶ್ ಅಯ್ಯರ್ 14 ರನ್ ಗಳಿಸಿದರು. ಗುಜರಾತ್ ಪರ ಕನ್ನಡಿಗ ಪ್ರಸಿದ್ಧ ಕೃಷ್ಣ ಮತ್ತು ಸ್ಪಿನ್ನರ್ ರಶೀದ್ ಖಾನ್ ತಲಾ 2, ಇಶಾಂತ್ ಶರ್ಮಾ, ವಾಶಿಂಗ್ಟನ್ ಸುಂದರ್, ಸಾಯಿ ಕಿಶೋರ್ ಮತ್ತು ಸಿರಾಜ್ ತಲಾ ಒಂದು ವಿಕೆಟ್ ಪಡೆದರು.

ಇದಕ್ಕೂ ಮುನ್ನಾ ಮೊದಲು ಬ್ಯಾಟಿಂಗ್ ಮಾಡಿದ ಗುಜರಾತ್ ಜೈಂಟ್ಸ್ ಪರ ಆರಂಭಿಕರಾದ ಸಾಯಿ ಸುದರ್ಶನ್ ಮತ್ತು ನಾಯಕ ಶುಭಮನ್ ಗಿಲ್ ಮೊದಲ ವಿಕೆಟ್‌ಗೆ 114 ರನ್ ಜೊತೆಯಾಟವಾಡುವ ಮೂಲಕ ತಂಡಕ್ಕೆ ಉತ್ತಮ ಆರಂಭ ಒದಗಿಸಿದರು. ಈ ವೇಳೆ 52 ರನ್ ಗಳಿಸಿದ್ದ ಸಾಯಿ ಸುದರ್ಶನ್ ವಿಕೆಟ್ ಒಪ್ಪಿಸಿದರು. ಮತ್ತೊಂದೆಡೆ ಅರ್ಧಶತಕ ಸಿಡಿಸಿದ್ದ ಗಿಲ್ 90 ರನ್‌ಗೆ ವಿಕೆಟ್ ಒಪ್ಪಿಸಿ ಕೇವಲ 10 ರನ್‌ಗಳಿಂದ ಶತಕದಿಂದ ವಂಚಿತರಾದರು. ಉಳಿದಂತೆ ಜೋಸ್ ಬಟ್ಲರ್ 41, ಶಾರುಕ್ ಖಾನ್ 11 ರನ್ ಗಳಿಸಿದರು. ಕೋಲ್ಕತಾ ಪರ ವೈಭವ್ ಅರೋರಾ, ಹರ್ಷಿತ್ ರಾಣಾ ಮತ್ತು ಆಂಡ್ರೆ ರಸೆಲ್ ತಲಾ ಒಂದು ವಿಕೆಟ್ ಉರುಳಿಸಿದರು. ಶುಭಮನ್ ಗಿಲ್ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು.

ತಂಡದ ಅಂಕಪಟ್ಟಿ ವಿವರ

ತಂಡ	ಪಂದ್ಯಗಳು	ಗೆಲುವು	ಸೋಲು	ಡ್ರಾ	ಅಂಕ
ಗುಜರಾತ್	8	6	2	0	12
ಡೆಲ್ಲಿ	7	5	2	0	10
ಬೆಂಗಳೂರು	8	5	3	0	10
ಪಂಜಾಬ್	8	5	3	0	10
ಲಕ್ನೋ	8	5	3	0	10
ಮುಂಬೈ	8	4	4	0	8
ಕೋಲ್ಕತ್ತಾ	8	3	5	0	6
ರಾಜಸ್ಥಾನ್	8	2	6	0	4
ಹೈದರಾಬಾದ್	7	2	5	0	4
ಚೆನ್ನೈ	8	2	6	0	4

ಇಂದಿನ ಪಂದ್ಯ

ಲಕ್ನೋ ಸೂಪರ್ ಜೈಂಟ್ಸ್
V/S
ಡೆಲ್ಲಿ ಕ್ಯಾಪಿಟಲ್ಸ್

ಸಮಯ: ಸಂಜೆ 7.30

ಸ್ಥಳ : ಅಟಲ್ ಬಿಹಾರಿ ವಾಜಪೇಯಿ ಕ್ರೀಡಾಂಗಣ, ಲಕ್ನೋ

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಅರ್ಜುನ್ S/O ವೈಜಯಂತಿ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಗುಡ್ ಬ್ಯಾಡ್ ಅಗ್ಲಿ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಸಿಕಂದರ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಒಡೆಲಾ–2 (ತೆ)	4 ಪ್ರದರ್ಶನಗಳು
ಗಾಯಿತ್ರಿ	
ವಿದ್ಯಾಪತಿ (ಕ)	4 ಪ್ರದರ್ಶನಗಳು
ರಾಜಕಮಲ್	
ಒಡೆಲಾ–2 (ತೆ)+ ಅರ್ಜುನ್ S/O ವೈಜಯಂತಿ (ತೆ)	2+2 ಪ್ರದರ್ಶನಗಳು
ಸಂಗಂ	
ವಾಮನ (ಕ)	4 ಪ್ರದರ್ಶನಗಳು
ಲಿಡೋ	
ಅಜ್ಞಾತವಾಸಿ (ಕ) ಜಾಟ್ (ಹಿಂ)	2+2 ಪ್ರದರ್ಶನಗಳು
ತಿಬ್ಬಾದೇವಿ	
ಭಗೀರಥ (ಕ)	4 ಪ್ರದರ್ಶನಗಳು
ಪ್ರಭಾ	
ಭಗೀರಥ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್ ದೂ : 4240422/4241800

ಸ್ಕ್ರೀನ್ 1	ಗುಡ್ ಬ್ಯಾಡ್ ಅಗ್ಲಿ (ತ): ಬೆ.10.30ಕ್ಕೆ, ಮ.1.25ಕ್ಕೆ, ಸಂ.4.20ಕ್ಕೆ, ರಾ.7.15ಕ್ಕೆ, ರಾ.10.15ಕ್ಕೆ.
ಸ್ಕ್ರೀನ್ 2	ಅಲಪ್ಪುಳ ಜಿಮ್ಖಾನ (ಮ): ಬೆ.10.20ಕ್ಕೆ, ಜಾಕ್ (ತೆ): ಮ.1.20ಕ್ಕೆ, ಸಂ.4.15ಕ್ಕೆ, ಅಜ್ಞಾತವಾಸಿ (ಕ): ರಾ.7.15ಕ್ಕೆ, ಬಜೂಕ (ಮ): ರಾ.9.55ಕ್ಕೆ.
ಸ್ಕ್ರೀನ್ 3	ದಿ ಅಮಚೂರ್ (ಇಂ): ಬೆ.10.40ಕ್ಕೆ, ರಾ.7.15ಕ್ಕೆ, ಅಲಪ್ಪುಳ ಜಿಮ್ಖಾನ (ಮ): ಮ.1.20ಕ್ಕೆ, ರಾ.10ಕ್ಕೆ. ಜಾಟ್ (ಹಿಂ): ಸಂ.4.10ಕ್ಕೆ.
ಸ್ಕ್ರೀನ್ 4	ವಿದ್ಯಾಪತಿ (ಕ): ಬೆ.10.30ಕ್ಕೆ, ರಾ.7.05ಕ್ಕೆ, ವಾಮನ (ಕ): ಮ.1.20ಕ್ಕೆ, ಸಂ.4.15ಕ್ಕೆ, ಜಾಟ್ (ಹಿಂ): ರಾ.9.55ಕ್ಕೆ.

ಐನಾಕ್ಸ್ ಮೂವೀಸ್ (INOX LIVE THE MOVIE) ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ ದೂ : 0821–2973519

ಸ್ಕ್ರೀನ್ 1	ವಿದ್ಯಾಪತಿ (ಕ): ಬೆ.10.45ಕ್ಕೆ, ಸಂ.4.15ಕ್ಕೆ, ಸಂ.6.45ಕ್ಕೆ, ಮನದ ಕಡಲು (ಕ): ಮ.1.15ಕ್ಕೆ, ರಾ.9.15ಕ್ಕೆ.
ಸ್ಕ್ರೀನ್ 2	ಗುಡ್ ಬ್ಯಾಡ್ ಅಗ್ಲಿ (ತ): ಬೆ.10.30ಕ್ಕೆ, ಸಂ.4ಕ್ಕೆ, ವಾಮನ (ಕ): ಮ.1.15ಕ್ಕೆ, ಸಂ.6.50ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 3	ವಾಮನ (ಕ): ಬೆ.10.40ಕ್ಕೆ, ಸಂ.4.05ಕ್ಕೆ, ಗುಡ್ ಬ್ಯಾಡ್ ಅಗ್ಲಿ (ತ): ಮ.1.20ಕ್ಕೆ, ಸಂ.6.45ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಎಂಪುರನ್ 2 (ಕ): ಮ.12.30ಕ್ಕೆ, ಬಜೂಕ (ಮ): ಮ.3.50ಕ್ಕೆ, ಸಂ.6.40ಕ್ಕೆ, ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್ ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮೈಸೂರಲ್ಲಿ ರೈತ ಕೃಷಿ ಕಾರ್ಮಿಕರ ಸಮ್ಮೇಳನ

ರೈತರ ಸಮಸ್ಯೆಗಳ ಪರಿಹಾರಕ್ಕೆ ಒತ್ತಾಯ



ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ರೋಟರಿ ಶಾಲೆ ಸಭಾಂಗಣದಲ್ಲಿ ಅಖಿಲ ಭಾರತ ರೈತ ಕೃಷಿ ಕಾರ್ಮಿಕರ ಸಂಘಟನೆಯ ಮೈಸೂರು ಜಿಲ್ಲೆಯ ರೈತ ಕೃಷಿ ಕಾರ್ಮಿಕರ ಪ್ರಥಮ ಸಮ್ಮೇಳನದಲ್ಲಿ ಆಯ್ಕೆಯಾದ ನೂತನ ಸಮಿತಿ ಪದಾಧಿಕಾರಿಗಳು.

ಮೈಸೂರು,ಏ.21(ಎಂಟಿವೈ)– ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ರೋಟರಿ ಶಾಲೆ ಸಭಾಂಗಣದಲ್ಲಿ ನಡೆದ ಅಖಿಲ ಭಾರತ ರೈತ ಕೃಷಿ ಕಾರ್ಮಿಕರ ಸಂಘಟನೆಯ ಮೈಸೂರು ಜಿಲ್ಲೆಯ ರೈತ ಕೃಷಿ ಕಾರ್ಮಿಕರ ಪ್ರಥಮ ಸಮ್ಮೇಳನದಲ್ಲಿ ಜಿಲ್ಲೆಯ ರೈತರು ಎದುರಿಸುತ್ತಿರುವ ವಿವಿಧ ಸಮಸ್ಯೆಗಳ ಪರಿಹಾರಕ್ಕೆ ಸರ್ಕಾರವನ್ನು ಒಕ್ಕೊರಲಿನಿಂದ ಒತ್ತಾಯಿಸಲಾಯಿತು.

ಸಮ್ಮೇಳನದ ಅಂಗವಾಗಿ ರಾಮಸ್ವಾಮಿ ವೃತ್ತದಿಂದ ಜೆಎಲ್‌ಬಿ ರಸ್ತೆಯಲ್ಲಿರುವ ರೋಟರಿ ಸಭಾಂಗಣದವರೆಗೆ ರೈತರು ಮೆರವಣಿಗೆಯಲ್ಲಿ ಆಗಮಿಸಿ, ಮೈಸೂರು ಜಿಲ್ಲೆಯಲ್ಲಿ ರೈತರು ಎದುರಿಸುತ್ತಿರುವ ಸಮಸ್ಯೆಗಳಿಗೆ ಸರ್ಕಾರ ಕೂಡಲೇ ಸ್ಪಂದಿಸಿ, ಅವುಗಳ ಈಡೇರಿಕೆಗೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಸಭೆಯ ಹಕ್ಕೊತ್ತಾಯ: ಮೈಸೂರು ತಾಲೂಕಿನ ಅಳಗಂಚಿಪುರ, ಮಲ್ಲೂಪುರ, ಅಡಕನಹಳ್ಳಿ, ಕೆಂಪಿಸಿದ್ದನಹುಂಡಿ, ಇಮ್ಮಾವು, ತಾಂಡವಪುರ, ಕೋಚನಹಳ್ಳಿ, ಹುಳಿಮಾವು, ಕಡಕೊಳ ಇನ್ನಿತರ ಗ್ರಾಮಗಳಲ್ಲಿ ಕೈಗಾರಿಕೆಗಳ ಅಭಿವೃದ್ಧಿಗೆ ಭೂಮಿ ನೀಡಿದ ಎಲ್ಲಾ ರೈತರ ಕುಟುಂಬಗಳಿಗೆ ವಂಶಪಾರಂಪರ್ಯವಾಗಿ ಕಾಯಂ ಉದ್ಯೋಗ ನೀಡಬೇಕು. ಬಗರ್ ಹುಕುಂ ಸಾಗುವಳಿದಾರರಿಗೆ ಕೂಡಲೇ ಹಕ್ಕು ಪತ್ರ ನೀಡಬೇಕು. ಸಾಗುವಳಿ ನೀಡಿರುವ ರೈತರ ಭೂಮಿಯನ್ನು ದುರಸ್ತಿ ಮಾಡಬೇಕು. ಕಾಡುಪ್ರಾಣಿಗಳು ರೈತರ ಜಮೀನಿಗೆ ನುಗ್ಗಿ ಬೆಳೆ ನಾಶ ಹಾಗೂ ಪ್ರಾಣ ಹಾನಿ ಮಾಡದಂತೆ ರೈಲ್ವೆ ಕಂಬಿ ಬ್ಯಾರಿಕೇಡ್, ಜಾಲರಿಯನ್ನು ಕಾಡಿನ ಸುತ್ತ ಅಳವಡಿಸಬೇಕು. ಜಿಲ್ಲೆಯ ಎಲ್ಲಾ ಕೆರೆಗಳ ಹೂಳು ತೆಗೆಸಿ, ನದಿ ಮೂಲದಿಂದ ನೀರನ್ನು ತುಂಬಿಸಬೇಕು ಎಂದು ಒತ್ತಾಯಿಸಿದರು.

ಮುದ್ದಹಳ್ಳಿ, ಎಲಚಗೆರೆ, ಸಿಂಧುವಳ್ಳಿಪುರ, ಹದಿನಾರು ಮತ್ತು ಸುತ್ತಮುತ್ತಲ ಗ್ರಾಮಗಳಲ್ಲಿ ಫಲವತ್ತಾದ ಕೃಷಿ ಯೋಗ್ಯ ಭೂಮಿಯನ್ನು ಕೈಗಾರಿಕೆಗಳ ಅಭಿವೃದ್ಧಿಗೆ ಬಲವಂತವಾಗಿ ಸ್ವಾಧೀನ ಮಾಡಲು ಹೊರಡಿಸಿರುವ ರಾಜ್ಯಪತ್ರವನ್ನು ಹಿಂಪಡೆಯಬೇಕು. ರೈತರ ಎಲ್ಲಾ ಬೆಳೆಗಳಿಗೂ ಸಿ2+50% ಸೂತ್ರದಡಿ ಕನಿಷ್ಠ ಬೆಂಬಲ ಬೆಲೆಯನ್ನು ಕಾನೂನುಬದ್ಧಗೊಳಿಸಬೇಕು. ರೈತರಿಗೆ ಬೀಜ, ರಸಗೊಬ್ಬರ, ಕೀಟನಾಶಕ ಮತ್ತು ಯಂತ್ರೋಪಕರಣಗಳನ್ನು ಸಬ್ಸಿಡಿ ಮೂಲಕ ಕಡಿಮೆ ಬೆಲೆಗೆ ನೀಡಬೇಕು. ವಿದ್ಯುತ್ ಖಾಸಗೀಕರಣ ಹಾಗೂ ಹೊಸ ಕೃಷಿ ಮಾರುಕಟ್ಟೆ ನೀತಿಯನ್ನು ಹಿಂಪಡೆಯುವಂತೆ ಮನವಿ ಮಾಡಿದರು.

ನೂತನ ಸಮಿತಿ ಅಸ್ತಿತ್ವಕ್ಕೆ: ಇದೆ ವೇಳೆ ಅಖಿಲ ಭಾರತ ರೈತ ಕೃಷಿ ಕಾರ್ಮಿಕರ ಸಂಘಟನೆ ನೂತನ ಜಿಲ್ಲಾ ಸಮಿತಿಯನ್ನು ರಚಿಸಲಾಯಿತು. ಅಧ್ಯಕ್ಷರಾಗಿ ಬಸವರಾಜು, ಉಪಾಧ್ಯಕ್ಷರಾಗಿ ಬಸವೇಗೌಡ ಹಾರೋಹಳ್ಳಿ, ರಾಮಣ್ಣ ಕೆಲ್ಲಹಳ್ಳಿ, ರಂಗರಾಜು, ನಂಜುಂಡ, ಮತ್ತು ರಾಜು ಅಳಗಂಚಿ, ಕಾರ್ಯದರ್ಶಿಗಳಾಗಿ ಪುನೀತ್ ಅಳಗಂಚಿ, ಕಚೇರಿ ಕಾರ್ಯದರ್ಶಿಯಾಗಿ ರವಿಕುಮಾರ್ ಕೆ.ಕೆ, ಜಂಟಿ ಕಾರ್ಯದರ್ಶಿಗಳಾಗಿ ಉಮೇಶ್ ಕೆ.ಎಸ್. ಹುಂಡಿ, ಮಂಜು ಕೆಂಪಿಸಿದ್ದನಹುಂಡಿ, ಬಸವಣ್ಣ ಬಂಚಳ್ಳಿ ಹುಂಡಿ, ಮಂಜುನಾಥ್ ಮಲ್ಲುಪುರ, ಯೋಗೇಶ್ ಕೆಂಪಿಸಿದ್ದನಹುಂಡಿ ಆಯ್ಕೆಯಾದರು. ಅಲ್ಲದೆ, 10 ಮಂದಿ ಕಾರ್ಯಕಾರಿ ಸಮಿತಿ ಮತ್ತು 15 ಜನ ಕೌನ್ಸಿಲ್ ಸದಸ್ಯರನ್ನೊಳಗೊಂಡ ನೂತನ ಜಿಲ್ಲಾ ಸಮಿತಿಯನ್ನು ಆಯ್ಕೆ ಮಾಡಲಾಯಿತು.

ಜನಾಂದೋಲನಗಳ ಮಹಾ ಮೈತ್ರಿ ರಾಜ್ಯ ಸಂಚಾಲಕರು ಉಗ್ರನರಸಿಂಹೇಗೌಡ ಸಮ್ಮೇಳನವನ್ನು ಉದ್ಘಾಟಿಸಿದರು. ಎಐಕೆಕೆಎಂಎಸ್ ರಾಜ್ಯಾಧ್ಯಕ್ಷ ಎಂ. ಶಶಿಧರ್ ಮುಖ್ಯ ಭಾಷಣ ಮಾಡಿದರು. ರಾಜ್ಯ ಕಾರ್ಯದರ್ಶಿ ಭಗವಾನ್ ರೆಡ್ಡಿ, ಎಸ್‌ಯುಸಿಐ ಜಿಲ್ಲಾ ಕಾರ್ಯದರ್ಶಿ ರವಿ ಬಿ ಅತಿಥಿಗಳಾಗಿ ಭಾಗವಹಿಸಿದ್ದರು. ಜಿಲ್ಲಾ ಸಂಚಾಲಕ ಎಚ್.ಎಂ. ಬಸವರಾಜು ಅಧ್ಯಕ್ಷತೆ ವಹಿಸಿದ್ದರು. ಎಐಕೆಕೆಎಂಎಸ್ ರಾಜ್ಯ ಉಪಾಧ್ಯಕ್ಷ ಹೆಚ್.ಪಿ. ಶಿವಪ್ರಕಾಶ್‌ವಾಗಿ ಮಾತನಾಡಿದರು.

ಕಾರ್ಯಾಗಾರ

ಮೈಸೂರು, ಏ. 21– ಮೈಸೂರಿನ ಫಾರೂಕಿಯಾ ಡೆಂಟಲ್ ಕಾಲೇಜು ಮತ್ತು ಆಸ್ಪತ್ರೆಯು ಸರಳೀಕೃತ ಇಂಪ್ಲಾಂಟ್ ಪ್ರೋಗ್ರಾಂ – ಡಿಜಿಟಲ್ "SiP-D" ಕುರಿತು ಕಾರ್ಯಾಗಾರವನ್ನು ಮೇ 2, 3 ಮತ್ತು 4 ರಂದು ಆಯೋಜಿಸಲಾಗಿದೆ. ಇದು ಮೊದಲ ಡಿಜಿಟಲ್ ದಂತ ವೈದ್ಯಕೀಯ ಕಾರ್ಯಾಗಾರವಾಗಿದ್ದು, ಅಂತ್ಯ ರೋಗಿಗಳಿಗೆ ಉಚಿತ ಇಂಪ್ಲಾಂಟ್ ಮಾಡಲಾಗುತ್ತದೆ. ಹೆಚ್ಚಿನ ವಿವರಗಳಿಗೆ ಡಾ॥ ಮೃಣಾಲ್ – 9503873924, ಡಾ॥ ಧನುಷ್.ಆರ್. – 9620216160 ನಂಬರನ್ನು ಸಂಪರ್ಕಿಸಬಹುದು.


1ರಿಂದ 10ನೇ ತರಗತಿಯ ಅಂಧ ಗಂಡು ಮಕ್ಕಳ ದಾಖಲಾತಿ ಪ್ರಾರಂಭ

ಮೈಸೂರು,ಏ.21– ಅಂಧ ಮಕ್ಕಳ ಸರ್ಕಾರಿ ಪಾಠಶಾಲೆ, ತಿಲಕ್‌ನಗರ, ಮೈಸೂರು ಈ ಶಾಲೆಯಲ್ಲಿ ಕಳೆದ ಹಲವಾರು ವರ್ಷದಿಂದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಶೇ.100 ಫಲಿತಾಂಶ ಪಡೆಯುತ್ತಿದ್ದು, 2025ನೇ ಸಾಲಿಗೆ 6 ರಿಂದ 16 ವರ್ಷ ವಯೋಮಿತಿಯ ಅಂಧ ಗಂಡು ಮಕ್ಕಳಿಗೆ 1 ನೇ ತರಗತಿಯಿಂದ 10ನೇ ತರಗತಿಯವರೆಗೆ ದಾಖಲಾತಿ ಪ್ರಾರಂಭವಾಗಿದೆ.

ಶೈಕ್ಷಣಿಕ ಅವಧಿಯಲ್ಲಿ ಅಂಧ ಮಕ್ಕಳಿಗೆ ಪಠ್ಯಕ್ರಮದ ಜೊತೆಗೆ ಪಠ್ಯೇತರ ಚಟುವಟಿಕೆಗಳಾದ Daily Living skills (DLS), ಯೋಗ, ಮೆಡಿಟೇಷನ್, ದೈಹಿಕ ಶಿಕ್ಷಣ, ಸಂಗೀತ , ಡ್ಯಾನ್ಸ್, ಡ್ರಾಮ, ಚಲನವಲನ ತರಬೇತಿ, ಕಂಪ್ಯೂಟರ್ ತರಬೇತಿ, Smart Class ಸೇವೆ, Spoken English, ತರಬೇತಿಯನ್ನು ನುರಿತ ವಿಶೇಷ ಶಿಕ್ಷಕರಿಂದ ನೀಡುವುದರ ಜೊತೆಗೆ ಮಕ್ಕಳಿಗೆ ಉಚಿತವಾಗಿ ಊಟ ವಸತಿ, ಬ್ರೈಲ್ ಪುಸ್ತಕಗಳು, ಶಾಲಾ ಸಮವಸ್ತ್ರ, ಕಲಿಕಾ ಉಪಕರಣಗಳು, ವೈದ್ಯಕೀಯ ತಪಾಸಣೆ, ಮಕ್ಕಳಿಗೆ ಸ್ನಾನಕ್ಕಾಗಿ ಬಿಸಿ ನೀರಿನ (ಸೋಲಾರ್ ವಾಟರ್ ಹೀಟರ್) ವ್ಯವಸ್ಥೆ ಮತ್ತು ಇತರೆ ಸೌಲಭ್ಯಗಳನ್ನು ಯಾವುದೇ ರೀತಿಯ ಶುಲ್ಕವಿಲ್ಲದೆ ಸರ್ಕಾರದ ವತಿಯಿಂದ ಈ ಶಾಲೆಯಲ್ಲಿ ಒದಗಿಸಲಾಗುತ್ತದೆ.

ಆಸಕ್ತ ಪಾಲಕರು ಮಕ್ಕಳ ವಿಕಲಚೇತನ ವೈದ್ಯಕೀಯ ಪ್ರಮಾಣ ಪತ್ರ (ಯುಡಿಐಡಿ ಕಾರ್ಡ್) ಜನನ ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರ ಭಾವಚಿತ್ರ ಹಾಗೂ ಆಧಾರ್ ಕಾರ್ಡ್ ದಾಖಲೆಗಳೊಂದಿಗೆ ಖುದ್ದಾಗಿ ಶಾಲೆಗೆ ಭೇಟಿ ನೀಡಿ ಪ್ರವೇಶ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂ.ಸಂ. 0821–2497496 ಹಾಗೂ ಅಧೀಕ್ಷಕರು, ಅಂಧ ಮಕ್ಕಳ ಸರ್ಕಾರಿ ಪಾಠಶಾಲೆ ತಿಲಕ್ ನಗರ, ಮೈಸೂರು ಇವರನ್ನು ಖುದ್ದಾಗಿ ಅಥವಾ ಮೊ. ನಂ.94814 41453 ನ್ನು ಸಂಪರ್ಕಿಸಬಹುದು ಎಂದು ಅಂಧ ಮಕ್ಕಳ ಸರ್ಕಾರಿ ಪಾಠಶಾಲೆಯ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇಂದು ವಿವಿಧೆಡೆ ವಿದ್ಯುತ್ ವ್ಯತ್ಯಯ



ಮೈಸೂರು,ಏ.21– ದೊಡ್ಡಕೆರೆ ಮೈದಾನ ವಿದ್ಯುತ್ ವಿತರಣಾ ವ್ಯಾಪ್ತಿಯಲ್ಲಿ ನಿರ್ವಹಣಾ ಕಾಮಗಾರಿ ನಿಮಿತ್ತ ಏ.22 ಬೆಳಿಗ್ಗೆ 10 ರಿಂದ ಸಂಜೆ 6 ಗಂಟೆಯವರೆಗೆ ಜೆ.ಸಿ ನಗರ, ಕೆ.ಸಿ ನಗರ, ಕುರುಬಾರಹಳ್ಳಿ ವೃತ್ತ, ಚಾಮುಂಡಿಬೆಟ್ಟದ ರಸ್ತೆ, Income Tax ಬಡಾವಣೆ, ಇಂಡಸ್ ವ್ಯಾಲಿ, ಜೆ.ಎಸ್.ಎಸ್ ಆಯುರ್ವೇದಿಕ್ ಆಸ್ಪತ್ರೆ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗುತ್ತದೆ ಎಂದು ಸೆಸ್ಕ್ ಪ್ರಕಟಣೆ ತಿಳಿಸಿದೆ.

ಆತ್ಮವಿಶ್ವಾಸದ ಕೊರತೆಯಿಂದ ಯುವಜನ ಆತ್ಮಹತ್ಯೆ ಮೊರೆ

ಚಿಂತಕ ಡಾ॥ ನರಹಳ್ಳಿ ಬಾಲಸುಬ್ರಹ್ಮಣ್ಯ



ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಮಹಿಳಾ ಕಾಲೇಜಿನ ನವಜ್ಯೋತಿ ಸಭಾಂಗಣದಲ್ಲಿ ಸೋಮವಾರ ನಡೆದ 'ಪಂಪನ ಕಾವ್ಯಗಳು–ಪುನರಾವಲೋಕನ' ರಾಷ್ಟ್ರೀಯ ವಿಚಾರ ಸಂಕಿರಣವನ್ನು ಉದ್ಘಾಟಿಸಿ, ಚಿಂತಕ ಡಾ.ನರಹಳ್ಳಿ ಬಾಲಸುಬ್ರಹ್ಮಣ್ಯ ಮಾತನಾಡಿದರು.

ಮೈಸೂರು,ಏ.21(ಎಂಟಿವೈ)– ಪ್ರಸ್ತುತ ಯುವ ಸಮುದಾಯದಲ್ಲಿ ಆತ್ಮವಿಶ್ವಾಸದ ಕೊರತೆಯಿದ್ದು, ಸಣ್ಣಮಟ್ಟ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲಾಗದೇ ಆತ್ಮಹತ್ಯೆಯಂತಹ ದಾರಿ ತುಳಿಯುತ್ತಿರುವುದು ಶೋಚನೀಯ ಎಂದು ಚಿಂತಕ ಡಾ.ನರಹಳ್ಳಿ ಬಾಲಸುಬ್ರಹ್ಮಣ್ಯ ವಿಷಾದಿಸಿದ್ದಾರೆ.

ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಮಹಿಳಾ ಕಾಲೇಜಿನ ನವಜ್ಯೋತಿ ಸಭಾಂಗಣದಲ್ಲಿ ಕಾಲೇಜು ಕನ್ನಡ ವಿಭಾಗ ಹಾಗೂ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಸಂಯುಕ್ತಾಶ್ರಯದಲ್ಲಿ ಸೋಮವಾರ ಆಯೋಜಿಸಿದ್ದ 'ಪಂಪನ ಕಾವ್ಯಗಳು – ಪುನರಾವಲೋಕನ' ಒಂದು ದಿನದ ರಾಷ್ಟ್ರೀಯ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಮಾತನಾಡಿದ ಅವರು, ಆದಿಕವಿ ಪಂಪ ಎಲ್ಲರಲ್ಲೂ ಆತ್ಮವಿಶ್ವಾಸ ಇರಬೇಕು ಎಂದು ಪ್ರತಿಪಾದಿಸಿದ್ದರು. ಆದರೆ, ಇತ್ತೀಚಿನ ವರ್ಷಗಳಲ್ಲಿ ಯುವಜನರಲ್ಲಿ ಆತ್ಮವಿಶ್ವಾಸವೇ ಇಲ್ಲದಂತೆ ಭಾಸವಾಗುತ್ತಿದೆ. ಸಣ್ಣಮಟ್ಟ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳುವ ಶಕ್ತಿಯೂ ಯುವಜನರಲ್ಲಿ ಕಾಣುತ್ತಿಲ್ಲ. ಆ ಕಾರಣದಿಂದಲೇ ಎದುರಾಗುವ ಸಣ್ಣ ಸಮಸ್ಯೆಗಳಿಗೂ ಆತ್ಮಹತ್ಯೆ ಮಾಡಿಕೊಳ್ಳುವ ಹಾದಿ ತುಳಿಯುತ್ತಿದ್ದಾರೆ. ಇದು ವಿಷಾದನೀಯ. ಒಂದು ಕಲ್ಲು ಶಿಲೆಯಾಗಲು ಹಲವು ಉಳಿ ಪೆಟ್ಟು ತಿನ್ನಬೇಕು. ಹೆಚ್ಚು ಉಳಿ ಪೆಟ್ಟು ತಿಂದಷ್ಟು ಮೂರ್ತಿಯಾಗಿ ಹೊರಹೊಮ್ಮಿ, ಜನರು ಗೌರವದಿಂದ ಕಾಣುವಂತಾಗುತ್ತದೆ. ಆದರೆ, ಉಳಿ ಪೆಟ್ಟಿನಿಂದ ಕಲ್ಲು ಹೋಳಾಗದಂತೆ ಎಚ್ಚರಿಕೆ ವಹಿಸಬೇಕು. ಯುವ ಜನರು ಇನ್ನಾದರೂ ಆತ್ಮವಿಶ್ವಾಸ ಬೆಳೆಸಿಕೊಂಡು ಸವಾಲುಗಳನ್ನು ಧೈರ್ಯದಿಂದ ಎದುರಿಸಬೇಕು. ಪಂಪ ಕವಿಯೂ ಈ ಹಿಂದೆಯೇ ಆತ್ಮವಿಶ್ವಾಸ ಬೆಳೆಸಿಕೊಳ್ಳಬೇಕಾದ ಮಹತ್ವ ಸಾರಿದ್ದರು ಎಂದರು.

ಪರಂಪರೆಯೊಂದಿಗೆ ಸಂಬಂಧಗಳನ್ನು ಬೆಳೆಸಿಕೊಂಡರೆ ಮಾತ್ರ ಇಂದಿನ ಅನೇಕ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು. ನವ್ಯ ಸಾಹಿತ್ಯದ ನಂತರ ಕನ್ನಡದ ಪರಂಪರೆಯೊಂದಿಗೆ ಸಂಬಂಧವೇ ಇಲ್ಲದಂತಾಗಿದೆ. ಇಂದಿನ ಆಧುನಿಕ ಮನಸ್ಸುಗಳು ಪಂಪ, ರನ್ನ, ನಾಗಚಂದ್ರ, ಕುಮಾರವ್ಯಾಸ ಹಾಗೂ ಜನ್ನನ ಬಗ್ಗೆ ಚಿಂತನೆ ಮಾಡುತ್ತಿಲ್ಲ. ಹೀಗಾಗಿ ಪರಂಪರೆಯೊಂದಿಗೆ ನಾವು ಮತ್ತೆ ಸಂಬಂಧ ಬೆಳೆಸಿಕೊಳ್ಳಬೇಕಾಗಿದೆ. ಪರಂಪರೆಯಲ್ಲಿ ಹಿರಿಯ ಮನಸ್ಸುಗಳು ಹೇಗೆ ಸಮಸ್ಯೆಗಳಿಗೆ ಪರಿಹಾರದ ಸಾಧ್ಯತೆಗಳನ್ನು ಕಂಡುಕೊಂಡಿದೆ ಎಂಬುದನ್ನು ಅರ್ಥ ಮಾಡಿಕೊಂಡರೆ ಇಂದಿನ ಅನೇಕ ಸಮಸ್ಯೆಗಳಿಗೆ ಪರಿಹಾರ ಸಿಗಲಿದೆ ಎಂದು ಅಭಿಪ್ರಾಯಪಟ್ಟರು.

ರಾಜಕೀಯ ಮತ್ತು ಧರ್ಮ ಎಂಬ ಎರಡು ಶಕ್ತಿ ಕೇಂದ್ರಗಳನ್ನು ಪಂಪ ವಿಶ್ಲೇಷಿದ್ದಾನೆ ಎಂಬುದಕ್ಕೆ ಮುಖ್ಯವಾಗಿದ್ದಾನೆ. ಕುವೆಂಪು ಅವರಿಗೆ ವಿಕ್ರಮಾರ್ಜುನ ವಿಜಯಕ್ಕಿಂತ ಆದಿಪುರಾಣವೇ ಇಷ್ಟವಾಗಿತ್ತು. ಆದಿಪುರಾಣದಲ್ಲಿ ಆದಿನಾಥನ ಕಥೆಯಲ್ಲಿ ಭೋಗದ ತುತ್ತತುದಿಯೇ ವೈರಾಗ್ಯ ಹಾಗೂ ಭರತ, ಬಾಹುಬಲಿಯ ಕತೆಯಲ್ಲಿ ವೈಭವದ ಅಥವಾ ಅಧಿಕಾರದ ತುತ್ತತುದಿಯೇ ತ್ಯಾಗ ಎಂದು ಪಂಪ ಹೇಳಿದ್ದಾನೆ. ಬದುಕಿನಲ್ಲಿ ಹಣವೂ ಬೇಕು ಹಾಗೂ ಕಾಮವೂ ಬೇಕು. ಆದರೆ ಅದು ಧರ್ಮಕ್ಕೆ ಅಧೀನವಾಗಿರಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ವಹಿಸಿದ್ದರು. ಸಾಹಿತಿ ಡಾ.ಜಿ.ಬಿ.ಹರೀಶ, ಕನ್ನಡ ವಿಭಾಗದ ಮುಖ್ಯಸ್ಥ ಆರ್.ಎಸ್.ಕುಮಾರ್, ಜೆಎಸ್‌ಎಸ್ ಮಹವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕ ಪ್ರೊ.ಮೊರಬಂದ ಮಲ್ಲಿಕಾರ್ಜುನ, ಕರ್ನಾಟಕ ರಾಜ್ಯ ಮುಕ್ತವಿಶ್ವವಿದ್ಯಾನಿಲಯದ ಕನ್ನಡ ವಿಭಾಗದ ಮುಖ್ಯಸ್ಥರಾದ ಪ್ರೊ.ಟಿ.ಎಂ.ಗೀತಾಂಜಲಿ, ಪ್ರಾಚಾರ್ಯ ಡಾ.ರೇಚಣ್ಣ ಉಪಸ್ಥಿತರಿದ್ದರು. ಮೈಸೂರು ನಗರ ಘಟಕದ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಮ.ಗು.ಸದಾನಂದಯ್ಯ, ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಯಳವರಹುಂಡಿ ಸಿದ್ದಪ್ಪ, ಸಂವಹನ ಪ್ರಕಾಶನದ ಡಿ.ಎನ್.ಲೋಕಪ್ಪ ಸೇರಿದಂತೆ ಇನ್ನಿತರರು ವಿಚಾರ ಸಂಕಿರಣದಲ್ಲಿ ಪಾಲ್ಗೊಂಡಿದ್ದರು.

ಪ್ರಸ್ತುತ ಹಳಗನ್ನಡ ಸಾಹಿತ್ಯ ಕುರಿತು ಆಸಕ್ತಿ ಕಡಿಮೆ

ಹಿರಿಯ ಸಾಹಿತಿ ಪ್ರೊ.ರಾಗೌ ಬೇಸರ



ಪ್ರೊ.ರಾಗೌ

ಮೈಸೂರು,ಏ.21(ಪಿಎಂ)– ಹಳಗನ್ನಡ ಕವಿಗಳು ಹಾಗೂ ಅವರ ಸಾಹಿತ್ಯವನ್ನು ಓದಿ ಅರ್ಥೈಸಿಕೊಳ್ಳುವಲ್ಲಿ ಪ್ರಸ್ತುತ ಆಸಕ್ತಿ ಕಡಿಮೆಯಾಗುತ್ತಿದೆ ಎಂದು ಹಿರಿಯ ಸಾಹಿತಿಗಳೂ ಆದ ಮೈಸೂರು ವಿವಿ ನಿವೃತ್ತ ಪ್ರಾಧ್ಯಾಪಕ ಪ್ರೊ.ರಾಗೌ (ರಾಮೇಗೌಡ) ಬೇಸರ ವ್ಯಕ್ತಪಡಿಸಿದರು.

ಮೈಸೂರಿನ ಸರಸ್ವತಿಪುರಂನ ಜೆಎಸ್‌ಎಸ್ ಮಹಿಳಾ ಕಾಲೇಜಿನ ನವಜ್ಯೋತಿ ಸಭಾಂಗಣದಲ್ಲಿ ಕಾಲೇಜಿನ ಕನ್ನಡ ವಿಭಾಗ ಮತ್ತು ಮುಕ್ತ ವಿವಿಯ ಕನ್ನಡ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಜಂಟಿ ಆಶ್ರಯದಲ್ಲಿ 'ಪಂಪನ ಕಾವ್ಯಗಳು–ಪುನರಾವಲೋಕನ' ಕುರಿತು ಸೋಮವಾರ ಹಮ್ಮಿಕೊಂಡಿದ್ದ ರಾಷ್ಟ್ರಮಟ್ಟದ ವಿಚಾರ ಸಂಕಿರಣದ ಸಮಾರೋಪ ಸಮಾರಂಭದಲ್ಲಿ ಅವರು ಸಮಾರೋಪ ಭಾಷಣ ಮಾಡಿದರು.

ಪಂಪನ ಕಾಲ 10ನೇ ಶತಮಾನದ ಮಧ್ಯೆ ಭಾಗವಾಗಿದೆ. ಅವನು ಕಾಲಾವಧಿ ಮುಗಿದು ಸುಮಾರು 1 ಸಾವಿರ ವರ್ಷಗಳು ಕಳೆದರೂ ಅವನ ಪ್ರಸಿದ್ಧಿ ಪ್ರಸ್ತುತದಲ್ಲೂ ಉಳಿದಿದೆ. ಸಾವಿರ ವರ್ಷಗಳಿಂದ ನಿರಂತರವಾಗಿ ಚರ್ಚೆಯಲ್ಲಿರುವ ಕವಿ ಪಂಪ. ಅದರಲ್ಲಿಯೂ ಹಳಗನ್ನಡದ ಒಬ್ಬ ಕವಿ ಹೀಗೆ ಪ್ರಚಲಿತವಾಗಿರಲು ಕಾರಣ ಅವನ ಸಾಹಿತ್ಯದಲ್ಲಿರುವ ಸೃಜನಶೀಲತೆಯಾಗಿದೆ ಎಂದು ತಿಳಿಸಿದರು. ವೆಂಗಿ ಚಾಲುಕ್ಯ ವಂಶದ ಎರಡನೇ ಅರಿಕೇಸರಿಯ ಆಸ್ಥಾನ ಪಂಡಿತನಾಗಿದ್ದ ಪಂಪನಿಗೆ ಅರಿಕೇಸರಿ ಎಲ್ಲಾ ಅನುಕೂಲಗಳನ್ನು ಮಾಡಿಕೊಟ್ಟಿದ್ದ. ಪಂಪ ತನ್ನ ಬಗ್ಗೆಯೇ ತಾನು ಹೇಳಿಕೊಳ್ಳುವ ಭರದಲ್ಲಿ ತನ್ನ ಸಾಹಿತ್ಯವು ಹಿಂದಿನ ಎಲ್ಲವನ್ನೂ ಹೊಡೆದು ಹಾಕಿರುವುದಾಗಿ ಹೇಳಿಕೊಂಡಿದ್ದು, ಹೀಗೆ ಪಂಪ ಏಕೆ ಹೇಳಿಕೊಂಡಿದ್ದಾನೆ ಎಂಬುದು ಮಾತ್ರ ಅರ್ಥವಾಗದು. ಕವಿ ಎತ್ತರಕ್ಕೆ ಬೆಳೆದಂತೆ ಅವನು ಬಾಗಬೇಕೆ ಹೊರತು ಬೀಗ ಬಾರದು. ಪಂಪ ಏಕೆ ಈ ರೀತಿ ಹೇಳಿದ ಎಂಬ ಬಗ್ಗೆ ಇಂದಿಗೂ ಉತ್ತರ ಸಿಗುವುದಿಲ್ಲ ಎಂದರು.

'ವಿಕ್ರಮಾರ್ಜುನ ವಿಜಯ'ವು ಪಂಪ ಭಾರತ ಎಂದೇ ಪ್ರಸಿದ್ಧಿಯಾಗಿದೆ. ಇದಕ್ಕೆ ಸಂಬಂಧಿಸಿದಂತೆ ಕೇವಲ ಒಂದೂ ಮುಕ್ಕಾಲು ಪ್ರತಿಗಳಷ್ಟೇ ಲಭ್ಯವಾಗಿವೆ. ಆಗ ಹಸ್ತಪ್ರತಿ ಸಂರಕ್ಷಣೆ ಕಷ್ಟಕರವಾಗಿತ್ತು. ಪಂಪನ ಪೂರ್ವದಲ್ಲಿನ ಎಷ್ಟೋ ಮಹಾಕಾವ್ಯಗಳು ನಮಗೆ ದೊರೆಯದಿರುವ ಸಾಧ್ಯತೆಯೂ ಇದೆ. ಹೀಗಿರುವಾಗ ಪಂಪ ತನ್ನ ಸಾಹಿತ್ಯವೇ ಹಿಂದಿನ ಎಲ್ಲವಕ್ಕೂ ಶ್ರೇಷ್ಠವೆಂಬ ಅರ್ಥದಲ್ಲಿ ಹೇಳಿಕೊಂಡಿರುವುದು ಸೂಕ್ತವಲ್ಲ. ಇದೊಂದನ್ನು ದೋಷವೆಂದು ಪರಿಗಣಿಸಿದರೂ ಪಂಪನ ಮಹಾಕವಿಯ ಪಟ್ಟ ಅಲುಗಾಡಿಸಲು ಸಾಧ್ಯವಿಲ್ಲ ಎಂದರು.

ರಾಜ್ಯ ಸರ್ಕಾರಿ ನೌಕರರು, ಕುಟುಂಬಸ್ಥರಿಗೆ ನಗದು ರಹಿತ ಆರೋಗ್ಯ ಸೇವೆ 'ಆರೋಗ್ಯ ಸಂಜೀವಿನಿ' ಯೋಜನೆಗೆ ಸಿಎಂ ಚಾಲನೆ



ಸಾಂಕೇತಿಕವಾಗಿ ಎಚ್‌ಆರ್‌ಎಂಎಸ್ ವ್ಯವಸ್ಥೆಯಡಿ ಸರ್ಕಾರಿ ನೌಕರರ ನೋಂದಣಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಡಿದರು

ಬೆಂಗಳೂರು, ಏ.21– ಕರ್ನಾಟಕ ರಾಜ್ಯ ಸರಕಾರಿ ನೌಕರರ ಬಹುದಿನದ ಬೇಡಿಕೆಯಂತೆ ಎಲ್ಲಾ ಸರಕಾರಿ ನೌಕರರು ಹಾಗೂ ಅವರ ಅವಲಂಬಿತ ಕುಟುಂಬದ ಸದಸ್ಯರಿಗೆ ನಗದು ರಹಿತ ಆರೋಗ್ಯ ಸೇವೆಗಳನ್ನು ಒದಗಿಸಲು ರಾಜ್ಯ ಸರ್ಕಾರ ರೂಪಿಸಿರುವ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಗೆ (ಕೆಎಎಸ್‌ಎಸ್) ಮುಖ್ಯಮಂತ್ರಿ ಸಿದ್ದರಾಮಯ್ಯ ಸೋಮವಾರ ಚಾಲನೆ ನೀಡಿದರು. ಈ ವೇಳೆ ಸಾಂಕೇತಿಕವಾಗಿ ಎಚ್‌ಆರ್‌ಎಂಎಸ್ ವ್ಯವಸ್ಥೆಯಡಿ ಸರ್ಕಾರಿ ನೌಕರರ ನೋಂದಣಿಯನ್ನೂ ಮಾಡಲಾಯಿತು.

ಈ ಮಹತ್ವಾಕಾಂಕ್ಷಿ ಯೋಜನೆಯಡಿ ಸರ್ಕಾರ ವಿವಿಧ ಇಲಾಖೆಗಳ 6 ಲಕ್ಷ ನೌಕರರು ಹಾಗೂ ಅವರ ಕುಟುಂಬದ ಸದಸ್ಯರನ್ನು ಒಳಗೊಂಡಂತೆ ಅಂದಾಜು 25 ಲಕ್ಷ ಫಲಾನುಭವಿಗಳು ನಗದು ರಹಿತ ಆರೋಗ್ಯ ಸೌಲಭ್ಯವನ್ನು ಪಡೆಯಲಿದ್ದಾರೆ. ಈ ಯೋಜನೆಯಡಿ ಮೊದಲನೇ ಹಂತದಲ್ಲಿ ಸರ್ಕಾರಿ ನೌಕರರು ಅಂದಾಜು 2000 ಒಳರೋಗಿ ಚಿಕಿತ್ಸಾ ವಿಧಾನಗಳಿಗೆ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಮೂಲಕ ನೋಂದಾಯಿತವಾದ ಖಾಸಗಿ ಆಸ್ಪತ್ರೆಗಳಲ್ಲಿ ನಗದು ರಹಿತವಾಗಿ ಚಿಕಿತ್ಸೆಯನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಆರ್ಥಿಕ ಸ್ವಾತಂತ್ರ್ಯ ಮತ್ತು ಸಾಮಾಜಿಕ ಸ್ವಾತಂತ್ರ್ಯ ಸಿಗದ ಹೊರತು ನಮಗೆ ಸಿಕ್ಕಿರುವ ರಾಜಕೀಯ ಸ್ವಾತಂತ್ರ್ಯಕ್ಕೆ ಅರ್ಥವಿಲ್ಲ ಎಂದು ಅಭಿಪ್ರಾಯಪಟ್ಟರು. ಬ್ಯಾಂಕ್ವೆಟ್ ಹಾಲ್‌ನಲಿ ಸೋಮವಾರ ಆಯೋಜಿಸಿದ್ದ ರಾಜ್ಯ ಸರಕಾರಿ ನೌಕರರ ದಿನಾಚರಣೆಯಲ್ಲಿ ನೌಕರರಿಗೆ ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದರು.

ನೌಕರರ ಕಾರ್ಯವೈಖರಿಯಿಂದಲೇ ಇಂದು ರಾಜ್ಯವು ಜಿಎಸ್‌ಟಿ ಸಂಗ್ರಹದಲ್ಲಿ ದೇಶದಲ್ಲೇ ಎರಡನೇ ಸ್ಥಾನದಲ್ಲಿದ್ದು, ಪ್ರಶಸ್ತಿ ಸ್ವೀಕರಿಸಿರುವವರ ಜವಾಬ್ದಾರಿ ಈಗ ಇನ್ನಷ್ಟು ಹೆಚ್ಚಾಗಿದೆ. ಆದ ಕಾರಣ ನೀವೆಲ್ಲರೂ ಕರ್ತವ್ಯ ಪ್ರಜ್ಞೆ ಹೆಚ್ಚಿಸಿಕೊಂಡು, ಪರಿಣಾಮಕಾರಿ ಜನಸೇವೆ ಮಾಡುವ ಮೂಲಕ 5.5 ಲಕ್ಷ ಸರಕಾರಿ ನೌಕರರಿಗೂ ಸ್ಫೂರ್ತಿಯಾಗಬೇಕು ಎಂದರು.

ಸಾರ್ವಜನಿಕ ಪ್ರಕಟಣೆ

ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಈ ಕೆಳಗೆ ವಿವರಿಸಿರುವ ಷೆಡ್ಯೂಲ್ ಸ್ವತ್ತಿನ ಮಾಲೀಕರಾದ ಲೇಟ್ ಕೆ.ಶಂಕರನಾರಾಯಣ ರಾಜು ರವರ ಮಗ ಶ್ರೀ. ರಾಜಶೇಖರರಾಜು ರವರು, ಈ ಕೆಳಗೆ ವಿವರಿಸಿರುವ ಷೆಡ್ಯೂಲ್ ಸ್ವತ್ತನ್ನು ನನ್ನ ಕಕ್ಷಿದಾರರಿಗೆ ಮಾರಾಟ ಮಾಡಲು ಅಪೇಕ್ಷಿಸಿರುತ್ತಾರೆ. ಅದರಂತೆ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧಕ್ರಯಕ್ಕೆ ಪಡೆಯಲು ಸಿದ್ಧರಿರುವುದರಿಂದ ಸದರಿ ಸ್ವತ್ತಿನ ಮೇಲೆ ಬ್ಯಾಂಕ್ ಮತ್ತು ಇನ್ನಿತರ ಆರ್ಥಿಕ ಸಂಸ್ಥೆಗಳನ್ನು ಒಳಗೊಂಡಂತೆ, ಯಾರಿಗಾದರೂ ಯಾವುದೇ ರೀತಿಯ ಹಕ್ಕು, ಅಧಿಕಾರ, ಹಿತಾಸಕ್ತಿ, ಆಕ್ಷೇಪಣೆ, ಸಿವಿಲ್ ವ್ಯಾಜ್ಯ, ತಂಟೆ-ತಕರಾರುಗಳು ಇದ್ದಲ್ಲಿ ಈ ಪ್ರಕಟಣೆ ಪ್ರಕಟವಾದ ದಿನದಿಂದ 7 (ಏಳು) ದಿನಗಳ ಒಳಗಾಗಿ ತಮ್ಮ ಆಕ್ಷೇಪಣೆಗಳನ್ನು ಲಿಖಿತರೂಪದಲ್ಲಿ ಅಥವಾ ಖುದ್ದಾಗಿ ಸೂಕ್ತ ದಾಖಲಾತಿಗಳೊಂದಿಗೆ ಈ ಕೆಳಗೆ ನಮೂದಿಸಿರುವ ಕಛೇರಿ ವಿಳಾಸಕ್ಕೆ ಸಲ್ಲಿಸಬಹುದಾಗಿದೆ. ತಪ್ಪಿದ್ದಲ್ಲಿ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧಕ್ರಯಕ್ಕೆ ಪಡೆದುಕೊಳ್ಳುತ್ತಾರೆ. ಮೇಲ್ಕಂಡ ಅವಧಿ ನಂತರ ಬರುವ ಆಕ್ಷೇಪಣೆ, ತಂಟೆ-ತಕರಾರುಗಳಿಗೆ ನನ್ನ ಕಕ್ಷಿದಾರರು ಬಾಧ್ಯರಾಗುವುದಿಲ್ಲ ಎಂಬ ಅಂಶವನ್ನು ಈ ಮೂಲಕ ತಿಳಿಯಪಡಿಸಲಾಗಿದೆ.

ಷೆಡ್ಯೂಲ್ ಸ್ವತ್ತಿನ ವಿವರ: ಮೈಸೂರು ಜಿಲ್ಲೆ ಮತ್ತು ತಾಲ್ಲೂಕು, ವರುಣಾ ಹೋಬಳಿ, ಹಡಜನ ಗ್ರಾಮದ ಖುಷ್ಕಿ ಜಮೀನುಗಳ ಒಟ್ಟು ವಿಸ್ತೀರ್ಣ 03 ಎಕರೆ 26 ಗುಂಟೆ ವಿವರಗಳು ಈ ಕೆಳಕಂಡಂತಿದೆ :

ಐಟಂ ನಂ. 01 : ಸರ್ವೇ ನಂ. 183/7 ರಲ್ಲಿ ವಿಸ್ತೀರ್ಣ 02 ಎಕರೆ 17 ಗುಂಟೆವುಳ್ಳ ಜಮೀನಿಗೆ ಚಕ್ಕುಬಂದಿ: ಪೂರ್ವಕ್ಕೆ - ಸರ್ವೇ ನಂ. 183/2ರ ಜಮೀನು, ಪಶ್ಚಿಮಕ್ಕೆ - ಸರ್ವೇ ನಂ. 183/6 ರಲ್ಲಿ ನಿರ್ಮಿಸಿರುವ ಉದ್ಯಾನವನ, ಉತ್ತರಕ್ಕೆ- ಸರ್ವೇ ನಂ.183/1 ರ ಜಮೀನು ಮತ್ತು ದಕ್ಷಿಣಕ್ಕೆ - ರಸ್ತೆ.

ಐಟಂ ನಂ.02 : ಸರ್ವೇ ನಂ. 183/1 ರಲ್ಲಿ ವಿಸ್ತೀರ್ಣ 01 ಎಕರೆ 09 ಗುಂಟೆವುಳ್ಳ ಜಮೀನಿಗೆ ಚಕ್ಕುಬಂದಿ : ಪೂರ್ವಕ್ಕೆ - ಸರ್ವೇ ನಂ. 187 ರ ಜಮೀನು, ಪಶ್ಚಿಮಕ್ಕೆ- ಸರ್ವೇ ನಂ. 183/6 ರಲ್ಲಿ ನಿರ್ಮಿಸಿರುವ ಉದ್ಯಾನವನ, ಉತ್ತರಕ್ಕೆ- ಸರ್ವೇ ನಂ.183/5 ರ ಜಮೀನು ಮತ್ತು ದಕ್ಷಿಣಕ್ಕೆ - ಸರ್ವೇ ನಂ. 183/7 ರ ಜಮೀನು.

ಸಹಿ/- ಶ್ರೀಲತಾ ದೀಕ್ಷಿತ್, ವಕೀಲರು
ಎಸ್‌ಎಲ್‌ಡಿ ಲಾ ಫರ್ಮ್
ನಂ. 1416, ನಾರಾಯಣಶಾಸ್ತ್ರಿ ರಸ್ತೆ,
ಸಪ್ನ ಬುಕ್ ಹೌಸ್ ಹತ್ತಿರ, ಮೈಸೂರು.
ಮೊ: 9844640641
email: sldlawfirm2021@gmail.com


ಬೇಕಾಗಿದ್ದಾರೆ

- ಹೋಟೆಲ್ ಮ್ಯಾನೇಜರ್
- ಟೀ ಮಾಸ್ಟರ್
- ಆಲ್ ರೌಂಡರ್ ಅಡುಗೆ ಭಟ್ಟರು
- ಕ್ಯಾಪ್ಟನ್
- ಕಟ್ಟಿಂಗ್ ಮಾಸ್ಟರ್
- ಕ್ಲೀನಿಂಗ್

ವಸತಿ ಮತ್ತು ಊಟ ದೊರೆಯುತ್ತದೆ
8123081238

ಸಾಧಕರಿಗೆ ಆತ್ಮೀಯ ಆದರದ ಭವ್ಯ ಸ್ವಾಗತ

" ನರ್ಮದೇ ಹರ "



3600 ಕಿ.ಮೀ. ದೂರದ ಕಾಲ್ನಡಿಗೆ ಯಾತ್ರೆಯನ್ನು ಮಧ್ಯಪ್ರದೇಶದ " ಶ್ರೀ ಓಂಕಾರೇಶ್ವರ" ದೇವರ ಸನ್ನಿದಿಯಲ್ಲಿ ಕಠಿಣ ಸವಾಲಿನ ನರ್ಮದಾ ಪರಿಕ್ರಮಣ, ಯಾತ್ರೆಯ ದೃಢಸಂಕಲ್ಪ ಮಾಡುವುದರ ಮೂಲಕ ಸ್ನಾನ, ಪೂಜಾ ಭೋಜನ, ವಸತಿ ಕೈಕಂರ್ಯಗಳನ್ನೆಲ್ಲಾ ದಾರಿಯಲ್ಲಿನ ಆಶ್ರಮಗಳಲ್ಲಿಯೇ ಮಾಡಿಕೊಂಡು " ಸಾಧು-ಸಂತ " ಸಾಧನೆಯನ್ನು ಯಶಸ್ವೀಯಾಗಿ ಪರಿಪೂರ್ಣಗೊಳಿಸಿ ಇಡೀ ಮೈಸೂರು ಜಿಲ್ಲೆಗೆ ಹೆಮ್ಮೆಯ ಸಾಧಕರಾಗಿ ಐದು ತಿಂಗಳ ಸುದೀರ್ಘ ಯಾತ್ರೆಯನ್ನು ಪೂರೈಸಿ ಹಿಂದಿರುಗುತ್ತಿರುವ ಮೈಸೂರು ಜಿಲ್ಲೆ, ಕೆ.ಆರ್. ನಗರ ತಾಲ್ಲೂಕು, ಕಸಬಾ ಹೋಬಳಿ, ತಿಪ್ಪೂರು ಗ್ರಾಮದ ದಿವಂಗತ ಯಜಮಾನರು ಟಿ.ಎಸ್. ಮುದ್ದೇಗೌಡರ ಮಗ ಟಿ.ಎಂ. ಜಯಕೀರ್ತಿ

ಸ್ವಾಗತ ಕೋರುವವರು:
ವರುಣ್ ಪವಾರ್, ವಿನುತಾ ವರುಣ್ ಹಾಗೂ ಕುಟುಂಬವರ್ಗದವರು

ಶ್ರೀ ಟಿ.ಎಂ. ಜಯಕೀರ್ತಿ

ಮೊದಲನೇ ವರ್ಷದ ಪುಣ್ಯಸ್ಮರಣೆ



ನೀವು ನಮ್ಮನ್ನಗಲಿ ಇಂದಿಗೆ ಒಂದು ವರ್ಷ ಕಳೆದರೂ ಸದಾ ನಿನ್ನ ನೆನಪಿನಲ್ಲಿರುವ
ದುಃಖತಪ್ತರು:
ತಾಯಿ: ಪುಟ್ಟಲಕ್ಷ್ಮಮ್ಮ
ಮಗ: ಭುವನ್
ಹಾಗೂ ಕುಟುಂಬವರ್ಗದವರು.
ಕೆ.ಜಿ.ಕೊಪ್ಪಲು, ಮೈಸೂರು

ಶ್ರೀ ಚಂದ್ರು
ನಿಧನ: 22.04.2024

11ನೇ ವರ್ಷದ ಸವಿನೆನಪು



ಜನನ: 20.01.1993
ಮರಣ: 22.04.2014

ನೀವು ನಮ್ಮನ್ನಗಲಿ ಇಂದಿಗೆ 11 ವರ್ಷ ಕಳೆದರೂ ನಿಮ್ಮ ನೆನಪು ಸದಾ ನಮ್ಮ ಮನದಲ್ಲಿದೆ
ದುಃಖತಪ್ತರು:
ಹನುಮಂತಯ್ಯ ಮತ್ತು ಜಯಲಕ್ಷ್ಮಿ
ಶ್ರೀ ಚೆನ್ನಕೇಶ್ವರ ಸ್ವಾಮಿ ಇಂಡಸ್ಟ್ರೀಸ್, ಮೈಸೂರು
ಕುಟುಂಬವರ್ಗದವರು ಹಾಗೂ ಸ್ನೇಹಿತರು

ಸಂತೋಷ್ ಕುಮಾರ್.ಹೆಚ್

WANTED TEACHERS

FRESHERS OR EXPERIENCED • Head Mistress
• Kannada: BA/MA B.Ed, • English: BA/MA B.Ed
• Science: B.Sc /M.Sc B.Ed, • Maths: BSc /M.Sc B.Ed
• P T, Yoga • Music / Dance

Walk in with originals on all working days 11 AM onwards

JNANA GANGOTRI CONVENT, ENGLISH MEDIUM
Rajendra Nagara, Mysore 570007. Mob: 9113980741

ನಿಧನ



ನಿಧನ: ಇವರು ದಿ 21.4.2025ರಂದು ದೈವಾದೀನರಾಗಿದ್ದು, ಮೃತರ ಅಂತ್ಯಕ್ರಿಯೆಯನ್ನು ಸ್ವಗ್ರಾಮ ಸಾಹುಕಾರ ಹುಂಡಿ ಗ್ರಾಮದಲ್ಲಿ ದಿ: 22.04.2025 ರಂದು ನೆರವೇರಿಸಲಾಗುವುದು.
ದುಃಖತಪ್ತರು:
ಕುಟುಂಬವರ್ಗ
ಮೊ: 8971170596

ಶ್ರೀ ಚಿಕ್ಕರಾಜೇಗೌಡರು

SRKK READY MIX CONCRETE (Immediately Hiring)

- **SENIOR ACCOUNTANT:** Min of 3-5 years experience in handling construction company accounts
- **MARKETING:** Min of 2-3 years experience in the field of construction and RMC company
- **SUPERVISOR:** Min of 2- 3 years experience in the field of construction and RMC company
- **DRIVER:** Experience: 2 to 3 years (office vehicles)
- **QUALITY IN CHARGE:** Experience: 2 to 3 years (Qualification: BE in Civil)

Contact : 9606217801 Email: srkkcd@gmail.com

SUMMER SWIMMING CAMP

For One Month Basic Coaching
And also Advanced Coaching
at Silicon City International School, Lalithadripura, Mysore.
MASP Aquatic Club
Contact:
9591363100 / 8951396669

neem® BOND PLATINUM 15 Years
PLYWOOD & DOORS Replacement Guarantee BORER & WATER PROOF
@ Factory Depot Rates
SS Build Mart®
ISO 9001:2015 Certified Company Depot
1261, 3rd Cross, Krishnamurthypuram, Behind Urs Kar, Mysuru
9731591267 / 9901291267

ಪತ್ರಿಕಾ ಪ್ರಕಟಣೆ

ಡಾ॥ ಬಿ.ಜಿ.ಪ್ರಕಾಶ್ ರವರು ಕೆ.ಸಿ.ನಗರ ಬಡಾವಣೆಯಲ್ಲಿ ನಿವೇಶನ ಸಂಖ್ಯೆ: 228 ಅಳತೆ 12x18 ಮೀಟರ್ ನಿವೇಶನಕ್ಕೆ ಕ್ರಯಪತ್ರ ಕೋರಿ ಅರ್ಜಿ ಸಲ್ಲಿಸಿರುತ್ತಾರೆ.

ಅದರಂತೆ ಸದರಿ ನಿವೇಶನ ಸಂಖ್ಯೆ:228 ಅಳತೆ 12x18 ನಿವೇಶನವು ಶ್ರೀ ಗವಿ ರವರಿಗೆ ದಿ: 06.02.1997 ರಲ್ಲಿ ಮಂಜೂರಾಗಿರುತ್ತದೆ. ದಿ: 07.11.1998 ರಲ್ಲಿ ಸ್ವಾಧೀನ ಪತ್ರ ಪಡೆದಿರುತ್ತಾರೆ. ನಂತರ ಸದರಿ ಮಂಜೂರಾತಿದಾರರು ದಿ: 13.03.2000 ರಲ್ಲಿ ಮರಣಹೊಂದಿದ್ದು, ಮೃತ ಮಂಜೂರಾತಿದಾರರ ಪತ್ನಿಯಾದ ಶ್ರೀಮತಿ ಚೆನ್ನಮ್ಮ ರವರಿಗೆ ದಿ: 18.04.2001 ರಲ್ಲಿ ಖಾತೆ ವರ್ಗಾವಣೆ ಮಾಡಲಾಗಿರುತ್ತದೆ.

ಮೃತ ಮಂಜೂರಾತಿದಾರರ ಪತ್ನಿಯಾದ ಶ್ರೀಮತಿ ಚೆನ್ನಮ್ಮ ರವರು ಮೇಲ್ಕಂಡ ನಿವೇಶನವನ್ನು ದಿ: 26.05.2001 ರಲ್ಲಿ ಡಾ॥ ಬಿ.ಜಿ.ಪ್ರಕಾಶ್ ರವರಿಗೆ ಶುದ್ಧಕ್ರಯಕ್ಕೆ ಮಾರಾಟ ಮಾಡಿದ್ದು, ಮಂಜೂರಾತಿ ಪತ್ರದಲ್ಲಿ ಮಂಜೂರಾತಿದಾರರ ಹೆಸರು ಶ್ರೀ ಗವಿ ಹಾಗೂ ಮಂಜೂರಾತಿದಾರರ ತಂದೆಯ ಹೆಸರು ಲೇಟ್ ಕಟ್ಟಿಗೆ ಸಿದ್ದಯ್ಯ ಎಂಬುದಾಗಿ ಇದ್ದು, ತದನಂತರ ಮಂಜೂರಾತಿದಾರರು ಮರಣಹೊಂದಿದ್ದು ಸದರಿ ಮರಣ ಪ್ರಮಾಣ ಪತ್ರದಲ್ಲಿ ಮಂಜೂರಾತಿದಾರರ ಹೆಸರು ಶ್ರೀ ಗವಿಯಪ್ಪ ಹಾಗೂ ಮಂಜೂರಾತಿದಾರರ ತಂದೆಯ ಹೆಸರು ಲೇಟ್ ದೊಡ್ಡಸಿದ್ದಯ್ಯ ಎಂದಿರುತ್ತದೆ. ಕಂದಾಯ ಇಲಾಖೆಯಿಂದ ನೀಡಿರುವ ಕುಟುಂಬ ಜೀವಿತ ಸದಸ್ಯರ ದೃಢೀಕರಣ ಪತ್ರದಲ್ಲಿಯೂ ಸಹ ಮಂಜೂರಾತಿದಾರರ ಹೆಸರು ಗವಿಯಪ್ಪ ಎಂದಿರುತ್ತದೆ.

ಪ್ರಸ್ತುತ ಕ್ರಯದಾರರಾದ ಡಾ॥ ಬಿ.ಜಿ.ಪ್ರಕಾಶ್ ರವರಿಗೆ ಶುದ್ಧಕ್ರಯ ಪತ್ರದ ಮೂಲಕ ಪಡೆದಿದ್ದು, ಸದರಿಯವರು ಶುದ್ಧ ಕ್ರಯಪತ್ರದ ಪ್ರತಿ ಇ.ಸಿ ಮತ್ತು ಇತರೇ ದಾಖಲಾತಿಗಳನ್ನು ಪ್ರಾಧಿಕಾರಕ್ಕೆ ಸಲ್ಲಿಸಿ ಕ್ರಯಪತ್ರ ನೀಡುವಂತೆ ಕೋರಿರುತ್ತಾರೆ. ಮೃತ ಮೂಲ ಮಂಜೂರಾತಿದಾರರ ಪತ್ನಿಯಾದ ಶ್ರೀಮತಿ ಚೆನ್ನಮ್ಮ ರವರು ಮೇಲ್ಕಂಡ ನಿವೇಶನವನ್ನು ಡಾ॥ ಬಿ.ಜಿಪ್ರಕಾಶ್ ರವರಿಗೆ ಶುದ್ಧಕ್ರಯಕ್ಕೆ ಮಾರಾಟ ಮಾಡಿದ್ದು, ಮಂಜೂರಾತಿದಾರರ ಹೆಸರಿನಲ್ಲಿ ನ್ಯೂನತೆಗಳಿದ್ದು, ಕ್ರಯದಾರರಾದ ಡಾ॥ ಬಿ.ಜಿ.ಪ್ರಕಾಶ್ ರವರಿಗೆ ಕ್ರಯಪತ್ರ ನೀಡಬೇಕಾಗಿದ್ದು, ಈ ಸಂಬಂಧ ಯಾರಿಂದಾದರೂ ತಕರಾರು ಏನಾದರು ಇದ್ದಲ್ಲಿ ಈ ಪ್ರಕಟಣೆ ಹೊರಡಿಸಿದ 15 ದಿವಸಗಳೊಳಗೆ ಲಿಖಿತವಾಗಿ ಆಯುಕ್ತರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು ರವರಿಗೆ ಸಲ್ಲಿಸುವುದು. ಯಾವುದೇ ಆಕ್ಷೇಪಣೆ ಬಾರದಿದ್ದಲ್ಲಿ ನಿಯಮಾನುಸಾರ ಕ್ರಮ ವಹಿಸಲಾಗುವುದು.

ದಿನಾಂಕ : 09–04–2025
ಸ್ಥಳ : ಮೈಸೂರು

ವಿಶೇಷ ತಹಸೀಲ್ದಾರ್
ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು

ಶ್ರೀ ವಿದ್ಯಾ ಕಾನ್ವೆಂಟ್

ನರ್ಸರಿ, ಪ್ರಾಥಮಿಕ ಮತ್ತು ಪ್ರೌಢಶಾಲೆ (ಆಂಗ್ಲ ಮಾಧ್ಯಮ)
CA-7, ಕೆ.ಎಚ್.ಬಿ. ಕಾಲೋನಿ, ಹೂಟಗಳ್ಳಿ, ಮೈಸೂರು–18

ಶಿಕ್ಷಕರು ಬೇಕಾಗಿದ್ದಾರೆ CONTACT NO. 9844788164

ಕ್ರ.ಸಂ	ಹುದ್ದೆ	ವಿದ್ಯಾರ್ಹತೆ	ಸಂಖ್ಯೆ
1	ನರ್ಸರಿ	NST	03
2	ಪ್ರಾಥಮಿಕ ವಿಭಾಗ	PUC, D.ed,	06
3	ಪ್ರೌಢಶಾಲೆ ವಿಭಾಗ	B.A., B.ed, B.Sc., B.ed,(PCM,CBZ)	03 03
4	ಪ್ರಾಥಮಿಕ ಮತ್ತು ಪ್ರೌಢಶಾಲೆ ವಿಭಾಗ	B.A., B.Ped	02

Fluency English Must

ನಿಮ್ಮ ಹಳೆಯ ಹಾಸಿಗೆ ಹತ್ತಿಯನ್ನು

ವಿದ್ಯುತ್ ಚಾಲಿತ ಯಂತ್ರದಿಂದ ಶುದ್ಧೀಕರಿಸಿ ನೂತನ ಹಾಸಿಗೆಯನ್ನು ತಯಾರಿಸಿಕೊಡುತ್ತೇವೆ.
ಸೂ: ನಿಮ್ಮ ಮನೆಯಿಂದ ಪಡೆಯುವುದು ಮತ್ತು ತಲುಪಿಸುವುದು ಉಚಿತ.
ಬಾಹುಸಾರ್ ಟ್ರೇಡಿಂಗ್ ಕಂ.
ನಂ.50, ಡಿ. ದೇವರಾಜ ಅರಸು ರಸ್ತೆ, ಮೈಸೂರು
9448062224, 0821-2427224

Aquaguard & Kent Water Purifier Sales & Service

9901200444
#319, Near Mega Medical Store, Kuvempunagar

ಸಾರ್ವಜನಿಕ ಪ್ರಕಟಣೆ

ಈ ಪ್ರಕಟಣೆಯ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ನಮ್ಮ ಕಕ್ಷಿದಾರರಾದ ಹಾಸನ ಜಿಲ್ಲೆ, ಹೊಳೆನರಸೀಪುರ ತಾಲ್ಲೂಕು, ಹಳ್ಳಿಮೈಸೂರು ಹೋಬಳಿ, ಕ್ಯಾತಮಾರನಹಳ್ಳಿ ಗ್ರಾಮದಲ್ಲಿ ವಾಸವಿರುವ ಲೇಟ್ ಚಂದ್ರಶೇಖರ ಕೆ.ಪಿ. ರವರ ಧರ್ಮಪತ್ನಿಯಾದ ಶ್ರೀಮತಿ ಚಂದ್ರಪ್ರಭ.ಬಿ ರವರು ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ. ಮೈಸೂರು ರವರಲ್ಲಿ ಅಸಲು ದಾವೆ ಸಂಖ್ಯೆ 1133/2024 ರಂತೆ ಷೆಡ್ಯೂಲ್ A ಸ್ವತ್ತಿಗೆ ಹಾಗೂ ಮೈಸೂರು ಜಿಲ್ಲೆ, ಕೆ.ಆರ್.ನಗರ ತಾಲ್ಲೂಕು, ಚುಂಚನಕಟ್ಟೆ ಹೋಬಳಿ, ಕೆಸ್ತೂರುಕೊಪ್ಪಲು ಗ್ರಾಮದಲ್ಲಿ ವಾಸವಾಗಿರುವ ಸೋಮೇಗೌಡರ ಮಗಳಾದ ಸ್ಮಿತ ಕೆ.ಎಸ್. ರವರುಗಳು ಪ್ರಧಾನ ಹಿರಿಯ ಸಿವಿಲ್ + ನ್ಯಾಯಾಧೀಶರ ನ್ಯಾಯಾಲಯ. ಮೈಸೂರು ರವರಲ್ಲಿ ಅಸಲು ದಾವೆ ಸಂಖ್ಯೆ 1760/2024 ರಂತೆ ಷೆಡ್ಯೂಲ್ B ಸ್ವತ್ತಿಗೆ ಸಂಬಂಧಿಸಿದಂತೆ ನಿರ್ದಿಷ್ಟ ಪರಿಹಾರ ಅಧಿನಿಯಮದ ಅಡಿ ದಾವೆಯನ್ನು ಹೂಡಿದ್ದು, ಮೈಸೂರು ಜಿಲ್ಲೆ ಮೈಸೂರು ತಾಲ್ಲೂಕು, ಇಲವಾಲ ಹೋಬಳಿ, ಕರಕನಹಳ್ಳಿ ಗ್ರಾಮದಲ್ಲಿ ವಾಸವಾಗಿರುವ 1) ಮಲ್ಲಮ್ಮ ಕೋಂ ಲೇಟ್ ಅಣ್ಣೇಗೌಡ, 2) ನಾಗರಾಜು ಬಿನ್ ಲೇಟ್ ಅಣ್ಣೇಗೌಡ 3) ಸ್ವಾಮಿ ಬಿನ್ ಲೇಟ್ ಅಣ್ಣೇಗೌಡ ರವರುಗಳ ಮೇಲೆ ನಮ್ಮ ಕಕ್ಷಿದಾರರು ಕೆಳಕಂಡ A ಮತ್ತು B ಷೆಡ್ಯೂಲ್ ಸ್ವತ್ತುಗಳ ಮೇಲೆ ಪ್ರತ್ಯೇಕ ದಾವೆಗಳನ್ನು ಹೂಡಿದ್ದು, ಆ ದಾವೆಗಳಲ್ಲಿ ಮಾನ್ಯ ಗೌರವಾನ್ವಿತ ನ್ಯಾಯಾಲಯವು ಸದರಿ ಷೆಡ್ಯೂಲ್ ಸ್ವತ್ತುಗಳನ್ನು ಪರಭಾರೆ ಮಾಡದಂತೆ ತಡೆಯಾಜ್ಞೆಯನ್ನು ನೀಡಿದ್ದು ಸದರಿ ಸ್ವತ್ತುಗಳಿಗೆ ಸಂಬಂದಿಸಿದಂತೆ ಸಾರ್ವಜನಿಕರು ಯಾವುದೇ ರೀತಿಯ ಕರಾರು, ಭೋಗ್ಯ, ಅಡಮಾನ, ವಗೈರೆ ಸೇರಿದಂತೆ ಯಾವುದೇ ವ್ಯವಹಾರವನ್ನು ಮಾಡಬಾರದೆಂದು ಈ ಮೂಲಕ ಸಾರ್ವಜನಿಕರಿಗೆ ತಿಳಿಸಲಾಗಿದೆ.

ಷೆಡ್ಯೂಲ್– A (ಅಸಲು ದಾವೆ ಸಂಖ್ಯೆ 1133/2024)

ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ಇಲವಾಲ ಹೋಬಳಿ, ಕರಕನಹಳ್ಳಿ ಗ್ರಾಮದ ಸರ್ವೆ ನಂ. 145ರ ವಿಸ್ತೀರ್ಣ 0.08 ಗುಂಟೆ ಸ್ವತ್ತಿಗೆ ಚಕ್ಕುಬಂಧಿ: ಪೂರ್ವಕ್ಕೆ: ಸ್ವಾಮಿಗೌಡರವರ ಸ್ವತ್ತು ; ಪಶ್ಚಿಮಕ್ಕೆ: ಮಾಹದೇವಯ್ಯರವರ ಸ್ವತ್ತು ; ಉತ್ತರಕ್ಕೆ: ರಸ್ತೆ ; ದಕ್ಷಿಣಕ್ಕೆ: ರಸ್ತೆ.

ಷೆಡ್ಯೂಲ್– B (ಅಸಲು ದಾವೆ ಸಂಖ್ಯೆ 1760/2024)

ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ಇಲವಾಲ ಹೋಬಳಿ, ಕರಕನಹಳ್ಳಿ ಗ್ರಾಮದ ಸರ್ವೆ ನಂ. 195/1 ರ ವಿಸ್ತೀರ್ಣ 0.08 ಗುಂಟೆ (ಹೊಸ ಸರ್ವೆ ನಂ 195/5, 195/8, 195/9 ಮತ್ತು 195/10 ತಲಾ ಎರಡು ಗುಂಟೆ) ಸ್ವತ್ತಿಗೆ ಚಕ್ಕುಬಂಧಿ:– ಪೂರ್ವಕ್ಕೆ: ಶಾರದರವರ ಸ್ವತ್ತು ; ಪಶ್ಚಿಮಕ್ಕೆ: ಗೌಡಯ್ಯರವರ ಸ್ವತ್ತು ; ಉತ್ತರಕ್ಕೆ: ಗೌಡಯ್ಯರವರ ಸ್ವತ್ತು ; ದಕ್ಷಿಣಕ್ಕೆ : ರಸ್ತೆ.

Sd/- K.T.VISHNU M.Com., LL.B., Advocate
Roll No. KAR/2596/2003.
#5, "Samrudhi", Revenue Layout, 3rd Stage,
Date: 20-4-2025 Hebbal Mysore-16. Mob: 9448788669

ಹಸಿರು ನಮ್ಮ ಉಸಿರು

ಸಾರ್ವಜನಿಕ ಪ್ರಕಟಣೆ

ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಈ ಕೆಳಗೆ ವಿವರಿಸಿರುವ ಷೆಡ್ಯೂಲ್ ಸ್ವತ್ತಿನ ಮಾಲೀಕರಾದ ಲೇಟ್ ಮೊಹಮ್ಮದ್ ಇನಾಯತ್ ಉಲ್ಲಾ ರವರ ಮಗ ಖಲೀಲ್ ಉರ್ ರೆಹಮಾನ್ ರವರು, ಈ ಕೆಳಗೆ ವಿವರಿಸಿರುವ ಷೆಡ್ಯೂಲ್ ಸ್ವತ್ತನ್ನು ನನ್ನ ಕಕ್ಷಿದಾರರಿಗೆ ಮಾರಾಟ ಮಾಡಲು ಅಪೇಕ್ಷಿಸಿರುತ್ತಾರೆ. ಅದರಂತೆ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧಕ್ರಯಕ್ಕೆ ಪಡೆಯಲು ಸಿದ್ಧರಿರುವುದರಿಂದ ಸದರಿ ಸ್ವತ್ತಿನ ಮೇಲೆ ಬ್ಯಾಂಕ್ ಮತ್ತು ಇನ್ನಿತರ ಆರ್ಥಿಕ ಸಂಸ್ಥೆಗಳನ್ನು ಒಳಗೊಂಡಂತೆ, ಯಾರಿಗಾದರೂ ಯಾವುದೇ ರೀತಿಯ ಹಕ್ಕು, ಅಧಿಕಾರ, ಹಿತಾಸಕ್ತಿ, ಆಕ್ಷೇಪಣೆ, ಸಿವಿಲ್ ವ್ಯಾಜ್ಯ, ತಂಟೆ-ತಕರಾರುಗಳು ಇದ್ದಲ್ಲಿ ಈ ಪ್ರಕಟಣೆ ಪ್ರಕಟವಾದ ದಿನದಿಂದ 7 (ಏಳು) ದಿನಗಳ ಒಳಗಾಗಿ ತಮ್ಮ ಆಕ್ಷೇಪಣೆಗಳನ್ನು ಲಿಖಿತ ರೂಪದಲ್ಲಿ ಅಥವಾ ಖುದ್ದಾಗಿ ಸೂಕ್ತ ದಾಖಲಾತಿಗಳೊಂದಿಗೆ ಈ ಕೆಳಗೆ ನಮೂದಿಸಿರುವ ಕಛೇರಿ ವಿಳಾಸಕ್ಕೆ ಸಲ್ಲಿಸಬಹುದಾಗಿದೆ. ತಪ್ಪಿದ್ದಲ್ಲಿ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧಕ್ರಯಕ್ಕೆ ಪಡೆದುಕೊಳ್ಳುತ್ತಾರೆ. ಮೇಲ್ಕಂಡ ಅವಧಿ ನಂತರ ಬರುವ ಆಕ್ಷೇಪಣೆ, ತಂಟೆ-ತಕರಾರುಗಳಿಗೆ ನನ್ನ ಕಕ್ಷಿದಾರರು ಬಾಧ್ಯರಾಗುವುದಿಲ್ಲ ಎಂಬ ಅಂಶವನ್ನು ಈ ಮೂಲಕ ತಿಳಿಯಪಡಿಸಲಾಗಿದೆ.

ಷೆಡ್ಯೂಲ್ ಸ್ವತ್ತಿನ ವಿವರ: ಮೈಸೂರು ಸಿಟಿ, ಮಂಡಿ ಮೊಹಲ್ಲಾ, ಬನ್ನಿಮಂಟಪ ಜಿ ಬಡಾವಣೆ, ಸಿದ್ದಿಖಿ ನಗರದಲ್ಲಿರುವ ಖಾಲಿ ನಿವೇಶನ ಸಂಖ್ಯೆ : 04, ಪ್ರಸ್ತುತ ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಗೊಳಪಟ್ಟಿದ್ದು, ಪಿ.ಐ.ಡಿ. ನಂ. 127635 & ವಾರ್ಡ್ ನಂ. 08 ರ ಸ್ವತ್ತಿನ ವಿಸ್ತೀರ್ಣ ಪೂರ್ವ-ಪಶ್ಚಿಮ: 50 ಅಡಿ ಮತ್ತು ಉತ್ತರ-ದಕ್ಷಿಣ: 80 ಅಡಿ, ಒಟ್ಟು ವಿಸ್ತೀರ್ಣ: 4000 ಚದರ ಅಡಿಗಳುಳ್ಳ ಸ್ವತ್ತಿನ ಚಕ್ಕುಬಂದಿ ಪೂರ್ವಕ್ಕೆ - ನಿವೇಶನ ನಂ. 05, ಪಶ್ಚಿಮಕ್ಕೆ - ನಿವೇಶನ ನಂ. 3/ಎ, ಉತ್ತರಕ್ಕೆ - ನಿವೇಶನ ನಂ. 27 ಮತ್ತು ದಕ್ಷಿಣಕ್ಕೆ - ರಸ್ತೆ.

ಸಹಿ/- ಶ್ರೀಲತಾ ದೀಕ್ಷಿತ್, ವಕೀಲರು
ಎಸ್‌ಎಲ್‌ಡಿ ಲಾ ಫರ್ಮ್
ನಂ. 1416, ನಾರಾಯಣಶಾಸ್ತ್ರಿ ರಸ್ತೆ,
ಸಪ್ನ ಬುಕ್ ಹೌಸ್ ಹತ್ತಿರ, ಮೈಸೂರು.
ಮೊ: 9844640641
email: sldlawfirm2021@gmail.com

ಕಾಣೆಯಾಗಿದ್ದಾರೆ



ಪ್ರಭಂಜನ್ ಉ॥ ಪುಂಡು
ಇವರು ದಿ: 31.3.2025 ರಿಂದ ಮೈಸೂರಿನ ಲೋಕನಾಯಕನಗರ ಅವರ ಮನೆಯಿಂದ ಕಾಣೆಯಾಗಿದ್ದಾರೆ ಇವರನ್ನು ಕಂಡವರು ಹತ್ತಿರದ ಪೋಲಿಸ್ ಸ್ಟೇಷನ್ ಅಥವಾ ಕೆಳಗಿನ ದೂರವಾಣಿ ಸಂಖ್ಯೆಗೆ ತಿಳಿಸಬೇಕಾಗಿ ವಿನಂತಿ
9342771788

WANTED

Reputed Air conditioning and Engineering Company is looking to hire following candidates immediately.

1. Accountant - 10 + year experience.
2. HR Executive - 5 + year experience.
3. Stores Keeping Executive - 5 + year experience.
4. HVAC Service Managers - 5 + year experience.
5. Site Engineer - BE Mec / Ele - 5 + year experience.
6. AC Technician - 5 + year experience.
7. Helpers - ITI / Diploma / PUC
8. Office Boy - PUC
9. Goods Auto Driver - 3 + year experience.
10. Car Driver - 3 + year experience.

Apply or post your resume to :
hrbreezairindia@gmail.com
For more information contact : +91 84314 35008

ನಗರಸಭಾ ಕಾರ್ಯಾಲಯ, ಹುಣಸೂರು

ಹುನಕಾ/ ಕಂ.ಶಾ/ಸಿ.ಆರ್-01/2025-26 ದಿನಾಂಕ: 19-04-2025

ಸೇವಾ ವಿವರ: ಹುಣಸೂರು ನಗರಸಭಾ ವ್ಯಾಪ್ತಿಯ ವಾರ್ಷಿಕ ನೀರು ಸರಬರಾಜು ನಿರ್ವಹಣೆಯಡಿ ಹುಣಸೂರು ನಗರ ವ್ಯಾಪ್ತಿಯಲ್ಲಿ ವೆಬ್ ಆಧಾರಿತ ನೀರು ಸರಬರಾಜು ಬಿಲ್ಲಿಂಗ್ ಮತ್ತು ಶುಲ್ಕ ಸಂಗ್ರಹ ಮಾಡುವ ಸಾಫ್ಟ್‌ವೇರ್ ನಿರ್ವಹಣೆ ಮಾಡುವ ಕೆಲಸ. ನೊಂದಾಯಿತ ಸಂಸ್ಥೆಯವರು ತಮ್ಮ ದರಪಟ್ಟಿಯೊಂದಿಗೆ ಈ ಕೆಳಕಂಡಂತೆ ಸಲ್ಲಿಸುವುದು.

ಟೆಂಡರ್‌ಗಿಟ್ಟ ಮೊತ್ತ :5.00 ಲಕ್ಷ ಇ.ಎಂ.ಡಿ. ಮೊತ್ತ : 10,000-00

ಟೆಂಡರ್ ಕಾರ್ಯಸೂಚಿ:
1) ಖಾಲಿ ಟೆಂಡರ್ ಫಾರಂ ವಿತರಿಸುವ ದಿನಾಂಕ ಮತ್ತು ಸಮಯ : 21-4-2025 ರಿಂದ 25-4-2025 ಸಂಜೆ 5.00 ಗಂಟೆಯವರೆಗೆ.
2) ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ ಮತ್ತು ಸಮಯ : 28-4-2025 ರ ಸಂಜೆ 5.30 ಗಂಟೆಯವರೆಗೆ
3) ಟೆಂಡರ್‌ಗಳನ್ನು ತೆರೆಯುವ ದಿನಾಂಕ ಮತ್ತು ಸಮಯ : 29-4-2025 ರ ಬೆಳಗ್ಗೆ 11.00 ಗಂಟೆಯ ನಂತರ.

ಹೆಚ್ಚಿನ ದಸ್ತಾವೇಜು ವಿವರಗಳನ್ನು ಕಛೇರಿ ವೇಳೆಯಲ್ಲಿ ಕಂದಾಯ ಶಾಖೆಯಿಂದ ಪಡೆಯುವುದು.
ಟೆಂಡರ್ ಅಂಗೀಕರಿಸುವ ಅಥವಾ ತಿರಸ್ಕರಿಸುವ ಸಂಪೂರ್ಣ ಹಕ್ಕು ನಗರಸಭೆ ಹೊಂದಿರುತ್ತದೆ.

ಸಹಿ/-	ಸಹಿ/-	ಸಹಿ/-	ಸಹಿ/-
ಅಧ್ಯಕ್ಷರು ನಗರಸಭೆ ಹುಣಸೂರು	ಉಪಾಧ್ಯಕ್ಷರು ನಗರಸಭೆ ಹುಣಸೂರು	ಸ್ಥಾಯಿಸಮಿತಿ ಅಧ್ಯಕ್ಷರು, ನಗರಸಭೆ ಹುಣಸೂರು	ಪೌರಾಯುಕ್ತರು ನಗರಸಭೆ ಹುಣಸೂರು

ANANT CARS — MEGA JOB DRIVE

SMILE AT EVERY MILE
@ Anant Cars Auto Pvt. Ltd.
mahindra

WE ARE HIRING - ANANT CARS AUTO PVT. LTD.,
Upcoming Mahindra Car Dealership in Mysore !

Sales Hirings	Service Hirings
• Sales Manager	• Service Manager
• Accessories Manager	• Body Shop Manager
• CRM – Sales Segment	• CRM Service
• Delivery Manager/ Coordinator	• Spare Parts Executive
• Assistant Sales Manager – Commercial Segment	• Technician
• Sale Consultant / Sr. Sales Consultant – Commercial Segment	• Service Advisor
• Accessories Executive	• FQC
• EDP Executive	• Customer Care Executive
• Finance Executive	• Tinker/ Dentor
• Maintenance Executive	• Drivers
• Office Assistant	
• Drivers	

Walk in Date 24th April 2025 / Timings: 10am to 4pm
CONTACT:
98459-87625 / 98459-53513
Location: Mysore
Interview Address: Jade Garden Hotel (Iconic Resto) New Ramaswamy Circle, Chamaraja Mohalla, Lakshmipuram, Mysore - 570008

HEMATOLOGIST IN MYSORE BLOOD DISORDER CLINIC

Dr. Mahesh Rajashekariah
MBBS, MD (Internal Medicine), DM (Clinical Hematology)
MRCP (UK), Fellowship in BMT & Leukemia (Vancouver)
Head & Chief Consultant Hematologist & Bone Marrow Transplant Physician
Sparsh Hospital Bangalore

Date : 26th April 2025, Saturday
Time : 4 pm to 8 pm
For Appointments Call 99162 80590

If you are experiencing the following problems, you may need specific treatment.

- Anemias, Polycythemias, Low and high platelet count, Low and high white cell count. Leukemia, Lymphoma, Multiple myeloma, Bleeding and clotting disorders, Bone marrow disorders, Immunodeficiency disorders.
- All hematological problems in "Children" like anemia (including thalasemia)
- All hematological problems in "pregnancy and women" like recurrent pregnancy loss

High Eosinophil Count Screening
Low Platelet Count Screening
Estd : 1983
Bhagavan Pathology Laboratory
1116, 5th Cross, Srirampet, Mysore - 1. Tel : 0821-2424488

ಮೈಸೂರು ಮಿತ್ರ 46 ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು